ಸುದ್ದಿಗಳ ಹೊನಲು

ಹೇಮಂತ ಸಾರಥ್ಯದಲ್ಲಿ...
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಸಂಪುಟ: 21, ಸಂಚಿಕೆ: 162, ಪುಟಗಳು: 8, ಗುರುವಾರ, 21 ಮಾರ್ಚ್ 2024 RNI NO. KARKAN/2002/08054
epaper: www.sanjemugilu.com
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

## ಪಂಚಾಂಗ

(ಗುರುವಾರ 21, ಮಾರ್ಚ್ -2024)

- ಶೋಭಕೃತ್ ನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು,
- ಪಾಲ್ಗುಣ ಮಾಸ, ಶುಕ್ಲ ಪಕ್ಷ,
- ತಿಥಿ: ದ್ವಾದಶಿ
- ಪುಷ್ಯ ನಕ್ಷತ್ರ,
- ರಾಹುಕಾಲ- 01:57 PM 03:28 PM
- ಗುಳಿಕಕಾಲ - 09:24 AM 10:55 AM
- ಯಮಗಂಡಕಾಲ - 06:22 AM 07:53 AM

## ಸಂಕ್ಷಿಪ್ತ ಸುದ್ದಿ

### ಕಿಡ್ನ್ಯಾಪ್ ಎಂದು ತಂದೆಗೆ ಹೇಳಿ 30 ಲಕ್ಷ ರೂ.ಗೆ ಬೇಡಿಕೆ ಇಟ್ಟಿದ್ದ ಮಗಳು

**ಮಧ್ಯಪ್ರದೇಶ:** ಕಿಡ್ನ್ಯಾಪ್ ಆಗಿದ್ದೇನೆ ಎಂದು ಮಗಳೊಬ್ಬಳು ತಂದೆಗೆ ಸುಳ್ಳು ಹೇಳಿ 30 ಲಕ್ಷ ರೂ. ದೋಚಲು ಪ್ರಯತ್ನಿಸಿದ ಘಟನೆ ಮಧ್ಯಪ್ರದೇಶದಲ್ಲಿ ನಡೆದಿದೆ. ಕೋಟಾಗೆ ಅಧ್ಯಯನಕ್ಕೆಂದು ಹೋಗಿದ್ದ ವಿದ್ಯಾರ್ಥಿನಿ ಅಲ್ಲಿಂದ ವಿದೇಶಕ್ಕೆ ಹೋಗಲು ನಿರ್ಧರಿಸಿದ್ದಳು. ಹಾಗಾಗಿ ತಾನು ಅಪಹರಣವಾಗಿದ್ದೇನೆಂದು ತಂದೆಗೆ ಸುಳ್ಳು ಫೋಟೊ ಕಳಿಸಿ 30 ಲಕ್ಷ ರೂ. ಕೊಡುವಂತೆ ಬೇಡಿಕೆ ಇಟ್ಟಿದ್ದಳು. ಪುಟ 2

### ಇನ್ನು ಹೊಯ್ಸಳ ಪೊಲೀಸರಿಗೆ ಬಂದೂಕು ಕಡ್ಡಾಯ




**ಬೆಂಗಳೂರು:** ಬೆಂಗಳೂರಿನಲ್ಲಿ ಗಸ್ತು ಕಾರ್ಯಾಚರಣೆ ನಡೆಸುವ ಹೊಯ್ಸಳ ಪೊಲೀಸ್ ಸಿಬ್ಬಂದಿಗೆ ಬಂದೂಕು ಕಡ್ಡಾಯಗೊಳಿಸಿ ಆದೇಶಿಸಲಾಗಿದೆ. ಹೊಯ್ಸಳ ತಂಡದ ಎಎಸ್ ಐ ಬಳಿ ಗನ್ ಕಡ್ಡಾಯವಾಗಿ ಇರಬೇಕು ಎಂದು ಸೂಚನೆ ನೀಡಲಾಗಿದೆ. ಸಾಮಾನ್ಯವಾಗಿ ಯಾವುದೇ ಅಪರಾಧ ಕೃತ್ಯ ಅಥವಾ ಇತರ ಘಟನೆಗಳು ಸಂಭವಿಸಿದಾಗ ಮೊದಲು ಸ್ಥಳಕ್ಕೆ ತಲುಪುವುದು ಹೊಯ್ಸಳ ಸಿಬ್ಬಂದಿ. ಪುಟ 2

### ದಾವೂದ್, ಛೋಟಾ ಶಕೀಲ್ ಹೆಸರೇಳಿ ಧಮ್ಕಿ ಅರೆಸ್ಟ್

**ಬೆಂಗಳೂರು:** ಅಂಡರ್‌ವರ್ಲ್ಡ್ ಡಾನ್ ದಾವೂದ್ ಇಬ್ರಾಹಿಂ, ಛೋಟಾ ಶಕೀಲ್ ಹೆಸರೇಳಿ ಧಮ್ಕಿ ಹಾಕಿದ್ದವನನ್ನು ಭಾರತೀ ನಗರ ಪೊಲೀಸರು ಬಂಧಿಸಿದ್ದಾರೆ. ಅಫಾನ್ ಅಹಮದ್ ಬಂಧಿತ ಆರೋಪಿ. ಈತ ಬೆಂಗಳೂರಲ್ಲಿ ದಾವೂದ್ ಇಬ್ರಾಹಿಂ, ಛೋಟ ಶಕೀಲ್ ಹೆಸರೇಳಿ ಧಮ್ಕಿ ಹಾಕಿ ಹೆದರಿಸಿದ್ದ. ನಮಗೆ ದಾವೂದ್ ಗೊತ್ತು, ಛೋಟಾ ಶಕೀಲ್ ಗೊತ್ತು ಅವರಿಂದಲೇ ಪಾಠ ಕಲಿಸ್ತೀನೆಂದು ಧಮ್ಕಿ ಹಾಕಿದ್ದ. ಪುಟ 2

---

### ಹೊಸಕೋಟೆ, ನೆಲಮಂಗಲದಲ್ಲಿ ಭ್ರೂಣ ಹತ್ಯೆ ಪ್ರಕರಣ ಬಯಲು ಮಾಡಿದ ಅಧಿಕಾರಿಗೆ
# ಡಿಹೆಚ್ಒ ಕಿರುಕುಳ

**ದೇವನಹಳ್ಳಿ:** ಹೊಸಕೋಟೆ ಮತ್ತು ನೆಲಮಂಗಲದಲ್ಲಿ ಭ್ರೂಣಹತ್ಯೆ ಪ್ರಕರಣವನ್ನು ಬಯಲು ಮಾಡಿದ ಅಧಿಕಾರಿಯೊಬ್ಬರಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಡಿಹೆಚ್ಒ ಸುನೀಲ್ ಕುಮಾರ್ ಕಿರುಕುಳ ನೀಡುತ್ತಿರುವ ಆರೋಪ ಕೇಳಿಬಂದಿದೆ. ಅಲ್ಲದೆ, ಕಿರುಕುಳದಿಂದ ಬೇಸತ್ತ ಅಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಯುಕ್ತರಿಗೆ ಪತ್ರ ಬರೆದಿದ್ದಾರೆ.

ಹೊಸಕೋಟೆ ಮತ್ತು ನೆಮಂಗಲದಲ್ಲಿ ನಡೆಯುತ್ತಿದ್ದ ಭ್ರೂಣ ಹತ್ಯೆ ಪ್ರಕರಣವನ್ನು ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ್ ಅವರು ಬಯಲು ಮಾಡಿದ್ದರು. ಆದರೆ, ಜಿಲ್ಲಾ ಆರೋಗ್ಯಾಧಿಕಾರಿ ಸುನೀಲ್ ಕುಮಾರ್, ಜಿಲ್ಲೆಯ ಮತ್ತಷ್ಟು ಆಸ್ಪತ್ರೆಗಳ ಲೋಪದೋಷ ಹಾಗೂ ಗರ್ಭಪಾತ ಕರ್ಮಕಾಂಡದ ಬಗ್ಗೆ ಬಯಲು



ಮಾಡದಂತೆ ಮಂಜುನಾಥ್ ಅವರಿಗೆ ಕಿರುಕುಳ ನೀಡುತ್ತಿರುವ ಆರೋಪ ಕೇಳಿಬಂದಿದೆ.

ಮೂರು ದಿನಗಳಿಗೊಮ್ಮೆ ನೋಟಿಸ್ ನೀಡುತ್ತಾ ಆಸ್ಪತ್ರೆಗಳ ಲೋಪದೋಷ ವರದಿ ನೀಡದಂತೆ ಕಿರುಕುಳ ನೀಡುತ್ತಿದ್ದಾರೆ ಎಂದು ಮಂಜುನಾಥ್ ಅವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಯುಕ್ತರಿಗೆ ಪತ್ರ ಬರೆದಿದ್ದಾರೆ. ಪುಟ 2

---

# ಗೃಹ ಸಾಲ ಕ್ಲಿಯರ್ ಮಾಡಲು ಹೋಗಿ 47 ಲಕ್ಷ ಕಳೆದುಕೊಂಡ ವ್ಯಕ್ತಿ

**ಬೆಂಗಳೂರು:** ಕರ್ನಾಟಕ ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ವಂಚನೆ ಪ್ರಕರಣಗಳು, ಸೈಬರ್ ಪ್ರಕರಣಗಳು ಹೆಚ್ಚುತ್ತಲೇ ಇದೆ. ಪೊಲೀಸ್ ಇಲಾಖೆ ಎಷ್ಟೇ ಕ್ರಮ ವಹಿಸಿದರೂ ವಂಚನೆ ಪ್ರಕರಣಗಳಿಗೆ ಬ್ರೇಕ್ ಬೀಳುತ್ತಿಲ್ಲ. ಇದೀಗ, ಗೃಹ ಸಾಲ ಕ್ಲಿಯರ್ ಮಾಡಿಸುವುದಾಗಿ ನಂಬಿಸಿ ವ್ಯಕ್ತಿಯೊಬ್ಬರಿಗೆ 47 ಲಕ್ಷ ರೂಪಾಯಿ ವಂಚಿಸಿದ ಪ್ರಕರಣ ಬೆಳಕಿಗೆ ಬಂದಿದೆ.

ನಿರ್ವಿಕ್ ರಾಧೇಶ್ಯಾಮ್ ಮತ್ತು ಗೌರವ್ ಅರೋರ ಎಂಬವರು 47 ಲಕ್ಷ ರೂಪಾಯಿ ವಂಚಿಸಿದ್ದಾಗಿ ಆರೋಪಿಸಿ ಸಂಜಯ್ ಎಂಬುವರು ಕೇಂದ್ರ ಸೈಬರ್ ಪೊಲೀಸ್ ಠಾಣೆಗೆ ದೂರು



ನೀಡಿದ್ದು,ದಾಖಲಿಸಿದ ಪೊಲೀಸರು ಆರೋಪಿಗಳ ಬಂಧನಕ್ಕೆ ಶೋಧ ಕಾರ್ಯ ನಡೆಸುತ್ತಿದ್ದಾರೆ.

ಬ್ಯಾಂಕ್ ಮೂಲಕ ಸಂಜಯ್ ಗೃಹ ಸಾಲ ತೆಗೆದುಕೊಂಡಿದ್ದರು. ಈ ವಿಚಾರ ತಿಳಿದ ಮ್ಯೂಚುಯಲ್ ಫ್ರೆಂಡ್ ನಿರ್ವಿಕ್ ರಾಧೆ ಶ್ಯಾಮ್, ತನಗೆ ಬ್ಯಾಂಕ್ ನ ಹಿರಿಯ ಅಧಿಕಾರಿಗಳು ಪರಿಚಯ ಇದ್ದಾರೆ. ಬ್ಯಾಂಕ್ ಲೋನ್ ಸೆಟಲ್ ಮೆಂಟ್ ಮಾಡಿಸುವುದಾಗಿ ನಂಬಿಸಿ ಗೌರವ್ ಅರೋರ ಎಂಬಾತನನ್ನ ಬ್ಯಾಕ್‌ನ ಲೀಗಲ್ ಲಾಯರ್ ಎಂದು ಪರಿಚಯಿಸಿದ್ದನು.ಲೀಗಲ್ ಫೀಸ್ ಅಂತ ಸಂಜಯ್ ಅವರಿಂದ 3.50 ಲಕ್ಷ ರೂ. ಪಡೆದಿದ್ದ ಆರೋಪಿಗಳು, ಬಳಿಕ ಮುಂಬೈಗೆ ಕರೆಸಿಕೊಂಡು ಸೆಟಲ್ ಮೆಂಟ್ ಬಗ್ಗೆ ಮಾತುಕತೆ ನಡೆಸಿದ್ದಾರೆ. ಸಂಜಯ್ ಬ್ಯಾಂಕ್‌ಗೆ ಮರುಪಾವತಿಸಬೇಕಾದ ಹಣವನ್ನು ಗೌರವ್ ಅಕೌಂಟ್‌ಗೆ ಪಾವತಿಸಲು ನಿರ್ವಿಕ್ ಹೇಳಿದ್ದ. ಪುಟ 2

---

### ಮೇಕೆದಾಟು ವಿಚಾರದಲ್ಲಿ ಕನ್ನಡಿಗರ ಬೆನ್ನಿಗೆ ಚೂರಿ ಹಾಕುತ್ತಿರುವ ದ್ರೋಹಿಗಳು
# ಡಿಎಂಕೆ ಪ್ರಣಾಳಿಕೆಗೆ ವಾಗ್ದಾಳಿ

**ಬೆಂಗಳೂರು:** ಲೋಕಸಭೆ ಚುನಾವಣೆಯಲ್ಲಿ ಪ್ರತಿಪಕ್ಷಗಳ ಮೈತ್ರಿಕೂಟ 'ಇಂಡಿಯಾ' ಗೆದ್ದರೆ ಕರ್ನಾಟಕ ಸರ್ಕಾರದ ಮೇಕೆದಾಟು ಯೋಜನೆಗೆ ತಡೆಯೊಡ್ಡಲಾಗುವುದು ಎಂದು ತಮಿಳುನಾಡಿನ ಆಡಳಿತಾರೂಢ ಡಿಎಂಕೆ ಪ್ರಣಾಳಿಕೆಯಲ್ಲಿ ಉಲ್ಲೇಖಿಸಿರುವುದನ್ನು ಪ್ರತಿಪಕ್ಷ ನಾಯಕ ಆರ್ ಅಶೋಕ್ ಖಂಡಿಸಿದ್ದಾರೆ. ಅಲ್ಲದೆ ಈ ವಿಚಾರವಾಗಿ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಮೇಕೆದಾಟು ಯೋಜನೆ ಜಾರಿಗೊಳಿಸುವುದಾಗಿ ಹೇಳಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಪಕ್ಷದವರು ಕನ್ನಡಿಗರ ಬೆನ್ನಿಗೆ ಚೂರಿ ಹಾಕುತ್ತಿದ್ದಾರೆ ಎಂದು ಅವರು ಟೀಕಿಸಿದ್ದಾರೆ.

ಡಿಎಂಕೆ ಚುನಾವಣಾ ಪ್ರಣಾಳಿಕೆ ವಿಚಾರವಾಗಿ ಮಾಧ್ಯಮ ವರದಿಯನ್ನು ಉಲ್ಲೇಖಿಸಿ ಸಾಮಾಜಿಕ ಮಾಧ್ಯಮ ಎಕ್ಸ್ ನಲ್ಲಿ ಸಂದೇಶ ಪ್ರಕಟಿಸಿರುವ ಅಶೋಕ್, ರಾಜ್ಯ ಕಾಂಗ್ರೆಸ್ ಸರ್ಕಾರ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ವಿರುದ್ಧ ಕಿಡಿಕಾರಿದ್ದಾರೆ.

'ಮೇಕೆದಾಟು ಯೋಜನೆಯನ್ನು ಯಾವುದೇ ಕಾರಣಕ್ಕೂ ಜಾರಿ ಮಾಡಲು ಬಿಡುವುದಿಲ್ಲ ಎಂದು 'ಇಂಡಿಯಾ' ಮಿತ್ರಪಕ್ಷ ಡಿಎಂಕೆ ಪ್ರಣಾಳಿಕೆಯಲ್ಲಿ ಘೋಷಣೆ ಮಾಡಿದೆಯಲ್ಲ ಡಿಸಿಎಂ ಡಿಕೆ ಶಿವಕುಮಾರ್ ಅವರೇ, ಈಗ 'ನಮ್ಮ ನೀರು, ನಮ್ಮ ಹಕ್ಕು' ಎಂದು ತಮ್ಮ ಶಾಸಕರನ್ನು ಚೆನ್ನೈಗೆ ಕರೆದುಕೊಂಡು ಹೋಗಿ ಪ್ರತಿಭಟನೆ ಮಾಡುತ್ತೀರಾ





ಅಥವಾ ರಾಹುಲ್ ಗಾಂಧಿ ಅವರನ್ನು ಮೆಚ್ಚಿಸಲು ಕನ್ನಡಿಗರ ಹಿತಾಸಕ್ತಿ ಬಲಿಕೊಟ್ಟು ರಾಜಿ ಮಾಡಿಕೊಳ್ಳುತ್ತೀರಾ' ಎಂದು ಅಶೋಕ್ ಪ್ರಶ್ನೆ ಮಾಡಿದ್ದಾರೆ. 'ಬೆಂಗಳೂರಿಗೆ ನೀರು ತರುತ್ತೇವೆ ಎಂದು ಮೇಕೆದಾಟು ಪಾದಯಾತ್ರೆ ಮಾಡಿ ಕನ್ನಡಿಗರ ಮೂಗಿಗೆ ತುಪ್ಪ ಸವರಿ ಅಧಿಕಾರಕ್ಕೇರಿದ ನಾಡದ್ರೋಹಿ ಕಾಂಗ್ರೆಸ್ ಸರ್ಕಾರ ಈಗ ಕನ್ನಡಿಗರ ಬೆನ್ನಿಗೆ ಚೂರಿ ಹಾಕುತ್ತಿದೆ' ಎಂದು ಅಶೋಕ್ ವಾಗ್ದಾಳಿ ನಡೆಸಿದ್ದಾರೆ. ಪುಟ 2

---

### ಪಪ್ಪು ಯಾದವ್, ಡ್ಯಾನಿಶ್ ಅಲಿ, ಲಾಲ್ ಸಿಂಗ್
# ಕಾಂಗ್ರೆಸ್‌ಗೆ ಸೇರ್ಪಡೆ

**ಜಮ್ಮು:** ಪಪ್ಪು ಯಾದವ್, ಡ್ಯಾನಿಶ್ ಅಲಿ ಹಾಗೂ ಲಾಲ್ ಸಿಂಗ್ ಕಾಂಗ್ರೆಸ್‌ಗೆ ಸೇರ್ಪಡೆಯಾಗಿದ್ದಾರೆ. ಲೋಕಸಭೆ ಚುನಾವಣೆ ಘೋಷಣೆಯಾದ ನಂತರ ಇಡೀ ದೇಶದಲ್ಲಿ ರಾಜಕೀಯ ಗದ್ದಲ ಶುರುವಾಗಿದೆ. ಹಾಗೆಯೇ ರಾಜೀನಾಮೆ ಪರ್ವವೂ ಮುಂದುವರೆದಿದೆ. ಪಪ್ಪು ಯಾದವ್, ಡ್ಯಾನಿಶ್ ಅಲಿ, ಜೈ ಪ್ರಕಾಶ್ ಪಟೇಲ್ ಮತ್ತು ಚೌಧರಿ ಲಾಲ್ ಸಿಂಗ್ ಕಾಂಗ್ರೆಸ್ ಗೆ ಸೇರ್ಪಡೆಗೊಂಡಿದ್ದಾರೆ.

ಪಪ್ಪು ಯಾದವ್ ಅವರು ತಮ್ಮ ಜನ್ ಅಧಿಕಾರ್ ಪಕ್ಷವನ್ನು ಕಾಂಗ್ರೆಸ್‌ನೊಂದಿಗೆ ವಿಲೀನಗೊಳಿಸಿದರು. ಜಮ್ಮು ಮತ್ತು ಕಾಶ್ಮೀರದ ಮಾಜಿ ಬಿಜೆಪಿ ನಾಯಕ ಚೌಧರಿ ಲಾಲ್ ಸಿಂಗ್ ಕೂಡ ತಮ್ಮ ಪಕ್ಷ 'ಡೋಗ್ರಾ ಸ್ವಾಭಿಮಾನ್ ಸಂಘಟನೆ' ಅನ್ನು ಕಾಂಗ್ರೆಸ್‌ನೊಂದಿಗೆ ವಿಲೀನಗೊಳಿಸಿದರು. ಅಲ್ಲದೆ, ಜಾರ್ಖಂಡ್‌ನ ಮಾಂಡು ಕ್ಷೇತ್ರದ ಬಿಜೆಪಿ ಶಾಸಕ ಜೈ ಪ್ರಕಾಶ್ ಪಟೇಲ್ ಕೂಡ ಕಾಂಗ್ರೆಸ್ ಸೇರಿದ್ದಾರೆ. ಪುಟ 2



---

### ಬೆಂಗಳೂರಿನಲ್ಲಿ ನಲ್ಲಿಗಳಿಗೆ ಏರಿಯೇಟರ್ ಅಳವಡಿಕೆ
# ಇಂದಿನಿಂದ ಆರಂಭ

**ಬೆಂಗಳೂರು:** ಬೆಂಗಳೂರಿನಲ್ಲಿ ನೀರಿನ ಬಿಕ್ಕಟ್ಟು ತೀವ್ರಗೊಂಡಿರುವ ಕಾರಣ ದೊಡ್ಡ ಪ್ರಮಾಣದ ನೀರು ಬಳಕೆದಾರರು (ವಾಣಿಜ್ಯ ಸಂಸ್ಥೆಗಳು, ಹೋಟೆಲ್, ರೆಸ್ಟೋರೆಂಟ್ ಇತ್ಯಾದಿ ಪ್ರದೇಶಗಳಲ್ಲಿ) ನಲ್ಲಿಗಳಿಗೆ ಏರಿಯೇಟರ್ ಅಳವಡಿಕೆ ಕಡ್ಡಾಯಗೊಳಿಸಿರುವ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ , ಇಂದಿನಿಂದ ನಿಟ್ಟಿನಲ್ಲಿ ಕಾರ್ಯಾರಂಭ ಮಾಡಿದೆ. ನಗರದ ಕಟ್ಟಡಗಳು, ವಾಣಿಜ್ಯ ಸಂಸ್ಥೆಗಳು, ರೆಸ್ಟೋರೆಂಟ್‌ಗಳು, ಐಷಾರಾಮಿ ಹೋಟೆಲ್‌ಗಳು, ಕೈಗಾರಿಕೆಗಳು ಮತ್ತು ಇತರ ಸಾರ್ವಜನಿಕ ಪ್ರದೇಶಗಳಲ್ಲಿ ನೀರನ್ನು ಸಂರಕ್ಷಿಸುವ ಉದ್ದೇಶದಿಂದ ಏರಿಯೇಟರ್ ಅಳವಡಿಕೆ ಆರಂಭಿಸಲಾಗಿದೆ.

ನಲ್ಲಿಗಳಿಗೆ ಏರಿಯೇಟರ್ ಅಳವಡಿಕೆ ಕಡ್ಡಾಯಗೊಳಿಸಿ ಬುಧವಾರವಷ್ಟೇ ಆದೇಶ



ಹೊರಡಿಸಿದ್ದ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮಾರ್ಚ್ 31ರ ಗಡುವನ್ನೂ ವಿಧಿಸಿದೆ. ಮುಂಬರುವ ಹೋಳಿ ಹಬ್ಬದ ಆಚರಣೆಯ ಸಮಯದಲ್ಲಿ ನಗರದಲ್ಲಿ ಪೂಲ್ ಡ್ಯಾನ್ಸ್ ಮತ್ತು ರೈನ್ ಡ್ಯಾನ್ಸ್ ಮತ್ತಿತರ ಚಟುವಟಿಕೆಗಳಿಗೆ ಕಾವೇರಿ ನೀರು ಮತ್ತು ಬೋರ್‌ವೆಲ್ ನೀರಿನ ಬಳಕೆಗೆ ನಿರ್ಬಂಧ ವಿಧಿಸಿದ ಬೆನ್ನಲ್ಲೇ ಏರಿಯೇಟರ್ ಅಳವಡಿಕೆಗೂ ಕ್ರಮ ಕೈಗೊಳ್ಳಲಾಗುತ್ತಿದೆ.

ಕಾರುಗಳನ್ನು ತೊಳೆಯುವುದು, ನಿರ್ಮಾಣ ಚಟುವಟಿಕೆಗಳು, ತೋಟಗಾರಿಕೆ, ಕಾರಂಜಿಗಳು ಮತ್ತು ಈಜುಕೊಳಗಳಲ್ಲಿ ಇತರ ಉದ್ದೇಶಗಳಿಗಾಗಿ ಕುಡಿಯಲು ಯೋಗ್ಯ ನೀರಿನ ಬಳಕೆಯ ಮೇಲೆ ಈಗಾಗಲೇ ನಿರ್ಬಂಧ ಹೇರಲಾಗಿದೆ.

ಯಾಕಾಗಿ ಏರಿಯೇಟರ್ ಅಳವಡಿಕೆ

ಏರಿಯೇಟರ್ ಎನ್ನುವುದು ನಲ್ಲಿಗೆ ಅಳವಡಿಸುವ ಸಾಧನವಾಗಿದೆ. ಇದು ನೀರಿನ ಹರಿವನ್ನು ನಿಯಂತ್ರಿಸುತ್ತದೆ. ಇದನ್ನು ಅಳವಡಿಸುವ ಮೂಲಕ ನೀರಿನ ಹರಿವು ನಿಯಂತ್ರಣದ ಜತೆಗೆ ಬಳಕೆಯನ್ನೂ ಕಡಿಮೆ ಮಾಡಬಹುದಾಗಿದೆ. ಪುಟ 2

---

### ನರ್ಸಿಂಗ್ ಮಾಡಲು ಬಿಹಾರದಿಂದ ಬಂದಿದ್ದ ಯುವಕ
# ಪ್ರೇಮಪಾಶಕ್ಕೆ ಸಿಲುಕಿ ಆತ್ಮಹತ್ಯೆ

**ಬೆಂಗಳೂರು:** ಆತ ದೂರದ ಬಿಹಾರದಿಂದ ಶಿಕ್ಷಣಕ್ಕಾಗಿ ಬೆಂಗಳೂರಿಗೆ ಬಂದಿದ್ದ, ಓದೋದ್ರಲ್ಲೂ ಮುಂದೆ ಇದ್ದ, ಓದ್ಕೊಂಡು ಇದ್ದೀನಿ, ನಾನಾಯ್ತು ನನ್ನ ಪಾಡಾಯ್ತು ಅಂತಿದ್ರೆ ಎಲ್ಲವೂ ಸರಿಯಾಗಿ ಇರೋದು, ಆದ್ರೆ ತನ್ನೂರಿನ ಯುವತಿಯೊಂದಿಗೆ ಪ್ರೇಮದಾಟದಲ್ಲಿ ಮುಳುಗಿದ್ದ ಆತ ಕೊನೆಗೆ ಪ್ರೀತಿಯ ವಿಚಾರದಲ್ಲೆ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಶವಗಾರದ ಬಳಿ ಪೋಷಕರ ಗೋಳಾಟ,ಸಹಪಾಠಿಗಳ ದಿವ್ಯ ಮೌನ. ಮೇಲಿನ ಫೋಟೋದಲ್ಲಿರುವ ಈತ 19 ವರ್ಷದ ಸೋನುಕುಮಾರ್.

ಬಿಹಾರ ಮೂಲದ ಸೋನು ಕುಮಾರ್ ಬೆಂಗಳೂರು ಗ್ರಾಮಾಂತರ ಜಿಲ್ಲೆ ನೆಲಮಂಗಲ ನಗರದ ಸನ್ ಫ್ಲವರ್ ಕಾಲೇಜೊಂದರಲ್ಲಿ ಬಿಎಸ್ಸಿ ನರ್ಸಿಂಗ್ ವ್ಯಾಸಂಗ ಮಾಡುತ್ತಿದ್ದ. 2 ನೇ ವರ್ಷದ ನರ್ಸಿಂಗ್ ವ್ಯಾಸಂಗ ಮಾಡುತ್ತಿದ್ದ ಸೋನುಕುಮಾರ್ ಓದಿನಲ್ಲೂ ಮುಂದೆ ಇದ್ದ, ಪ್ರೇಮದ ವಿಚಾರದಲ್ಲಿ ಬೇಸತ್ತಿದ್ದ ಸೋನು ತಾನು ವಾಸವಿದ್ದ ಹಾಸ್ಟೆಲ್‌ನಲ್ಲಿ ಫ್ಯಾನಿಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

ಬಿಹಾರ ಮೂಲದ ಅಂದರೆ ತನ್ನೂರಿನ



ಯುವತಿಯೊಂದಿಗೆ ಪ್ರೀತಿಯಲ್ಲಿ ಮುಳುಗಿದ್ದ ಯುವಕ ಪ್ರೇಮ ಪಾಷದ ವಿಚಾರದಲ್ಲಿ ಮನನೊಂದು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಹೌದು ಮೃತ ಸೋನುಕುಮಾರ್ ಹಲವು ದಿನಗಳಿಂದ ಪ್ರೀತಿಯಲ್ಲಿ ಮುಳುಗಿಹೋಗಿದ್ದ, ತರಗತಿಗಳು ಮುಗಿಯುತ್ತಿದ್ದಂತೆ ಪ್ರೇಯಸಿ ಜೊತೆ ಸದಾಕಾಲ ಫೋನ್‌ನಲ್ಲಿ ಬ್ಯುಸಿ ಇರುತ್ತಿದ್ದನಂತೆ. ಪುಟ 2

---

### ಯುವಕರಿಂದ ಅಂಗಡಿ ಮಾಲೀಕನಿಗೆ ಹಲ್ಲೆ
# ಸಿಸಿಟಿವಿಯಲ್ಲಿ ಸೆರೆ





**ಬೆಂಗಳೂರು:** ರಾಜಧಾನಿಯ ಜನನಿಬಿಡ ವಾಣಿಜ್ಯ ಪ್ರದೇಶವಾದ ನಗರ್ತ ಪೇಟೆಯಲ್ಲಿ ಮೊಬೈಲ್ ಅಂಗಡಿಯಲ್ಲಿ ಹನುಮಾನ್ ಚಾಲಿಸಾ ಹಾಡು ಹಾಕಿದ್ದಕ್ಕೆ ಯುವಕನ ಮೇಲೆ ಅನ್ಯಕೋಮಿನ ಯುವಕರು ಹಲ್ಲೆ ನಡೆಸಿರುವ ಪ್ರಕರಣ ನಡೆದಿರುವ ಬೆನ್ನಿಗೇ ಬೆಂಗಳೂರು ಹೊರವಲಯ ಆನೇಕಲ್ ತಾಲ್ಲೂಕಿನ ಎಲೆಕ್ಟ್ರಾನಿಕ್ ಸಿಟಿ ಸಮೀಪದ ಬೆಟ್ಟದಾಸನ ಪುರದಲ್ಲಿಯೂ ಅಂತಹುದೇ ಘಟನೆ ನಡೆದಿದೆ.

ಪ್ರಕರಣ ಹೀಗಿದೆ ಆತ ಅದೊಂದು ಕಾರ್ಟ್ ನಲ್ಲಿ ತನ್ನ ಪ್ರಾವಿಷನ್ ಸ್ಟೋರ್ ಗಾಗಿ ತೆಂಗಿನ ಕಾಯಿ ಆರ್ಡರ್ ಮಾಡಿದ್ದ. ಆದ್ರೆ ಆರ್ಡರ್ ತಂದ ಡೆಲಿವರಿ ಬಾಯ್ ಅದೊಂದು ಕಾರಣಕ್ಕೆ ಕಿರಿಕ್ ತೆಗೆದಿದ್ದು ಮಾತ್ರವಲ್ಲದೆ ಹುಡುಗರನ್ನು ಕರೆಸಿ ಅಂಗಡಿ ಮಾಲೀಕನ ಮೇಲೆ ಹಲ್ಲೆ ಮಾಡಿದ್ದಾನೆ. ಪುಟ 2

---

### ಅಮೆರಿಕದಲ್ಲಿ ಸದ್ಯಕ್ಕಿಲ್ಲ ಬಡ್ಡಿದರ ಕಡಿತ
# ಈ ವರ್ಷ 3 ಇಳಿಕೆಯ ಸುಳಿವು ನೀಡಿದ ಸೆಂಟ್ರಲ್ ಬ್ಯಾಂಕ್

**ನವದೆಹಲಿ:** ಅಮೆರಿಕದ ಸೆಂಟ್ರಲ್ ಬ್ಯಾಂಕ್ ಆದ ಫೆಡರಲ್ ರಿಸರ್ವ್ ನಿರೀಕ್ಷೆಯಂತೆ ಬಡ್ಡಿದರಗಳ ಯಥಾಸ್ಥಿತಿ ಕಾಯ್ದುಕೊಳ್ಳಲು ನಿರ್ಧರಿಸಿದೆ. ಸಾಲದ ಬಡ್ಡಿದರವನ್ನು ಶೇ. 5.25ರಿಂದ ಶೇ. 5.50ರ ಶ್ರೇಣಿಯಲ್ಲಿ ಮುಂದುವರಿಸಿದೆ. ಸತತ ಐದನೇ ಬಾರಿ ಫೆಡರಲ್ ರಿಸರ್ವ್ ಸಭೆಯಲ್ಲಿ ದರ ಬದಲಾವಣೆ ಮಾಡಲಾಗಿಲ್ಲ. ಕಳೆದ 23 ವರ್ಷಗಳಲ್ಲೇ ಇದು ಗರಿಷ್ಠ ಬಡ್ಡಿದರದ ಮಟ್ಟವೂ ಹೌದು. ಮುಖ್ಯ ವಿಚಾರ ಎಂದರೆ ಈ 2024ರ ವರ್ಷದಲ್ಲಿ ಮೂರು ಬಾರಿ ದರ ಕಡಿತಗೊಳಿಸುವ ಸುಳಿವನ್ನು ಸೆಂಟ್ರಲ್ ಬ್ಯಾಂಕ್ ನೀಡಿದೆ. ಅಂದರೆ, ಡಿಸೆಂಬರ್ ನೊಳಗೆ ನಡೆಯಬಹುದಾದ ನಾಲ್ಕೈದು ಸಭೆಯಲ್ಲಿ ಮೂರು ಸಲ ಬಡ್ಡಿದರ ಇಳಿಸುವ ನಿರ್ಧಾರ ಮಾಡುವ ಸಾಧ್ಯತೆ ಇದೆ. ಆದರೆ ಅದೆಲ್ಲವೂ ಅಮೆರಿಕದಲ್ಲಿ ಹಣದುಬ್ಬರದ ಇಳಿಕೆಯ ಮೇಲೆ ಅವಲಂಬಿತವಾಗಿದೆ.

ಭಾರತದಲ್ಲಿ ಬಡ್ಡಿದರ ಮತ್ತು ಹಣದುಬ್ಬರಕ್ಕೆ ಹೋಲಿಸಿದರೆ ಅಮೆರಿಕದಲ್ಲಿ ಕಡಿಮೆ. ಅಲ್ಲಿ ಹಣದುಬ್ಬರ ಶೇ. 3.2ರಷ್ಟಿದೆ. ಆದರೆ, ಅಲ್ಲಿನ ಆರ್ಥಿಕತೆಗೆ ಇದು



ಹೆಚ್ಚಿನ ಮಟ್ಟವಾಗಿದೆ. ಹಣದುಬ್ಬರವನ್ನು ಶೇ. 2ಕ್ಕೆ ತಂದು ನಿಲ್ಲಿಸುವುದು ಆ ದೇಶ ಇಟ್ಟಿರುವ ಗುರಿ. ಅದು ಆ ಮಟ್ಟಕ್ಕೆ ಇಳಿಯುವವರೆಗೂ ಬಡ್ಡಿದರ ಕಡಿಮೆ ಮಾಡುವ ಸಾಹಸಕ್ಕೆ ಕೈ ಹಾಕದೇ ಹೋಗಬಹುದು.

**ಬಡ್ಡಿದರ ಕಡಿಮೆ ಮಾಡಿದರೆ ಏನು ಸಮಸ್ಯೆ:** ಒಂದು ಆರ್ಥಿಕತೆಗೆ ಬಡ್ಡಿದರ ಬಹಳ ಮುಖ್ಯ ಪಾತ್ರ ವಹಿಸುತ್ತದೆ. ಸಾಮಾನ್ಯ ಹಾಗೂ ಸರಳ ಲೆಕ್ಕಾಚಾರದಲ್ಲಿ, ಹಣದುಬ್ಬರ ಹೆಚ್ಚಿದ್ದ ಸಂದರ್ಭದಲ್ಲಿ ಬ್ಯಾಂಕ್ ಬಡ್ಡಿದರವನ್ನೂ ಹೆಚ್ಚಿಸಲಾಗುತ್ತದೆ. ಪುಟ 2

---

### ಅರುಣಾಚಲ ಪ್ರದೇಶ ಭಾರತದ ಭೂಪ್ರದೇಶ, ಇದು ಚೀನಾದ ಹಕ್ಕಲ್ಲ
# ಯುನೈಟೆಡ್ ಸ್ಟೇಟ್ಸ್

**ದೆಹಲಿ:** ಅರುಣಾಚಲ ಪ್ರದೇಶವನ್ನು ಭಾರತದ ಭೂಪ್ರದೇಶವೆಂದು ಯುನೈಟೆಡ್ ಸ್ಟೇಟ್ಸ್ ಹೇಳಿದೆ. ಇದೀಗ ಈ ಹೇಳಿಕೆ ಚೀನಾಕ್ಕೆ ಭಾರೀ ಮುಖಭಂಗವನ್ನು ಉಂಟು ಮಾಡಿದ್ದು, ಅರುಣಾಚಲ ಪ್ರದೇಶ ನಮ್ಮದು ನಮ್ಮದು ಎನ್ನುತ್ತಿದ್ದ ಚೀನಾಕ್ಕೆ ಇದು ಸರಿಯಾದ ಉತ್ತರ ಎಂದು ಹೇಳಲಾಗಿದೆ. ನೈಜ ನಿಯಂತ್ರಣ ರೇಖೆಯ ಮೇಲೆ ತನ್ನ ಪ್ರಾದೇಶಿಕ ಹಕ್ಕುಗಳನ್ನು ಮುಂದಿಡುವ ಯಾವುದೇ ಪ್ರಯತ್ನಗಳನ್ನು ನಾವು ಬಲವಾಗಿ ವಿರೋಧಿಸುತ್ತದೆ ಎಂದು ಯುನೈಟೆಡ್ ಸ್ಟೇಟ್ಸ್ ಹೇಳಿದೆ. ಅರುಣಾಚಲ ಪ್ರದೇಶಕ್ಕೆ ಪ್ರಧಾನಿ ಮೋದಿ ಅವರು ಇತ್ತೀಚೆಗೆ ಭೇಟಿ ನೀಡಿದ ನಂತರ ಚೀನಾ ಈ ಪ್ರದೇಶ ನಮ್ಮ ವ್ಯಾಪ್ತಿಗೆ ಬರುತ್ತದೆ ಎಂಬ ಹೇಳಿಕೆಯನ್ನು ನೀಡಿತ್ತು.

ಚೀನಾದ ರಕ್ಷಣಾ ಸಚಿವಾಲಯದ ಹಿರಿಯ ವಕ್ತಾರ ಕರ್ನಲ್ ಜಾಂಗ್ ಕ್ಸಿಯೋಗಾಂಗ್ ಅವರು ಕ್ಸಿಜಾಂಗ್‌ನ ದಕ್ಷಿಣ



ಭಾಗ ಚೀನಾದ ಭೂಪ್ರದೇಶದ ಅಂತರ್ಗತ ಭಾಗವಾಗಿದೆ ಮತ್ತು ಈ ಭಾಗವನ್ನು ಅರುಣಾಚಲ ಪ್ರದೇಶ ಕರೆಯಲು ಸಾಧ್ಯವಿಲ್ಲ ಎಂದು ಹೇಳಿದೆ. ಈ ಭಾಗದಲ್ಲಿ ಭಾರತ ತನ್ನ ಹಿಡಿತವನ್ನು ಅಕ್ರಮವಾಗಿ ಮಾಡಿಕೊಂಡಿದೆ ಎಂದು ಚೀನಾ ಹೇಳಿದೆ. ಅರುಣಾಚಲ ಪ್ರದೇಶವನ್ನು ದಕ್ಷಿಣ ಟಿಬೆಟ್ ಎಂದು ಪ್ರತಿಪಾದಿಸುವ ಚೀನಾ, ಈ ಭಾಗಕ್ಕೆ ಭಾರತದ ನಾಯಕರು ಬರುವುದನ್ನು ವಿರೋಧಿಸುತ್ತಿದೆ. ಪುಟ 2

## ಶೋಭಾ ಕರಂದ್ಲಾಜೆ ವಿರುದ್ದ ಚುನಾವಣಾ ಆಯೋಗಕ್ಕೆ ದೂರು

**ನವದೆಹಲಿ:** ಬಿಜೆಪಿ ಸಂಸದೆ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ವಿರುದ್ದ ಕೇಂದ್ರ ಚುನಾವಣಾ ಆಯೋಗಕ್ಕೆ ಡಿಎಂಕೆ ದೂರು ನೀಡಿದೆ. ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣದ ಹಿಂದೆ ತಮಿಳುನಾಡಿನ ಜನರಿದ್ದಾರೆ. ತಮಿಳುನಾಡು ಕರ್ನಾಟಕದ ಜನರ ಮಧ್ಯೆ ಕೋಮು ದ್ವೇಷದ ಭಾಷಣ ಮಾಡಿದ್ದಾರೆ. ಆದರೆ ಇಲ್ಲಿಯವರೆಗೆ ರಾಷ್ಟ್ರೀಯ ತನಿಖಾ ದಳ ಯಾರನ್ನೂ ಬಂಧನ ಮಾಡಿಲ್ಲ. ಹೀಗಾಗಿ ಪ್ರಜಾಪತ್ರಿನಿಧಿ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಿಸುವಂತೆ ದೂರು ನೀಡಿದೆ. ತಮಿಳುನಾಡಿನಲ್ಲಿ ಟ್ರೈನಿಂಗ್ ಪಡೆದು, ಬಾಂಬ್ ಇಡಲು ಬೆಂಗಳೂರಿಗೆ ರಾಮೇಶ್ವರಂ ಕೆಫೆಗೆ ಶಂಕಿತ ಬಂದಿದ್ದಾನೆ ಎಂದು ಶೋಭಾ ಕರಂದ್ಲಾಜೆ ಹೇಳಿದ್ದಾರೆ. ಎನ್‌ಐಎ ತನಿಖೆ ನಡೆಸುತ್ತಿರುವ ಸಂದರ್ಭದಲ್ಲಿ ಈ ರೀತಿಯ ಹೇಳಿಕೆ ನೀಡಿದ್ದಾರೆ. ಆದರೆ ಎನ್‌ಐಎ ಇಲ್ಲಿಯವರೆಗೆ ಯಾರನ್ನೂ ಬಂಧಿಸಿದಲ್ಲ ಎಂದು ಡಿಎಂಕೆ ದೂರಿನಲ್ಲಿ ಉಲ್ಲೇಖಿಸಿದೆ.

**ಶೋಭಾ ಕರಂದ್ಲಾಜೆ ಹೇಳಿದ್ದೇನು:** ಮಂಗಳವಾರ ಬೆಂಗಳೂರು ಉತ್ತರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಶೋಭಾ ಕರಂದ್ಲಾಜೆ ಬೆಂಗಳೂರಿನ ನಗರ್ತಪೇಟೆಯಲ್ಲಿ ಹಿಂದೂ ಯುವಕನ ಮೇಲೆ ಹಲ್ಲೆ ನಡೆದ ಸ್ಥಳಕ್ಕೆ ಭೇಟಿ ನೀಡಿದ್ದರು. ಈ ಸಂದರ್ಭದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ್ದ ಅವರು, ತಮಿಳುನಾಡಿನ ಜನರು ಅಲ್ಲಿ ತರಬೇತಿ ಪಡೆದುಕೊಂಡು ಬಾಂಬ್ ಇಡುತ್ತಾರೆ ಎಂದು ಹೇಳಿಕೆ ನೀಡಿದ್ದರು. ತನ್ನ ಹೇಳಿಕೆ ವಿವಾದವಾಗುತ್ತಿದ್ದಂತೆ ಎಕ್ಸ್‌ನಲ್ಲಿ ಕರಂದ್ಲಾಜೆ ಕ್ಷಮೆ ಕೇಳಿದ್ದರು. ನನ್ನ ತಮಿಳು ಸಹೋದರ ಸಹೋದರಿಯರಿಗೆ ನನ್ನ ಮಾತಿನಿಂದ ನೋವಾಗಿದ್ದರೆ ಕ್ಷಮೆ ಕೇಳುತ್ತೇನೆ. ನನ್ನ ಹೇಳಿಕೆಯನ್ನು ಹಿಂದಕ್ಕೆ ಪಡೆಯುತ್ತೇನೆ ಎಂದು ತಿಳಿಸಿದ್ದರು.

## ಟೈಂ ಪಾಸ್ ಮಾಡಲು ಕಷ್ಟ, ಅದಕ್ಕೆ ಲೋಕಸಭೆಗೆ ಸ್ಪರ್ಧೆ

**ನವದೆಹಲಿ:** ವಿಧಾನಸಭೆಯಲ್ಲಿ ಸೋಲು ಕಂಡಿರುವ ಮಾಜಿ ಸಚಿವ ಡಾ.ಕೆ.ಸುಧಾಕರ್ ನಾಲ್ಕು ವರ್ಷ ಸುಮ್ಮನೆ ಟೈಂ ಪಾಸ್ ಮಾಡಲು ಸಾಧ್ಯವಾಗುವುದಿಲ್ಲ. ಹೀಗಾಗಿ ಲೋಕಸಭೆಗೆ ಸ್ಪರ್ಧಿಸುತ್ತಿದ್ದೇನೆ ಎಂದು ನನ್ನ ಮುಂದೆ ಹೇಳಿದ್ದಾರೆ ಎಂದು ದೆಹಲಿಯಲ್ಲಿ ಶಾಸಕ ಎಸ್.ಆರ್.ವಿಶ್ವನಾಥ್ ತಿಳಿಸಿದ್ದಾರೆ. ದೆಹಲಿಯಲ್ಲಿ ಬಿ.ಎಸ್.ಯಡಿಯೂರಪ್ಪ ಭೇಟಿ ಬಳಿಕ ಮಾತನಾಡಿದ ಅವರು ವಾಗ್ದಾಳಿ ನಡೆಸಿದರು. ಚಿಕ್ಕಬಳ್ಳಾಪುರದಲ್ಲಿ ಬಚ್ಚೇಗೌಡರು ರಾಜಕೀಯ ನಿವೃತ್ತಿ ಘೋಷಿಸಿದಾಗ ಯಾರು ಅಭ್ಯರ್ಥಿ ಇರಲಿಲ್ಲ. ಎಲ್ಲ ನಾಯಕರು ನನ್ನ ಪುತ್ರ ಅಲೋಕ್ ವಿಶ್ವಾನಾಥ್‌ನ ಕಣಕ್ಕಿಳಿಸಲು ಸೂಚಿಸಿದರು. ಈ ಹಿನ್ನೆಲೆ ನಾವು ಎಲ್ಲ ತಯಾರಿ ಮಾಡಿಕೊಂಡಿದ್ದೇವೆ. ಆದರೆ ಈ ನಡುವೆ ಬಂದ ಸುಧಾಕರ್ ನಾಲ್ಕು ವರ್ಷ ಇಲ್ಲಿ ಏನು ಮಾಡುವುದು? ಟೈಂ ಪಾಸ್ ಮಾಡಲು ಕಷ್ಟ. ಅದಕ್ಕೆ ಲೋಕಸಭೆ ಚುನಾವಣೆಗೆ ಸ್ಪರ್ಧಿಸುತ್ತಿದ್ದೇನೆ ಎಂದು ನನ್ನ ಮುಂದೆ ಹೇಳಿದ್ದಾರೆ. ಆದರೆ ಇದು ಟೈಂ ಪಾಸ್ ಮಾಡುವ ವಿಷಯವಲ್ಲ ಎಂದು ಹೇಳಿದರು. ದೆಹಲಿಯಲ್ಲಿ ನಾನು ಯಾವ ನಾಯಕರನ್ನೂ ಭೇಟಿ ಮಾಡಿಲ್ಲ. ಬಿ.ಎಸ್.ಯಡಿಯೂರಪ್ಪ ಜೊತೆಗೆ ಬಂದಿದ್ದೇನೆ. ಅಲೋಕ್ ಮಗ ಎನ್ನುವುದಕ್ಕಿಂತ ಕ್ಷೇತ್ರದಲ್ಲಿ ಸಾಕಷ್ಟು ಕೆಲಸ ಮಾಡಿದ್ದಾನೆ. ಸರ್ವೆಯಲ್ಲೂ ಅಲೋಕ್ ಹೆಸರು ಇದೆ. ಸುಧಾಕರ್ ಅವರು ಈ ಮೊದಲು ಲೋಕಸಭೆಗೆ ಕೇಳಿರಲಿಲ್ಲ. ಅವರು ನಿಲ್ಲಲ್ಲ ಅಂದಿದ್ದಕ್ಕೆ ನಾವು ಮಗನ ಸ್ಪರ್ಧೆಗೆ ಚಿಂತಿಸಿದ್ದೆವು. ಅಲೋಕ್‌ಗೆ ಟಿಕೆಟ್ ನೀಡಿದರೆ 25 ವರ್ಷ ಕ್ಷೇತ್ರ ಪಕ್ಷಕ್ಕೆ ಇರಲಿದೆ. ನಾವು ಈಗಾಗಲೇ ಪ್ರಚಾರ ಆರಂಭಿಸಿದ್ದೇವೆ. ಯಲಹಂಕ ಕ್ಷೇತ್ರ ದೊಡ್ಡ ಲೀಡ್ ಕೊಡಲಿದೆ. ಹೀಗಾಗಿ ಅಲೋಕ್ ಆದರೆ ಹೆಚ್ಚು ಲೀಡ್ ಸಿಗಲಿದೆ. ಮೋದಿ ಮುಖದ ಜೊತೆಗೆ ಜನ ಒಪ್ಪುವ ಅಭ್ಯರ್ಥಿ ಬೇಕು ಎಂದು ಮಾತನಾಡಿದರು.

# ಏ.19, 26ರ ಚುನಾವಣಾ ದಿನಾಂಕ ಬದಲಾಯಿಸುವಂತೆ ಮನವಿ



**ಬೆಂಗಳೂರು:** ಏಪ್ರಿಲ್ 19 ಮತ್ತು ಏಪ್ರಿಲ್ 26 ರಂದು ನಿಗದಿಯಾಗಿದ್ದ ಚುನಾವಣಾ ದಿನಾಂಕವನ್ನು ಬದಲಾಯಿಸುವಂತೆ ಕೇಂದ್ರ ಚುನಾವಣಾ ಆಯೋಗಕ್ಕೆ ಮುಸ್ಲಿಂ ಸಂಘಟನೆಗಳು ಮನವಿ ಮಾಡಿವೆ.

ಮೊದಲ ಮತ್ತು ಎರಡನೇ ಹಂತದ ಚುನಾವಣೆ ದಿನವಾಗಿರುವ ಏ.19 ಮತ್ತು ಏ.26 ಶುಕ್ರವಾರ ಬರುತ್ತದೆ. ಇಸ್ಲಾಮಿಕ್ ಸಮುದಾಯವರು ಶುಕ್ರವಾರದಂದು ಪ್ರಾರ್ಥನೆಗಾಗಿ ಮಸೀದಿಗಳಿಗೆ ಹೋಗುತ್ತಾರೆ. ಶುಕ್ರವಾರ ನಡೆಯುವ ಮತದಾನವು ಮತದಾರರಿಗೆ ಮತ್ತು ಚುನಾವಣಾ ಕರ್ತವ್ಯದಲ್ಲಿರುವ ಅಧಿಕಾರಿಗಳಿಗೆ ಅನಾನುಕೂಲವಾಗಲಿದೆ. ಹೀಗಾಗಿ ಈ ಎರಡು ದಿನಾಂಕವನ್ನು ಬದಲಾವಣೆ ಮಾಡಬೇಕೆಂದು ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ ಜೊತೆ ರಾಜ್ಯದ ರಾಜ್ಯದ ಉಲಾಮಾ ಒಕ್ಕೂಟವೂ ಮನವಿ ಮಾಡಿದೆ. ಚುನಾವಣಾ ದಿನಾಂಕ ಬದಲಾವಣೆಗೆ ಮುಸ್ಲಿಂ ಸಂಘಟನೆಗಳ ಮನವಿ ವಿಚಾರದ ಬಗ್ಗೆ ಜಿಲ್ಲಾ ಚುನಾವಣಾಧಿಕಾರಿ ತುಷಾರ್ ಗಿರಿನಾಥ್ ಪ್ರತಿಕ್ರಿಯಿಸಿ, ನಮಗೆ ಮನವಿ ಮಾಡಿದರೆ ನಾವು ಚುನಾವಣಾ ಆಯೋಗದ ಗಮನಕ್ಕೆ ತರುತ್ತೇವೆ. ಬದಲಾವಣೆ ಮಾಡಲು ಸಾಧ್ಯತೆ ಇದೆಯಾ ಎಂಬುದನ್ನು ಚುನಾವಣಾ ಆಯೋಗ ನಿರ್ಧಾರ ಮಾಡುತ್ತದೆ ಎಂದು ತಿಳಿಸಿದರು.

# ಮೋದಿ ಪ್ರಚಾರದ ಅಬ್ಬರ ತಗ್ಗಿಸಲು ರೂಟ್ ಮ್ಯಾಪ್ ಸಿದ್ಧಪಡಿಸಿದ ಕಾಂಗ್ರೆಸ್

**ಬೆಂಗಳೂರು:** ಲೋಕಸಭೆ ಚುನಾವಣೆಗೆ ಅಭ್ಯರ್ಥಿಗಳ ಪಟ್ಟಿ ಜೊತೆಗೆ ರಾಜ್ಯದಲ್ಲಿ ಪ್ರಚಾರದ ತಂತ್ರವನ್ನೂ ಬದಲಿಸಲು ಕಾಂಗ್ರೆಸ್ ಭರ್ಜರಿ ಸಿದ್ಧತೆ ಮಾಡಿದೆ. ಈಗಾಗಲೇ ಪ್ರಧಾನಿ ಮೋದಿ ಎರಡು ಬಾರಿ ಕರ್ನಾಟಕ್ಕೆ ಬಂದು ಅಬ್ಬರದ ಪ್ರಚಾರ ಮಾಡಿ ಹೋಗಿದ್ದಾರೆ. ಇದೀಗ ಪ್ರಧಾನಿ ಅಬ್ಬರ ತಗ್ಗಿಸಲು ಕಾಂಗ್ರೆಸ್ ಹೊಸ ತಂತ್ರ ಹೆಣೆದಿದೆ. ಮೋದಿ ಗೆಲುವಿನ ಓಟಕ್ಕೆ ತಡೆಯೊಡ್ಡಬೇಕು. ಮತದಾರರು ಬಿಜೆಪಿ ಕಡೆ ವಾಲದಂತೆ ತಡೆಯಬೇಕು ಎಂಬ ಗುರಿ ಇಟ್ಟುಕೊಂಡು ಕಾಂಗ್ರೆಸ್ ಹೊಸ ತಂತ್ರ ರೂಪಿಸುತ್ತಿದೆ. ರಾಜ್ಯದಲ್ಲಿ ಈಗಾಗಲೇ ಅಧಿಕಾರದ ಗದ್ದುಗೆ ಏರಿರುವ ಕಾಂಗ್ರೆಸ್, ಮೋದಿಗೆ ಮಾಸ್ಟರ್ ಸ್ಟ್ರೋಕ್ ಕೊಡಲು ತಯಾರಿ ಮಾಡಿದೆ. ಈಗಾಗಲೇ ಎರಡೆರಡು ಜೋಡೋ ಯಾತ್ರೆಗಳ ಮೂಲಕ ಲೋಕಸಭೆ ರಣರಂಗದಲ್ಲಿ ರಾಹುಲ್ ಗಾಂಧಿ ವರ್ಚಸ್ಸು ಹೆಚ್ಚಿಸಿಕೊಂಡಿದ್ದಾರೆ. ಹೀಗಾಗಿ ರಾಜ್ಯದಲ್ಲಿ ರಾಹುಲ್ ಗಾಂಧಿ ಅವರಿಂದಲೇ ಪ್ರಚಾರ ಆರಂಭಿಸಲು ಕಾಂಗ್ರೆಸ್ ಚಿಂತನೆ ಮಾಡಿದೆ. ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿಯನ್ನು ಸೋಲಿಸಿ ದೇಶಕ್ಕೆ ಸಂದೇಶ ಕೊಟ್ಟ ರೀತಿ, ಕರ್ನಾಟಕದಿಂದ ಹೊಸ ಸಂದೇಶ ರವಾನೆ ಮಾಡುವ ಲೆಕ್ಕಾಚಾರ ಕೈ ನಾಯಕರದ್ದಾಗಿದೆ. ಈ ಕುರಿತು ಸಿಎಂ ಮತ್ತು ಡಿಸಿಎಂ ಜೊತೆ ಬಸವರಾಜ್ ರಾಯರೆಡ್ಡಿ, ಜಿಸಿ, ಚಂದ್ರಶೇಖರ್ ಸೇರಿದಂತೆ ಹಲವು ನಾಯಕರು ಮಾತುಕತೆ ನಡೆಸಿದ್ದಾರೆ.

**ಪ್ರಚಾರಕ್ಕೆ 'ಕೈ' ರೂಟ್ ಮ್ಯಾಪ್!:** ಕರ್ನಾಟಕದಲ್ಲಿ ರಾಹುಲ್ ಗಾಂಧಿ ಕರೆಸಿ ಪ್ರಚಾರ ಆರಂಭಿಸಲು ಯೋಜನೆ ರೂಪಿಸಲಾಗಿದ್ದು, ವಿಧಾನಸಭೆ ಚುನಾವಣೆ ಮಾದರಿಯಲ್ಲಿ ಲೋಕಸಭೆ ಪ್ರಚಾರ ಕಾರ್ಯ ನಡೆಯಲಿದೆ. ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ಪ್ರಚಾರ ನಡೆಯಲಿದ್ದು, ಬಸವಕಲ್ಯಾಣ ಅಥವಾ ಕುರುಡುಮಲೆ ದೇವಸ್ಥಾನದಿಂದ ಪ್ರಚಾರಕ್ಕೆ ಚಾಲನೆ ನೀಡಲು ಚಿಂತನೆ ನಡೆಸಲಾಗಿದೆ. ಈ ಪ್ರಚಾರಕ್ಕೆ ಚಾಲನೆ ನೀಡಲು ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆಗೆ ಆಹ್ವಾನ ನೀಡುವ ಮೂಲಕ ಸಂದೇಶ ರವಾನಿಸಲು ಸಿದ್ಧತೆ ಮಾಡಲಾಗಿದೆ. ಬಸವಣ್ಣನ ನಾಡಿನಿಂದಲೇ ಲೋಕ ಸಮರದ ರಣ ಕಹಳೆ ಮೊಳಗಿಸುವ ಯೋಜನೆ ಹಾಕಿಕೊಳ್ಳಲಾಗಿದ್ದು, ಆ ಮೂಲಕ ಮತ್ತೊಮ್ಮೆ ಲಿಂಗಾಯತ ಮತ ಬ್ಯಾಂಕ್ ಸೆಳೆಯುವ ಲೆಕ್ಕಾಚಾರ ಕಾಂಗ್ರೆಸ್ ಪಕ್ಷದ್ದಾಗಿದೆ. ಎರಡು ಹಂತದಲ್ಲಿ ಚುನಾವಣೆ ಇರೋದ್ರಿಂದ ಕುರುಡುಮಲೆ ದೇವಸ್ಥಾನದಿಂದಲೂ ಪ್ರಚಾರ ನಡೆಸುವ ಪ್ರಸ್ತಾಪ ಹಾಕಿಕೊಳ್ಳಲಾಗಿದೆ.

# ನಾನು ಸ್ಪರ್ಧಿಸೋದು ಖಚಿತ, ವಿಜಯೇಂದ್ರ ರಾಜೀನಾಮೆ ಕೊಡೋದು ನಿಶ್ಚಿತ





**ಶಿವಮೊಗ್ಗ:** ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ನಾನು ಸ್ಪರ್ಧಿಸುವುದು ಖಚಿತ. ಯಾವುದೇ ಕಾರಣಕ್ಕೂ ಹಿಂದೆ ಸರಿಯುವ ಮಾತಿಲ್ಲ. ನಾನು ಗೆದ್ದ ನಂತರ ವಿಜಯೇಂದ್ರ ತಮ್ಮ ರಾಜ್ಯಾಧ್ಯಕ್ಷರ ಹುದ್ದೆಗೆ ರಾಜೀನಾಮೆ ಕೊಡುವುದು ನಿಶ್ಚಿತ ಎಂದು ಮಾಜಿ ಸಚಿವ ಕೆ.ಎಸ್ ಈಶ್ವರಪ್ಪ ಭವಿಷ್ಯ ನುಡಿದಿದ್ದಾರೆ.

ಶಿವಮೊಗ್ಗ ಲೋಕಸಭಾ ಕ್ಷೇತ್ರದ ಬಿಜೆಪಿ ಬಂಡಾಯ ಅಭ್ಯರ್ಥಿಯಾಗಿ ಸ್ಪರ್ಧೆಗೆ ಮುಂದಾಗಿರುವ ಮಾಜಿ ಸಚಿವ ಕೆ.ಎಸ್ ಈಶ್ವರಪ್ಪ ಅವರಿಂದು ತಮ್ಮ ನಿವಾಸದಲ್ಲಿ ಬೆಂಬಲಿಗರ ಸಭೆ ನಡೆಸಿ, ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ್ದಾರೆ. ಬಿ.ವೈ ರಾಘವೇಂದ್ರನನ್ನ ಸೋಲಿಸಿ, ಬಿಜೆಪಿ ಕಟ್ಟಾ ಅನುಯಾಯಿಯಾದ ನನ್ನನ್ನು ಗೆಲ್ಲಿಸಬೇಕು ಎಂದು ಮನವಿ ಮಾಡಿದ್ದಾರೆ.

ಈಶ್ವರಪ್ಪ ಸ್ಪರ್ಧೆ ಬಗ್ಗೆ ಇಡೀ ರಾಜ್ಯದಲ್ಲಿ ಚರ್ಚೆ ಆಗ್ತಿದೆ. ಲೋಕಸಭೆ ಚುನಾವಣೆಯಲ್ಲಿ ನಾನು ಗೆಲ್ಲುತ್ತೇನೆ. ಚುನಾವಣಾ ಫಲಿತಾಂಶ ಬಂದು ಬಿಜೆಪಿ ಕಾರ್ಯಕರ್ತರ ವಿಜಯವಾಗುತ್ತಿದ್ದಂತೆ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ತಮ್ಮ ಹುದ್ದೆಗೆ ರಾಜೀನಾಮೆ ಕೊಡ್ತಾರೆ ಎಂದು ಭವಿಷ್ಯ ನುಡಿದಿದ್ದಾರೆ.

ಎಂಎಲ್‌ಸಿ, ರಾಜ್ಯಪಾಲರ ಹುದ್ದೆ ಆಫರ್ ಬಂದಿದೆ:

ಮುಂದಿನ ಜೂನ್‌ನಲ್ಲೇ ಪರಿಷತ್ ಸ್ಥಾನ ಖಾಲಿ ಆಗುತ್ತದೆ, ನಿಮ್ಮ ಮಗನನ್ನ ಎಂಎಲ್‌ಸಿ ಮಾಡ್ತೀವಿ. ನಿಮಗೆ ರಾಜ್ಯಪಾಲರ ಹುದ್ದೆ ಕೊಡ್ತೀವಿ ಅಂತ ಬಿಜೆಪಿ ಹೈಕಮಾಂಡ್ ನನಗೆ ಆಫರ್ ಕೊಟ್ಟಿದೆ. ನನಗೆ ಯಾವುದೇ ಸ್ಥಾನಮಾನ ಮುಖ್ಯವಲ್ಲ. ನನಗೆ ಸ್ಥಾನಮಾನ ಬೇಡ, ಪಕ್ಷ ಉಳಿಯಬೇಕು, ಬಿಎಸ್‌ವೈ ಕುಟುಂಬದ ಸರ್ವಾಧಿಕಾರದಿಂದ ಮುಕ್ತವಾಬೇಕು ಎಂಬುದಷ್ಟೇ ಮುಖ್ಯ ಎಂದು ಗುಡುಗಿದ್ದಾರೆ.

ಶಿವಮೊಗ್ಗ ಲೋಕಸಭಾ ಕ್ಷೇತ್ರದ 8 ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ನಿರೀಕ್ಷೆಗೆ ಮೀರಿ ಬೆಂಬಲ ಸಿಗುತ್ತಿದೆ. ಸ್ವಾಮೀಜಿಗಳು ಬೆಂಬಲ ಕೊಡ್ತಿದ್ದಾರೆ, ಸಿಗಂಧೂರು ಚೌಡೇಶ್ವರಿ ದೇವಸ್ಥಾನದಲ್ಲಿ ಆಶೀರ್ವಾದ ದೊರೆತಿದೆ. ಯಾವ ಕಾರಣಕ್ಕೂ ತೊಂದರೆ ಆಗಲ್ಲ, ನೂರಕ್ಕೆ ನೂರು ನೀವು ಗೆಲ್ಲುತ್ತೀರಾ ಎಂದು ಸ್ವಾಮೀಜಿಗಳು ಹೇಳಿದ್ದಾರೆಂದು ತಿಳಿಸಿದ್ದಾರೆ.

ಸರ್ವಾಧಿಕಾರಿ ಧೋರಣೆಯಿಂದ ಬಿಜೆಪಿ ಮುಕ್ತವಾಗಬೇಕು:

ಒಂದು ಕುಟುಂಬದ ಕೈಯಲ್ಲಿ ಪಕ್ಷ ಸಿಕ್ಕಿದೆ, ಸರ್ವಾಧಿಕಾರಿ ಧೋರಣೆ ಇದೆ. ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಎಲ್ಲಾ ಕ್ಷೇತ್ರದಲ್ಲಿ ಗೆದ್ದು ಬಿಜೆಪಿ ಅಧಿಕಾರಕ್ಕೆ ಬರಲಿದೆ. ಬಿಜೆಪಿ ರಾಜ್ಯಾಧ್ಯಕ್ಷರು ಬದಲಾವಣೆ ಮಾಡುವ ಪ್ರಯತ್ನ ರಾಜ್ಯದಲ್ಲಿ ನಡೆಯುತ್ತಿದೆ. ನಾನು ಸಹ ಆ ದಿಕ್ಕಿನಲ್ಲಿ ಪ್ರಯತ್ನ ಮಾಡ್ತಿದ್ದೇನೆ. ಯಾರೇ ಬಂದು ಮನವೊಲಿಸಿದರೂ ಹಿಂದೆ ಸರಿಯಲ್ಲ. ರಾಜ್ಯದಲ್ಲಿ ಈ ಬಾರಿ ಬಿಜೆಪಿ 28 ಸ್ಥಾನ ಗೆಲ್ಲಬೇಕು. ನಾನು ಶಿವಮೊಗ್ಗ ಲೋಕಸಭಾ ಕ್ಷೇತ್ರದಲ್ಲಿ ನಾನು ಕುಟುಂಬದ ವಿರುದ್ಧ ಸ್ಪರ್ಧೆ ಮಾಡಿ ಗೆಲ್ಲುತ್ತೇನೆ, ಗೆದ್ದ ನಂತರ ಬಿಜೆಪಿ ಸೇರುತ್ತೇನೆ ಎಂದು ನುಡಿದಿದ್ದಾರೆ.

# ಯಾರೋ ನೋಡಿದ ಹೆಣ್ಣನ್ನು ಮದುವೆಯಾಗಲ್ಲ

**ತುಮಕೂರು:** ಲೋಕಸಭೆ ಚುನಾವಣೆ ಟಿಕೆಟ್ ತಪ್ಪಿರುವುದರಿಂದ ತೀವ್ರ ಅಸಮಾಧಾನಗೊಂಡಿರುವ ಬಿಜೆಪಿ ನಾಯಕ ಜೆಸಿ ಮಾಧುಸ್ವಾಮಿ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ವಿರುದ್ಧ ಆಕ್ರೋಶ ಹೊರ ಹಾಕಿದ್ದು, ತುಮಕೂರು ಬಿಜೆಪಿ ಅಭ್ಯರ್ಥಿ ವಿ ಸೋಮಣ್ಣಗೆ ಬೆಂಬಲ ನೀಡುವುದಿಲ್ಲ ಎಂದು ಹೇಳಿದ್ದಾರೆ. ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲೂಕಿನ ಜೆಸಿ ಪುರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪಕ್ಷದಲ್ಲಿನ ನನ್ನ ಅಸಮಾಧಾನ ಶಿವಮೊಗ್ಗ, ದಾವಣಗೆರೆ, ಚಿತ್ರದುರ್ಗ ಹಾಗೂ ತುಮಕೂರು ಲೋಕಸಭಾ ಕ್ಷೇತ್ರದ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದರು.

ನಾನು ಎರಡು ಮೂರು ವಿಷಯವನ್ನು ನಿಮ್ಮ ಬಳಿ ಹೇಳಿಕೊಳ್ಳುತ್ತಿದ್ದೇನೆ. ನಾನು ಕಾಂಗ್ರೆಸ್ ಸೇರಲಿದ್ದೇನೆ ಎಂದು ಎಲ್ಲೋ ಪತ್ರಿಕೆಯಲ್ಲಿ ವರದಿ ಮಾಡಿದ್ದಾರೆ. ಕಾಂಗ್ರೆಸ್‌ನ ಬಿ ಫಾರಂ ಮಾಧುಸ್ವಾಮಿಗೆ ಸಿಗುತ್ತೆ ಎಂದು ಉಲ್ಲೇಖಿಸಿದ್ದಾರೆ. ಬಿ ಫಾರಂ ಬದಲಾಯಿಸಿ ಕಾಂಗ್ರೆಸ್ ಪಕ್ಷದವರು ಕರೆದರೂ ಚುನಾವಣೆಯಲ್ಲಿ ಸ್ಪರ್ಧಿಸಲಾರೆ. ಬಿಜೆಪಿಯವರು ಕರೆದರೂ ಚುನಾವಣೆಗೆ ನಿಲ್ಲುವುದಿಲ್ಲ. ಯಾರೋ ನೋಡಿ ಬಂದ ಹೆಣ್ಣನ್ನು ನಾನು ಮದುವೆ ಆಗಲ್ಲ ಎಂದು ಮಾಧುಸ್ವಾಮಿ ಮಾರ್ಮಿಕವಾಗಿ ಹೇಳಿದರು. ಕಾಂಗ್ರೆಸ್ ಸೇರ್ಪಡೆ ಕುರಿತ ವರದಿಗಳ ಬಗ್ಗೆ ಪ್ರತಿಕ್ರಿಯಿಸಿ, ಯಾಕೆ ಹಾಗೆಲ್ಲ ಪತ್ರಿಕೆಯಲ್ಲಿ ಪ್ರಕಟಿಸುತ್ತಾರೋ ಗೊತ್ತಿಲ್ಲ. ನಾನು ಯಾರಿಗೂ ಕಾಂಗ್ರೆಸ್‌ಗೆ ಸೇರುತ್ತೇನೆ, ಬಂದೇ ಬರುತ್ತೇನೆ ಎಂದು ಹೇಳಿಲ್ಲ. ಮನೆಗೆ ಬಂದವರ ಬಳಿ ಸೌಜನ್ಯವಾಗಿ ಮಾತನಾಡಿದ್ದೇನೆ. ಹಾಗಂತ ಬರಲ್ಲ ಎಂದೂ ಎಲ್ಲೂ ಹೇಳಲ್ಲ. ಬಿಜೆಪಿಯಿಂದ ಅಶೋಕ್ ಬಂದಿದ್ದು ನಿಜ. ಯಾಕೆ ಬಂದಿದ್ದೀರಿ ಎಂದು ಕೇಳಿದೆ. 'ಯಾಕೆ ನಾನು ಬರಬಾರದಾ? ಮಾತನಾಡರಬಾರದಾ' ಎಂದು ಕೇಳಿದರು ಎಂದು ಮಾಧುಸ್ವಾಮಿ ತಿಳಿಸಿದರು. ಜಯರಾಮ್‌ರನ್ನು ಕರೆದುಕೊಂಡು ಗೋಪಾಲಯ್ಯ ಅವರೆಲ್ಲ ಬಂದು ಹೋದರು. ನನಗೆ ಅಸಮಾಧಾನ ಇರುವುದು ಯಡಿಯೂರಪ್ಪನವರ ಮೇಲೆ. ನೀವೆಲ್ಲ ಅದಕ್ಕೆ ಉತ್ತರ ಕೊಡೋಕಾಗಲ್ಲ. ಯಡಿಯೂರಪ್ಪನವರೇ ಉತ್ತರ ಕೊಡಬೇಕು. ಅವರು ಮಾತನಾಡಬೇಕಿತ್ತು, ಆದ್ರೆ ಅವರು ಮಾತನಾಡುವ ಸೌಜನ್ಯ ತೋರಿಸಿಲ್ಲ ಎಂದು ಹೇಳಿದೆ. ಇದನ್ನೇ ಅಶೋಕ್‌ಗೂ ಹೇಳಿದ್ದೇನೆ. ನಿಮ್ಮ ಬಗ್ಗೆ ಯಾಕೆ ನಂಗೆ ಬೇಜಾರು, ಪಕ್ಷದ ಬಗ್ಗೆ ನನಗೆ ಯಾಕೆ ಬೇಜಾರು ಎಂದು ತಿಳಿಸಿದ್ದೇನೆ ಎಂದು ಮಾಧುಸ್ವಾಮಿ ಹೇಳಿದರು. ನಿಮ್ಮ ನೋವು ನನಗೆ ಅರ್ಥ ಆಗುತ್ತೆ, ದಯವಿಟ್ಟು ಬಿಜೆಪಿ ಬಿಡಬೇಡಿ ಎಂದು ಅಶೋಕ್ ಮನವಿ ಮಾಡಿದ್ದರು ಎಂಬುದನ್ನೂ ಅವರು ಬಹಿರಂಗಪಡಿಸಿದರು.

## ಮೊದಲನೇ ಪುಟದಿಂದ...

## 47 ಲಕ್ಷ ಕಳೆದುಕೊಂಡ ವ್ಯಕ್ತಿ

ಅದರಂತೆ 47.50 ಲಕ್ಷ ರೂ. ಅನ್ನು ಗೌರವ್ ಅರೋರ ಖಾತೆಗೆ ಪಾವತಿಸಿದ್ದಾರೆ.

ಬಳಿಕ ನಿರ್ವಿಕ್ ಮತ್ತು ಗೌರವ್ ಸಂಪರ್ಕಕ್ಕೆ ಸಿಗದೆ ತಲೆಮರೆಸಿಕೊಂಡಿದ್ದಾರೆ. ಬಳಿಕ ತಾನು ವಂಚನೆಗೆ ಸಿಲುಕಿರುವುದು ಖಚಿತವಾಗುತ್ತಿದ್ದಂತೆ ಸಂಜಯ್, ಕೇಂದ್ರ ಸೈಬರ್ ಪೊಲೀಸ್ ಠಾಣೆ ಮೆಟ್ಟಿಲೇರಿ ದೂರು ನೀಡಿದ್ದಾರೆ. ನಿರ್ವಿಕ್ ಮತ್ತು ಗೌರವ್ ಎಂಬವರು ಸುಳ್ಳು ಹೇಳಿ ವಂಚಿಸಿರುವುದಾಗಿ ಸಂಜಯ್ ದೂರಿನಲ್ಲಿ ಆರೋಪಿಸಿದ್ದಾರೆ.

ನಗರದಲ್ಲಿ ದಿನೇ ದಿನೇ ಸೈಬರ್ ಕ್ರೈಂ ಹೆಚ್ಚಾಗುತ್ತಿದೆ. ದೂರು ನೀಡಿದರೂ ಪ್ರಯೋಜನವಿಲ್ಲ ಎಂಬ ಸ್ಥಿತಿ ನಿರ್ಮಾಣವಾಗಿದೆ. ಅನಾಶ್ ಮೆಹಮೂದ್ ಎಂಬ ವಿದ್ಯಾರ್ಥಿ 7 ತಿಂಗಳ ಹಿಂದೆ ಸೈಬರ್ ವಂಚಕರ ಜಾಲಕ್ಕೆ ಸಿಲುಕಿ 20 ಸಾವಿರ ಹಣ ಕಳೆದುಕೊಂಡಿದ್ದ. ತಕ್ಷಣವೇ ಕೆ.ಆರ್ ಪುರಂ ಠಾಣಾ ಪೊಲೀಸರಿಗೆ ಕರೆ ಮಾಡಿ ಅಕೌಂಟ್ ಸಹ ಫ್ರೀಜ್ ಮಾಡಿಸಿದ್ದ.

ಆದರೆ, ಪ್ರಕರಣ ನಡೆದು 7 ತಿಂಗಳು ಆದರೂ ಇತ್ತ ಫ್ರೀಜ್ ಮಾಡಿದ್ದ ಹಣವೂ ಬಂದಿಲ್ಲ, ಆರೋಪಿಗಳು ಪತ್ತೆಯಾಗುತ್ತಿಲ್ಲ. ದೂರು ನೀಡಿದರೂ ಯಾವುದೇ ಪ್ರಯೋಜನೆ ಇಲ್ಲ ಎಂದು ಆಕ್ರೋಶಗೊಂಡ ವಿದ್ಯಾರ್ಥಿ ಅನಾಶ್, ಸಾಮಾಜಿಕ ಜಾಲತಾಣ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿ ನಗರ ಪೊಲೀಸ್ ಆಯುಕ್ತಗೆ ಟ್ಯಾಗ್ ಮಾಡಿದ್ದಾನೆ.

ದೂರುದಾರರ ಟ್ವೀಟ್ ಗಮನಿಸಿದ ಪೊಲೀಸ್ ಆಯುಕ್ತರು, ಪ್ರಕರಣದ ಪ್ರಗತಿ ಕುರಿತು ಮಾಹಿತಿ ಕೇಳಿದ್ದಾರೆ. ತನಿಖೆಯ ಯಾವ ಹಂತದಲ್ಲಿ ಇದೆ, ಫ್ರೀಜ್ ಆದ ಹಣ ವಾಪಸ್ ಯಾಕೆ ದೂರುದಾರರಿಗೆ ಹೋಗಿಲ್ಲ ಅಂತ ಮಾಹಿತಿ ಪಡೆಯಲು ಮುಂದಾಗಿದ್ದಾರೆ.

## ಡಿಹೆಚ್‌ಓ ಕಿರುಕುಳ

ಈ ಹಿಂದೆ ನೆಲಮಂಗಲದ ಆಸರೆ ಆಸ್ಪತ್ರೆಯ 74 ಗರ್ಭಪಾತದ ವರದಿ ಮಾಡದಂತೆ ಸುನೀಲ್ ಕುಮಾರ್ ಒತ್ತಡ ಹಾಕಿದ್ದಾರೆ ಎಂದು ಆರೋಪಿಸಲಾಗಿದೆ.

ಒತ್ತಡದ ನಡುವೆಯು ಆಸ್ಪತ್ರೆಯ ಕರ್ಮಕಾಂಡ ಬಯಲು ಮಾಡಿ ಕೇಸ್ ದಾಖಲಿಸಿದಕ್ಕೆ ಮಂಜುನಾಥ್ ಅವರಿಗೆ ಕಿರುಕುಳ ನೀಡಿದ್ದಾರೆ. ಅಷ್ಟೇ ಅಲ್ಲದೆ, ಮಂಜುನಾಥ್ ಅವರು ಹೊಸಕೋಟೆಯ ಓಂ ಆಸ್ಪತ್ರೆಯಲ್ಲೂ ಒಳಿಕ ಖಾಯ್ದೆಯಡಿ ಅನುಮತಿ ಪಡೆಯದೆ ಗರ್ಭಪಾತ ಪ್ರಕರಣ ಪತ್ತೆ ಮಾಡಿದ್ದಾರೆ. ಈ ಬಗ್ಗೆ ವರದಿ ಮಾಡಿ ಬಯಲು ಮಾಡದಂತೆ ಡಿಹೆಚ್‌ಓ ಸುನೀಲ್ ಅವರು ಕಿರುಕುಳ ನೀಡಿದ್ದಾಗಿ ಪತ್ರದಲ್ಲಿ ಆರೋಪಿಸಲಾಗಿದೆ.

ಮಾತು ಕೇಳದಕ್ಕೆ ವಿನಾಕಾರಣ ನೋಟಿಸ್ ನೀಡಿ ಮಾನಸಿಕ ಕಿರುಕುಳ ನೀಡಿದ್ದಾರೆ. ಇದರಿಂದಾಗಿ ಮಾನಸಿಕ ಸ್ಥಿಮಿತ ಕಳೆದುಕೊಂಡು ಜೀವ ಕಳೆದುಕೊಂಡರೆ ಡಿಹೆಚ್‌ಓ ಕಾರಣ ಅಂತ ಪತ್ರದಲ್ಲಿ ಮಂಜುನಾಥ್ ಉಲ್ಲೇಖಿಸಿದ್ದಾರೆ.

## ಡಿಎಂಕೆ ಪ್ರಣಾಳಿಕೆಗೆ ವಾಗ್ದಾಳಿ

**ಬಸನಗೌಡ ಪಾಟೀಲ್ ಯತ್ನಾಳ್ ವಾಗ್ದಾಳಿ:**

'ಇಂಡಿಯಾ ಮೈತ್ರಿಕೂಟ ಅಧಿಕಾರಕ್ಕೆ ಬಂದರೆ ಮೇಕೆದಾಟು ಯೋಜನೆಯನ್ನು ನಿಲ್ಲಿಸಲಾಗುವುದು ಎಂದು ಘಂಟಾಘೋಷವಾಗಿ ಹೇಳಿರುವ ತಮಿಳು ನಾಡಿನ ಮುಖ್ಯ ಮಂತ್ರಿಗಳಾದ ಸ್ಟಾಲಿನ್ ಅವರ ಮಾತುಗಳನ್ನು ಧಿಕ್ಕರಿಸಿ ಇಂಡಿಯಾ ಮೈತ್ರಿಕೂಟದಿಂದ ಡಿಎಂಕೆಯನ್ನು ಕಿತ್ತೆಸೆಯುವ ತಾಕತ್ತು, ಕನ್ನಡಿಗರ ನೀರನ್ನು ಹಕ್ಕನ್ನು ರಕ್ಷಿಸುವ ಸ್ವಾಭಿಮಾನ ಕಾಂಗ್ರೆಸ್ ಪಕ್ಷಕ್ಕೆ ಇದೆಯೇ ಕುಡಿಯುವ ನೀರಿನ ಯೋಜನೆಗೆ ಕಡಿವಾಣ ಹಾಕುವ ಪಕ್ಷಕ್ಕೆ ಕನ್ನಡಿಗರು ಮತ ಹಾಕಬೇಕೆ' ಎಂದು ವಿಜಯಪುರ ಬಿಜೆಪಿ ಶಾಸಕ ಸಾಮಾಜಿಕ ಮಾಧ್ಯಮ ಎಕ್ಸ್ ನಲ್ಲಿ ಪ್ರಶ್ನಿಸಿದ್ದಾರೆ.

**ಕಾಂಗ್ರೆಸ್‌ಗೆ ಮುಜುಗರ:** 'ಇಂಡಿಯಾ' ಮೈತ್ರಿಕೂಟದ ಸದಸ್ಯ ಪಕ್ಷವಾಗಿರುವ ಡಿಎಂಕೆ ಚುನಾವಣಾ ಪ್ರಣಾಳಿಕೆಯಲ್ಲಿ ಮೇಕೆದಾಟು ಪ್ರಸ್ತಾಪಿಸಿರುವುದು ಕರ್ನಾಟಕ ಕಾಂಗ್ರೆಸ್ ಗೆ ಮುಜುಗರ ಉಂಟುಮಾಡಿದೆ. ರಾಜ್ಯದಲ್ಲಿ ವಿಧಾನಸಭೆ ಚುನಾವಣೆಗೂ ಮುನ್ನ 'ನಮ್ಮ ನೀರು ನಮ್ಮ ಹಕ್ಕು' ಎಂದು ಡಿಕೆ ಶಿವಕುಮಾರ್ ನೇತೃತ್ವದಲ್ಲಿ ಕಾಂಗ್ರೆಸ್ ಪಾದಯಾತ್ರೆ ನಡೆಸಿತ್ತು.

ಈಗಾಗಲೇ ತಮಿಳುನಾಡಿಗೆ ನೀರು ಬಿಟ್ಟಿರುವ ವಿಚಾರವಾಗಿ ಕಾಂಗ್ರೆಸ್ ಸರ್ಕಾರವನ್ನು ಪ್ರತಿಪಕ್ಷ ಬಿಜೆಪಿ ತೀವ್ರವಾಗಿ ತರಾಟೆಗೆ ತೆಗೆದುಕೊಂಡಿದೆ. ಇದರ ಬೆನ್ನಲ್ಲೇ ಇದೀಗ ಮತ್ತೊಂದು ಸಮಸ್ಯೆಗೆ ಕಾಂಗ್ರೆಸ್ ಸಿಕ್ಕಿಹಾಕಿಕೊಂಡಿದೆ.

## ಕಾಂಗ್ರೆಸ್‌ಗೆ ಸೇರ್ಪಡೆ

ಪಪ್ಪು ಯಾದವ್ ಅವರು 5 ಬಾರಿ ಮಾಜಿ ಸಂಸದರಾಗಿದ್ದಾರೆ. ಅವರು ಪೂರ್ವ ರಾಜ್ಯದ ಸೀಮಾಂಚಲ್ ಪ್ರದೇಶದಲ್ಲಿ ಪ್ರಬಲ ರಾಜಕೀಯ ಹಿಡಿತ ಹೊಂದಿದ್ದಾರೆ. ಅವರು ಸ್ವತಂತ್ರ ಅಭ್ಯರ್ಥಿಯಾಗಿ ತಮ್ಮ ರಾಜಕೀಯ ಪ್ರಯಾಣವನ್ನು ಪ್ರಾರಂಭಿಸಿದರು ಮತ್ತು ಎಸ್ಪಿ ಮತ್ತು ಆರ್ಜೆಡಿಯಲ್ಲಿದ್ದ ನಂತರ ಅವರು 2015 ರಲ್ಲಿ ತಮ್ಮದೇ ಆದ ಜನ್ ಅಧಿಕಾರ್ ಪಕ್ಷವನ್ನು ಸ್ಥಾಪಿಸಿದರು. ಪಪ್ಪು ಯಾದವ್ ಅವರನ್ನು ಒಂದು ಕಾಲದಲ್ಲಿ ಲಾಲು ಯಾದವ್ ಅವರ ಅತ್ಯಂತ ಆಪ್ತ ವ್ಯಕ್ತಿ ಎಂದು ಪರಿಗಣಿಸಲಾಗಿತ್ತು.

**ಡ್ಯಾನಿಶ್ ಅಲಿ:** ಅಮ್ರೋಹಾದಿಂದ ಅಮಾನತುಗೊಂಡ ಬಹುಜನ ಸಮಾಜ ಪಕ್ಷದ (ಬಿಎಸ್‌ಪಿ) ಸಂಸದ, ಡ್ಯಾನಿಶ್ ಅಲಿ ಕಾಂಗ್ರೆಸ್ ನೊಂದಿಗೆ ಹೆಚ್ಚುತ್ತಿರುವ ನಿಕಟತೆಯು ಪಕ್ಷಕ್ಕೆ ತೊಂದರೆಯಾಗುತ್ತಿದೆ ಎಂದು ಹೇಳಿ ಅಮಾನತುಗೊಳಿಸಿದ್ದತ್ತು.

**ಚೌಧರಿ ಲಾಲ್ ಸಿಂಗ್:** ಜಮ್ಮು ಮತ್ತು ಕಾಶ್ಮೀರದ ಮಾಜಿ ಬಿಜೆಪಿ ನಾಯಕ ಚೌಧರಿ ಲಾಲ್ ಸಿಂಗ್ ಅವರು ಉಧಂಪುರ ಕ್ಷೇತ್ರದಿಂದ ಎರಡು ಬಾರಿ ಲೋಕಸಭಾ ಸಂಸದರಾಗಿದ್ದಾರೆ. ಚೌಧರಿ ಲಾಲ್ ಸಿಂಗ್ 2004 ಮತ್ತು 2009 ರಲ್ಲಿ ಉಧಮ್‌ಪುರ ಕ್ಷೇತ್ರದಿಂದ ಕಾಂಗ್ರೆಸ್ ಟಿಕೆಟ್‌ನಲ್ಲಿ ಗೆದ್ದಿದ್ದರು. ಅವರು 2014 ರ ವಿಧಾನಸಭಾ ಚುನಾವಣೆಗೆ ಮೊದಲು ಬಿಜೆಪಿ ಸೇರಿದರು ಮತ್ತು ನಂತರ ಪಿಡಿಪಿ-ಬಿಜೆಪಿ ಸರ್ಕಾರದಲ್ಲಿ ಸಚಿವರಾಗಿದ್ದರು.

**ಜೈ ಪ್ರಕಾಶ್ ಪಟೇಲ್:** ಕಾಂಗ್ರೆಸ್ ಸೇರಿದ ಜಾರ್ಖಂಡ್‌ನ ಬಿಜೆಪಿ ಶಾಸಕ ಜೈ ಪ್ರಕಾಶ್ ಪಟೇಲ್ ಅವರನ್ನು ಹಜಾರಿಬಾಗ್ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯನ್ನಾಗಿ ಘೋಷಿಸಬಹುದು ಎಂದು ಹೇಳಲಾಗುತ್ತಿದೆ. ಯಶವಂತ್ ಸಿನ್ಹಾ ಅವರ ಪುತ್ರ ಜಯಂತ್ ಸಿನ್ಹಾ ಇಲ್ಲಿನ ಹಾಲಿ ಸಂಸದರಾಗಿದ್ದು, ಅವರು ಚುನಾವಣೆಗೆ ಸ್ಪರ್ಧಿಸಲು ನಿರಾಕರಿಸಿದ್ದಾರೆ. ಅದಕ್ಕಾಗಿಯೇ ಬಿಜೆಪಿ ಮನೀಶ್ ಜೈಸ್ವಾಲ್ ಅವರನ್ನು ತನ್ನ ಅಭ್ಯರ್ಥಿಯನ್ನಾಗಿ ಮಾಡಿದೆ.

## ಇಂದಿನಿಂದ ಆರಂಭ

ಅಧಿಕಾರಿಗಳು ಇಂದಿನಿಂದ ಕಟ್ಟಡಗಳಲ್ಲಿ ಏರಿಯೇಟರ್ ಗಳನ್ನು ಸ್ಥಾಪಿಸಲು ಪ್ರಾರಂಭಿಸುತ್ತಿದ್ದಾರೆ ಎಂದು ಜಲ ಮಂಡಳಿ ಅಧ್ಯಕ್ಷ ವಿ ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದು, ಆ ಸಾಧನದ ಪ್ರಾಮುಖ್ಯತೆಯನ್ನೂ ಒತ್ತಿ ಹೇಳಿದ್ದಾರೆ. ಏರಿಯೇಟರ್ ಅಳವಡಿಕೆಯಿಂದ ಶೇ 60 ರಿಂದ 85 ರಷ್ಟು ನೀರನ್ನು ಉಳಿಸಬಹುದು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಮಾರ್ಚ್ 21 ರಿಂದ 31 ರವರೆಗೆ ಸ್ವಯಂ ಇಚ್ಛೆಯಿಂದ ಏರಿಯೇಟರ್ ಅಳವಡಿಕೆಗೆ ಅವಕಾಶ ಒದಗಿಸಲಾಗಿದೆ ಎಂದು ಅವರು ಹೇಳಿದ್ದಾರೆ.

ಬೆಂಗಳೂರು ಮತ್ತು ಕರ್ನಾಟಕದ ಉಳಿದ ಭಾಗಗಳು ಬೇಸಿಗೆಯ ಪೂರ್ಣ ಆರಂಭಕ್ಕೂ ಮುನ್ನವೇ ತೀವ್ರ ನೀರಿನ ಕೊರತೆ ಎದುರಿಸುತ್ತಿದ್ದು, ನಗರದಾದ್ಯಂತ ಸುಮಾರು 6,900 ಬೋರ್ ವೆಲ್‌ಗಳು ಬತ್ತಿ ಹೋಗಿವೆ. ಕಳೆದ ಮುಂಗಾರು ಹಂಗಾಮಿನಲ್ಲಿ ಕಡಿಮೆ ಮಳೆಯಾಗರುವ ಕಾರಣ ನೀರಿನ ಸಮಸ್ಯೆ ಹೆಚ್ಚಾಗಿದೆ.

ಬುಧವಾರ ಪ್ಲಂಬರ್ ಅಸೋಸಿಯೇಷನ್ ಪದಾಧಿಕಾರಿಗಳ ಸಭೆ ನಡೆಸಿದ್ದ ರಾಮ್ ಪ್ರಸಾತ್ ಮನೋಹರ್, ನಂತರ ನಲ್ಲಿಗಳಿಗೆ ಏರಿಯೇಟರ್ ಅಳವಡಿಸುವುದನ್ನ ಕಡ್ಡಾಯ ಮಾಡಿ ಆದೇಶ ಹೊರಡಿಸಿದ್ದರು.

## ಪ್ರೇಮಪಾಶಕ್ಕೆ ಸಿಲುಕಿ ಆತ್ಮಹತ್ಯೆ

ಇತ್ತೀಚೆಗೆ ಆತ ಪ್ರೀತಿಸುತ್ತಿದ್ದ ಯುವತಿಯೊಡನೆ ಯಾವಾಗಲೂ ಜಗಳ ಆಡುತ್ತಿದ್ದನಂತೆ. ಮೊನ್ನೆ ಮಂಗಳವಾರ ರಾತ್ರಿಯೂ ಸಹ ತನ್ನ ಪ್ರೇಯಸಿಯೊಂದಿಗೆ ಜೋರಾಗಿ ಜಗಳ ಆಡುತ್ತಿದ್ದನಂತೆ. ಸ್ನೇಹಿತರೆಲ್ಲ ಅದನ್ನ ನೋಡಿ ಸಮಾಧಾನ ಮಾಡಿದ್ದರಂತೆ. ಬಳಿಕ ಇಡೀ ರಾತ್ರಿ ಜಗಳ ಆಡಿ ಮನನೊಂದು ಬೇಸರದಲ್ಲಿ ಇದನಂತೆ.

ಬೆಳಿಗ್ಗೆ ಎಂದಿನಂತೆ ಎಲ್ಲರೂ ಕಾಲೇಜಿಗೆ ತೆರಳಿದ್ರಂತೆ. ಅದ್ರೆ ಈತ ನನಗೆ ಹೊಟ್ಟೆನೋವು ಇದೆ, ಇವತ್ತು ನಾನು ಕಾಲೇಜಿಗೆ ಬರಲ್ಲವೆಂದು ಹಾಸ್ಟೆಲ್ ನಲ್ಲೇ ಇದ್ದನಂತೆ. ಮಧ್ಯಾಹ್ನ ಊಟಕ್ಕೆ ಬಂದಾಗ ಹಾಸ್ಟೆಲ್ ರೂಂ ನಿಂದ ನೋಡಿದಾಗ ಆತ ಆತ್ಮಹತ್ಯೆ ಮಾಡಿಕೊಂಡು ಮೃತ ಪಟ್ಟಿದ್ದನಂತೆ.

## ಯುನೈಟೆಡ್ ಸ್ಟೇಟ್ಸ್

ಮಾರ್ಚ್ 9 ರಂದು, ಪ್ರಧಾನಿ ಮೋದಿ ಅವರು ಅರುಣಾಚಲ ಪ್ರದೇಶದಲ್ಲಿ 13,000 ಅಡಿ ಎತ್ತರದಲ್ಲಿ ನಿರ್ಮಿಸಲಾದ ಸೆಲಾ ಸುರಂಗವನ್ನು ಲೋಕಾರ್ಪಣೆಯನ್ನು ಮಾಡಿದರು. ಇದು ಆಯಕಟ್ಟಿನ ಸುರಂಗವಾಗಿದ್ದು, ಎಲ್ಲ ಹವಾಮಾನಕ್ಕೂ ಹೊಂದಿಕೊಳ್ಳುತ್ತದೆ. ಮತ್ತು ಗಡಿ ಪ್ರದೇಶದ ಉದ್ದಕ್ಕೂ ಸೈನಿಕರ ಉತ್ತಮ ಚಲನೆ ಬಗ್ಗೆಯು ಅವರು ಪರಿಶೀಲನೆ ನಡೆಸಿದ್ದಾರೆ.

ಇನ್ನು ಈ ಬಗ್ಗೆ ವಿದೇಶಾಂಗ ಇಲಾಖೆಯ ಪ್ರಧಾನ ಉಪ ವಕ್ತಾರ ವೇದಾಂತ್ ಪಟೇಲ್ ಅವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಅರುಣಾಚಲ ಪ್ರದೇಶವನ್ನು ಯುನೈಟೆಡ್ ಸ್ಟೇಟ್ಸ್ ಭಾರತೀಯ ಪ್ರದೇಶವೆಂದು ಗುರುತಿಸುತ್ತದ. ಆಕ್ರಮಣಗಳು ಅಥವಾ ಅತಿಕ್ರಮಣಗಳು, ಮಿಲಿಟರಿ ಅಥವಾ ನಾಗರಿಕರ ಮೂಲಕ ಪ್ರಾದೇಶಿಕ ಹಕ್ಕುಗಳನ್ನು ಮುಂದಿಡುವ ಯಾವುದೇ ಏಕಪಕ್ಷೀಯ ಪ್ರಯತ್ನಗಳನ್ನು ಯುನೈಟೆಡ್ ಸ್ಟೇಟ್ಸ್ ವಿರೋಧಿಸುತ್ತದೆ ಎಂದು ಹೇಳಿದೆ.

ಅರುಣಾಚಲ ಪ್ರದೇಶದ ಮೇಲೆ ಚೀನಾದ ಪ್ರಾದೇಶಿಕ ಹಕ್ಕುಗಳನ್ನು ಭಾರತ ವಿರೋಧಿಸುತ್ತ ಬಂದಿದೆ. ಅರುಣಾಚಲ ಪ್ರದೇಶ ದೇಶದ ಅವಿಭಾಜ್ಯ ಅಂಗವಾಗಿದೆ. ಈ ಪ್ರದೇಶದ ಹೆಸರನ್ನು ಬದಲಾಯಿಸುವ ಚೀನಾ ಪ್ರಯತ್ನವನ್ನು ಭಾರತ ವಿಫಲಗೊಳಿಸುತ್ತ ಬಂದಿದೆ. ಅರುಣಾಚಲ ಪ್ರದೇಶದ ವಿಚಾರವಾಗಿ ಚೀನಾದ ರಕ್ಷಣಾ ಸಚಿವಾಲಯದ ವಕ್ತಾರರು ಅಸಂಬದ್ಧ ಹೇಳಿಕೆಗಳನ್ನು ನೀಡಿದ್ದಾರೆ. ಅರುಣಾಚಲ ಪ್ರದೇಶ ಭಾರತದ ಕೈಯಲ್ಲೇ ಇತ್ತು ಹಾಗೂ ಅದು ಭಾರತ ಅವಿಭಾಜ್ಯ ಅಂಗಆಗಿದೆ ಎಂದು ವೇದಾಂತ್ ಪಟೇಲ್ ಹೇಳಿದ್ದಾರೆ.

## ಸೆಂಟ್ರಲ್ ಬ್ಯಾಂಕ್

ಜನರು ಹೆಚ್ಚು ಖರ್ಚು ಮಾಡದಂತೆ ನಿಯಂತ್ರಿಸಿದರೆ ಬೆಲೆ ಏರಿಕೆ ಕುಗ್ಗುತ್ತದೆ ಎನ್ನುವ ತರ್ಕ ಅದು. ಹಾಗೆಯೇ, ಬ್ಯಾಂಕ್ ಬಡ್ಡಿದರ ಕಡಿಮೆ ಮಾಡಿದರೆ ಜನರು ಹೆಚ್ಚೆಚ್ಚು ಖರ್ಚು ಮಾಡಲು ಪ್ರೇರೇಪಿಸುತ್ತದೆ. ಇದರಿಂದ ಆರ್ಥಿಕತೆ ಸರಾಗಗೊಳ್ಳುತ್ತದೆ ಎಂಬುದು ಲೆಕ್ಕಾಚಾರ.

ಅಮೆರಿಕದಲ್ಲಿ ಈಗ ಆರ್ಥಿಕತೆ ಮಂದ ವೇಗದಲ್ಲಿ ಸಾಗುತ್ತಿದೆ. ಹಣದುಬ್ಬರ ಹೆಚ್ಚಿನ ಮಟ್ಟದಲ್ಲಿ ಇದೆ. ಹೀಗಾಗಿ, ಇದು ಆ ದೇಶಕ್ಕೆ ಮತ್ತು ಅಲ್ಲಿನ ಹಣಕಾಸು ನೀತಿ ರೂಪಕರಿಗೆ ಇಬ್ಬಂದಿಯ ಸ್ಥಿತಿ. ಅಮೆರಿಕ ಮಾತ್ರವಲ್ಲ ಭಾರತವೂ ಸೇರಿದಂತೆ ವಿಶ್ವದ ಹಲವು ದೇಶಗಳಿಗೆ ಒದಗಿಬಂದಿರುವ ಉಭಯ ಸಂಕಟ ಇದು.

**ಭಾರತದ ಮೇಲೇನು ಪರಿಣಾಮ:** ಸಾಮಾನ್ಯವಾಗಿ ಅಮೆರಿಕದಲ್ಲಿ ಆಗುವ ಯಾವುದೇ ಹಣಕಾಸು ಮತ್ತು ಆರ್ಥಿಕ ಬದಲಾವಣೆಗಳು ಭಾರತೀಯ ಷೇರು ಮಾರುಕಟ್ಟೆಯನ್ನು ಪ್ರಭಾವಿಸುತ್ತವೆ. ಅಮೆರಿಕದಲ್ಲಿ ಈ ಬಾರಿ ಬಡ್ಡಿದರದ ಯಥಾಸ್ಥಿತಿ ಪಾಲಿಸಬಹುದು ಎನ್ನುವ ನಿರೀಕ್ಷೆ ಇತ್ತಾದ್ದರಿಂದ ಭಾರತೀಯ ಮಾರುಕಟ್ಟೆಯಲ್ಲಿ ಹೆಚ್ಚಿನ ವ್ಯತ್ಯಯಗಳಾಗಿಲ್ಲ, ಆದರೆ, ಜಾಗತಿಕವಾಗಿ ಚಿನ್ನದ ಬೆಲೆ ಗಣನೀಯವಾಗಿ ಹೆಚ್ಚಾಗಿದೆ.

## ಸಿಸಿಟಿವಿಯಲ್ಲಿ ಸೆರೆ

ಅಷ್ಟಕ್ಕೂ ಆ ಅಂಗಡಿ ಮಾಲೀಕನ ಮೇಲೆ ಆ ಡೆಲಿವರಿ ಬಾಯ್ ಹಲ್ಲೆ ಮಾಡಿದ್ದಾದರೂ ಯಾಕೇ ಅಂತೀರಾ ಈ ಸ್ಟೋರಿ ನೋಡಿ. ಹೌದು ಕೇವಲ 30 ರೂಪಾಯಿಗೊಸ್ಕರ ಅಂಗಡಿ ಮಾಲೀಕನ ಮೇಲೆ ಹಲ್ಲೆ ನಡೆಸಿರುವ ಸಿಸಿ ಕ್ಯಾಮರಾ ದೃಶ್ಯಗಳು ಕಂಡು ಬಂದಿರುವುದು ಬೆಂಗಳೂರು ಹೊರವಲಯ ಆನೇಕಲ್ ತಾಲ್ಲೂಕಿನ ಎಲೆಕ್ಟ್ರಾನಿಕ್ ಸಿಟಿ ಸಮೀಪದ ಬೆಟ್ಟದಾಸನಪುರದಲ್ಲಿ.

ಹಲ್ಲೆಗೊಳಗಾದ ಇಲ್ಲಿನ ಬಾಲಾಜಿ ಪ್ರಾವಿಷನ್ ಸ್ಟೋರ್ ಮಾಲೀಕ ಲಲಿತ್ ನಿನ್ನೆ ನಿಂಜಾ ಕಾರ್ಟ್ ನಲ್ಲಿ ತೆಂಗಿನಕಾಯಿ ಈರುಳ್ಳಿ ಸೇರಿದಂತೆ ತರಕಾರಿಗಳನ್ನು ಆರ್ಡರ್ ಮಾಡಿದ್ದಾನೆ. ಆದ್ರೆ ಇಂದು ಡೆಲಿವರಿ ಬಾಯ್ ತಂದ ತೆಂಗಿನಕಾಯಿ ತೂಕದಲ್ಲಿ 700 ಗ್ರಾಂ ವ್ಯತ್ಯಾಸ ಕಂಡಿದೆ. 700 ಗ್ರಾಂ ತೆಂಗಿನಕಾಯಿಗೆ 30 ರೂಪಾಯಿ ಬೆಲೆ ಇದ್ದು, ಅದನ್ನು ಕಡಿತಗೊಳಿಸುವುದಾಗಿ ತಿಳಿಸಿದ್ದಾನೆ. ಆಗ ಡೆಲಿವರಿ ಬಾಯ್ ಮತ್ತು ಅಂಗಡಿ ಮಾಲೀಕನ ನಡುವೆ ವಾಗ್ವಾದ ನಡೆದಿದ್ದು, ಚಾಕೊಲೇಟ್ ಡಬ್ಬಿ ಮತ್ತು ಪೊರಕೆ ಸ್ಟಿಕ್ ನಿಂದ ಹಲ್ಲೆ ನಡೆಸಿದ್ದಾನೆ.

ಇನ್ನು ಹಲ್ಲೆ ನಡೆಸಿದ ಡೆಲಿವರಿ ಬಾಯ್ ಅಷ್ಟಕ್ಕೇ ಸುಮ್ಮನಾಗದೆ ತನ್ನ ಸ್ನೇಹಿತರನ್ನು ಕರೆಸಿಕೊಂಡು ಪುನಃ ಹಲ್ಲೆಗೆ ಯತ್ನಿಸಿದ್ದಾನೆ. ಪೂರ್ಣ ಬಿಲ್ ಪಾವತಿ ಮಾಡುವಂತೆ ಅವಾಜ್ ಹಾಕಿದ್ದು, ಇಲ್ಲವಾದರೆ ಅಂಗಡಿ ಪುಡಿ ಪುಡಿ ಮಾಡುವುದಾಗಿ ಅವ್ಯಾಚ ಶಬ್ದಗಳಿಂದ ನಿಂದಿಸಿದ್ದಾನೆ.

ಭಯಗೊಂಡ ಅಂಗಡಿ ಮಾಲೀಕ 112 ಗೆ ಕರೆ ಮಾಡಿ ಮಾಹಿತಿ ತಿಳಿಸಿದ್ದಾನೆ. ಕೂಡಲೇ ಸ್ಥಳಕ್ಕಾಗಮಿಸಿದ ಪೊಲೀಸರು ಡೆಲಿವರಿ ಬಾಯ್ ಸೇರಿದಂತೆ ಐದು ಮಂದಿಯನ್ನು ವಶಕ್ಕೆ ಪಡೆದಿದ್ದು, ಸಿಸಿ ಕ್ಯಾಮರಾಗಳ ದೃಶ್ಯಗಳ ಆಧಾರದ ಮೇಲೆ ತನಿಖೆ ಮುಂದುವರಿಸಿದ್ದಾರೆ.

ಇನ್ನು ಹಲ್ಲೆಗೊಳಗಾದ ಅಂಗಡಿ ಮಾಲೀಕ ಲಲಿತ್ ಹಿಂದೂ ಆಗಿದ್ದು, ಹಲ್ಲೆ ನಡೆಸಿದ ಡೆಲಿವರಿ ಬಾಯ್ ಮತ್ತು ಗ್ಯಾಂಗ್ ನ ಬಹುತೇಕರು ಮುಸ್ಲಿಂ ಯುವಕರಾಗಿದ್ದು, ಹಿಂದೂ ಸಂಘಟನೆ ಕಾರ್ಯಕರ್ತರು ಠಾಣೆ ಬಳಿ ಜಮಾಯಿಸಿ ಆರೋಪಿಗಳ ಕಠಿಣ ಕ್ರಮಕ್ಕೆ ಆಗ್ರಹಿಸಿದ್ದು, ಎಲೆಕ್ಟ್ರಾನಿಕ್ ಸಿಟಿ ಠಾಣೆ ಪೊಲೀಸರು ಈಗಾಗಲೇ ಎಫ್‌ಐಆರ್ ದಾಖಲಿಸಿ ತನಿಖೆ ಮುಂದುವರಿಸಿದ್ದು, ಯಾವುದೇ ಅಹಿತಕರ ಘಟನೆ ನಡೆಯದಂತೆ ಕಟ್ಟೆಚ್ಚರ ವಹಿಸಿದ್ದಾರೆ.

## ಮಗಳು

ಆಕೆಯನ್ನು ಕಾವ್ಯಾ ಎಂದು ಗುರುತಿಸಲಾಗಿದ್ದು, ಕೋಟಾದ ಹಾಸ್ಟೆಲ್‌ಗೆ ಕೋಚಿಂಗ್ ಗೆ ಸೇರಲು ತನ್ನ ತಾಯಿಯೊಂದಿಗೆ ಬಂದಿದ್ದಳು. ಕಾವ್ಯಾ ಹಾಸ್ಟೆಲ್‌ನಲ್ಲಿ ಕೇವಲ ಮೂರು ದಿನಗಳನ್ನು ಕಳೆದಿದ್ದಷ್ಟೆ ನಂತರ ತನ್ನ ಸ್ನೇಹಿತರೊಬ್ಬರೊಂದಿಗೆ ಇಂದೋರ್ ಗೆ ಹೋಗಿದ್ದಳು ಅವರು ಕೂಡ ವಿದೇಶಕ್ಕೆ ಪ್ರಯಾಣಿಸಲು ಬಯಸಿದ್ದರು ಎಂದು ಪೊಲೀಸರು ಪಿಟಿಐಗೆ ತಿಳಿಸಿದ್ದಾರೆ.

ವಿದ್ಯಾರ್ಥಿನಿ ತಾನು ಇನ್ನೂ ರಾಜಸ್ಥಾನದ ಕೋಚಿಂಗ್ ಹಬ್ ನಲ್ಲಿದ್ದೇನೆ ಎಂದು ತನ್ನ ಪೋಷಕರನ್ನು ನಂಬುವಂತೆ ಚಿತ್ರಗಳು ಮತ್ತು ಸಂದೇಶಗಳನ್ನು ಕಳುಹಿಸುತ್ತಿದ್ದಳು ಎಂದು ಪೊಲೀಸರು ತಿಳಿಸಿದ್ದಾರೆ. ಮಾರ್ಚ್ 18 ರಂದು, ಕಾವ್ಯಾ ತಂದೆ ರಘುವೀರ್ ಧಾಕಡ್ ಅವರು ತಮ್ಮ ಮಗಳನ್ನು ಅಪಹರಣ ಮಾಡಲಾಗಿದೆ ಎಂದು ಆರೋಪಿಸಿ ಕೋಟಾ ಪೊಲೀಸರಿಗೆ ದೂರು ನೀಡಿದ್ದರು.

ತಮ್ಮ ಮಗಳ ಕೈ ಮತ್ತು ಕಾಲುಗಳನ್ನು ಕಟ್ಟಿರುವ ಚಿತ್ರಗಳನ್ನು ಕಳುಹಿಸಿದ್ದಾರೆ ಎಂದು ಅವರು ಪೊಲೀಸರಿಗೆ ತಿಳಿಸಿದರು. ಪೊಲೀಸರು ತಕ್ಷಣವೇ ಕ್ರಮ ಕೈಗೊಂಡು ತನಿಖೆ ನಡೆಸಿ ಇಂದೋರ್ ನಲ್ಲಿ ಆಕೆಯನ್ನು ಪತ್ತೆ ಹಚ್ಚಿದ್ದಾರೆ. ಮಹಿಳೆ ಕೇವಲ ಮೂರು ದಿನಗಳ ಕಾಲ ಕೋಟಾದ ಹಾಸ್ಟೆಲ್‌ನಲ್ಲಿ ಉಳಿದುಕೊಂಡಿದ್ದಳು ಮತ್ತು ತಾಯಿ ಹೋದ ನಂತರ ಅವಳು ಇಂದೋರ್‌ಗೆ ತೆರಳಿ ತನ್ನ ಇಬ್ಬರು ಪುರುಷ ಸ್ನೇಹಿತರೊಂದಿಗೆ ಅಲ್ಲಿಯೇ ಇದ್ದಳು.

ಕೋಚಿಂಗ್ ಇನ್‌ಸ್ಟಿಟ್ಯೂಟ್ ಹೆಸರಿನಲ್ಲಿ ತರಗತಿ ಪರೀಕ್ಷೆಗಳು ಮತ್ತು ತರಗತಿಗಳಲ್ಲಿ ತಾನಿರುವ ಬಗ್ಗೆ ಸಂದೇಶಗಳನ್ನು ಕಳುಹಿಸುವ ಮೂಲಕ ಮಹಿಳೆ ಪೋಷಕರ ಕಣ್ಣಿಗೆ ಮಣ್ಣೆರಚುವ ಕೆಲಸ ಮಾಡಿದ್ದಳು. ತನಿಖೆಗೆ ಸಹಕರಿಸಿದ ಮಹಿಳೆಯ ಸ್ನೇಹಿತರೊಬ್ಬರು ಮಾತನಾಡಿ, ಕಾವ್ಯ ಮತ್ತು ಆಕೆಯ ಸ್ನೇಹಿತರೊಬ್ಬರು ವಿದೇಶಕ್ಕೆ ಹೋಗಲು ಬಯಸಿದ್ದರು ಆದರೆ ಸಾಕಷ್ಟು ಹಣವಿರಲಿಲ್ಲ ಹಾಗಾಗಿ ಅಪಹರಣ ನಾಟಕವಾಡಿದ್ದಾರೆ ಎಂದು ತಿಳಿಸಿದ್ದಾರೆ.

## ಕಡ್ಡಾಯ

ಕೃತ್ಯ ನಡೆಯುವ ಸ್ಥಳದಲ್ಲಿ ಆರೋಪಿಗಳ ಕೈಯಲ್ಲಿ ಮಾರಕಸ್ತ್ರಗಳು ಅಥವಾ ಇತರ ಆಯುಧಗಳಿದ್ದರೆ ಅವರನ್ನು ಎದುರಿಸುವುದು ಅಷ್ಟು ಸುಲಭವಲ್ಲ. ಈ ಕಾರಣಕ್ಕೆ ಬಂದೂಕು ಕಡ್ಡಾಯಗೊಳಿಸಲಾಗಿದೆ. ಘಟನಾ ಸ್ಥಳದಲ್ಲಿರುವ ಆರೋಪಿಗಳ ಬಳಿ ಮಾರಕಾಸ್ತ್ರಗಳಿದ್ದಲ್ಲಿ ಅವರು ಪೊಲೀಸರ ಮೇಲೆ ಕೂಡ ದಾಳಿ ನಡೆಸುವ ಸಾಧ್ಯತೆ ಇರುತ್ತದೆ. ಇಂತಹ ಸಂದರ್ಭಗಳಲ್ಲಿ ಅವರನ್ನು ಬಂಧಿಸುವುದು ಪೊಲೀಸರಿಗೆ ಸಾಧ್ಯವಾಗದೆ ಹೋಗಬಹುದು. ಆರೋಪಿಗಳನ್ನು ವಶಕ್ಕೆ ಪಡೆಯಲು ಪೊಲೀಸರ ಬಳಿ ಆಯುಧಯ ಇರಲೇಬೇಕಾಗುತ್ತದೆ. ಈ ಕಾರಣಕ್ಕೆ ಗನ್ ಕಡ್ಡಾಯಗೊಳಿಸಿ ಆದೇಶ ಹೊರಡಿಸಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸುವೆ.

ಇತ್ತೀಚೆಗೆ ಕೋಡಿಗೆಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಆಭರಣ ಅಂಗಡಿಯೊಂದರಲ್ಲಿ ದರೋಡೆ ನಡೆದಿತ್ತು. ಆ ಸಂದರ್ಭ ಹೊಯ್ಸಳ ಪೊಲೀಸರು ಮೊದಲು ಸ್ಥಳಕ್ಕೆ ತಲುಪಿದ್ದರು. ಆರೋಪಿಗಳ ಕೈಯಲ್ಲಿ ಮಾರಕಾಸ್ತ್ರಗಳಿದ್ದವು. ಇಂಥ ಸಂದರ್ಭಗಳಲ್ಲಿ ಪೊಲೀಸರಿಂದ ತಪ್ಪಿಸಿಕೊಳ್ಳಲು ಆರೋಪಿಗಳು ಅಟ್ಯಾಕ್ ಮಾಡುವ ಸಾಧ್ಯತೆಯನ್ನು ಅಲ್ಲಗಳೆಯುವ ಹಾಗಿಲ್ಲ. ಈ ಘಟನೆಯು ಪೊಲೀಸ್ ಇಲಾಖೆಯಲ್ಲಿ ಜಾಗೃತಿ ಮೂಡಿಸಲು ಕಾರಣವಾಗಿದೆ. ಪರಿಣಾಮವಾಗಿ ಬಂದೂಕು ಕಡ್ಡಾಯಗೊಳಿಸುವ ನಿರ್ಧಾರಕ್ಕೆ ಬರಲಾಗಿದೆ.

ಬೆಂಗಳೂರಿನ ದೇವಿನಗರದಲ್ಲಿರುವ ಲಕ್ಷ್ಮಿ ಜ್ಯುವೆಲ್ಲರಿ ಶಾಪ್ ಗೆ ಇಬ್ಬರು ದುಷ್ಕರ್ಮಿಗಳು ನುಗ್ಗಿ ದರೋಡೆ ಮಾಡಲು ಯತ್ನಿಸಿದ್ದ ಘಟನೆ ಇತ್ತೀಚೆಗೆ ನಡೆದಿತ್ತು. ಆ ಸಂದರ್ಭ ಗುಂಡಿನ ದಾಳಿ ಸಹ ನಡೆದಿದ್ದು, ಘಟನೆಯಲ್ಲಿ ಇಬ್ಬರು ಗಾಯಗೊಂಡಿದ್ದರು. ಒಟ್ಟು ಮೂರು ಸುತ್ತು ಗುಂಡು ಹಾರಿಸಲಾಗಿತ್ತು. ದುಷ್ಕರ್ಮಿಗಳು ದರೋಡೆ ಮಾಡುವುದಷ್ಟೇ ಅಲ್ಲದೆ, ಸುಪಾರಿ ಪಡೆದು ಜ್ಯುವೆಲ್ಲರಿ ಅಂಗಡಿ ಮಾಲೀಕನನ್ನು ಕೊಲೆ ಮಾಡಲು ಬಂದಿದ್ದರು ಎಂಬ ಶಂಕೆ ಕೂಡ ವ್ಯಕ್ತವಾಗಿತ್ತು. ಇಂಥ ಸಂದರ್ಭಗಳಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು, ಆರೋಪಿಗಳನ್ನು ವಶಕ್ಕೆ ಪಡೆಯುವ ನಿಟ್ಟಿನಲ್ಲಿ ಹೊಯ್ಸಳ ತಂಡವನ್ನು ಇನ್ನಷ್ಟು ಸದೃಢಗೊಳಿಸಬೇಕಿದೆ. ಆ ನಿಟ್ಟಿನಲ್ಲಿ ಬಂದೂಕು ಕಡ್ಡಾಯಗೊಳಿಸಲಾಗಿದೆ ಎಂದು ಪೊಲೀಸ್ ಇಲಾಖೆ ಮೂಲಗಳು ತಿಳಿಸಿವೆ.

## ಅರೆಸ್ಟ್

ಈ ಹಿನ್ನೆಲೆ ಪೊಲೀಸರು ಬಂಧಿಸಿದ್ದಾರೆ. ಅಂತರಾಷ್ಟ್ರೀಯ ಡಾನ್ ಗಳ ಹೆಸರೇಳಿ ಅವಾಜ್ ಹಾಕಿದ್ದವ ಸದ್ಯ ಜೈಲುಪಾಲಾಗಿದ್ದಾನೆ.

ಭಾರತೀನಗರ ಪೊಲೀಸ್ ಠಾಣೆ ವ್ಯಾಪ್ತಿಯ ಯುವತಿಯ ಹಿಂದೆ ಬಿದ್ದಿದ್ದ ಆರೋಪಿ ಅಫಾನ್, ಯುವತಿಯ ಕುಟುಂಬಕ್ಕೆ ಬೆದರಿಕೆ ಹಾಕಿದ್ದ. ಸಂಬಂಧಿಕರ ಮದುವೆಯಲ್ಲಿ ಆರೋಪಿಗೆ ಯುವತಿಯ ಪರಿಚಯವಾಗಿತ್ತು. ನಂತರ ಇಬ್ಬರೂ ಎರಡು ಮೂರು ಬಾರಿ ಬೇರೆಡೆ ಭೇಟಿಯಾಗಿದ್ದು. ಇತ್ತೀಚೆಗೆ ಯುವಕ ಅಫಾನ್ ಅಹಮದ್ ನನ್ನ ಯುವತಿ ದೂರವಿಟ್ಟಿದ್ದಳು. ಪದೇ ಪದೇ ಭೇಟಿಯಾಗುವಂತೆ ಅಫಾನ್ ಒತ್ತಾಯಿಸ್ತಿದ್ದ. ಭೇಟಿ ಆಗದಿದ್ದರೆ ಆತ್ಮಹತ್ಯೆ ಮಾಡಿಕೊಳ್ಳೋದಾಗಿ ಫೋಟೋ ಕಳಿಸಿದ್ದ. ಡ್ರಗ್ಸ್ ಜೊತೆ ಫೋಟೋ ವಾಟ್ಸಾಪ್ ಮಾಡ್ತಿದ್ದಾಗಿ ಯುವತಿ ದೂರು ನೀಡಿದ್ದಾಳೆ.

**ಯುವತಿ ಕುಟುಂಬಕ್ಕೆ ಜೀವ ಬೆದರಿಕೆ:** ಇನ್ನು ಆರೋಪಿ, ಯುವತಿಯ ಅಶ್ಲೀಲ ಫೋಟೋ, ವಿಡಿಯೋಸ್ ಸೋಷಿಯಲ್ ಮೀಡಿಯಾದಲ್ಲಿ ಹಾಕೋದಾಗಿ ಬೆದರಿಕೆವೊಡ್ಡಿ 28 ಸಾವಿರ ಹಣ ಪಡೆದಿದ್ದ. ಈ ವಿಚಾರವನ್ನು ಯುವತಿ ತನ್ನ ಕುಟುಂಬಸ್ಥರಿಗೆ ತಿಳಿಸಿದ್ದಳು. ಆಗ ಯುವತಿ ಕುಟುಂಬಸ್ಥರು ಅಫಾನ್ ಗೆ ಬುದ್ದಿ ಹೇಳಲು ಹೋದಾಗ ಅಫಾನ್ ಅವಾಜ್ ಹಾಕಿದ್ದ. ನನ್ನ ತಂದೆಗೆ ದಾವೂದ್ ಇಬ್ರಾಹಿಂ, ಛೋಟಾಶಕೀಲ್ ತುಂಬಾ ಹತ್ತಿರದವರು. ಅವರಿಂದಲೇ ನಿಮ್ಮ ಕುಟುಂಬಕ್ಕೆ ಪಾತ ಕಲಿಸ್ತೀನಿ ಎಂದು ಜೀವಬೆದರಿಕೆ ಹಾಕಿದ್ದ.

ಸದ್ಯ ಇದರಿಂದ ನೊಂದ ಯುವತಿ ಭಾರತೀನಗರ ಠಾಣೆಯಲ್ಲಿ ದೂರು ದಾಖಲಿಸಿದ್ದು ದೂರಿನನ್ವಯ ಲೈಂಗಿಕ ಕಿರುಕುಳ, ಜೀವ ಬೆದರಿಕೆ, ಐಟಿ ಆಕ್ಟ್ ಅಡಿ ಪ್ರಕರಣ ದಾಖಲಿಸಿಕೊಂಡು ಪೊಲೀಸರು ಆರೋಫಿ ಅಫಾನ್ ನನ್ನು ಬಂಧಿಸಿದ್ದಾರೆ. ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

## ಸಂಸದ ಬಿ.ಎನ್ ಬಚ್ಚೇಗೌಡ, ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ

**ಬೆಂಗಳೂರು:** ಸಂಸದ ಬಿ.ಎನ್. ಬಚ್ಚೇಗೌಡ ಅವರು ಬಿಜೆಪಿ ತೊರೆದಿದ್ದಾರೆ. ಬಿಜೆಪಿ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದಾರೆ. ಮೂರು ದಿನಗಳ ಹಿಂದೆಯೇ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರರಿಗೆ ರಾಜೀನಾಮೆ ಪತ್ರ ರವಾನಿಸಿರುವ ಮಾಹಿತಿ ಸಿಕ್ಕಿದೆ. ಸ್ವ ಇಚ್ಛೆಯಿಂದ ರಾಜೀನಾಮೆ ಸಲ್ಲಿಸುತ್ತಿರೋದಾಗಿ ಪತ್ರದಲ್ಲಿ ಉಲ್ಲೇಖಿಸಲಾಗಿದೆ.

'ಸ್ವ ಇಚ್ಛೆಯಿಂದ ಬಿಜೆಪಿ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ಸಲ್ಲಿಸುತ್ತಿದ್ದೇನೆ. ರಾಜೀನಾಮೆ ಅಂಗೀಕರಿಸಬೇಕು ಎಂದು ಕೋರುತ್ತೇನೆ' ಎಂದು ಪಕ್ಷದ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವರಿಗೆ ಬರೆದಿರುವ ರಾಜೀನಾಮೆ ಪತ್ರದಲ್ಲಿ ತಿಳಿಸಿದ್ದಾರೆ. 2008ರಲ್ಲಿ ಬಿಜೆಪಿ ಪ್ರಾಥಮಿಕ ಸದಸ್ಯತ್ವ ಪಡೆದು ಶಾಸಕ, ಸಚಿವ, ಸಂಸದನಾಗಿ ಸಾರ್ವಜನಿಕ ಕೆಲಸ ಮಾಡಲು ಅವಕಾಶ ಮಾಡಿಕೊಟ್ಟ ಪಕ್ಷಕ್ಕೆ ಮತ್ತು ಪಕ್ಷದ ಹಿರಿಯ ಮುಖಂಡರಿಗೆ ಧನ್ಯವಾದ ಅರ್ಪಿಸುವುದಾಗಿ ಹೇಳಿದ್ದಾರೆ.

### ದ್ವಾದಶ ಜ್ಯೋತಿರ್ಲಿಂಗ ಪುಣ್ಯ ದರ್ಶನ ಸಮಾರೋಪ

# ವೈಭವಯುತ ದ್ವಾದಶ ಜ್ಯೋತಿರ್ಲಿಂಗಗಳ ಪುಣ್ಯ ದರ್ಶನಕ್ಕೆ ತೆರೆ

**ಚಾಮರಾಜನಗರ:** ಮಾನವನ ಅಂತರಂಗದ ಶಕ್ತಿ ,ವಿಶ್ವಾಸ, ಆತ್ಮಸ್ಥೈರ್ಯ ಹಾಗೂ ಶಾಂತಿ ನೆಮ್ಮದಿ ದೊರಕಲು ಪ್ರತಿಯೊಬ್ಬರು ರಾಜಯೋಗ ಶಿಕ್ಷಣ ಪಡೆದುಕೊಳ್ಳುವುದರಿಂದ ಒತ್ತಡ ಮುಕ್ತ ಜೀವನ ನಡೆಸಲು ಸಾಧ್ಯ ಎಂದು ಮೈಸೂರು ರಾಜಯೋಗ ರಿಟ್ರೀಟ್ ಸೆಂಟರ್ ನ ಪ್ರಾಂಶುಪಾಲರು ಹಾಗೂ ಎಸ್ ಬಿ ಎಂನ ನಿವೃತ್ತ ವ್ಯವಸ್ಥಾಪಕರಾದ ರಾಜಯೋಗಿ ಬ್ರಹ್ಮಾಕುಮಾರ ರಂಗನಾಥಶಾಸ್ತ್ರೀಜೀಯವರು ಅಭಿಪ್ರಾಯ ಪಟ್ಟರು

ಚಾಮರಾಜೇಶ್ವರ ದೇವಾಲಯದ ಮುಂಭಾಗ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ದ್ವಾದಶ ಜ್ಯೋತಿರ್ಲಿಂಗಗಳ ಪುಣ್ಯದರ್ಶನದ ಸಮಾರೋಪ ಸಮಾರಂಭದಲ್ಲಿ ಮಾತನಾಡುತ್ತ ಗಡಿಭಾಗವಾದ ಚಾಮರಾಜನಗರದಲ್ಲಿ ದ್ವಾದಶ ಜ್ಯೋತಿರ್ಲಿಂಗಗಳ ಪುಣ್ಯದರ್ಶನದ ವ್ಯವಸ್ಥೆಯನ್ನು ಮೊಟ್ಟಮೊದಲಿಗೆ ರೂಪಿಸಿ ಲಕ್ಷಾಂತರ ಜನ ದ್ವಾದಶ ಜ್ಯೋತಿರ್ಲಿಂಗಗಳ ಪುಣ್ಯ ದರ್ಶನ ಮಾಡಿ ಪುನೀತರಾಗಿರುವುದು ಬಹಳ ಸಂತೋಷವೆಂದು ತಿಳಿಸಿ ,ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯ ಇಡೀ ವಿಶ್ವದ 157ಕ್ಕೂ ಹೆಚ್ಚು ದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು 60,000ಕ್ಕೂ ಹೆಚ್ಚು ಸಹೋದರಿಯರ ನೇತೃತ್ವದಲ್ಲಿ ಎಲ್ಲಾ ಕೇಂದ್ರಗಳು ನಿರ್ವಹಣೆಯಾಗುತ್ತಿರುವುದು ಹಾಗೂ ವಿಶ್ವದ ಶಾಂತಿಗಾಗಿ ಪ್ರತಿನಿತ್ಯ ಧ್ಯಾನ ಹಾಗೂ ಮಾನವೀಯ ಮೌಲ್ಯಗಳನ್ನು ವಿಶ್ವಕಲ್ಯಾಣಕ್ಕಾಗಿ ಆತ್ಮವಿಶ್ವಾಸದ ಮೂಲಕ, ನಕರಾತ್ಮಕತೆಯನ್ನುಸಕಾರಾತ್ಮಕತೆಯಲ್ಲಿ ಚಿಂತನೆಗಳನ್ನು ಮೂಡಿಸಿಕೊಂಡು




ಜೀವನವನ್ನು ಉನ್ನತಿಗೊಳಿಸಿಕೊಳ್ಳುವ ಕಾರ್ಯವನ್ನು ಪ್ರತಿಯೊಬ್ಬರು ಮಾಡಬೇಕು ಆತ್ಮಜ್ಞಾನದಿಂದ ಪರಮ ಜ್ಯೋತಿ ಬೆಳಕು ಜ್ಞಾನರೂಪದಲ್ಲಿ ಬೆಳಗಿ ಸತ್ಯದರ್ಶನವನ್ನು ಅನುಭೂತಿ ಮಾಡಲು ಸಕಾಲವಾಗಿದೆ. ಸತ್ಯದರ್ಶನದಿಂದ ಮನಸ್ಸಿನಲ್ಲಿ ಸದಾಕಾಲ ಶಾಂತಿ ಸಮಾಧಾನ ಇರುತ್ತದೆ ಎಂದರು.

ಕಾರ್ಯಕ್ರಮದ ಉದ್ಘಾಟನೆಯನ್ನು ಸೇವಾ ಭಾರತೀ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಗಳಾದ ರಮೇಶ್ ಗುರೂಜೀ ನೆರವೇರಿಸಿ, ದ್ವಾದಶ ಲಿಂಗಗಳು ಶಿವನ ಕರ್ತವ್ಯಗಳನ್ನುದರ್ಶನ ಮಾಡಿಸುವ ಹಾಗೂ ಪರಮ ಪವಿತ್ರವಾದ ಕ್ಷೇತ್ರಗಳು ಭಾರತದ ಎಲ್ಲ ದಿಕ್ಕುಗಳಲ್ಲೂ ಶಿವನ ದರ್ಶನವಾಗುತ್ತದೆ ಪ್ರತಿ ಗ್ರಾಮಗಳಲ್ಲೂ ಮನೆಮನೆಗಳಲ್ಲೂ ಶಿವನ ಆರಾಧನೆ ನಡೆಯುತ್ತಿದ್ದು ಶಿವ ಧ್ಯಾನದಿಂದ ಮನುಷ್ಯ ಸ್ವರ್ಗ ಸುಖವನ್ನು ಪಡೆಯುತ್ತಾನೆ ದ್ವಾದಶ ಲಿಂಗಗಳ ದರ್ಶನ ಮೊಹಹೋನ್ನತವಾದದ್ದು ಸೋಮನಾಥ, ಶ್ರೀಶೈಲ ಕೇದಾರನಾಥ , ವಾರಣಾಸಿ,ಉಜ್ಜಯಿನಿ ಕ್ಷೇತ್ರಗಳು ಭಾರತೀಯರ ಧಾರ್ಮಿಕ ಶಕ್ತಿ ಕೇಂದ್ರವಾಗಿದೆ . ಚಾಮರಾಜನಗರದಲ್ಲಿ ಮೊಟ್ಟ ಮೊದಲ ಬಾರಿಗೆ ದರ್ಶನದ ವ್ಯವಸ್ಥೆ ಮಾಡಿರುವ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯಕ್ಕೆ ಜನತೆಯ ಪರವಾಗಿ ಹೃದಯಪೂರ್ವಕವಾದ ಧನ್ಯವಾದಗಳನ್ನು ಅರ್ಪಿಸಿದರು.

ಸಂಸ್ಥೆಯ ಮುಖ್ಯ ಸಂಚಾಲಕರು ಹಾಗೂ ಸ್ವಾಮಿ ವಿವೇಕಾನಂದ ರಾಷ್ಟ್ರ ರಾಜ್ಯ ಸದ್ಭಾವನಾ ಪ್ರಶಸ್ತಿ ಪುರಸ್ಕೃತರಾದ ರಾಜಯೋಗಿನಿ ಬ್ರಹ್ಮಾಕುಮಾರಿ ದಾನೇಶ್ವರೀಜೀ ಅವರು ಅಧ್ಯಕ್ಷತೆ ವಹಿಸಿ ಮಾತನಾಡುತ್ತ ಮಾನವನ ಆತ್ಮ ಸಾಕ್ಷಾತ್ಕಾರದ ಜೀವನವೇ ಶ್ರೇಷ್ಠವಾದದ್ದು. ಮಾನವ ಎಲ್ಲ ಮೋಹಗಳಿಂದ ನಿರ್ಲಿಪ್ತನಾಗಿ ಉನ್ನತಿಯ ಬದುಕನ್ನು ಶಾಂತ ಸ್ಥಿತಿಯ ಚಿಂತನೆಯನ್ನು ಮಾಡಲು ಭಗವಂತನನ್ನು ಯತಾರ್ಥವಾಗಿ ಅರಿತು ನೆನಪು ಮಾಡುವುದೇ ಸಹಜ ರಾಜಯೋಗ ಧ್ಯಾನವಾಗಿದೆ. ಭಗವಂತನ ನೆನಪು ಪ್ರತಿಯೊಬ್ಬರಲ್ಲೂ ಇದ್ದು ತನ್ನ ಆತ್ಮಕ್ಕೆ ಹೆಚ್ಚು ಹೆಚ್ಚು ನೆಮ್ಮದಿಯನ್ನು ನೀಡಿದಾಗ ಪರಿಪೂರ್ಣತೆಯ ವಿಕಾಸವಾಗುವುದು. ಶಿವ ದರ್ಶನವು ನಮ್ಮೆಲ್ಲರಲ್ಲಿಯೂ ಹೊಸತನವನ್ನು ಮೂಡಿಸಿ , ಸತ್ಯವನ್ನು ಅರಿಯಲು ಅವಕಾಶವನ್ನುಂಟು ಮಾಡುತ್ತದೆ ಎಂದು ಸಾಮೂಹಿಕ ರಾಜಯೋಗದ ಅನುಭೂತಿ ಮುಗಿಸಿದರು.

ಬರಹಗಾರ ಲಕ್ಷ್ಮೀನರಸಿಂಹ ಮಾತನಾಡಿ ಸಂಸ್ಥೆಯು ಜನತೆಯಲ್ಲಿ ಆಧ್ಯಾತ್ಮಿಕತೆಯನ್ನು ಜಾಗೃತಿ ಮೂಡಿಸುವ ಕಾರ್ಯ ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಬಿಕೆ ಆರಾಧ್ಯ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಉಪ ತಹಶಿಲ್ದಾರರಾದ ಗಿರಿಜಕ್ಕ ನಗರಸಭಾಸದಸ್ಯರಾದ ಮಮತಾ,ನಂಜುಂಡಸ್ವಾಮಿ,ನಾರಾಯಣ ಶೆಟ್ಟಿ, ಸುರೇಶ್ ಎನ್ ಋಗ್ವೇದಿ,ನಟರಾಜ ಹಾಜರಿದ್ದರು. ನಂತರ ಗಡಿನಾಡ ಜನಪದ ಕೋಗಿಲೆಗಳ ಸಾಂಸ್ಕೃತಿಕ ಕಲಾ ವೇದಿಕೆಯ ಅಧ್ಯಕ್ಷರಾದ ಸುರೇಶ್ ನಾಗ್ ರವರು ಭಕ್ತಿಗೀತೆ, ಜನಪದ ಗೀತೆ ಮತ್ತು ಸಂಗೀತ ಕಾರ್ಯಕ್ರಮವನ್ನು ನಡೆಸಿ ಕೊಟ್ಟರು



## ಪೂರ್ವಿಕಾ ಭರತನಾಟ್ಯ ಪ್ರದರ್ಶನ

**ಕೋಲಾರ, ಕೋಲಾರದ ಬೈರೆಗೌಡ ನಗರದಲ್ಲಿ ನಡೆದ ದ ರೂಲರ್ಸ್ ಚಲನಚಿತ್ರದ ಆಡಿಯೋ ಹಾಗೂ ಟೀಸರ್ ಲಾಂಚ್ ಕಾರ್ಯಕ್ರಮದಲ್ಲಿ ಶ್ರೀ ಭುವನೇಶ್ವರಿ ನಾಟ್ಯ ಕಲಾ ಅಕಾಡೆಮಿಯ ವಿದ್ಯಾರ್ಥಿನಿ ಪೂರ್ವಿಕ ಎ ಭರತನಾಟ್ಯ ಪ್ರದರ್ಶನ ನೀಡಿದರು. ಶ್ರೀ ಭುವನೇಶ್ವರಿ ನಾಟ್ಯ ಕಲಾ ಅಕಾಡೆಮಿಯಯಲ್ಲಿ ತರಬೇತಿ ಪಡೆಯುತ್ತಿರುವ ಪೂರ್ವಿಕ .ಎ ತಂದೆ ಆನಂದ್ ಜೀವಿ ಫೋಟೋಗ್ರಾಫರ್ ಹಾಗೂ ತಾಯಿ ನೀಲಮ್ಮ ದಂಪತಿಗಳ ಸುಪುತ್ರಿಯಾಗಿದ್ದಾರೆ.**

# ರಾಷ್ಟ್ರೀಯ ವಿಜ್ಞಾನ ದಿನ ಉತ್ಸವ

**ಬೆಂಗಳೂರು:** ಬೆಂಗಳೂರು ವಿಶ್ವವಿದ್ಯಾನಿಲಯದ ಜ್ಞಾನ ಭಾರತಿ ಆವರಣದಲ್ಲಿರುವ ವಿಜ್ಞಾನ ವಿಭಾಗಗಳಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯನ್ನು ನಡೆಸಲು ವೇದಿಕೆಯನ್ನು ಸಿದ್ದತೆ ಮಾಡಿಕೊಂಡು ಎರಡು ದಿನಗಳ ಕಾಲ ಬಹಳ ಅಚ್ಚು ಕಟ್ಟಾಗಿ ರಾಷ್ಟ್ರೀಯ ವಿಜ್ಞಾನ ದಿನ ಉತ್ಸವ ಎಂಬ ಹೆಸರಿನಲ್ಲಿ ವಿಜ್ಞಾನ ದಿನಾಚರಣೆಯನ್ನು ಆಚರಣೆ ಮಾಡಿದರು.

ಈ ಉತ್ಸವದಲ್ಲಿ ವಿಶ್ವವಿದ್ಯಾಲಯ ಸೇರಿದಂತೆ ಇತರ ವಿಶ್ವವಿದ್ಯಾಲಯಗಳ ವಿಜ್ಞಾನ ವಿಷಯದ ವಿದ್ಯಾರ್ಥಿಗಳು ಇಂಜಿನಿಯರಿಂಗ್ ಪಿಜಿವಿದ್ಯಾರ್ಥಿಗಳು, ಸಮಾಜ ವಿಜ್ಞಾನ ಮತ್ತು ಸಂಶೋಧನಾ ವಿದ್ಯಾರ್ಥಿಗಳು ಭಾಗವಹಿಸಿದರು. ವಿಜ್ಞಾನಕ್ಕೆ ಸಂಬಂಧ ಪಟ್ಟಂತೆ ವಿವಿಧ ಸ್ಪರ್ಧೆಗಳನ್ನು ನಡೆಸಿದರು. ವೈಜ್ಞಾನಿಕತೆಯನ್ನು ಪ್ರೋತ್ಸಾಹಿಸಲು ಹಾಗೂ ಉತ್ತೇಜಿಸಲು ನಿಟ್ಟಿನಲ್ಲಿ



ವಿಜ್ಞಾನ ಬ್ಲಾಕ್ ಕಾರಿಡಾರ್, ಬಿಯು ನಲ್ಲಿ ವಿಜ್ಞಾನ ಪೋಸ್ಟರ್ ಪ್ರದರ್ಶನ, ರಸಪ್ರಶ್ನೆ ಮತ್ತು ಇತರ ಸ್ಪರ್ಧೆಗಳು, ಬೆಂಗಳೂರು ವಿಶ್ವವಿದ್ಯಾನಿಲಯದ ವಿಜ್ಞಾನ ವೇದಿಕೆಯಲ್ಲಿ ನಡೆಯಿತು. ಸ್ಪರ್ಧೆಯಲ್ಲಿ ಪಾಲ್ಗೊಂಡು ಉತ್ತಮ ಸಾಧನೆ ಮಾಡಿದ ವಿಧ್ಯಾರ್ಥಿಗಳಿಗೆ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನಗಳನ್ನು ಗಳಿಸಿದವರಿಗೆ ನಗದು ಬಹುಮಾನ ಹಾಗೂ ಪ್ರಶಸ್ತಿ ನೆನಪಿನ ಕಾಣಿಕೆ ಮತ್ತು ಪ್ರಮಾಣ ಪತ್ರವನ್ನು ನೀಡದರು.

ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿಜೇತರಿಗೆ ಗೌರವಾನ್ವಿತ ಉಪಕುಲಪತಿ ಡಾ.ಜಯಕರ ರವರು ಹಾಗೂ ವೇದಿಕೆಯ ಮೇಲೆ ಉಪಸ್ಥಿತಿಯಲ್ಲಿದ್ದ ಗಣ್ಯರು ಗೆದ್ದ ಸ್ಪರ್ಧೆದಾರಿಗೆ ಸ್ಮರಣೆಯ ಕಾಣಿಕೆ ನೀಡಿದರು. ಬೆಂಗಳೂರು ವಿಶ್ವವಿದ್ಯಾನಿಲಯದ ರಸಾಯನಶಾಸ್ತ್ರ ವಿಭಾಗದ ಸಂಶೋಧನಾ ವಿಧ್ಯಾರ್ಥಿಯಾದ ಗಜೇಂದ್ರ ಬಿ.ಒ ರವರಿಗೆ ಪೋಸ್ಟರ್ ಪ್ರದರ್ಶನಕ್ಕೆ ಪ್ರಥಮ ಪ್ರಶಸ್ತಿಯನ್ನು ಪ್ರದಾನ ಮಾಡಿದರು. ವೇದಿಕೆಯ ಮೇಲೆ ಕುಲಪತಿಗಳಾದ ಡಾ.ಜಯಕರ ,ಉಪಕುಲಪತಿ ಶೇಕ್ ಲತೀಫ್, ರಾಸಾಯನಿಕ ಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಜಿ.ಕೃಷ್ಣಮೂರ್ತಿ ಹಾಗೂ ಪ್ರೊಫೆಸರ್ ಡಾ.ಸೌಭಾಗ್ಯ ಹೀಗೆ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

### ನಗರದಲ್ಲಿ ಕೋಟ್ಪಾ ದಾಳಿ

# 2960 ರೂ. ದಂಡ ವಸೂಲಿ

**ಚಾಮರಾಜನಗರ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಮಾರ್ಚ್ 20 ರಂದು ಚಾಮರಾಜನಗರ ಪಟ್ಟಣದ ಪಚ್ಚಪ್ಪ ವೃತ್ತದಿಂದ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದ ಮೂಲಕ ಗುಂಡ್ಲುಪೇಟೆ ವೃತ್ತದವರೆಗೆ ಕೋಟ್ಪಾ ಕಾರ್ಯಚರಣೆ ನಡೆಸಿ 27 ಪ್ರಕರಣಗಳಿಗೆ 2960 ರೂ. ದಂಡ ವಿಧಿಸಲಾಗಿದೆ.

ಸಿಗರೇಟು ಮತ್ತು ಇತರೆ ತಂಬಾಕು ಉತ್ಪನ್ನಗಳ ಕಾಯ್ದೆಯನ್ನು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಉದ್ದೇಶದಿಂದ ಜಿಲ್ಲಾ ಕೋಟ್ಪಾ ತನಿಖಾ ತಂಡದ ಸಹಯೋಗದೊಂದಿಗೆ ದಾಳಿ ನಡೆಸಲಾಯಿತು. ದಾಳಿಯ ವೇಳೆ ನಿಯಮ ಉಲ್ಲಂಘನೆ ಮಾಡಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುತ್ತಿದ್ದ ಅಂಗಡಿಗಳು, ಕೋಟ್ಪಾ ಸೆಕ್ಷನ್-4 ಎಚ್ಚರಿಕೆ ನಾಮಫಲಕವನ್ನು ಪ್ರದರ್ಶಿಸದ ಹೋಟೆಲ್, ಬಾರ್ ಆಂಡ್ ರೆಸ್ಟೋರೆಂಟ್‌ಗಳು, ಟೀ ಸ್ಟಾಲ್‌ಗಳು, ಚಿಲ್ಲರೆ ಅಂಗಡಿಗಳು ಹಾಗೂ ಇತರೆ ಅಂಗಡಿಗಳು, ಕೋಟ್ಪಾ ಸೆಕ್ಷನ್-6(ಎ) ನಾಮಫಲಕವನ್ನು ಪ್ರದರ್ಶಿಸದ ತಂಬಾಕು ಮಾರಾಟವಿರುವ ಅಂಗಡಿಗಳು, ಶಿಕ್ಷಣ ಸಂಸ್ಥೆಯ 100 ಗಜಗಳ ಅಂತರದ ಒಳಗೆ ತಂಬಾಕು ಪದಾರ್ಥಗಳನ್ನು ಮಾರಾಟ ಮತ್ತು ಸೇವನೆಗೆ ಉತ್ತೇಜನ ನೀಡುವ ಅಂಗಡಿಗಳಿಗೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುತ್ತಿದ್ದ ವ್ಯಕ್ತಿಗಳಿಗೆ ಸ್ಥಳದಲ್ಲೇ ದಂಡ ವಿಧಿಸಲಾಯಿತು.

ಕರಪತ್ರ ವಿತರಿಸಿ ತಂಬಾಕು




ಸೇವನೆಯಿಂದ ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳು ಮತ್ತು ತಂಬಾಕು ನಿಯಂತ್ರಣ ಕಾಯ್ದೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಚಿದಂಬರ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ರಾಮಚಂದ್ರರಾಜೇ ಅರಸ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಗಿರಿಧರ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಂ. ನವೀನ್‌ಕುಮಾರ್, ಮಧುಶಂಕರ್, ದಯಾನಂದ್, ಭಾಸ್ಕರ್, ನಾರಾಯಣ್, ಜಿಲ್ಲಾ ತಂಬಾಕು ನಿಯಂತ್ರಣ ಘಟಕದ ಜಿಲ್ಲಾ ಸಲಹೆಗಾರರಾದ ಪ್ರಶಾಂತ್ ಹಾಗೂ ಸಮಾಜ ಕಾರ್ಯಕರ್ತರಾದ ವೀರಣ್ಣ, ಕಾರ್ಮಿಕ, ಪೊಲೀಸ್, ಕಂದಾಯ ಇಲಾಖೆ ಅಧಿಕಾರಿಗಳು ದಾಳಿಯ ವೇಳೆ ಹಾಜರಿದ್ದರು.

ಜಿಲ್ಲೆಯಲ್ಲಿರುವ ಎಲ್ಲಾ ಸಾರ್ವಜನಿಕ ಸ್ಥಳದ ಮಾಲೀಕರು, ಮುಖ್ಯಸ್ಥರು ತಮ್ಮ ಕಾರ್ಯ ವ್ಯಾಪ್ತಿಯಲ್ಲಿ ಕೋಟ್ಪಾ ಕಾಯ್ದೆ ಉಲ್ಲಂಘನೆಯಾಗದಂತೆ ಕಟ್ಟೆಚ್ಚರ ವಹಿಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಮಂಡ್ಯ:** ಮಂಡ್ಯ ಜಿಲ್ಲೆಯ ವತಿಯಿಂದ ಹಾಸನ ಜಿಲ್ಲೆಯ ಸೋಮನಹಳ್ಳಿ ಕಾವಲ್ ಕೇಂದ್ರದಲ್ಲಿ ಮೇ 02 ರಿಂದ ಫೆಬ್ರವರಿ 28, 2025 ರವರೆಗೆ 10 ತಿಂಗಳ ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಸಾಮಾನ್ಯ ಅಭ್ಯರ್ಥಿ 08(ಪುರುಷ 06, ಮಹಿಳೆ -02), ಪರಿಶಿಷ್ಟ ಜಾತಿ ಅಭ್ಯರ್ಥಿ-03(ಪುರುಷ 02, ಮಹಿಳೆ -01), ಪರಿಶಿಷ್ಟ ಪಂಗಡ ಅಭ್ಯರ್ಥಿ-01(ಪುರುಷ ? 01) ಮತ್ತು ಅಂಗವಿಕಲ ಅಭ್ಯರ್ಥಿ 01(ಪುರುಷ-01) ಒಟ್ಟಾರೆ 13 ಜನರಿಗೆ ತರಬೇತಿ ನೀಡಲಾಗುವುದು. ಅಭ್ಯರ್ಥಿಯು ಕನ್ನಡ ವಿಷಯಗಳೊಂದಿಗೆ ಎಸ್.ಎಸ್.ಎಲ್.ಸಿ. ಉತ್ತೀರ್ಣರಾಗಿದ್ದು, ಅಭ್ಯರ್ಥಿಗಳ ತಂದೆ/ತಾಯಿ ಹಾಗೂ ಪೋಷಕರು ಕಡ್ಡಾಯವಾಗಿ ಕೃಷಿ ಜಮೀನು ಹೊಂದಿರುವುದು ಹಾಗೂ ಈ ಬಗ್ಗೆ ಪಹಣಿ ನೀಡುವುದು ಕಡ್ಡಾಯ. ಪ.ಜಾತಿ/ಪಂಗಡ ಹಾಗೂ ಅಂಗವಿಕಲರಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 33 ವರ್ಷ, ಮಾಜಿ ಸೈನಿಕರಿಗೆ ಕನಿಷ್ಠ 33 ವರ್ಷ ಮತ್ತು ಗರಿಷ್ಠ 65 ವರ್ಷ, ಇತರರಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 30 ವರ್ಷ ವಯೋಮಿತಿ ಇರುವುದು. ಆಸಕ್ತ ಅಭ್ಯರ್ಥಿಗಳು ಅರ್ಜಿಯನ್ನು ಮಂಡ್ಯ ತೋಟಗಾರಿಕೆ ಉಪನಿರ್ದೇಶಕರು/ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು(ರಾಜ್ಯ ವಲಯ) https://horticulture.karnataka.gov.in ನಲ್ಲಿ ಅರ್ಜಿ ಪಡೆದು, ಅಗತ್ಯ ದಾಖಲಾತಿಗಳೊಂದಿಗೆ ಏಪ್ರಿಲ್ 01 ರೊಳಗೆ ಮಂಡ್ಯ ತೋಟಗಾರಿಕೆ ಉಪನಿರ್ದೇಶಕರ ಕಚೇರಿಯ ಸಹಾಯಕ ನಿರ್ದೇಶಕರಿಗೆ ಸಲ್ಲಿಸಬೇಕು. ಏಪ್ರಿಲ್ 06 ರಂದು ಸಂದರ್ಶನವನ್ನು ನಡೆಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಬೆಡ್‌ರೂಂ ಕಿಟಕಿ ಹಾಕದೆ ಕಾಮಕೇಳಿ; ದೂರು!

**ಬೆಂಗಳೂರು:** ರಾಜಧಾನಿ ಬೆಂಗಳೂರಿನಲ್ಲಿ ತಮ್ಮ ಬೆಡ್‌ರೂಂ ಕಿಟಕಿ ಹಾಕದೆ ಲೈಂಗಿಕ ಕ್ರಿಯೆ ನಡೆಸುತ್ತಿದ್ದ ದಂಪತಿಯ ವಿರುದ್ಧ ಪಕ್ಕದ ಮನೆಯ ಮಹಿಳೆಯೊಬ್ಬರು ಪೊಲೀಸರಿಗೆ ದೂರು ನೀಡಿರುವ ವಿಚಿತ್ರ ಪ್ರಕರಣವೊಂದು ಬುಧವಾರ ಬೆಳಕಿಗೆ ಬಂದಿದೆ. ಈ ಸಂಬಂಧ ಪಕ್ಕದ ಮನೆ ಮಹಿಳೆ ಬೆಂಗಳೂರಿನ ಗಿರಿನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ದಂಪತಿ ತಮ್ಮ ಕೋಣೆಯ ಕಿಟಕಿ ತೆರೆದಿಟ್ಟು ಲೈಂಗಿಕ ಕ್ರಿಯೆಯಲ್ಲಿ ತೊಡಗುತ್ತಾರೆ ಮತ್ತು ವಿಕೃತವಾಗಿ ವರ್ತಿಸುತ್ತಾರೆ. ಅವರ ವರ್ತನೆಯಿಂದ ತಮಗೆ ಕಿರಿಕಿರಿಯಾಗುತ್ತಿದೆ ಎಂದು 44 ವರ್ಷದ ಮಹಿಳೆ ದೂರಿನಲ್ಲಿ ತಿಳಿಸಿದ್ದಾರೆ. ಕಿಟಕಿಯ ಬಾಗಿಲು ಹಾಕಿಕೊಂಡು ಸರಸ ಸಲ್ಲಾಪ ನಡೆಸಿ ಎಂದು ಹೇಳಿದರೆ, ನಮ್ಮ ಮನೆ, ನಮ್ಮ ಇಷ್ಟ ಎಂಬ ಉತ್ತರ ದಂಪತಿಯಿಂದ ಬಂದಿದೆ. ಆಕ್ಷೇಪಿಸಿದಾಗ, ಆ ವ್ಯಕ್ತಿ ತನಗೆ ಅತ್ಯಾಚಾರ ಮತ್ತು ಕೊಲೆ ಬೆದರಿಕೆ ಹಾಕಿದ್ದಾರೆ ಎಂದು ಮಹಿಳೆ ಆರೋಪಿಸಿದ್ದಾರೆ. ಪೊಲೀಸರ ಪ್ರಕಾರ, ದೂರುದಾರ ಮಹಿಳೆಯ ಮನೆ ಆರೋಪಿ ದಂಪತಿಗಳ ಮನೆಯ ಪಕ್ಕದಲ್ಲಿದೆ. ದಂಪತಿಯ ಮಲಗುವ ಕೋಣೆ, ದೂರುದಾರ ಮಹಿಳೆ ಮನೆಯ ಬಾಗಿಲಿನ ಮುಂಭಾಗದಲ್ಲಿದೆ. ಮಹಿಳೆ ಮನೆಯಲ್ಲಿರುವುದನ್ನು ಲೆಕ್ಕಿಸದೆ ದಂಪತಿಗಳು ಲೈಂಗಿಕ ಕ್ರಿಯೆಯಲ್ಲಿ ತೊಡಗಿಕೊಳ್ಳುತ್ತಿದ್ದು, ಸಂತ್ರಸ್ತ ಮಹಿಳೆ ತಮ್ಮ ಕೋಣೆಯ ಕಿಟಕಿಯನ್ನು ಮುಚ್ಚುವಂತೆ ಕೇಳಿಕೊಂಡಿದ್ದಾರೆ. ಆರೋಪಿ ದಂಪತಿಗೆ ಮನೆ ಮಾಲೀಕ ಮತ್ತು ಆತನ ಮಗನೂ ಸಾಥ್ ನೀಡಿದ್ದು, ನಿಮಗೆ ಇಷ್ಟವಿಲ್ಲದಿದ್ರೇ ನೀವೇ ಮನೆ ಬಿಟ್ಟುಹೋಗಿ ಎಂದು ದಬಾಯಿಸಿದ್ದಾರೆ. ಮನೆ ಮಾಲಿಕನೂ ರೌಡಿ ಹುಡುಗರನ್ನು ಕರೆಸಿ ಜೀವ ಬೆದರಿಕೆ ಹಾಕಿದ್ದಾನೆ ಎಂದು ಮಹಿಳೆ ಆರೋಪಿಸಿದ್ದಾರೆ. ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಪೊಲೀಸರಿಗೆ ಮಹಿಳೆ ದೂರು ನೀಡಿದ್ದಾರೆ. ಮನೆ ಮಾಲೀಕ ಚಿಕ್ಕಣ್ಣ, ಆತನ ಪುತ್ರ ಮಂಜುನಾಥ್, ಪಕ್ಕದ ಮನೆ ವ್ಯಕ್ತಿ ವಿರುದ್ಧ ದೂರು ನೀಡಲಾಗಿದೆ. ದೂರಿನ ಆಧಾರದ ಮೇಲೆ ಎಫ್‌ಐಆರ್ ದಾಖಲಿಸಿರುವ ಪೊಲೀಸರು ಸ್ಥಳ ಮಹಜರು ನಡೆಸಿದ್ದಾರೆ. ಸೆಕ್ಷನ್ 504, 506, 509, 34ರಡಿ ಪ್ರಕರಣ ದಾಖಲು ಮಾಡಲಾಗಿದೆ.

## ಅಪ್ರಾಪ್ತ ಮಗನಿಗೆ ಬೈಕ್ ಚಾಲನೆ: ದಂಡ ವಿಧಿಸಿದ ಪೊಲೀಸರು

**ಚಾಮರಾಜನಗರ :** ಅಪ್ರಾಪ್ತ ಮಗನಿಗೆ ಬೈಕ್ ಚಾಲನೆ ಮಾಡಲು ಕೊಟ್ಟ ಪೋಷಕರಿಗೆ ಜಿಲ್ಲೆಯ ಹನೂರು ಕೋರ್ಟ್ ನ ನ್ಯಾಯಾದೀಶರು 25 ಸಾವಿರ ರೂ. ದಂಡ ವಿಧಿಸಿ ಆದೇಶ ಹೊರಡಿಸಿದ್ದಾರೆ ಚಾಮರಾಜನಗರ ಜಿಲ್ಲೆಯ ಹನೂರು ಪೊಲೀಸರು ಪಟ್ಟಣದಲ್ಲಿ ವಾಹನಗಳ ತಪಾಸಣೆ ನಡೆಸುವಾಗ ಅಪ್ರಾಪ್ತ ಬಾಲಕನೋರ್ವ ಬೈಕ್ ಚಲಾಯಿಸುತ್ತಿರುವುದು



ಬೆಳಕಿಗೆ ಬಂದಿತ್ತು.ಅಪ್ರಾಪ್ತ ಯುವಕನನ್ನು ವಾಹನ ಚಾಲನೆ ಮಾಡಲು ಕಾನೂನಿನಲ್ಲಿ ಅವಕಾಶ ಇಲ್ಲ. ಅಲ್ಲದೇ ಅಪ್ರಾಪ್ತರಿಗೆ ವಾಹನ ಚಾಲನೆಗೆ ಕೊಡುವುದು ಕೂಡ ಅಪರಾಧವಾಗಿದೆ. ಈ ಬಗ್ಗೆ ಹನೂರು ಪೊಲಿಸರು ಪ್ರಕರಣ ದಾಖಲಿಸಿ,ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ಈ ಕುರಿತು ಹನೂರಿನ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ ನ್ಯಾಯಾಲಯದ ನ್ಯಾಯಾಧೀಶರು ದ್ವಿಚಕ್ರ ಚಲಾಯಿಸುತ್ತಿದ್ದ ಅಪ್ರಾಪ್ತನ ಪೋಷಕರಿಗೆ 25 ಸಾವಿರ ರೂ. ದಂಡ ವಿಧಿಸಿ ಆದೇಶಿಸಿದ್ದಾರೆ. ಈ ಮೂಲಕ ನ್ಯಾಯಾಲಯವು ಅಪ್ರಾಪ್ತರಿಗೆ ವಾಹನ ನೀಡದಂತೆ ಪೋಷಕರಿಗೆ ಎಚ್ಚರಿಕೆ ನೀಡಿದೆ.

# ಮಹಿಳಾ ರಂಗಭೂಮಿ ಕಲಾವಿದರಿಗೆ ಅಭಿನಂದನೆ

**ಚನ್ನಪಟ್ಟಣ:** ಬೊಂಬೆನಾಡಿನ ಇತಿಹಾಸದ ಪುಟಕ್ಕೆ ಮತ್ತೊಂದು ಮುಕುಟವಾಗಿ ಸೇರ್ಪಡೆಯಾದ ಭಾರತ್ ವಿಕಾಸ್ ಪರಿಷತ್‌ನ ಮಹಿಳಾ ಸದಸ್ಯರು ನಡೆಸಿಕೊಟ್ಟ ದ್ರೌಪದಿ ವಿಜಯ ಅಥವಾ ಶ್ರೀಕೃಷ್ಣ ಸಂಧಾನ ಪೌರಾಣಿಕ ನಾಟಕದ ಮಹಿಳಾ ರಂಗಭೂಮಿ ಕಲಾವಿದರಿಗೆ ಹಾಗೂ ಇವರಿಗೆ ಪ್ರೋತ್ಸಾಹ ನೀಡಿದ ಕುಟುಂಬವರ್ಗಕ್ಕೆ ಹಾಗೂ ಬಾವಿಪ, ಮತ್ತು ಕೆಂಗಲ್ ಆಂಜನೇಯ ಸಾಂಸ್ಕೃತಿಕ ಕಲಾ ಟ್ರಸ್ಟ್ ಸದಸ್ಯರಿಗೆ ಕಸ್ತೂರಿ ಕರ್ನಾಟಕ ಜನಪರ ವೇದಿಕೆಯಿಂದ ಅಭಿನಂದನಾ ಸಮಾರಂಭವನ್ನು ಆಯೋಜಿಸಲಾಗಿದೆ. ರೇಷ್ಮೆಸೀಮೆ ಪತ್ರಿಕಾಲಯದ ಮೇಲ್ಭಾಗದಲ್ಲಿ ಗುರುವಾರ ಸಂಜೆ 5 ಗಂಟೆಗೆ ಆಯೋಜಿಸಲಾಗಿರುವ ಅಭಿನಂದನಾ ಸಮಾರಂಭಕ್ಕೆ ಸಿನಿಮಾ ನಟ ಮೈಕೋ ನಾಗರಾಜ್, ಸ್ಟಂಟ್ ಮಾಸ್ಟರ್ ಕೆ. ವೆಂಕಟೇಶ್, ಕಿರುತೆರೆ ಕಲಾವಿದರಾದ ತಾಲೂಕಿನ ಉಜ್ಜನಹಳ್ಳಿಯ ಹಂಸರಾಜ್ ಮತ್ತು ಕಿರುತೆರೆ ನಟ ಮುನಿರಾಜು(ಮುನಿ) ಹಾಗೂ ರೇಷ್ಮೆ ಇಲಾಖೆಯ ನೌಕರ ಹಾಗೂ ನಟ ತಾಲೂಕಿನ ವಾಸು ಸೇರಿದಂತೆ ಹಲವು ನಟರು ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮಕ್ಕೆ ಕಲಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಅಭಿನಂದನಾ ಸಮಾರಂಭವನ್ನು ಯಶಸ್ವಿಗೊಳಿಸುವಂತೆ ಕಕಜ ವೇದಿಕೆಯ ರಾಜ್ಯಾಧ್ಯಕ್ಷ ರಮೇಶ್‌ಗೌಡ ಮನವಿ ಮಾಡಿದ್ದಾರೆ.



**ವಿಜಯಪುರ ಶ್ರೀ ನಗರೇಶ್ವರ ಸ್ವಾಮಿ ಪ್ರಾರ್ಥನಾ ಮಂದಿರದಲ್ಲಿ ಅ. ಶಿ. ವೈ.(ಅಯೋಧ್ಯಾನಗರ ಶಿವಾಚಾರ ವೈಶ್ಯ) ನಗರ್ತ ಮಹಿಳಾ ಸಂಘದ ಮಾಸಿಕ ಸಭೆಯಲ್ಲಿ ಅ. ಶಿ. ವೈ. ನಗರ್ತ ಮಹಂತಿನ ಮಠ ಧರ್ಮಸಂಸ್ಥೆಗೆ ನೂತನವಾಗಿ ಆಯ್ಕೆಯಾಗಿರುವ ಅಧ್ಯಕ್ಷರಾದ ಪುನೀತ್ ಕುಮಾರ್, ಕಾರ್ಯದರ್ಶಿ ವಿ ವಿಶ್ವನಾಥ್, ಖಜಾಂಚಿ ಎ.ಮಧು ಹಾಗೂ ಇತರ ನಿರ್ದೇಶಕರುಗಳಾದ ನಂಜಣ್ಣ, ವಿನಯ್ ಕುಮಾರ್, ಸುರೇಶ್ ಬಾಬು, ಪ್ರವೀಣ್, ನಳಿನಿ ಶಾಂತಕುಮಾರ್‌ರವರುಗಳಿಗೆ ಅಭಿನಂದನೆಗಳನ್ನು ಸಲ್ಲಿಸಿದರು. ಈ ಸಂದರ್ಭದಲ್ಲಿ ಮಹಿಳಾ ಸಂಘದ ಅಧ್ಯಕ್ಷರಾದ ಲೀಲಾ ರುದ್ರಮೂರ್ತಿ, ಕಾರ್ಯದರ್ಶಿ ಭಾರತಿ ಪ್ರಭುದೇವ್, ಮಹಿಳಾ ಸಂಘದ ನಿರ್ದೇಶಕರುಗಳಾದ ಮಾಣಿಕ್ಯ ನಂಜಣ್ಣ, ಭಾರತಿ ವಿಶ್ವನಾಥ್, ಭಾರತಿ ರಾಜು, ಸುಷ್ಮಾ ಅಶೋಕ್, ಶ್ವೇತಾ ಮಂಜುನಾತ್, ಶೋಭಾ ರಾಜಶೇಖರ್, ಸಲಹೆಗಾರರಾದ ಸಿ. ಬಸಪ್ಪ, ಹಾಗೂ ಪಿ. ಚಂದ್ರಪ್ಪರವರುಗಳು ಉಪಸ್ಥಿತರಿದ್ದರು.**

# ಅವಿರೋಧವಾಗಿ ಆಯ್ಕೆ

**ತಿಪಟೂರು:** ತಾಲ್ಲೂಕಿನ ಕಸಬಾ ಹೋಬಳಿಯ ಮತ್ತಿಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅದ್ಯಕ್ಷರಾಗಿ ಶಿವನಂದ ಮೂರ್ತಿ ಉಪಾಧ್ಯಕ್ಷರಾಗಿ ಮೋಹನ್‌ಕುಮಾರ್. ಎಮ್.ಪಿ ಅವಿರೋಧವಾಗಿ ಆಯ್ಕೆಯಾದರು.

ಅದ್ಯಕ್ಷ ಶಿವನಂದಮೂರ್ತಿ ಮಾತನಾಡಿ ಹಾಲು ಉತ್ಪಾದಕರ ಶ್ರೇಯೋಭಿವೃದ್ದಿಗೆ ಹಾಗೂ ಸಂಘದ ಬೆಳವಣಿಗೆ ಪ್ರಾಮಾಣಿಕತೆಯಿಂದ ನೆಡೆಯುತ್ತಾ ಶ್ರಮಿಸುತ್ತೇನೆ ಎಂದರು. ಈ ಸಂದರ್ಭದಲ್ಲಿ ನಿರ್ಧೇಶಕರಾಗಿ ಲೋಲಾಕ್ಷಮ್ಮಪರಮೇಶ್ವರಯ್ಯ, ಪಟೇಲ್ ಜಯಣ್ಣ, ಪ್ರೇಮಾ, ದಯಾಮಣಿ, ಓಂಕಾರಮೂರ್ತಿ, ಈಶ್ವರಯ್ಯ, ದೇವಾನಂದ್, ಶಿವಶಂಕರ್, ಮಾಜಿ ಅಧ್ಯಕ್ಷರಾದ ಜಯಣ್ಣ.ಎಮ್. ಹೆಚ್, ಬಸವರಾಜು, ಸಮಾಜ ಸೇವಕರಾದ ಅರಣ್ಯ ಶಶಿಧರ್‌ಭೈರಾಪುರ, ಲಿಂಗರಾಜು, ಯಡಿಯೂರಪ್ಪ, ಸಂಘದ ಕಾರ್ಯದರ್ಶಿ ಚಂದ್ರಶೇಖರ್, ಹಾಲು ಪರೀಕ್ಷಕ ರಮೇಶ್ ಹಾಜರಿದ್ದರು.

## ರಾಗಿ ಖರೀದಿಸಲು ಅವಧಿ ವಿಸ್ತರಣೆ

**ರಾಮನಗರ:** 2023-24ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ (ಎಂ.ಎಸ್.ಪಿ) ಜಿಲ್ಲೆಯಲ್ಲಿ ಈಗಾಗಲೇ ನೋಂದಾಯಿಸಿರುವ ರೈತರಿಂದ ರಾಗಿ ಖರೀದಿ ಪ್ರಕ್ರಿಯೆಯನ್ನು ಮಾ. 31 ರವರೆಗೆ ನಿಗದಿಪಡಿಸಲಾಗಿದ್ದು, ರಾಗಿ ಖರೀದಿ ಪ್ರಕ್ರಿಯೆಯನ್ನು 2024ರ ಜೂನ್ 30 ರವರೆಗೆ ವಿಸ್ತರಿಸಲಾಗಿದೆ. ರಾಮನಗರ ಜಿಲ್ಲೆಯ ಎಲ್ಲಾ ರೈತರು ಇದರ ಸದುಪಯೋಗ ಪಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾ.31ಕ್ಕೆ ಫ್ಯಾಷನ್ ಶೋ

**ಮೈಸೂರು:** ಚಾಮರಾಜ ಮೊಹಲ್ಲಾ ನಾರಾಯಣಶಾಸ್ತ್ರಿ ರಸ್ತೆಯಲ್ಲಿನ ಕರ್ನಾಟಕ ಸಾಂಸ್ಕೃತಿಕ ಹಾಗೂ ಸಾಹಿತ್ಯ ಪರಿಷತ್ ವತಿಯಿಂದ ಇದೇ ಮಾ. 31 ರ ಮಧ್ಯಾಹ್ನ ಮೂರರಿಂದ ರಾತ್ರಿ ಒಂಭತ್ತರವರೆಗೆ ನಗರದ ಪುರಭವನದಲ್ಲಿ ಕರ್ನಾಟಕ ಫ್ಯಾಷನ್ ಶೋ ಎಂಬ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ನಗರಾಧ್ಯಕ್ಷರಾದ ಮೌಲ್ಯ ಜೈಕುಮಾರ್ ತಿಳಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಫ್ಯಾಷನ್ ಶೋನಲ್ಲಿ ಭಾಗವಹಿಸುವ ಪ್ರತಿಯೊಬ್ಬರಿಗೂ ಭಾವಚಿತ್ರವಿರುವ ನೆನಪಿನ ಕಾಣಿಕೆ, ಪ್ರಮಾಣಪತ್ರ, ಮೈಸೂರು ಪೇಟ, ಹಾರ, ಶಾಲು ನೀಡಿ ಗೌರವಿಸಲಾಗುವುದು. ವೀಕ್ಷಣೆಗೆ ಉಚಿತ ಪ್ರವೇಶವಿದೆ. ಜೊತೆಗೆ ಮಜಾ ಭಾರತ ಹಾಗೂ ಗಿಚ್ಚಿ ಗಿಲಿಗಿಲಿ ತಂಡದವರಿಂದ ಹಾಸ್ಯ ಕಾರ್ಯಕ್ರಮವಿದೆ ಎಂದು ತಿಳಿಸಿದರು. ಸಂಸ್ಥೆಯ ಡಾ. ತೇಜಸ್ ಪೃಥ್ವಿರಾಜ್, ಹೇಮಲತಾ, ಮೂಗೂರು ಮಂಜು ಹಾಜರಿದ್ದರು.



# ಅಳಿವಿನ ಅಂಚಿನಲ್ಲಿರುವ ಗುಬ್ಬಚ್ಚಿ ಪಕ್ಷಿ ಸಂಕುಲವನ್ನು ಸಂರಕ್ಷಿಸಿ

**ಚಾಮರಾಜನಗರ:** ಅಳಿವಿನ ಅಂಚಿನಲ್ಲಿರುವ ಗುಬ್ಬಚ್ಚಿ ಪಕ್ಷಿ ಸಂಕುಲವನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಕಾಪಾಡುವ ಹೊಣೆ ಎಲ್ಲಾ ನಾಗರಿಕರ ಜವಾಬ್ದಾರಿಯಾಗಿದೆ ಎಂದು ಜೈ ಹಿಂದ್ ಪ್ರತಿಷ್ಠಾನದ ಅಧ್ಯಕ್ಷರಾದ ಸುರೇಶ್ ಎನ್‌ಋಗ್ವೇದಿ ತಿಳಿಸಿದರು.

ಅವರು ಜೈ ಹಿಂದ್ ಪ್ರತಿಷ್ಠಾನ ಮತ್ತು ಋಗ್ವೇದಿ ಯೂತ್ ಕ್ಲಬ್ ವತಿಯಿಂದ ಜೈ ಹಿಂದ್ ಕಟ್ಟೆಯಲ್ಲಿ ನಡೆದ ವಿಶ್ವಗುಬ್ಬಚ್ಚಿ ದಿನದ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ಗುಬ್ಬಚ್ಚಿ ಒಂದು ಅತ್ಯಂತ ಚಿಕ್ಕ ಪಕ್ಷಿಯಾಗಿದ್ದು, ಸುಮಧುರ ಚಿಲಿಪಿಲಿಯ ಗಾಯನದೊಂದಿಗೆ ಪರಿಸರದಲ್ಲಿ ಬಹಳ ಸಂತೋಷವನ್ನು ನೀಡುತ್ತದೆ. ಆಹಾರ ಸಮತೋಲನದಲ್ಲಿ ಪ್ರಮುಖ ಪಾತ್ರವನ್ನು ವಹಿಸುವ ಪಕ್ಷಿಯಾಗಿದೆ. 25ರಿಂದ 40




ಗ್ರಾಂ ಇರುವ ಗುಬ್ಬಚ್ಚಿಯನ್ನು ಎಲ್ಲರೂ ಅತ್ಯಂತ ಪ್ರೀತಿಯಿಂದ, ಖುಷಿಯಿಂದ, ಆನಂದದಿಂದ ವೀಕ್ಷಿಸುತ್ತಾರೆ. ಆದರೆ ಇಂದು ಅನೇಕ ಕಾರಣಗಳಿಂದ ಗುಬ್ಬಚ್ಚಿಯ ಸಂಖ್ಯೆ ಅತ್ಯಂತ ಕಡಿಮೆಯಾಗಿದೆ. ಗುಬ್ಬಚ್ಚಿಯ ಸಂಖ್ಯೆ ಹೆಚ್ಚಳವಾಗಲು ಸೂಕ್ತ ಪರಿಸರ ನಿರ್ಮಾಣ, ಮರ ಗಿಡಗಳ ಸಂರಕ್ಷಣೆ ಹಾಗೂ ಪರಿಸರ ಮಾಲಿನ್ಯವನ್ನು ತಡೆಗಟ್ಟುವ ಮೂಲಕ ಉತ್ತಮ ವಾತಾವರಣವನ್ನು ಸೃಷ್ಟಿಸುವ ಜವಾಬ್ದಾರಿ ಪ್ರತಿಯೊಬ್ಬರಲ್ಲಿಯೂ ಮೂಡಬೇಕಿದೆ. ಪ್ರತಿ ವರ್ಷ ಮಾರ್ಚ್ 20ರಂದು ವಿಶ್ವಗುಬ್ಬಚ್ಚಿಯ ದಿನವೆಂದು ಆಚರಿಸಿ ಜಾಗೃತಿಯ ಮೂಡಿಸುವ ಕಾರ್ಯ ವಿಶ್ವದಲ್ಲೆಡೆ ನಡೆಯುತ್ತಿದೆ. ಪಕ್ಷಿಗಳ ಸಂರಕ್ಷಣೆಗಾಗಿ ಪಕ್ಷಿಧಾಮಗಳನ್ನು ಆರಂಭಿಸುವುದು, ಮರ ಗಿಡಗಳನ್ನು ನೆಡುವುದು ,ಗೂಡುಗಳನ್ನು ಮರಗಳಿಗೆ ಕಟ್ಟುವುದು ಅಗತ್ಯ ಎಂದರು. ಕಾರ್ಯಕ್ರಮದಲ್ಲಿ ಜೈ ಹಿಂದ್ ಪ್ರತಿಷ್ಠಾನದ ಕುಸುಮ ಋಗ್ವೇದಿ, ಮಾತನಾಡಿ ಪಕ್ಷಗಳ ಸಂರಕ್ಷಣೆಗೆ ಜಾಗೃತಿಯೇ ಇಂದು ಅಗತ್ಯ. ವಿಶ್ವದಲ್ಲೆ ಇರುವ ಗುಬ್ಬಚ್ಚಿ ಎಲ್ಲಾ ಪರಿಸರಕ್ಕೆ ಹೊಂದಿಕೊಳ್ಳುವ ಸುಂದರ , ಸರಳ ಪಕ್ಷಿಯಾಗಿದೆ ಎಂದರು.ತೇಜಸ್, ಶ್ರಾವ್ಯ,ಪವನ್, ಧನ್ ಬಹದ್ದೂರ್ ಸಿಂಗ್, ಗಣೇಶ್ ಇದ್ದರು.

# ಛಾಯಾಚಿತ್ರ ಪ್ರದರ್ಶನ

**ಮೈಸೂರು:** ವರ್ಣಚಿತ್ರ ಕಲಾವಿದ ಹಾಗೂ ಛಾಯಾಗ್ರಹಣ ಕಲಾವಿದರೂ ಆಗಿರುವ ತಾವು ಕುಕ್ಕರಹಳ್ಳಿ ಕೆರೆಯೊಡನೆ ಹೊಂದಿರುವ ಭಾವನಾತ್ಮಕ ಸಂಬಂಧ ಕುರಿತಂತೆ ಸೆರೆ ಹಿಡಿದಿರುವ ಕಲಾತ್ಮಕ ಛಾಯಾಚಿತ್ರಗಳ ಪ್ರದರ್ಶನ ಇದೇ ಮಾ. 22 ರಿಂದ 31 ರವರೆಗೆ ಸರಸ್ವತಿಪುರಂ ರಮ್ಯ ರೆಸ್ಟೋರೆಂಟ್ ಎದುರಿನ ಹೆರಿಟೇಜ್ ಹೌಸ್‌ನಲ್ಲಿ ಆಯೋಜಿಸಲಾಗಿದೆ ಎಂದು ಸುನಿಲ್ ರಾಜು ತಿಳಿಸಿದರು. ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ನಿತ್ಯ ಬೆಳಗ್ಗೆ 10.30 ರಿಂದ ಸಂಜೆ ಏಳರವರೆಗೆ ಪ್ರದರ್ಶನಕ್ಕೆ ಎಲ್ಲರಿಗೂ ಉಚಿತ ಪ್ರವೇಶವಿದೆ. ಇಲ್ಲಿ 21 ಛಾಯಾಚಿತ್ರಗಳು ಪ್ರದರ್ಶನಗೊಳ್ಳಲಿದ್ದು, ಪ್ರತಿಯೊಂದೂ ತಮ್ಮದೇ ಆದ ವಿಶೇಷತೆ ಹೊಂದಿವೆ. ಗಾಳಿ, ಸೂರ್ಯನ ಬಿಂಬ, ಪಕ್ಷಿ ಮೊದಲಾದವುಗಳೊಡನೆ ಹೊಂದಿರುವ ವ್ಯಕ್ತಿಗತ ಅನುಭವವನ್ನು ಇಲ್ಲಿ ಅನುಭವಿಸಬಹುದಾಗಿದೆ ಎಂದು ಮಾಹಿತಿ ನೀಡಿದರು. ಮತ್ತೋರ್ವ ಕಲಾವಿದರಾರದ ಗಿರಿ ಶಿಲ್ಪಿ ಹಾಜರಿದ್ದರು.



## ಮಕ್ಕಳಿಂದ ಕೆಲಸ ಮಾಡಿಸಿರುವ ಆರೋಪ; ಜೂನಿಯರ್ ಕಾಲೇಜಿಗೆ ಡಿಡಿಪಿಐ ಭೇಟಿ ಪರಿಶೀಲನೆ

**ಕೋಲಾರ:** ನಗರದ ಬಾಲಕರ ಪದವಿಪೂರ್ವ ಕಾಲೇಜಿನಲ್ಲಿ ಮಕ್ಕಳಿಂದ ಗೋಡೆ ತೆಗೆಸುವ ಮತ್ತು ಸ್ವಚ್ಛತಾ ಕಾರ್ಯ ಮಾಡಿಸಲಾಗಿದೆ ಎಂಬ ಆರೋಪಗಳು ಮಾಧ್ಯಮಗಳ ಮೂಲಕ ಕೇಳಿ ಬಂದ ಹಿನ್ನಲೆಯಲ್ಲಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೃಷ್ಣಮೂರ್ತಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಕನ್ನಯ್ಯ ಶಾಲೆಗೆ ಭೇಟಿ ನೀಡಿ ಪರಿಶೀಲಿಸಿದರಲ್ಲದೇ ಘಟನೆ ಕುರಿತು ಕಾರಣ ಕೇಳಿ ಉಪಪ್ರಾಂಶುಪಾಲರಾದ ರಾಧಮ್ಮ ಅವರಿಗೆ ನೋಟೀಸ್ ಜಾರಿ ಮಾಡಿದರು. ಕಳೆದ ಶುಕ್ರವಾರದಂದು ಮಕ್ಕಳಿಂದ ಈ ಕೆಲಸ ಮಾಡಿಸಿದ್ದು ಇದರ ವಿರುದ್ಧ ಕೆಲವು ಸಂಘಟನೆಗಳು ಕ್ರಮಕ್ಕೂ ಆಗ್ರಹಿಸಿದ್ದವಲ್ಲದೇ ಈ ಕುರಿತ ಸುದ್ದಿಯೂ ಪ್ರಸಾರವಾಗಿತ್ತು. ಈ ಸಂಬಂಧ ಸ್ಥಳಕ್ಕೆ ಬಂದಿದ್ದ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಡಿಡಿಪಿಐ ಕೃಷ್ಣಮೂರ್ತಿ, ಘಟನೆ ಕುರಿತು ಗಮನಕ್ಕೆ ಬಂದಿದೆ ಈ ಹಿನ್ನಲೆಯಲ್ಲಿ ಉಪಪ್ರಾಂಶುಪಾಲರಿಗೆ ನೋಟೀಸ್ ನೀಡಿದ್ದೇನೆ ಜತೆಗೆ ಮೂವರು ಅಧಿಕಾರಿಗಳ ತಂಡ ರಚಿಸಿ ಇಡೀ ಘಟನೆ ಕುರಿತಂತೆ ವರದಿ ನೀಡಲು ಸೂಚಿಸಿದ್ದೇನೆ ಎಂದರು. ತನಿಖೆಗೆ ನೇಮಕಗೊಂಡ ಅಧಿಕಾರಿಗಳ ತಂಡ ನೀಡುವ ವರದಿ ಆಧರಿಸಿ ಕಾನೂನು ರೀತ್ಯ ಕ್ರಮ ಜರುಗಿಸುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಕ್ಷೇತ್ರ ಸಮನ್ವಯಾಧಿಕಾರಿ ಪ್ರವೀಣ್, ಉಪಪ್ರಾಂಶುಪಾಲೆ ರಾಧಮ್ಮ ಹಾಗೂ ಶಿಕ್ಷಕರು ಹಾಜರಿದ್ದರು.



## ಪರೀಕ್ಷಾ ಶುಲ್ಕ ಪಾವತಿಸಲು ಅಧಿಸೂಚನೆ ಪ್ರಕಟ

**ರಾಮನಗರ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ 2022-23ನೇ ಶೈಕ್ಷಣಿಕ ಸಾಲಿನಲ್ಲಿ (ಜನವರಿ ಆವೃತ್ತಿಯ) ದ್ವಿತೀಯ ಸೆಮಿಸ್ಟರ್‌ನ ಪದವಿಗಳಿಗೆ ಪ್ರವೇಶಾತಿ ಪಡೆದಿರುವ ಸ್ನಾತಕ/ಸ್ನಾತಕೋತ್ತರ (ಯುಜಿ/ಪಿಜಿ) ಕಾರ್ಯಕ್ರಮಗಳ ಸಿ.ಬಿ.ಸಿ.ಎಸ್ (ಸಿಬಿಸಿಎಸ್ ಸೆಮಿಸ್ಟರ್) ವಿದ್ಯಾರ್ಥಿಗಳಿಗೆ ಪರೀಕ್ಷೆಗಳನ್ನು ಏಪ್ರಿಲ್-2024ರ ಮಾಹೆಯಲ್ಲಿ ನಡೆಸಲು ಪರೀಕ್ಷಾ ಶುಲ್ಕ ಪಾವತಿಸಲು ಅಧಿಸೂಚನೆ ಹೊರಡಿಸಲಾಗಿದೆ.

2022-23ನೇ ಶೈಕ್ಷಣಿಕ ಸಾಲಿನ (ಜನವರಿ ಆವೃತ್ತಿಯ) ಬಿ.ಬಿ.ಎ., ಬಿ.ಸಿ.ಎ., ಬಿ.ಎಸ್ಸಿ., ಹಾಗೂ ಎಂ.ಎ., ಎಂ.ಕಾಂ., ಎಂ.ಲಿಬ್.ಐ.ಎಸ್ಸಿ., ಎಂ.ಬಿ.ಎ., ಎಂ.ಎಸ್ಸಿ., ದ್ವಿತೀಯ ಸೆಮಿಸ್ಟರ್‌ನ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮುಖಾಂತರ ಈಗಾಗಲೇ ಪರೀಕ್ಷಾ ಶುಲ್ಕ ಪಾವತಿಸಲು ಪ್ರಾರಂಭವಾಗಿದ್ದು, ದಂಡ ಶುಲ್ಕವಿಲ್ಲದೆ ಇದೇ ಮಾ. 30 ರವರೆಗೆ ಹಾಗೂ 200 ರೂ. ಗಳ ದಂಡ ಶುಲ್ಕದೊಂದಿಗೆ 2024ರ ಏಪ್ರಿಲ್ 8 ಶುಲ್ಕ ಪಾವತಿಗೆ ಕಡೆ ದಿನಾಂಕವಾಗಿರುತ್ತದೆ. ಪರೀಕ್ಷಾ ಶುಲ್ಕ ಪಾವತಿಸುವ ದಿನಾಂಕಗಳು ಮತ್ತು ಪಾವತಿಸಬೇಕಾಗಿರುವ ಶುಲ್ಕದ ವಿವರಗಳು ವಿಶ್ವವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್‌ತಿತಿತಿ. ಇಂಣಟಥಿಣಡಿಣ.ಚಿಛಿ.ಟಿನಲ್ಲಿದ್ದು, ಪರೀಕ್ಷಾ ಅರ್ಜಿ ಮತ್ತು ಪರೀಕ್ಷಾ ಶುಲ್ಕವನ್ನು ಎಲ್ಲ ಅಗತ್ಯ ವಿವರಗಳೊಂದಿಗೆ ಭರ್ತಿಮಾಡಿ ಕಡ್ಡಾಯವಾಗಿ ಅಂತರ್ಜಾಲದ (ಆನ್‌ಲೈನ್) ಮೂಲಕವೇ ಸಲ್ಲಿಸುವುದು. ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸುವಾಗ ತೊಂದರೆಗಳು ಎದುರಾದಲ್ಲಿ ಆನ್‌ಲೈನ್ ಸಹಾಯವಾಣಿ ಸಂಖ್ಯೆ 8690544544/8800335638 ಅನ್ನು ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಪ್ರಾದೇಶಿಕ ನಿರ್ದೇಶಕರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ರಾಮನಗರ ಪ್ರಾದೇಶಿಕ ಕೇಂದ್ರ 103, ''ಇ''ಬ್ಲಾಕ್, ಶಾಂತಿನಿಕೇತನ ಸಮೂಹ ಶಿಕ್ಷಣ ಸಂಸ್ಥೆ, ಬಿ.ಎಂ.ರಸ್ತೆ, ವಿವೇಕಾನಂದನಗರ, ರಾಮನಗರ-562159. ದೂ. ಸಂ: 9448668880, 8861732487, 9743184848 9900356226 ಹಾಗೂ 8618501602 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಾದೇಶಿಕ ನಿರ್ದೇಶಕರಾದ ಗಿರೀಶ್ ಹೆಚ್.ಎನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಚಾರ ಸಾಮಗ್ರಿಗಳ ತೆರವು

**ಚಿಕ್ಕಬಳ್ಳಾಪುರ:** ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಹಿನ್ನೆಲೆಯಲ್ಲಿ ಮಾರ್ಚ್ 16 ರಿಂದ ಮಾದರಿ ನೀತಿ ಸಂಹಿತೆ ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಜಾರಿಯಲ್ಲಿದ್ದು, ನೀತಿ ಸಂಹಿತೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಸಂಬಂಧ ಜಿಲ್ಲೆಯಲ್ಲಿ ನೀತಿ ಸಂಹಿತೆ ಜಾರಿಯಾದ 72 ಗಂಟೆಯೊಳಗಾಗಿ 7,165 ಗೋಡೆ ಬರಹಗಳು,7,511 ಪೋಸ್ಟರ್ಸ್ ಗಳು, 3,584 ಬ್ಯಾನರ್ಸ್ ಮತ್ತು ಇತರೆ ಪ್ರಚಾರಕಗಳು 3,481 ಸೇರಿದಂತೆ ಒಟ್ಟು21741 ಪ್ರಚಾರ ಸಾಮಗ್ರಿಗಳನ್ನು ತೆರವುಗೊಳಿಸಲಾಗಿದೆ.ಈ ಕಾರ್ಯಕ್ಕಾಗಿ 161 ಕಾರ್ಯಾಚರಣೆ ತಂಡಗಳನ್ನು ನಿಯೋಜನೆ ಮಾಡಲಾಗಿತ್ತು ಈ ತಂಡಗಳು ನಿಗದಿತ ಅವಧಿಯಲ್ಲಿ ನಿಯೋಜನೆ ಆಗಿದ್ದ ಕೆಲಸವನ್ನು ಪೂರ್ಣ ಮಾಡಿದ್ದಾರೆ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ, ಅವರು ತಿಳಿಸಿದ್ದಾರೆ.

**ಕಂಟ್ರೋಲ್ ರೂಮ್ ಸ್ಥಾಪನೆ:** ಜಿಲ್ಲಾ ಕೇಂದ್ರದಲ್ಲಿ ಕಂಟ್ರೋಲ್ ರೂಮ್‌ನ್ನು ಪ್ರಾರಂಭಿಸಿದ್ದು, ಜಿಲ್ಲೆಯಲ್ಲಿನ ಯಾವುದೇ ರೀತಿಯ ನಗದು ಹಣ, ಉಡುಗೊರೆಗಳ ಹಂಚಿಕೆ,ಮತ್ತು ಚುನಾವಣೆ ನೀತಿ ಸಂಹಿತೆ ವಿಚಾರದಲ್ಲಿ ಉಲ್ಲಂಘನೆಗಳು ಕಂಡುಬಂದಲ್ಲಿ ತಕ್ಷಣವೇ ದೂರವಾಣಿ ಸಂಖ್ಯೆ: 08156-277071 ಗೆ ಕರೆ ಮಾಡಿ ಸಾರ್ವಜನಿಕರು ದೂರುಗಳನ್ನು ನೀಡಬಹುದಾಗಿರುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಯಕ ಸಮುದಾಯ ಕಾಂಗ್ರೆಸ್‌ಗೆ ಹೋಗುವ ಪ್ರಶ್ನೆಯೇ ಇಲ್ಲ

**ಚಾಮರಾಜನಗರ:** ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ನಾಯಕ ಸಮುದಾಯ ಸಂಪೂರ್ಣವಾಗಿ ಬಿಜೆಪಿಯ ಪರವಾಗಿದ್ದು, ಸಮುದಾಯದವರು ಕಾಂಗ್ರೆಸ್‌ಗೆ ಹೋಗುವ ಪ್ರಶ್ನೆಯೇ ಇಲ್ಲ ಎಂದು ಬಿಜೆಪಿ ಮುಖಂಡ ಕೆಲ್ಲಂಬಳ್ಳಿ ಸೋಮನಾಯಕ ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಬಿಜೆಪಿಯಲ್ಲಿ ಅಧಿಕಾರ ಅನುಭವಿಸಿದ ಸಮುದಾಯದ ಕೆಲವು ಮುಖಂಡರು ತಮ್ಮ ಸ್ವಾರ್ಥ ಹಾಗೂ ವೈಯಕ್ತಿಕ ಹಿತಕ್ಕಾಗಿ ಬಿಜೆಪಿ ಬಿಡಬಹುದು. ಆದರೆ, ಬಿಜೆಪಿ ಇಡೀ ಸಮುದಾಯವನ್ನು ಕಡೆಗಣನೆ ಮಾಡಿದೆ ಎಂಬುವುದು ಸರಿಯಲ್ಲ. ಅವರಿಗೆ ಇಚ್ಚೆ ಇದ್ದರೆ ಪಕ್ಷದಲ್ಲಿ ಇರಬಹುದು. ಇಲ್ಲವೇ ಯಾವುದೇ ಪಕ್ಷಕ್ಕಾದರು ಹೋಗಲಿ. ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ನಾಯಕ ಸಮುದಾಯ ಕಾಂಗ್ರೆಸ್ ಕಡೆ ಮುಖ ಮಾಡಿದೆ ಎಂಬರ್ಥ ಬರುವಂತೆ ವರದಿಗಳು ಹಾಗೂ ವೈಯಕ್ತಿಕ ಸಭೆಗಳಿಂದ ನಾಯಕ ಸಮುದಾಯಕ್ಕೆ ಯಾವುದೇ ಧಕ್ಕೆ ಇಲ್ಲ. ಅವರ ವೈಯಕ್ತಿಕವಾಗಿ ಪಕ್ಷಬಿಟ್ಟು ಇತರೇ ಪಕ್ಷಕ್ಕೆ ಹೋದರೆ



ನಾಯಕ ಸಮುದಾಯವೇ ಹೋಗುತ್ತದೆ ಎಂಬುವುದು ಸುಳ್ಳು ಎಂದರು.

ಬಿಜೆಪಿಯಲ್ಲಿ ಅಧಿಕಾರ ಅನುಭವಿಸಿದ ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ, ಮಾಜಿ ಮೇಯರ್ ಶಿವಕುಮಾರ್, ಮಾಜಿ ವಿಧಾನ ಪರಿಷತ್ ಸದಸ್ಯ ಸಿದ್ದರಾಜು, ಅಪ್ಪಣ್ಣ, ಮಲ್ಲೇಶ್ ತಮ್ಮ ಸ್ವಹಿತಕ್ಕಾಗಿ ಬಿಜೆಪಿ ತೊರೆಯಬಹುದು. ಆದರೆ, ಬಿಜೆಪಿಗೆ ಯಾವುದೇ ನಷ್ಟ ಹಾಗೂ ವರಿಷ್ಠರ ಅಭ್ಯಂತರ ಇಲ್ಲ. ಇವರು ನಮ್ಮ ಹಿಂದೆ ಎರಡು ಜಿಲ್ಲೆಗಳ ನಾಯಕ ಸಮುದಾಯ ಜೊತೆಗಿದೆ ಎನ್ನುವುದು ಅಪಹಾಸ್ಯವಾಗಿದೆ. ಬಿಜೆಪಿಯಲ್ಲಿ ಎಲ್ಲವನ್ನು ಅನುಭವಿಸಿ, ಈಗ ಬೇರೆ ಪಕ್ಷಕ್ಕೆ ಹೋಗುತ್ತೇವೆ ಎಂಬುವರಿಗೆ ಆತ್ಮ ಇಲ್ಲ. ಅದಾಗ್ಯು ಬಿಜೆಪಿ ತೊರೆದರೆ ಸಂತೋಷ. ಬಿಜೆಪಿ ಮುಖಂಡನಾಗಿ ಮೊದಲು ಮೈಸೂರಿನ ಚಾಮುಂಡಿಬೆಟ್ಟದಲ್ಲಿ ವಿಶೇಷ ಪೂಜೆ ಸಲ್ಲಿಸುತ್ತೇನೆ ಎಂದರು.

ಈ ಐವರಿಗೆ ಅನ್ಯಾಯವಾಗಿದ್ದರೆ ಬೀದಿಗಿಳಿದು ಪ್ರತಿಭಟನೆ ಮಾಡಲಿ ಅದನ್ನು ಬಿಟ್ಟು ಇಡೀ ಸಮುದಾಯವೇ ಕಾಂಗ್ರೆಸ್ ಕಡೆ ಮುಖ ಅನ್ನುವುದು ಇವರಿಗೆ ಶೋಭೆ ತರುವುದು ಅಲ್ಲ. ಸಮಾಜದ ಬಗ್ಗೆ ಮಾತನಾಡಲು ಯಾವುದೇ ನೈತಿಕತೆ ಇಲ್ಲ. ಇವರ ಕೊಡುಗೆ ಸಮುದಾಯಕ್ಕೆ ಏನು ಇಲ್ಲ ಸೋಮವಾಯಕ ಪ್ರಶ್ನೆ ಮಾಡಿದರು. ಸುಮಾರು 65ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಪರಿವಾರ, ತಳವಾರವನ್ನು ಪರಿಶಿಷ್ಠ ಪಂಗಡಕ್ಕೆ ಬಿಜೆಪಿ ಸರ್ಕಾರ ಸೇರ್ಪಡೆ ಮಾಡಿದೆ. ಬಿಜೆಪಿಯಿಂದ ಸಮುದಾಯಕ್ಕೆ ಲಾಭವೇ ಹೊರತು ಯಾವುದೇ ಅನ್ಯಾಯವಾಗಿಲ್ಲ. ಹೀಗಾಗಿ ಸಮುದಾಯದ ಎಂದೆಂದಿಗೂ ಬಿಜೆಪಿ ಪರವಾಗಿ ನಿಲ್ಲುತ್ತದೆ ಹೊರತು ಬಿಡುವ ಮಾತೆ ಇಲ್ಲ ಎಂದರು. ಯ. ರಾಜುನಾಯಕ ಹಾಜರಿದ್ದರು.

## ಮಾ.24ಕ್ಕೆ ಜನೋದಯ ಸಹಕಾರ ಸಂಘದ ಸಭೆ

**ಮೈಸೂರು:** ರಾಮಕೃಷ್ಣ ನಗರ ಎ ಮತ್ತು ಬಿ ಬ್ಲಾಕ್‌ನಲ್ಲಿ ನೂತನವಾಗಿ ಅಸ್ತಿತ್ವಕ್ಕೆ ಬಂದಿರುವ ಜನೋದಯ ಅಭಿವೃದ್ಧಿ ಸಹಕಾರ ಸಂಘದ ಪ್ರಥಮ ಸರ್ವ ಸದಸ್ಯರ ಸಭೆ ಇದೇ ಮಾ. 24 ರ ಬೆಳಗ್ಗೆ 11ಕ್ಕೆ ಸಿದ್ದಾರ್ಥ ನಗರದ ಕನಕ ಸಮುದಾಯ ಭವನದಲ್ಲಿ ನಡೆಯಲಿದೆ ಎಮದು ಪ್ರವರ್ತಕ ಹಾಗೂ ವಕೀಲರಾದ ರಾಮಕೃಷ್ಣ ತಿಳಿಸಿದರು. ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಗೃಹ ನಿರ್ಮಾಣ, ನಿವೇಶನ ನೀಡಿಕೆ ಮೊದಲಾದ ವಿಷಯಗಳಿಂದ ಹೊರತು ಪಡಿಸಿ ಇನ್ನಿತರ ಬ್ಯಾಂಕ್‌ಗಳಲ್ಲಿ ದೊರೆಯುವಂತಹ ಸಾಲ ಸೌಲಭ್ಯ ಸಂಘದಲ್ಲಿ ಲಭ್ಯವಿರಲಿದೆ. ಇದುವರೆಗೆ 973 ಮಂದಿ ಸದಸ್ಯರಾಗಿದ್ದಾರೆಂದರು.

ಮುಖ್ಯ ಪ್ರವರ್ತಕ ಕೆ.ಎಸ್. ಚಿಕ್ಕೇಗೌಡ, ಪಿ. ಬಸವರಾಜು, ತಿಮ್ಮೇಗೌಡ, ಮಹದೇವಸ್ವಾಮಿ, ಮಧು, ವೀರೇಗೌಡ ಹಾಜರಿದ್ದರು.



# ಪ್ರಾಣಿ-ಪಕ್ಷಿಗಳಿಗೆ ನೀರು ಆಹಾರ ಕೊಡುವ ಕೆಲಸ ಮಾಡಿ




**ಚನ್ನಪಟ್ಟಣ:** ಬರದ ಸಂದರ್ಭದಲ್ಲೂ ತಮಿಳುನಾಡಿಗೆ ನೀರು ಹರಿಸಿದ ರಾಜ್ಯದ ನಿರ್ಲಕ್ಷ್ಯದಿಂದ ಜನ-ಜಾನುವಾರುಗಳು ನೀರಿನ ಹಾಹಾಕಾರ ಎದುರಿಸುವಂತಾಗಿದೆ. ಈ ನಿಟ್ಟಿನಲ್ಲಿ ಪ್ರಾಣಿ-ಪಕ್ಷಿಗಳಿಗೆ ನೀರು, ಆಹಾರ ನೀಡುವ ಕೆಲಸ ಮಾಡಬೇಕಿದೆ ಎಂದು ನಿವೃತ್ತ ಪ್ರಾಂಶುಪಾಲರಾದ ನಿಂಗೇಗೌಡ(ಎನ್‌ಜಿ) ಅವರು ಅಭಿಪ್ರಾಯಿಸಿದರು.

ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್‌ಗೌಡರ ನೇತೃತ್ವದಲ್ಲಿ 2023ರ ಅಕ್ಟೋಬರ್ 5 ರಿಂದ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಬುಧವಾರ ನಡೆದ 168 ನೇ ದಿನದ ಹೋರಾಟದಲ್ಲಿ ಮಾತನಾಡಿದ ಅವರು ಬಿಸಿಲಿನ ತಾಪ ಹೆಚ್ಚಾಗಿ ಕೆರೆ-ಕಟ್ಟೆಗಳಲ್ಲಿನ ನೀರು ಬತ್ತಿಹೋಗುತ್ತಿದ್ದು ಅಂತರ್ಜಲ ಸಂಪೂರ್ಣವಾಗಿ ಕುಸಿತವಾಗುತ್ತಿದೆ. ಈ ನಿಟ್ಟಿನಲ್ಲಿ ಪ್ರಾಣಿ-ಪಕ್ಷಿಗಳಿಗೆ, ಜಲಚರ ಪ್ರಾಣಿಗಳಿಗೆ ಸಹ ನೀರಿನ ಕೊರತೆ ಉಂಟಾಗಿದೆ. ನಾವು ನೀರು?ಆಹಾರವನ್ನು ಹುಡುಕಿ ಪಡೆದುಕೊಳ್ಳುವ ಸಾಮರ್ಥ್ಯ ಹೊಂದಿದ್ದೇವೆ. ಆದರೆ ಮೂಖ ಪ್ರಾಣಿ-ಪಕ್ಷಿಗಳಿಗೆ ನೀರು-ಆಹಾರ ಕೇಳಲು ಸಾಧ್ಯವಿಲ್ಲ. ಇದರಿಂದ ಪ್ರಾಣಿ-ಪಕ್ಷಿಗಳು ಸಾವನ್ನಪ್ಪುತ್ತಿವೆ. ಈ ನಿಟ್ಟಿನಲ್ಲಿ ಪ್ರಾಣಿ-ಪಕ್ಷಿಗಳನ್ನು ಉಳಿಸಲು ಮನೆಯ ಮೇಲೆ ಪಕ್ಷಿಗಳಿಗೆ ನೀರು, ಆಹಾರ ಇಡುವ ಕೆಲಸ ಮಾಡಬೇಕಿದೆ ಎಂದು ಅಭಿಪ್ರಾಯಿಸಿದರು.

ಕಸ್ತೂರಿ ಕರ್ನಾಟಕ ಜನಪರ ವೇದಿಕೆ ರಾಜ್ಯಾಧ್ಯಕ್ಷ ರಮೇಶ್‌ಗೌಡರು ಮಾತನಾಡಿ, ಜನರ ನಡುವೆ ಜಾನುವಾರು, ಪ್ರಾಣಿ-ಪಕ್ಷಿಗಳ ಉಳಿದರೆ ಮಾತ್ರ ಪ್ರಕೃತಿಯ ಸಮತೋಲನ ಕಾಪಾಡಿಕೊಳ್ಳಲು ಸಾಧ್ಯ. ಈ ನಿಟ್ಟಿನಲ್ಲಿ ಆಹಾರ ಮತ್ತು ನೀರಿಗೆ ಹುಡುಕಿ ಬರುವ ಪ್ರಾಣಿಗಳಿಗೆ ನೀರು-ಆಹಾರ ನೀಡಬೇಕಿದೆ. ಇಂದು ಆಧುನಿಕತೆಯ ಕಾರಣದಿಂದ ಗುಬ್ಬಚ್ಚಿಗಳ ಸಂತತಿ ನಾಶವಾಗಿದೆ. ಮುಂದೆ ಇತರೆ ಪ್ರಾಣಿ-ಪಕ್ಷಿ ಸಂಕುಲ ಕಾಪಾಡಲು ನಾವೂ ಮುಂದಾಗಬೇಕಿದೆ ಎಂದು ಅಭಿಪ್ರಾಯಿಸಿದರು. ಕಸ್ತೂರಿ ಕರ್ನಾಟಕ ಜನಪರ ವೇದಿಕೆಯು ನಾಡು, ನುಡಿ, ಜಲದ ಉಳಿವಿಗೆ ಮಾತ್ರ ಹೋರಾಟ ಮಾಡಿಲ್ಲ. ಕನ್ನಡ ಸಾಂಸ್ಕೃತಿಕ ಕ್ಷೇತ್ರದಲ್ಲಿ ಸಹ ಹಲವು ಕಾರ್ಯಕ್ರಮ ಮಾಡಿದ್ದೇವೆ. ಇದೇ ನಿಟ್ಟಿನಲ್ಲಿ ಭಾರತ್ ವಿಕಾಸ್ ಪರಿಷತ್‌ನ ವತಿಯಿಂದ ಆಯೋಜಿಸಿದ್ದ ಮಹಿಳೆಯರ ಪೌರಾಣಿಕ ನಾಟಕ ಪ್ರದರ್ಶನದ ಯಶಸ್ಸು ತಾಲೂಕಿಗೆ ಮಾತ್ರ ಸೀಮೀತವಾಗದೆ ರಾಜ್ಯಕ್ಕೆ ಪಸರಿಸಲಿ ಎಂಬ ನಿಟ್ಟಿನಲ್ಲಿ ಮಹಿಳಾ ರಂಗಭೂಮಿ ಕಲಾವಿದರಿಂದ ಬೆಂಗಳೂರಿನ ರಂಗಮಂದಿರದಲ್ಲಿ ನಾಟಕ ಪ್ರದರ್ಶನ ಆಯೋಜಿಸುವ ಚಿಂತನೆ ಮಾಡಲಾಗಿದೆ ಎಂದರು.

ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಒತ್ತಾಯಿಸಿ ಹಾಗೂ ಕಾವೇರಿ ನೀರು ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವಂತೆ ಆಗ್ರಹಿಸಿ ಕಳೆದ 168 ದಿನಗಳಿಂದ ಹೋರಾಟ ಮಾಡುತ್ತಿದ್ದು ಈ ಹೋರಾಟಕ್ಕೆ ಈವರೆಗೆ ಸುಮಾರು 10 ಸಾವಿರಕ್ಕೂ ಹೆಚ್ಚು ಮಂದಿ ಬೆಂಬಲ ನೀಡಿ ಹೋರಾಟಕ್ಕೆ ಕೈ ಜೋಡಿಸಿದ್ದಾರೆ. ನಮ್ಮ ಹೋರಾಟ ನಿರಂತರವಾಗಿರಲಿದ್ದು ಮುಂದೆ ಈ ಹೋರಾಟಕ್ಕೆ ದೊಡ್ಡ ಯಶಸ್ಸು ಸಿಗಲಿದೆ ಎಂದು ರಮೇಶ್‌ಗೌಡ ಅಭಿಪ್ರಾಯಿಸಿದರು.

ಹೋರಾಟದಲ್ಲಿ ವೇದಿಕೆಯ ಜಿಲ್ಲಾಧ್ಯಕ್ಷ ಯೋಗೀಶ್‌ಗೌಡ, ರಾಜ್ಯ ಉಪಾಧ್ಯಕ್ಷ ಬೆಳಕು ಶ್ರೀಧರ್, ನಿ. ಶಿಕ್ಷಕ ಜಯರಾಮಯ್ಯ, ಚಿಕ್ಕಣ್ಣಪ್ಪ, ಚಿಕ್ಕೇನಹಳ್ಳಿ ಸುರೇಶ್, ರಂಗಭೂಮಿ ಕಲಾವಿದ ನಾರಾಯಣ್, ಆಟೋ ಮಂಜು, ಪವನ, ರಾಜು, ಪುನೀತ್ ಹಾಜರಿದ್ದರು.

## ಯೂರಿಯಾ ಅಕ್ರಮ ದಾಸ್ತಾನು ತುಂಬಿದ ಲಾರಿ ವಶ, ಆರೋಪಿಗಳಿಗಾಗಿ ಶೋಧ

**ಪಿರಿಯಾಪಟ್ಟಣ:** ಖಚಿತ ಮಾಹಿತಿ ಮೇರೆಗೆ ತಾಲೂಕಿನ ಆವರ್ತಿ ಗ್ರಾಮದ ಕಲ್ಯಾಣ ಮಂಟಪದಲ್ಲಿ ಅಕ್ರಮವಾಗಿ ಯೂರಿಯಾ ರಸಗೊಬ್ಬರವನ್ನು ಸಂಗ್ರಹಿಸಿ ನಂತರ ಮಾರಾಟ ಮಾಡಲು ಯತ್ನಿಸುತ್ತಿದ್ದ ಸಂದರ್ಭದಲ್ಲಿ ತಾಲೂಕು ಆಡಳಿತ, ಕೃಷಿ ಇಲಾಖೆ ಹಾಗೂ ಪೊಲೀಸ್ ಇಲಾಖೆಯ ಜಂಟಿ ಕಾರ್ಯಾಚರಣೆಯಲ್ಲಿ ದಾಳಿ ನಡೆಸಿ ಯೂರಿಯಾ ತುಂಬಿದ ಲಾರಿಯನ್ನು ವಶಕ್ಕೆ ಪಡೆಯಲಾಗಿದ್ದು ಆರೋಪಿಗಳು ತಪ್ಪಿಸಿಕೊಂಡಿದ್ದು ಆರೋಪಿಗಳ ಶೋಧಕ್ಕೆ ಪೊಲೀಸರು ಬಲೆ ಬೀಸಿರುವ ಘಟನೆ ಸೋಮವಾರ ಬೆಳಗ್ಗೆ ಜಾವ ನಡೆದಿದೆ.

ತಾಲೂಕಿನ ಆವರ್ತಿ ಗ್ರಾಮದ ಕೆಂಪೇಗೌಡ ಕಲ್ಯಾಣ ಮಂಟಪವನ್ನು ಬಾಡಿಗೆ ಪಡೆದು ಸುಮಾರು 282 ಬ್ಯಾಗ್ ಯೂರಿಯಾ ರಸಗೊಬ್ಬರವನ್ನು ಟೆಕ್ನಿಕಲ್ ಗ್ರೇಡ್ ಯೂರಿಯಾ ಫರ್ ಇನ್ಡಸ್ಟ್ರೀಯಲ್ ಯೂಸ್ ಓನ್ಲಿ ಎಂಬ ಕಂಪೆನಿಯ ಹೆಸರಿನಲ್ಲಿ ವಿವಿಧ ಉದ್ದೇಶಗಳಿಗೆ ಮಾರಾಟ ಮಾಡಲು ಶೇಖರಿಸಿಟ್ಟಿದ್ದ ಕೇರಳ ಮೂಲದ ಲಾರಿಯನ್ನು ಕೊಪ್ಪ ಬಳಿಯ ಭಾರತ್ ಮಾತಾ ಕಾನ್ವೆಂಟ್ ಪಕ್ಕದ ಪೆಟ್ರೋಲ್ ಬಂಕ್ ಬಳಿ ವಶಕ್ಕೆ ಪಡೆದು ಆರೋಪಿಗಳಿಗಾಗಿ ಶೋಧ ಕಾರ್ಯ ಮುಂದುವರೆದಿದೆ.

ದಾಸ್ತಾನು, ದಾಖಲೆ ಪರಿಶೀಲನೆ: ಖಚಿತ ದೂರನ್ನು ಆಧರಿಸಿ ದಾಳಿ ನಡೆಸಿದ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಪ್ರಸಾದ್ ಹಾಗೂ ಅಧಿಕಾರಿಗಳು, ಆವರ್ತಿ ಗ್ರಾಮದ ಕೆಂಪೇಗೌಡ ಕಲ್ಯಾಣ ಮಂಟಪಕ್ಕೆ ಧಾವಿಸಿ ದಾಸ್ತಾನು ಮತ್ತು ದಾಖಲೆಗಳನ್ನು ಪರಿಶೀಲನೆ ನಡೆಸಿದರು. ಯೂರಿಯಾ ರಸಗೊಬ್ಬರವನ್ನು ವಿವಿಧ ಉದ್ದೇಶಗಳಿಗೆ ಹೆಚ್ಚಿನ ದರಕ್ಕೆ ಮಾರಾಟ ಮಾಡಲು ಇಂಡಸ್ಟ್ರೀಯಲ್ ಯೂಸ್ ಕಂಪನಿಯ ಯೂರಿಯವನ್ನು ಸಂಗ್ರಹಿಸಿ, ನೊಂದಣಿಯಾಗಿರದ ಕಂಪನಿ ಹೆಸರಿನಲ್ಲಿ ಮಾರಾಟ ಮಾಡಲು ಕಂಪನಿಗಳ ಹೆಸರನ್ನು ಅದಲು ಬದಲು ಮಾಡಿ ಮಾರಾಟ ಮಾಡಲು ತೀರ್ಮಾನಿಸಿದ್ದರು.

ಈ ವಿಷಯ ತಿಳಿದ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಡಾ.ವೈ.ಪ್ರಸಾದ್, ಹಾಗೂ ಬೈಲು ಕುಪ್ಪೆ ಸಬ್ ಇನ್ಸ್ ಪೆಕ್ಟರ್ ಜಿತೇಂದ್ರ ಕುಮಾರ್ ಹಾಗೂ ಕೃಷಿ ಅಧಿಕಾರಿ ಹಿತೇಶ್ ನೇತೃತ್ವದಲ್ಲಿ ದಾಳಿ ನಡೆಸಿ, ಲಾರಿಯನ್ನು ವಶಕ್ಕೆ ಪಡೆದು ಆರೋಪಿಗಳಿಗಾಗಿ ಶೋಧ ಕಾರ್ಯ ಮುಂದುವರೆದಿದೆ.

ಹೆಚ್ಚಿನ ಬೆಲೆಗೆ ಮಾರಾಟ: ಆರೋಪಿಗಳು ಚೀಲಗಳನ್ನು ಟೆಕ್ನಿಕಲ್ ಗ್ರೇಡ್ ಯೂರಿಯಾ ಫರ್ ಇನ್ಡಸ್ಟ್ರೀಯಲ್ ಯೂಸ್ ಓನ್ಲಿ ಎಂಬ ಹೆಸರಿನ ವಿಳಾಸ ನೀಡಿ ಕೇರಳದಲ್ಲಿ ಪ್ರಿಂಟ್ ಮಾಡಿಸಿ, ಯೂರಿಯಕ್ಕೆ ಹೆಚ್ಚಿನ ಬೇಡಿಕೆ ಇರುವುದರಿಂದ ರೈತರಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡಲು ಈ ಜಾಗವನ್ನು ಬಾಡಿಗೆ ಪಡೆದು ಕಂಪನಿ ಚೀಲಗಳನ್ನು ಬದಲಿಸಿ, ಜಾಗವನ್ನು ಬಾಡಿಗೆ ಪಡೆದು ಕಂಪನಿ ಚೀಲಗಳನ್ನು ಬದಲಿಸಿ, ಬೇರೆಬೇರೆ ಕಂಪನಿ ಹೆಸರಿನಲ್ಲಿ ಮಾರಾಟ ಮಾಡಲು ತೀರ್ಮಾನಿಸಿದ್ದಾರೆ ಎಂದು ಅಂದಾಜಿಸಲಾಗಿದೆ.

ಈ ಯೂರಿಯಾ ರಸಗೊಬ್ಬರವನ್ನು ಪಟ್ಟಣದ ಎಪಿಎಂಸಿ ಗೋಡೌ ನ್‌ಗೆ ಸಾಗಿಸಲಾಗಿದೆ ಎಂದು ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಪ್ರಸಾದ್ ತಿಳಿಸಿದ್ದಾರೆ.



## ಐಪಿ ಸೈಟ್ ನಲ್ಲಿನ ಅಕ್ರಮ ಸಂಪರ್ಕ ಕಡಿತಗೊಳಿಸಲು ಆಗ್ರಹ

**ಪಿರಿಯಾಪಟ್ಟಣ:** ಬಹುತೇಕ ರೈತರು ಸರ್ಕಾರ ಹಾಗೂ ಇಲಾಖೆಯಿಂದ ಯಾವುದೇ ಪರಾವನಗಿ ಪಡೆಯದೆ ಐಪಿ ಸೈಟ್ ನಲ್ಲಿ ಅಕ್ರಮ ವಿದ್ಯುತ್ ಸಂಪರ್ಕ ನಡೆಯುತ್ತಿರುವುದರಿಂದ ನೈಜ್ಯ ರೈತರಿಗೆ ಅನ್ಯಾಯವಾಗುತ್ತಿದೆ ಆದ್ದರಿಂದ ಕೂಡಲೇ ಅಕ್ರಮ ಸಂಪರ್ಕಗಳನ್ನು ಕಡಿತಗೊಳಿಸಬೇಕು ಎಂದು ಭಾರತೀಯ ಕಿಸಾನ್ ಸಂಘದ ಅಧ್ಯಕ್ಷ ಬೆಕ್ಯಾ ನಾಗರಾಜ್ ಒತ್ತಾಯಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿರುವ ಅವರು, ಬರ ಆವರಿಸಿರುವ ಹಿನ್ನೆಲೆಯಲ್ಲಿ ಬೆಕ್ಯಾ ಸೇರಿದಂತೆ ತಾಲೂಕಿನ ಬಹುತೇಕ ಭಾಗಗಳಲ್ಲಿ ಅಂತರ್ಜಲ ಮಟ್ಟ ಕುಸಿದು ಬೋರ್ವೆಲ್ ಗಳು ಬತ್ತಿ ಹೋಗಿ ಬೆಳೆದ ಬೆಳೆಗಳು ಒಣಗಿ ಹೋಗುತ್ತಿದೆ ಇದರ ನಡುವೆ ಬೆಕ್ಯಾ ಗ್ರಾಮದ ಸುತ್ತಮುತ್ತ ಹಲವರು ಐಪಿ ಸಟ್ ನ ಟಿಸಿಯಲ್ಲಿ ಅಕ್ರಮವಾಗಿ ಸಂಪರ್ಕ ಪಡೆದಿರುವ ಪರಿಣಾಮ ವೋಲ್ಟೇಜ್ ಹಾಗೂ ಓವರ್ ಡ್ರಾಪ್, ಪೀಜ್ ಸುಟ್ಟು ಹೋಗುತ್ತಿದೆ ಈ ಬಗ್ಗೆ ಚೆಸ್ಕಾಂ ನ ಸಹಾಯಕ ಹಾಗೂ ಜೂನಿಯರ್ ಇಂಜಿನಿಯರ್ ಗಮನಕ್ಕೆ ತಂದರೂ ಸುಟ್ಟು ಹೋದ ಟಿಸಿಗಳನ್ನು ರಿಪೇರಿ ಮಾಡುವ ಹಾಗೂ ಐಪಿ ಸಟ್ ಗಳಲ್ಲಿ ಅಕ್ರಮವಾಗಿ ಸಂಪರ್ಕ ಪಡೆದಿರುವವರ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲ ಇದರಿಂದ ಸಾವಿರಾರು ರೈತರಿಗೆ ತೊಂದರೆಯಾಗುತ್ತಿದೆ ಕೂಡಲೇ ಈ ಬಗ್ಗೆ ಅಧಿಕಾರಿಗಳು ಕ್ರಮಕೈಗೊಳ್ಳಬೇಕು ತಪ್ಪಿದ್ದರೆ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಹಾಗೂ ತಾಲ್ಲೂಕು ಆಡಳಿತ ಭವನದ ಮುಂದೆ ಭಾರತಿಯ ಕಿಸಾನ್ ಸಂಘದ ವತಿಯಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.



ಮೈಸೂರಿನ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ವತಿಯಿಂದ ಇಂದು ಯಾದವಗಿರಿ ಸೇವಾ ಕೇಂದ್ರದಲ್ಲಿ ಬೇರೆ ಊರುಗಳಿಂದ ಆಗಮಿಸಿದ್ದ ಬ್ರಹ್ಮಾಕುಮಾರಿಯರನ್ನು ಈವಿವಿ ಮೈಸೂರು ಉಪ ವಲಯದ ಮುಖ್ಯ ಸಂಚಾಲಕಿ ರಾಜಯೋಗಿನಿ ಬಿಕೆ ಲಕ್ಷ್ಮೀಜಿಯವರು ಸನ್ಮಾನಿಸಿ, ಗೌರವಿಸಿದರು. ಸನ್ಮಾನಿತರು ಎಡದಿಂದ ಬಿಕೆ ಸಾವಿತ್ರಿ, ಸಂಚಾಲಕರು, ಬ್ರಹ್ಮಾಕುಮಾರೀಸ್, ವರ್ತೂರು, ಬೆಂಗಳೂರು, ಬಿಕೆ ಜೈಮಿನಿ, ನಿರ್ದೇಶಕರು, ಪ್ರಕಟನಾ ವಿಭಾಗ, ಬ್ರಹ್ಮಾಕುಮಾರೀಸ್, ಲಂಡನ್, ಬಿಕೆ ಭಾರತಿ, ಸಂಚಾಲಕರು, ಬ್ರಹ್ಮಾಕುಮಾರೀಸ್, ಶಿಗ್ಗಾವ್ ಇವರ ಜೊತೆಗೆ ಬಿಕೆ ಶಾರದಾಜಿ ಚಿತ್ರದಲ್ಲಿದ್ದಾರೆ.

## ವಿಶೇಷ ಕರೋಕೆ ಗಾಯನ ಸ್ಪರ್ಧೆ

**ಮೈಸೂರು:** ನಗರದ ಸ್ವರಲೋಕ ಸಾಂಸ್ಕೃತಿಕ ಕಲಾ ವೇದಿಕೆ ವತಿಯಿಂದ ಮಾ.24ರ ಭಾನುವಾರ ಬೆಳಿಗ್ಗೆ 9 ಗಂಟೆಗೆ ಟೌನ್‌ಹಾಲ್‌ನಲ್ಲಿ ವಿಶ್ವ ಮಹಿಳಾ ದಿನಾಚರಣೆ ಹಾಗೂ ವಿಶೇಷ ಕರೋಕೆ ಗಾಯನ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಕಾರ್ಯಕ್ರಮಕ್ಕೆ ಚಲನಚಿತ್ರ ನಟಿ ರೇಖಾದಾಸ್ ಚಾಲನೆ ನೀಡಲಿದ್ದು, ತೀರ್ಪುಗಾರರಾಗಿ ಗಾಯಕಿ ಜೋಗಿ ಸುನೀತಾರವರು ಭಾಗವಹಿಸಲಿದ್ದಾರೆ. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹಿಳಾ ಪ್ರತಿಭೆಗಳಾದ ವೈದ್ಯಕೀಯ ಕ್ಷೇತ್ರದಲ್ಲಿ ಡಾ.ರೇಖಾ ಅರುಣ್, ಸಮಾಜ ಸೇವಾ ಕ್ಷೇತ್ರದಲ್ಲಿ ನಳಿನಿ ತಮ್ಮಯ್ಯ, ಆರಕ್ಷಕ ಸೇವಾ ಕ್ಷೇತ್ರದಲ್ಲಿ ಇನ್ ಸ್ಪೆಕ್ಟರ್ ಮಮತಾ ಹಾಗೂ ಧನಲಕ್ಷ್ಮಿ, ಸುಶ್ರೂಶಕಿ ಕ್ಷೇತ್ರದಲ್ಲಿ ಕೆ.ಕೆ.ಯಶೋಧಾ, ರಂಗಭೂಮಿ ಕಲಾವಿದರ ಕ್ಷೇತ್ರದಲ್ಲಿ ಮೇರಿ ವಸಂತ್, ಶಿಕ್ಷಣ ಕ್ಷೇತ್ರದಲ್ಲಿ ಸಹಾಯಕ ಪ್ರಾಧ್ಯಾಪಕರಾದ ಪ್ರಿಯಾಂಕ ಶೆಣೈಯವರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಿ ಗೌರವಿಸಲಾಗುವುದು. ಸುಮಾರು 45ರಿಂದ 50 ಜನ ರಾಜ್ಯದ ವಿವಿಧ ಜಿಲ್ಲೆಗಳಿಂದ ಗಾಯಕ, ಗಾಯಕಿಯರು ವಿಶೇಷ ಕರೋಕೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ವಿಜೇತರಿಗೆ ಚಿನ್ನದ ಹಾಗೂ ಬೆಳ್ಳಿ ನಾಣ್ಯಗಳನ್ನು ವಿತರಿಸಿ, ಗೌರವಿಸಲಾಗುವುದು. ಕಾರ್ಯಕ್ರಮದಲ್ಲಿ ಸ್ವರಲೋಕ ಸಾಂಸ್ಕೃತಿಕ ವೇದಿಕೆಯ ಅಧ್ಯಕ್ಷರು ಹಾಗೂ ಆಯೋಜಕರಾದ ಯಶಸ್ವಿನಿ ಲೋಕೇಶ್ವರ್, ಉಪಾಧ್ಯಕ್ಷೆ ಗಾಯಕಿ ವಿಜಯಶ್ರೀ, ಪ್ರಧಾನ ಕಾರ್ಯದರ್ಶಿ ಪ್ರಿಯಾ ಎಸ್., ಸಂಘಟನಾ ಕಾರ್ಯದರ್ಶಿ ಶಿವರಾಜ್ ಸಿ.ಎಸ್., ಕಾರ್ಯದರ್ಶಿ ಕವಿತಾ, ಖಜಾಂಚಿ ಅಂಕಿತಾ ಭಾಗವಹಿಸಲಿದ್ದಾರೆ. ಕಾರ್ಯಕ್ರಮಕ್ಕೆ ಉಚಿತ ಪ್ರವೇಶವಿದೆ. ಮಾಹಿತಿಗೆ ಮೊಬೈಲ್ 9663661646 ಸಂಪರ್ಕಿಸಬಹುದು ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಮಕ್ಕಳು ದೇಶದ ಅಮೂಲ್ಯ ಸಂಪತ್ತು : ಶ್ರೀ ರಂಭಾಪುರಿ ಜಗದ್ಗುರುಗಳು

**ಶ್ರೀರಂಭಾಪುರಿ ಪೀಠ(ಬಾಳೆಹೊನ್ನೂರು):** ಮಕ್ಕಳ ಮನಸ್ಸು ಪರಿಶುದ್ಧವಾದುದು ಮತ್ತು ಪವಿತ್ರವಾದುದು. ಬೆಳೆಯುವ ಮಕ್ಕಳಿಗೆ ಯೋಗ್ಯ ಸಂಸ್ಕಾರ ಮತ್ತು ಉತ್ತಮ ಮಾರ್ಗದರ್ಶನ ಕೊಟ್ಟರೆ ಆದರ್ಶ ವ್ಯಕ್ತಿಗಳಾಗಿ ಬಾಳಲು ಸಾಧ್ಯ. ಮಕ್ಕಳು ದೇಶದ ಅಮೂಲ್ಯ ಸಂಪತ್ತು ಎಂದು

ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ಎನ್.ಆರ್.ಪುರ ತಾಲೂಕ ಪ್ರಥಮ ಮಕ್ಕಳ ಸಾಹಿತ್ಯ ಸಮ್ಮೇಳನದ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಜನ್ಮ ಕೊಟ್ಟ ತಂದೆ ತಾಯಿಗಳು ಮಕ್ಕಳಿಗಾಗಿ ಆಸ್ತಿ ಮಾಡುವುದರ ಬದಲಾಗಿ ಹುಟ್ಟಿದ ಮಕ್ಕಳಿಗೆ ಯೋಗ್ಯ ಶಿಕ್ಷಣ ಸಂಸ್ಕಾರ ಕೊಡುವುದರ ಮೂಲಕ ಬೆಳೆಸಬೇಕು. ಐದು ವರುಷದ ವರೆಗೆ ಮಕ್ಕಳನ್ನು ಹೂವಿನಂತೆ ಜೋಪಾನ ಮಾಡಬೇಕು. ಹತ್ತು ತುಂಬುವ ಸಂದರ್ಭದಲ್ಲಿ ಮಕ್ಕಳು ತಪ್ಪು ಮಾಡಿದರೆ ಒಂದು ಪೆಟ್ಟು ಕೊಟ್ಟು ತಿದ್ದುವ ಕೆಲಸ ಮಾಡಬೇಕು. ಹದಿನಾರು ಮೀರಿದ ಸಂದರ್ಭದಲ್ಲಿ ಮಕ್ಕಳನ್ನು ಸಹೋದರರಂತೆ ಕಂಡು ಪ್ರೋತ್ಸಾಹಿಸಬೇಕು. ಯಾವ ಯಾವ ಮಕ್ಕಳಲ್ಲಿ ಎಂಥ ಅದ್ಭುತ ಶಕ್ತಿಯಿದೆಯೋ ಅದನ್ನು ಗುರುತಿಸಿ ಸ್ಫೂರ್ತಿ ತುಂಬುವ ಕಾರ್ಯ ಮಾಡಬೇಕು. ಗಿಡವಾಗಿ ಬಗ್ಗದ್ದು ಮರವಾಗಿ ಬಗ್ಗೀತೇ ಎಂಬ ಗಾದೆ ಮಾತೊಂದಿದೆ. ಕಿರಿ ವಯಸ್ಸಿನಲ್ಲಿ ಕೊಟ್ಟ ಸಂಸ್ಕಾರ ಜೀವನ ಕೊನೆ ವರೆಗೆ ಇರುತ್ತವೆ. ಅವರ ಉಜ್ವಲ ಭವಿಷ್ಯಕ್ಕೆ ಕಾರಣವಾಗುತ್ತವೆ. ಉತ್ತಮ ಶಿಕ್ಷಣದೊಂದಿಗೆ ಮಕ್ಕಳು ದೇಶದ ಭಾವೀ ಪ್ರಜೆಗಳಾಗಿ ಬಾಳಲಿ. ಶ್ರೀ ಪೀಠದ ಜಾತ್ರಾ ಮಹೋತ್ಸವದ ಸುಸಂದರ್ಭದಲ್ಲಿ ನರಸಿಂಹರಾಜಪುರ ತಾಲ್ಲೂಕ ಪ್ರಥಮ ಮಕ್ಕಳ ಸಾಹಿತ್ಯ ಸಮ್ಮೇಳನ ಜರುಗುತ್ತಿರುವುದು ತಮಗೆ ಅತೀವ ಸಂತೋಷವನ್ನು ಉಂಟು ಮಾಡಿದೆ. ಶ್ರೀ ಜಗದ್ಗುರು ರಂಭಾಪುರಿ ಪೀಠ ಮಕ್ಕಳ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸವನ್ನು ನಿರಂತರವಾಗಿ ಮಾಡಿಕೊಂಡು ಬಂದಿದೆ. ಇಂದಿನ ಮಕ್ಕಳ ಸಮ್ಮೇಳನದ ಅಧ್ಯಕ್ಷೆ ಕು.ಬಿ.ಎ.ವರ್ಷಿಣಿ, ಸಹ ಅಧ್ಯಕ್ಷ ಕು, ಮನೋಜ್ ಎಫ್.ಎ., ಕು.ರಕ್ಷಿತ ಹಾಗೂ ಕಲಾ ಇವರಲ್ಲಿರುವ ಪ್ರತಿಭೆಯನ್ನು ಕಂಡು ಶ್ರೀ ಜಗದ್ಗುರುಗಳು ಸಂತೋಷವಾಗಿದೆ. ಈ ನಾಲ್ಕೂ ಮಕ್ಕಳಿಗೆ ಈ ವರ್ಷದ ಅಬ್ಬಿಗೇರಿ ದಸರಾ ಮಹೋತ್ಸವದಲ್ಲಿ ಖಂಡಿತವಾಗಿ ಮಾತನಾಡಲು ಅವಕಾಶ ಕಲ್ಪಿಸಿಕೊಡಲಾಗುವುದು.



ಅಲ್ಲದೇ ಈ ನಾಲ್ಕೂ ಮಕ್ಕಳ ಮುಂದಿನ ವಿದ್ಯಾಭ್ಯಾಸಕ್ಕಾಗಿ ಶ್ರೀ ಪೀಠದಿಂದ ಆರ್ಥಿಕ ಸಹಾಯವನ್ನು ಕಲ್ಪಿಸಿಕೊಡುತ್ತೇವೆ ಎಂದರು.

ಸಮಾರಂಭವನ್ನು ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ತು(ರಿ)ಬೆಂಗಳೂರು ಇದರ ರಾಜ್ಯಾಧ್ಯಕ್ಷ ಸಿ.ಎನ್.ಅಶೋಕ ಉದ್ಘಾಟಿಸಿ ಮಾತನಾಡಿ ಜಾತಿ ಮತ ಪಂಥಗಳ ಭೇದ ಅರಿಯದೇ ಜನಿಸುವ ಮಗು ಮುಂದಿನ ದಿನಗಳಲ್ಲಿ ವಿಶ್ವ ಮಾನವನಾಗಿ ಬೆಳೆಯಬೇಕೆಂಬುದು ನಮ್ಮ ಉದ್ದೇಶವಾಗಿದೆ. ಮಕ್ಕಳಲ್ಲಿ ಸಾಹಿತ್ಯದ ಅಭಿರುಚಿ ಬೆಳೆಯಬೇಕು. ಉತ್ತಮ ಸಂಸ್ಕಾರದೊಂದಿಗೆ ಉನ್ನತ ಶಿಕ್ಷಣ ಪಡೆದ ಮಕ್ಕಳು ದೇಶವನ್ನು ಕಟ್ಟುವವರಾಗಬೇಕು ಎಂದರು. ಮಕ್ಕಳ ಸಾಹಿತ್ಯ ಪರಿಷತ್ತು(ರಿ) ಚಿಕ್ಕಮಗಳೂರು ಕಾರ್ಯದರ್ಶಿ ಹೂ.ವೀ.ಸಿದ್ಧೇಶ ಪ್ರಾಸ್ತಾವಿಕ ಮಾತನಾಡಿದರು. ಸಮ್ಮೇಳನದ ಅಧ್ಯಕ್ಷೆ ಬಾಳೆಹೊನ್ನೂರು ನಿರ್ಮಲ ಕಾನ್ವೆಂಟಿನ ಕು.ಬಿ.ಎ.ವರ್ಷಿಣಿ ಅಧ್ಯಕ್ಷೀಯ ಭಾಷಣ ಮಾಡಿದರು. ಸಹ ಅಧ್ಯಕ್ಷ ಶ್ರೀ ರಂಭಾಪುರಿ ಪೀಠದ ಶ್ರೀ ಜ.ರುದ್ರಮುನೀಶ್ವರ ವಸತಿ ಪ್ರೌಢ ಶಾಲೆಯ ಕು, ಮನೋಜ್ ಎಫ್.ಎ. ಉಪಸ್ಥಿತರಿದ್ದರು. ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು. ಬೇರುಗಂಡಿ ಬೃಹನ್ಮಠದ ರೇಣುಕ ಮಹಂತ ಶಿವಾಚಾರ್ಯ ಸ್ವಾಮಿಗಳು ಉಪದೇಶಾಮೃತ ನೀಡಿದರು.

ಚಿಕ್ಕಮಗಳೂರು ಕ.ರಾ.ಮಕ್ಕಳ ಸಾ.ಪ. ಅಧ್ಯಕ್ಷ ಮಲ್ಲಿಗೆ ಸುದೀರ್, ಹಾಸನ ಅಧ್ಯಕ್ಷ ಅಧ್ಯಕ್ಷ ಗಂಗಾಧರ್, ಬಿ.ಕಣಬೂರು ಗ್ರಾಮ ಪಂಚಾಯಿತಿ ಅಧ್ಯಕ್ಷ ಸದಾಶಿವ ಆಚಾರಿ, ಕೆ.ಟಿ. ವೆಂಕಟೇಶ್, ಮುಖ್ಯ ಅತಿಥಿಗಳಾಗಿದ್ದರು. ನವದೆಹಲಿಯ ಪ್ರಥಮ ರಾಷ್ಟ್ರೀಯ ಹೊರನಾಡು ಮಕ್ಕಳ ಸಮ್ಮೇಳನದ ಸಹ-ಅಧ್ಯಕ್ಷೆ ಕು.ರಕ್ಷಿತ ಹಾಗೂ ಕಲಾ ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು. ಚಿಕ್ಕಮಗಳೂರು ಮಾಧ್ಯಮ ಸಂಸ್ಕೃತಿ ಪ್ರತಿಷ್ಠಾನದ ಅಧ್ಯಕ್ಷ ಚಿ.ಸ.ಪ್ರಭುಲಿಂಗಶಾಸ್ತ್ರಿ ಸರ್ವರನ್ನು ಸ್ವಾಗತಿಸಿದರು. ವಿಠಲಾಪುರದ ಗಂಗಾಧರಸ್ವಾಮಿ ಹಿರೇಮಠ ಭಕ್ತಿ ಗೀತೆ ಹಾಡಿದರು. ಶಿಕ್ಷಕ ವೀರೇಶ ಕುಲಕರ್ಣಿ ನಿರೂಪಿಸಿದರು. ಇದಕ್ಕೂ ಪೂರ್ವದಲ್ಲಿ ಧ್ವಜಾರೋಹಣ ಮತ್ತು ಹರಿದ್ರಾಲೇಪನ ಕಾರ್ಯಗಳು ಜರುಗಿದವು.

## ದಾಖಲೆ ಇಲ್ಲದ ಹಣ ವಶ

**ಚಾಮರಾಜನಗರ:** ದಾಖಲೆ ಇಲ್ಲದೇ ಸಾಗಿಸಲಾಗುತ್ತಿದ್ದ 1 ಲಕ್ಷ ರೂ. ಹಣವನ್ನು ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರಕ್ಕೆ ಸೇರಿದ ದಾಸನಪುರ ಚೆಕ್ ಪೋಸ್ಟ್ ನಲ್ಲಿ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

ದಾಸನಪುರ ಚೆಕ್ ಪೋಸ್ಟ್ ನಲ್ಲಿ ಇಂದು ಬೆಳಿಗ್ಗೆ 9.15 ಗಂಟೆ ಸಮಯದಲ್ಲಿ ಬೆಂಗಳೂರಿನಿಂದ ಕೊಳ್ಳೇಗಾಲದ ಕಡೆ ಬರುತ್ತಿದ್ದ ಕಾರನ್ನು (ಕೆ.ಎ.-51 ಎಂ.ಡಬ್ಲ್ಯೂ-330) ತಪಾಸಣೆ ಮಾಡಿದ ವೇಳೆ ದಾಖಲೆ ಇಲ್ಲದೆ 1 ಲಕ್ಷ ರೂ. ಹಣ ಪತ್ತೆಯಾಗಿದೆ. ಹಣವನ್ನು ವಶಕ್ಕೆ ಪಡೆಯಲಾಗಿದ್ದು ಮುಂದಿನ ಕ್ರಮ ವಹಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಶಿಲ್ಪಾ ನಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಲೋಕಸಭೆ ನೀತಿ ಸಂಹಿತೆ; ಫ್ಲೆಕ್ಸ್, ಬ್ಯಾನರ್ ತೆರವು

**ಹುಳಿಯಾರು:** ಲೋಕಸಭಾ ಚುನಾವಣೆಗೆ ದಿನಾಂಕ ಘೋಷಣೆಯಾಗಿ ಮಾದರಿ ನೀತಿ ಸಂಹಿತೆ ಜಾರಿಗೆ ಬಂದಿರುವುದರಿಂದ ಪಟ್ಟಣದಲ್ಲಿ ಪಟ್ಟಣ ಪಂಚಾಯ್ತಿಯಿಂದ ಜಾಹೀರಾತು ಫಲಕ, ಫ್ಲೆಕ್ಸ್, ಪೋಸ್ಟರ್‌ಗಳು ತೆರವುಗೊಳಿಸಲಾಯಿತು.

ಜಿಲ್ಲಾ ಚುನಾವಣಾಧಿಕಾರಿ ನಿರ್ದೇಶನದ ಮೇರೆಗೆ ಚುನಾವಣಾ ಹಾಗೂ ಪಟ್ಟಣ ಪಂಚಾಯ್ತಿ ಸಿಬ್ಬಂದಿ ಜಂಟಿ ಕಾರ್ಯಾಚರಣೆ ನಡೆಸಿ ಎಲ್ಲ ಫ್ಲೆಕ್ಸ್, ಬ್ಯಾನರ್‌ಗಳನ್ನು ತೆರವುಗೊಳಿಸಿದರು. ಸರ್ಕಾರಿ ಕಚೇರಿಗಳ ಆವರಣ ಹಾಗೂ ಹೊರಭಾಗದಲ್ಲಿ ಅಳವಡಿಸಿದ್ದ ರಾಜ್ಯ ಹಾಗೂ ಕೇಂದ್ರ ಸರ್ಕಾರದ ವಿವಿಧ ಯೋಜನೆಗಳಿಗೆ ಸಂಬಂಧಿಸಿದ ಫ್ಲೆಕ್ಸ್‌ಗಳನ್ನು ತೆರವುಗೊಳಿಸಲಾಯಿತು.

ಇನ್ನು, ಬಸ್ ನಿಲ್ದಾಣ, ವಾಲ್ಮೀಕಿ ಸರ್ಕಲ್, ಬಿಎಚ್ ರಸ್ತೆ, ಪೊಲೀಸ್ ಸ್ಟೇಷನ್ ಸರ್ಕಲ್ ಸೇರಿದಂತೆ ಹಲವು ಕಡೆಗಳಲ್ಲಿ ಅಳವಡಿಸಿದ್ದ ವಿವಿಧ ರಾಜಕೀಯ ಪಕ್ಷಗಳ ಫ್ಲೆಕ್ಸ್, ಬ್ಯಾನರ್, ಬಂಟಿಗ್ಸ್‌ಗಳನ್ನು ತೆರವುಗೊಳಿಸಿದರು. ಪರಿಶಿಷ್ಟಜಾತಿ ಮತ್ತು ಪಂಗಡದ ಕಾಲೋನಿಗಳಲ್ಲಿ ರಾಜಕಾರಣಿಗಳ ಚಿತ್ರ ಸಹಿತ ಸರ್ಕಾರದ ವಿವಿಧ ಇಲಾಖೆಗಳ ಸೌಲಭ್ಯಗಳ ಪ್ರಚಾರದ ಸ್ಟಿಕರ್‌ಗಳಿಗೆ ಬಣ್ಣ ಬಳಿದು ಕಾಣದಂತೆ ಮಾಡಲಾಯಿತು.




## ಮೋದಿ ಚಿತ್ರ ತೆರವು ಮಾಡಿ



ಹುಳಿಯಾರಿನ ಪ್ರಮುಖ ಬೀದಿಗಳಲ್ಲಿ ಅಳವಡಿಸಿದ್ದ ಫ್ಲೆಕ್ಸ್, ಬ್ಯಾನರ್, ಬಂಟಿಗ್ಸ್‌ಗಳನ್ನು ಪಟ್ಟಣ ಪಂಚಾಯ್ತಿಯ ಸಿಬ್ಬಂದಿಗಳು ತೆರವು ಮಾಡಿದರಾದರೂ ಪಟ್ಟಣದ ಒಳಗೆ ಅಂಗಡಿಗಳ ಬಳಿ ಹಾಕಿರುವ ರಾಜಕೀಯ ವ್ಯಕ್ತಿಗಳ ಫೋಟೋ ತೆರವು ಮಾಡಿಲ್ಲ ಎಂಬುದು ಸಾರ್ವಜನಿಕರ ದೂರಾಗಿದೆ. ಇಲ್ಲಿನ ವಿಎಸ್‌ಎಸ್‌ಎನ್ ಮುಂಭಾಗ ಮೋದಿ ಅವರ ಭಾವಚಿತ್ರ ಇರುವ ಕಿಸಾನ್ ಸಮೃದ್ಧಿ ಯೋಜನೆ ಪ್ರಚಾರದ ಕಮಾನು ತೆರವು ಮಾಡದೆ ಬಿಟ್ಟಿರುವುದು ನಿದರ್ಶನವಾಗಿದೆ. ಹಾಗಾಗಿ ಮುಖ್ಯಾಧಿಕಾರಿಗಳು ಕಛೇರಿ ಬಿಟ್ಟು ಊರಿನ ಗಲ್ಲಿಗಲ್ಲಿಗಳಲ್ಲಿ ಓಡಾಡಿ ಕಟ್ಟುನಿಟ್ಟಿನಿಂದ ಯಾವುದೇ ಪಕ್ಷಪಾತ ಇಲ್ಲದೆ ಎಲ್ಲಾ ರಾಜಕಾರಣಿಗಳ ಪ್ರಚಾರದ ಪೋಸ್ಟರ್‌ಗಳನ್ನು ತೆರವು ಮಾಡಬೇಕಿದೆ.

# ಆರೋಗ್ಯ ಚೆನ್ನಾಗಿಲ್ಲದಿದ್ದರೆ ಬದುಕೇ ಶೂನ್ಯ : ಕೆ.ಮರೀಗೌಡ

**ಮೈಸೂರು:** ಮನುಷ್ಯನಿಗೆ ಎಷ್ಟೇ ಸಂಪತ್ತು, ಐಶ್ವರ್ಯ ಇದ್ದರೂ ಸಹ ಆರೋಗ್ಯ ಚೆನ್ನಾಗಿಲ್ಲದಿದ್ದರೆ ಮನುಷ್ಯನ ಬದುಕೇ ಶೂನ್ಯವಾಗುತ್ತದೆ ಎಂದು ಮೂಡಾ ಅಧ್ಯಕ್ಷ ಕೆ.ಮರೀಗೌಡ ಹೇಳಿದರು.

ಮೈಸೂರು ತಾಲ್ಲೂಕು ಮಾಕನಹುಂಡಿ ಗ್ರಾಮದಲ್ಲಿ ಶನಿದೇವರ ಗುಡ್ಡಪ್ಪ ದಿವಂಗತ ಪುಟ್ಟಸ್ವಾಮಿಯವರ ಮೊದಲನೆ ವರ್ಷದ ಪುಣ್ಯ ಸ್ಮರಣೆ ಅಂಗವಾಗಿ ನಡೆದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಪುಟ್ಟಸ್ವಾಮಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ಗುಡ್ಡಪ್ಪರವರು ಶನಿದೇವರ ಮಹಾಭಕ್ತರಾಗಿದ್ದರು ಸಾವಿರಾರು ಜನರು ಈ ದೇವಸ್ಥಾನಕ್ಕೆ ಅಕ್ಕಪಕ್ಕದ ಊರುಗಳಿಂದಲ್ಲದೆ, ಮೈಸೂರು ಬೆಂಗಳೂರಿನಿಂದಲೂ ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಿದ್ದರು. ಅವರ ನೆನಪಿನಲ್ಲಿ ಉಚಿತ ಆರೋಗ್ಯ ತಪಾಸಣೆ ಕಾರ್ಯಕ್ರಮ ಹಮ್ಮಿಕೊಂಡು ತಜ್ಞ ವೈದ್ಯರುಗಳಿಂದ ಕಣ್ಣಿನ ತಪಾಸಣೆ, ರಕ್ತಪರೀಕ್ಷೆ, ರಕ್ತದಾನ ಶಿಬಿರ, ಆರೋಗ್ಯ ತಪಾಸಣೆಗಳನ್ನು ನಡೆಸಿ ಉಚಿತ ಔಷಧಿಗಳನ್ನು ನೀಡುವುದರೊಂದಿಗೆ ಉತ್ತಮ ಕೆಲಸಗಳನ್ನು ಮಾಡಿದ್ದೀರಿ ಗುಡ್ಡಪ್ಪನವರ ಹೆಸರು ಈ ದೇವಸ್ಥಾನ ಇರುವವರೆಗೂ ಚಿರಸ್ಥಾಯಿಯಾಗಿರುತ್ತದೆ. ಅವರ ಹೆಸರಿನಲ್ಲಿ ಇದೇ ರೀತಿ ಇನ್ನೂ ಹಲವಾರು ಸಾಮಾಜಿಕ ಸೇವಾ ಕಾರ್ಯಕ್ರಮಗಳನ್ನು ಮಾಡಿಕೊಂಡು ಅವರ ಹೆಸರನ್ನು ಚಿರಸ್ಥಾಯಿಯಾಗಿಡಲು ಪ್ರಯತ್ನಿಸಿ ಎಂದರು.

ಈ ಸಂದರ್ಭದಲ್ಲಿ ಮುಖಂಡರಾದ ಬಿ.ರವಿ, ಗುಡ್ಡಪ್ಪ ರವಿಕುಮಾರ್, ಡಾ. ರವಿ, ಸರ್ಕಲ್ ಇನ್ಸ್‌ಪೆಕ್ಟರ್ ಜೆ.ಹೆಚ್. ಗಣೇಶ್, ನಗರಪಾಲಿಕೆ ಮಾಜಿ ಸದಸ್ಯ ಶಿವಣ್ಣ, ಜಿ.ಪಂ ಮಾಜಿ ಸದಸ್ಯ ಪಟೇಲ್ ಜವರೇಗೌಡ, ಶಿವಣ್ಣ, ಚಂದ್ರಶೇಖರ್ ಸ್ವಾಮಿ, ಧನಗಳ್ಳಿ ಬಸವರಾಜು, ರವಿ ಬಿ, ನಾಗರಾಜ್ ಹಾಜರಿದ್ದರು. ಶಿಬಿರದಲ್ಲಿ 34 ಜನ ರಕ್ತದಾನ ಮಾಡಿದರು, 500 ಕ್ಕೂ ಹೆಚ್ಚು ಜನರಿಗೆ ಆರೋಗ್ಯ ತಪಾಸಣೆ ನಡೆಸಲಾಯಿತು.



# ಗ್ರಾಹಕರ ಸಂತೃಪ್ತಿಯೇ ಪ್ರಮುಖ

## ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ಶ್ರೀಧರ ಅಭಿಮತ

**ಚಾಮರಾಜನಗರ:** ಗ್ರಾಹಕರ ರಕ್ಷಣೆ ಹಾಗೂ ಸಬಲೀಕರಣಕ್ಕಾಗಿ ಗ್ರಾಹಕರ ಹಕ್ಕುಗಳ ಕಾಯ್ದೆಯನ್ನು ಜಾರಿಗೊಳಿಸಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ಶ್ರೀಧರ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದಲ್ಲಿರುವ ಹಳೆ ಕೆ.ಡಿ.ಪಿ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ ಹಾಗೂ ಜಿಲ್ಲಾ ಗ್ರಾಹಕ ಮಾಹಿತಿ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ 'ವಿಶ್ವ ಗ್ರಾಹಕರ ದಿನಾಚರಣೆ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸರ್ಕಾರವು 1986ರಲ್ಲಿ ಗ್ರಾಹಕ ಹಕ್ಕುಗಳ ಕಾಯ್ದೆ ಜಾರಿಗೊಳಿಸಿದೆ. ದೈನಂದಿನ ಜೀವನದಲ್ಲಿ ಪ್ರತಿಯೊಬ್ಬರು ಗ್ರಾಹಕರಾಗಿದ್ದಾರೆ. ಗ್ರಾಹಕರಿಗೆ ನ್ಯಾಯಯುತ, ಯೋಗ್ಯ ಹಾಗೂ ಗುಣಮಟ್ಟದ ಸರಕು ಮತ್ತು ಸೇವೆಗಳನ್ನು ನೀಡುವ ಜವಾಬ್ದಾರಿ ವ್ಯಾಪಾರಸ್ಥರದ್ದು. ಯಾವುದೇ ವಸ್ತುಗಳನ್ನು ಕೊಡುವವನ ತೃಪ್ತಿಗಾಗಿ ಕೊಳ್ಳುವುದಲ್ಲ, ಅಲ್ಲಿ ಗ್ರಾಹಕರ ಸಂತೃಪ್ತಿಯೇ ಪ್ರಮುಖವಾಗಿದೆ. ಸುರಕ್ಷತೆ, ಆಯ್ಕೆ ಹಾಗೂ ಆರೋಗ್ಯಪೂರ್ಣ ಪರಿಸರ ಹೊಂದುವ ಹಕ್ಕನ್ನು ಕಾಯ್ದೆಯು ಎಲ್ಲಾ ಗ್ರಾಹಕರಿಗೂ ನೀಡಿದೆ ಎಂದರು.

ವ್ಯಾಪಾರಸ್ಥರು ವಸ್ತುಗಳಿಗೆ ನಿಗದಿತ ಬೆಲೆಗಿಂತ ಹೆಚ್ಚಿನ ದರ ಪಡೆಯುವಂತಿಲ್ಲ. ವಸ್ತುಗಳು ದೋಷದಿಂದ ಕೂಡಿದ್ದರೆ ಪ್ರಶ್ನೆ ಮಾಡುವ ಹಕ್ಕು ಗ್ರಾಹಕರಿಗಿದೆ. ಅವಧಿ ಮೀರಿದ ಉತ್ಪನ್ನಗಳನ್ನು ನೀಡಿದರೆ ಅಂತಹವರ ಮೇಲೆ ಗ್ರಾಹಕರ ಆಯೋಗದಲ್ಲಿ ಪ್ರಕರಣ ದಾಖಲಿಸಿ ಪರಿಹಾರ ಪಡೆಯಬಹುದು. ಜಿಲ್ಲಾ ಗ್ರಾಹಕರ ವ್ಯಾಜ್ಯ ಪರಿಹಾರ ಆಯೋಗದಲ್ಲಿ 50 ಲಕ್ಷದವರೆಗೆ ಹಾಗೂ ರಾಜ್ಯ ಆಯೋಗದಲ್ಲಿ 1 ಕೋಟಿಯವರೆಗೆ ಪರಿಹಾರ ಪಡೆಯಬಹುದಾಗಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಗ್ರಾಹಕರ ಹಕ್ಕುಗಳನ್ನು ಅರಿಯಬೇಕು ಎಂದು ನ್ಯಾಯಾಧೀಶರಾದ ಶ್ರೀಧರ ಅವರು ತಿಳಿಸಿದರು.



ಕಾರ್ಯಕ್ರಮ ಉದ್ಘಾಟಿಸಿ, ಲೋಕಸಭಾ ಸಾರ್ವತ್ರಿಕ ಚುನಾವಣೆಯ ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿದ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ ಅವರು ಗ್ರಾಹಕರ ಹಕ್ಕುಗಳ ಜಾಗೃತಿ ಎಲ್ಲರಿಗೂ ಅಗತ್ಯವಾಗಿದೆ. ಅದರಲ್ಲೂ ಕುಟುಂಬ ನಿರ್ವಹಿಸುವ ಮಹಿಳೆಯರಿಗೆ ಅತ್ಯಗತ್ಯವಾಗಿದೆ. ವಸ್ತುಗಳನ್ನು ಕೊಳ್ಳುವಾಗ ತೂಕ, ಅಳತೆ ಮತ್ತು ದರ ಕ್ರಮಬದ್ದವಾಗಿರಬೇಕು. ಗ್ರಾಹಕರು ಅದನ್ನು ಪರೀಕ್ಷಿಸಿ ಪಡೆದುಕೊಳ್ಳಬೇಕೇ ಹೊರತು ಮೋಸ ಹೋಗಬಾರದು ಎಂದರು. ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ವಿಶೇಷವಾಗಿ ಜಿಲ್ಲೆಯಲ್ಲಿ ಮತದಾನರನ್ನು ಆಕರ್ಷಿಸುವ ಉದ್ದೇಶದಿಂದ ಮಹಿಳೆಯರಿಗಾಗಿ ಪ್ರತಿ ತಾಲೂಕಿಗೆ ತಲಾ 2 ಸಖೀ ಸೌರಭ ಮತಗಟ್ಟೆ, ಜಾನಪದ ಕಲಾ ಶೈಲಿಯ ಮತಗಟ್ಟೆ, ಅರಣ್ಯದ ಮಹತ್ವ ತಿಳಿಸುವ ಹಸಿರು ಮತಗಟ್ಟೆ ಹಾಗೂ ರೈತರನ್ನು ಸೆಳೆಯಲು ಅನ್ನದಾತರ ಮತಗಟ್ಟೆಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಲಕ್ಷ್ಮೀ ಅವರು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಗ್ರಾಹಕರ ವ್ಯಾಜ್ಯ ಪರಿಹಾರ ಆಯೋಗದ ಅಧ್ಯಕ್ಷರಾದ ಎಂ.ವಿ. ಭಾರತಿ ಅವರು ಮಾತನಾಡಿ ಇಂದಿನ ದಿನಗಳಲ್ಲಿ ಸಾಕಷ್ಟು ಜನರು ವ್ಯಾಪಾರಕ್ಕಾಗಿ ಆನ್‌ಲೈನ್ ಮೊರೆ ಹೋಗುತ್ತಿರುವುದನ್ನು ಕಾಣಬಹುದು. ಅಂಗಡಿಗಳಿಂದ ವಸ್ತುಗಳನ್ನು ಕೊಳ್ಳುವುದಷ್ಟೇ ಅಲ್ಲ, ಬ್ಯಾಂಕಿಂಗ್ ಹಾಗೂ ವಿಮಾ ಸೌಲಭ್ಯಗಳನ್ನು ಪಡೆಯುವಲ್ಲಿ ಮೋಸ ಹೋಗದಂತೆ ಎಚ್ಚರ ವಹಿಸುವ ನಿಟ್ಟಿನಲ್ಲಿ ಈ ಬಾರಿಯ ಗ್ರಾಹಕರ ದಿನವನ್ನು 'ಗ್ರಾಹಕರಿಗಾಗಿ ನ್ಯಾಯಯುತ ಮತ್ತು ಜವಾಬ್ದಾರಿಯುತ ಕೃತಕ ಬುದ್ಧಿಮತ್ತೆ' ಎಂಬ ಘೋಷವಾಕ್ಯದೊಂದಿಗೆ ಆಚರಿಸಲಾಗುತ್ತಿದೆ ಎಂದರು.

ಜಿಲ್ಲಾ ಗ್ರಾಹಕರ ವ್ಯಾಜ್ಯ ಪರಿಹಾರ ಆಯೋಗದ ಸದಸ್ಯರಾದ ಕೆ.ಎಸ್. ರಾಜು ಅವರು ಕಾರ್ಯಕ್ರಮದಲ್ಲಿ ಗ್ರಾಹಕರ ಹಕ್ಕುಗಳ ಕುರಿತು ಮಾತನಾಡಿದರು.

ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕರಾದ ಪಿ. ಸವಿತಾ, ಕಾನೂನು ಮಾಪನ ಶಾಸ್ತ್ರ ಇಲಾಖೆಯ ಸಹಾಯಕ ನಿಯಂತ್ರಕರಾದ ಬಿ.ಎನ್. ರಾಜೀವ್, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ ಜಿಲ್ಲಾ ವ್ಯವಸ್ಥಾಪಕರಾದ ಬಾಲಕೃಷ್ಣ, ಜಿಲ್ಲಾ ಗ್ರಾಹಕ ಮಾಹಿತಿ ಕೇಂದ್ರ ಸಂಯೋಜಕರು ಹಾಗೂ ಶ್ರೀಗಂಧ ಮಹಿಳಾ ಅಭಿವೃದ್ಧಿ ಸಂಘದ ಶಿವರಾಜಮ್ಮ, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಕೆಎಸ್‌ಆರ್‌ಟಿಸಿ ಬಸ್ ಹಾಗೂ ಬೈಕ್ ನಡುವೆ ಡಿಕ್ಕಿ: ಬೈಕ್ ಸವಾರ

ಚಾಮರಾಜನಗರ: ಜಿಲ್ಲೆಯ ಕೊಳ್ಳೇಗಾಲ ತಾಲೂಕಿನ ಧನಗೆರೆ ಗ್ರಾಮದ ರಾಷ್ಟ್ರೀಯ ಹೆದ್ದಾರಿ (209) ಯಲ್ಲಿ ಕೆಎಸ್‌ಆರ್ ಟಿಸಿ ಬಸ್ ಹಾಗೂ ಬೈಕ್ ನಡುವೆ ಡಿಕ್ಕಿಯಾದ ಪರಿಣಾಮ ಸ್ಥಳದಲ್ಲೆ ಬೈಕ್ ಸವಾರ ಮೃತಪಟ್ಟಿದ್ದಾನೆ. ಧನಗೆರೆ ಗ್ರಾಮದ ಪೂಜಯ್ಯ ಎಂಬುವರ ಮಗ ನಂಜಪ್ಪ (48) ಮೃತ್ತಪಟ್ಟ ವ್ಯಕ್ತಿ. ಈತ ಎಂದಿನಂತೆ ಜಮೀನು ಕಡೆಗೆ ಬೈಕ್‌ನಲ್ಲಿ ತೆರಳುತ್ತಿದ್ದಾಗ ಕೊಳ್ಳೇಗಾಲ ಕಡೆಯಿಂದ ಬೆಂಗಳೂರಿಗೆ ತೆರಳುತ್ತಿದ್ದ ಕೆಎಸ್‌ಆರ್ ಟಿಸಿ ಬಸ್ ಡಿಕ್ಕಿ ಹೊಡೆದಿದೆ. ನಂಜಪ್ಪನ ತಲೆಗೆ ತೀವ್ರ ಪೆಟ್ಟಾದ ಕಾರಣ ಸ್ಥಳದಲ್ಲಿ ಪ್ರಾಣಬಿಟ್ಟಿದ್ದಾನೆ. ಈ ವೇಳೆ ಅಪಘಾತದಿಂದ ವ್ಯಕ್ತಿ ಮೃತಪಟ್ಟದ್ದನ್ನು ಕಂಡ ಗ್ರಾಮಸ್ಥರು ಕೆಎಸ್‌ಆರ್‌ಟಿಸಿ ಬಸ್‌ನ ಹಿಂಬದಿಯ ಗಾಜನ್ನು ಕಲ್ಲು ತೂರಿ ಹೊಡೆದು ಹಾಕಿ ಅಕ್ರೋಶ ಹೊರಹಾಕಿದ್ದಾರೆ. ಕಳೆದ ಎರಡು ತಿಂಗಳಲ್ಲಿ ಧನಗೆರೆ ಗ್ರಾಮದ ರಸ್ತೆಯಲ್ಲಿ ಅಪಘಾತವಾಗಿ ನಾಲ್ಕೈದು ಮಂದಿ ಮೃತಪಟ್ಟಿದ್ದಾರೆ. ಇದ್ದರಿಂದ ರಸ್ತೆಯಲ್ಲೆ ಜನರು ಸಂಚರಿಸಲು ಹೆದರುತ್ತಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳು ಗ್ರಾಮದಲ್ಲಿ ರಸ್ತೆ ಸುರಕ್ಷತೆಗೆ ಅಗತ್ಯ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದ್ದಾರೆ. ಬಳಿಕ ಸ್ಥಳಕ್ಕೆ ಆಗಮಿಸಿದ್ದ ಗ್ರಾಮಾಂತರ ಠಾಣಾ ಪೊಲೀಸರು ಧನಗೆರೆ ಗ್ರಾಮದ ಜನರನ್ನು ಸಮಾಧಾನಪಡಿಸಿ ಮೃತದೇಹವನ್ನು ಕೊಳ್ಳೇಗಾಲ ಸರ್ಕಾರಿ ಆಸ್ಪತ್ರೆಯ ಶವಗಾರಕ್ಕೆ ರವಾನಿಸಿದ್ದಾರೆ. ಮರಣೋತ್ತರ ಪರೀಕ್ಷೆ ಬಳಿಕ ಮೃತದೇಹವನ್ನು ವಾಸರುದಾರರಿಗೆ ಒಪ್ಪಿಸಲಾಗಿದೆ. ಮೃತನ ಸಂಬಂಧಿಕರು ಬಸ್ ಚಾಲಕನ ವಿರುದ್ಧ ದೂರು ನೀಡಿ ಕಾನೂನು ಕ್ರಮ ಕೈಗೊಳ್ಳುವಂತೆ ಗ್ರಾಮಾಂತರ ಜಕಕಜಜಕಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಅಪಘಾತಕ್ಕೀಡಾದ ವಾಹನಗಳನ್ನು ಪೊಲೀಸರು ವಶಕ್ಕೆ ಪಡೆದು ,ಮಮುಂದಿನ ಕ್ರಮ ಕೈಗೊಂಡಿದ್ದಾರೆ.

## ಜಿಲ್ಲಾ ಆರೊಗ್ಯಾಧಿಕಾರಿಗಳಿಂದ ಕೊಟ್ಪ ದಾಳಿ

**ಚಿಕ್ಕಬಳ್ಳಾಪುರ:** ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಹಾಗೂ ತಾಲ್ಲೂಕು, ತನಿಖಾದಳ ಚಿಕ್ಕಬಳ್ಳಾಪುರ ವತಿಯಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್ ಮತ್ತು ಜಿಲ್ಲಾಸ್ಪತ್ರೆಯ ನಿವಾಸಿ ವೈದ್ಯಾಧಿಕಾರಿ ಡಾ.ರಮೇಶ್ ರವರ ನೇತೃತ್ವದಲ್ಲಿ ಜಿಲ್ಲಾ ಆಸ್ಪತ್ರೆ ಮತ್ತು ಮುನ್ಸಿಪಲ್ ಕಾಲೇಜ್ ಬಳಿ ಕೋಟ್ಪ ದಾಳಿಯನ್ನು ಹಮ್ಮಿಕೊಳ್ಳಲಾಯಿತು. ಈ ದಾಳಿಯಲ್ಲಿ ನಿಯಮ ಬಾಹಿರವಾಗಿ ತಂಬಾಕು ಮಾರಾಟ ಮಾಡುವ ಅಂಗಡಿ ಮಾಲೀಕರಿಗೆ ಕೋಟ್ಪ ಕಾಯ್ದೆ ಅಡಿಯಲ್ಲಿ ದಂಡ ವಿಧಿಸಲಾಯಿತು. ಒಟ್ಟು 20 ಪ್ರಕರಣಗಳಿಗೆ 1600 ರೂ ಗಳ ದಂಡ ಸಂಗ್ರಹಿಸಲಾಯಿತು. ಅಂಗಡಿ ಮಾಲೀಕರಿಗೆ ಕೋಟ್ಪ-2003 ಕಾಯ್ದೆಯ ನಿಯಮಗಳನ್ನು ಉಲ್ಲಂಘಿಸ ಬಾರದು ಇಲ್ಲವಾದಲ್ಲಿ ಕಠಿಣ ಕ್ರಮ ತೆಗೆದುಕೊಳ್ಳಬೇಕಾಗುತ್ತದೆ ಎಂದು ತಿಳಿಸಲಾಯಿತು. ಸಾರ್ವಜನಿಕರಿಗೆ ತಂಬಾಕು ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಆರೋಗ್ಯ ಶಿಕ್ಷಣ ನೀಡಲಾಯಿತು. ತಾಂಬಾಕು ವಸ್ತುಗಳನ್ನು ಮಾರಾಟ ಮಾಡಲು ಪರವಾನಗಿಯನ್ನು ಪಡೆಯಲು ಸೂಚಿಸಲಾಯಿತು. ಈ ವೇಳೆ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಿಬ್ಬಂದಿ ರಾಘವೇಂದ್ರ, ಮಂಜುನಾಥ, ಚೌಡರೆಡ್ಡಿ, ತಾಲ್ಲೂಕು ಆರೋಗ್ಯಾಧಿಕಾರಿ ಕಚೇರಿಯ ಸಿಬ್ಬಂದಿ ಗಂಗಾಧರ್, ಪೊಲೀಸ್ ಇಲಾಖೆಯ ಸಿಬ್ಬಂದಿ ಇದ್ದರು.

## 23ಕ್ಕೆ ಮಹಿಳಾ ಕ್ರೀಡಾಕೂಟ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಮಲೀಕರಣ ಮತ್ತು ಕ್ರೀಡಾ ಇಲಾಖೆ, ಚಿಕ್ಕಬಳ್ಳಾಪುರ ಇವರ ಸಂಯುಕ್ತಾಶ್ರಯದಲ್ಲಿ ಮಾರ್ಚ್ 23 ರಂದು ಬೆಳಿಗ್ಗೆ 10:00 ಗಂಟೆಗೆ ಮಹಿಳಾ ಕ್ರೀಡಾಕೂಟವನ್ನು ನಗರದ ಸರ್.ಎಂ.ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗುತ್ತಿದೆ. ಕ್ರಿಕೆಟ್ (ಗುಂಪು), ಹಗ್ಗ ಜಗ್ಗಾಟ (ಗುಂಪು), ಮ್ಯೂಸಿಕಲ್ ಛೇರ್ (ಗುಂಪು),ಕ್ರಿಕೆಟ್ ಟೆನ್ನಿಸ್ ಬಾಲ್,ಲೆಮನ್ ಅಂಡ್ ಸ್ಪೂನ್ ಹಾಗೂ 100 ಮೀ ಓಟ ಕ್ರೀಡೆಗಳಿದ್ದು, ಆಸಕ್ತ ಸ್ಥಳೀಯ ಮಹಿಳಾ ಸಂಘ ಸಂಸ್ಥೆಗಳ ಮಹಿಳಾ ಪದಾಧಿಕಾರಿಗಳು, ಶಾಲಾಕಾಲೇಜಿನ ವಿದ್ಯಾರ್ಥಿನಿಯರು, ಕ್ರೀಡಾಕೂಟದಲ್ಲಿ ಭಾಗವಹಿಸುವವರು ತಮ್ಮ ಆಧಾರ್ ಕಾರ್ಡ್ ಸಲ್ಲಿಸಬೇಕು.ಕ್ರೀಡೆಗಳಿಗೆ ವಯೋಮಿತಿ ನಿರ್ಬಂಧ ಇರುವುದಿಲ್ಲ.ವಿಜೇತರಿಗೆ ಬಹುಮಾನಗಳನ್ನು ನೀಡಲಾಗುವುದೆಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಪಿಕ್ ಅಪ್ ವಾಹನ ಪಲ್ಟಿ

**ಚಾಮರಾಜನಗರ:** ಜಿಲ್ಲೆಯ ಕೊಳ್ಳೇಗಾಲತಾಲೂಕಿನ ಧನಗೆರೆ ಗ್ರಾಮದ ಬಳಿ ಚಲಿಸುತ್ತಿದ್ದ ಎಳನೀರು ಬೊಲೆರೋ ಪಿಕ್ ಅಪ್ ವಾಹನ ಪಲ್ಟಿ ಯಾಗಿದ್ದು ಆಶ್ಚರ್ಯ ರೀತಿಯಲ್ಲಿ ವಾಹನದಲ್ಲಿದ್ದ ಇಬ್ಬರು ಸವಾರರು ಪ್ರಾಣಾಪಾಯ ದಿಂದ ಪಾರಾಗಿದ್ದಾರೆ. ಚಾಮರಾಜನಗರ ಜಿಲ್ಲೆಯ ಯಳಂದೂರು ಮೂಲದ ಚಾಲಕ ಮಹೇಂದ್ರ, ಹಾಗೂ ಕ್ಲೀನರ್ ಮಣಿ ಆಶ್ಚರ್ಯ ರೀತಿ ಪಾರಾಗಿರುವುದು. ಬೆಂಗಳೂರು ಕಡೆಯಿಂಡ ಕೊಳ್ಳೇಗಾಲದ ಕಡೆಗೆ ಬರುತ್ತಿದ್ದ ಎಳ ನೀರು ಬುಂಡೆ ತುಂಬಿದ ಬೊಲೆರೋ ಪಿಕ್ ಅಪ್ ಧನಗೆರೆ ಗ್ರಾಮದ ಬಳಿ ವಾಹನದಲ್ಲಿ ತಾಂತ್ರಿಕ ಸಮಸ್ಯೆ ಕಾಣಿಸಿಕೊಂಡು ಇದಕ್ಕಿಂತದಂತೆ ಪಲ್ಟಿ ಹೊಡೆದಿದೆ. ಈ ವೇಳೆ ಪರಿಣಾಮ ಎಳನೀರು ಬುಂಡೆಗಳು ರಸ್ತೆಯಲ್ಲಿ ಚೆಲ್ಲಾ ಪಿಲ್ಲಿ ಯಾಗಿದೆ. ಅದೃಷ್ಟವಶಾತ್ ವಾಹನ ಚಾಲಕ ಹಾಗೂ ಕ್ಲಿನರ್ ಗೆ ಸಣ್ಣಪುಟ್ಟ ಗಾಯ ವಾಗಿದ್ದು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ವಿಚಾರ ತಿಳಿದ 112 ಪೋಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು ಪರಿಶೀಲಿಸಿದ್ದಾರೆ. ಸ್ಥಳೀಯರ ಸಹಾ ಯದಿಂದ ರಸ್ತೆಯಲ್ಲಿ ಬಿದ್ದಿದ್ದ ಎಳ ನೀರು ಬುಂಡೆಗಳನ್ನು ತೆರವು ಗೊಳಿಸಿ ಸುಗಮ ಸಂಚಾರಕ್ಕೆ ಅವಕಾಶ ಮಾಡಿಕೊಟ್ಟಿದ್ದಾರೆ.

## ಶಾರ್ಟ್ ಸರ್ಕ್ಯೂಟ್ ನಿಂದ 2 ಬೈಕ್, ಒಂದು ಕಾರು ಸುಟ್ಟು ಭಸ್ಮ

**ಮೈಸೂರು:** ಎಲೆಕ್ಟ್ರಿಕ್ ಸ್ಕೂಟರ್ ಒಂದನ್ನು ಚಾರ್ಜ್ ಇಟ್ಟ ವೇಳೆ ಶಾರ್ಟ್ ಸರ್ಕ್ಯೂಟ್ ಸಂಭವಿಸಿ ಮನೆಯ ಅಂಗಳದಲ್ಲಿ ನಿಲ್ಲಿಸಿದ್ದ ಎರಡು ಬೈಕ್ ಸೇರಿದಂತೆ ಒಂದು ಕಾರು ಸುಟ್ಟು ಕರಕಲಾದ ಘಟನೆ ಮೈಸೂರಿನ ಕುಂಬಾರಕೊಪ್ಪಲಿನಲ್ಲಿ ಮಂಗಳವಾರ ತಡ ರಾತ್ರಿ ಸಂಭವಿಸಿದೆ. ಕುಂಬಾರಕೊಪ್ಪಲಿನ ಗುಂಡಪ್ಪ ಎಂಬುವವರಿಗೆ ಸೇರಿದ ಎಲೆಕ್ಟ್ರಿಕ್ ಸ್ಕೂಟರನ್ನು ಮನೆಯ ಅಂಗಳದಲ್ಲಿ ನಿಲ್ಲಿಸಿ ಚಾರ್ಜ್ ಮಾಡಲಾಗುತ್ತಿತ್ತು ಈ ವೇಳೆ ಶಾರ್ಟ್ ಸರ್ಕ್ಯೂಟ್ ಸಂಭವಿಸಿ ಸ್ಕೂಟರ್ ಗೆ ಬೆಂಕಿ ಹೊತ್ತಿಕೊಂಡಿದೆ ಪರಿಣಾಮ ಅಲ್ಲೇ ಇದ್ದ ಇನ್ನೊಂದು ಸ್ಕೂಟರ್ ಗೆ ಬೆಂಕಿ ಆವರಿಸಿದೆ ಇದೆ ವೇಳೆ ಸ್ಕೂಟರ್ ಪಕ್ಕದಲ್ಲೇ ನಿಲ್ಲಿಸಿದ್ದ ಕಾರಿಗೂ ಬೆಂಕಿ ಹೊತ್ತಿಕೊಂಡು ಸುಟ್ಟು ಕರಕಲಾಗಿದೆ ಅಲ್ಲದೆ ಮನೆಗೂ ಹಾನಿಯಾಗಿದೆ. ಬೆಂಕಿ ಹೊತ್ತಿಕೊಂಡ ವಿಚಾರ ಗೊತ್ತಾಗುವ ವೇಳೆ ಮೂರೂ ವಾಹನಗಳು ಸಂಪೂರ್ಣ ಸುಟ್ಟು ಕಾರಕಲಾಗಿತ್ತು ಅಲ್ಲದೆ ಮನೆಯ ಕಿಟಕಿ ಬಾಗಿಲುಗಳಿಗೆ ಹಾನಿಯಾಗಿದೆ. ಮೇಟಗಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.



## ಮೈಸೂರಿನಲ್ಲಿ ನಾಳೆ ವಿವಿಧ ಸ್ಪರ್ಧೆ



**ಮೈಸೂರು:** ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು ವಾಣಿಜ್ಯ ಮತ್ತು ನಿರ್ವಹಣಾ ಶಾಸ್ತ್ರ ವಿಭಾಗದ ವತಿಯಿಂದ ಇದೇ ಮಾ. 22 ಮತ್ತು 23 ರಂದು ಕಾಲೇಜು ಸಭಾಂಗಣದಲ್ಲಿ ವಿದ್ವತ್- 2024 ಎಂಬ ಶೀರ್ಷಿಕೆ ಅಡಿಯಲ್ಲಿ ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆ ಆಯೋಜಿಸಲಾಗಿದೆ ಎಂದು ಪ್ರಾಚಾರ್ಯರಾದ ಡಾ.ಎಸ್. ಮರಿಗೌಡ ತಿಳಿಸಿದರು. ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ವಿದ್ಯಾರ್ಥಿಗಳಲ್ಲಿ ವಾಣಿಜ್ಯ, ನಿರ್ವಹಣಾ, ತಂತ್ರಜ್ಞಾನ ಮತ್ತು ಕಲಾ ಕೌಶಲ್ಯ ಬೆಳೆಸಲು ಈ ಸ್ಪರ್ಧೆ ಉತ್ತಮ ವೇದಿಕೆ ಆಗಲಿದೆ. ಮಾ. 22 ರ ಬೆಳಗ್ಗೆ 9.30ಕ್ಕೆ ಎಲ್ ಅಂಡ್ ಟಿ ಕಂಪನಿಯ ಹಿರಿಯ ಅಧಿಕಾರಿ ಶಶಿಧರ ಡೋಂಗ್ರೆ ಉದ್ಘಾಟಿಸುವರು, ಕ್ವಾಲಿಟಿ ರೋಸ್ಸೆಲ್ ಟೆಕ್ ಸಿಸ್ಟಮ್‌ನ ಉಪಾಧ್ಯಕ್ಷ ಬಿ.ಪಿ. ಪ್ರಸಾದ್ ಅತಿಥಿಗಳಾಗಿರುವರು, ಸಂಸ್ಥೆಯ ಗೌರವ ಅಧ್ಯಕ್ಷ ಗುಂಡಪ್ಪಗೌಡ ಅಧ್ಯಕ್ಷತೆ ವಹಿಸುವರು. ಮಾ. 23 ರ ಸಂಜೆ 4.30ಕ್ಕೆ ಸಮಾರೋಪ ಸಮಾರಂಭ ನಡೆಯಲಿದೆ. ಸಿಯೆಂಟ್ ಡಿಎಲ್ ಎಂ ಕಂಪನಿಯ ಪ್ರಧಾನ ವ್ಯವಸ್ಥಾಪಕ ಸುರೇಶ್ ನಾರಾಯಣ್ ಅತಿಥಿಗಳಾಗಿರುವರೆಂದರು. ಎರಡೂ ದಿನ ಹಣಕಾಸು, ತೆರಿಗೆ, ಉತ್ತಮ ಉದ್ಯಮಿ, ಮಾರ್ಕೆಟಿಂಗ್, ಮಾನವ ಸಂಪನ್ಮೂಲ ನಿರ್ವಹಣೆ, ಬಹುಮಾಧ್ಯಮ ಮತ್ತು ಅನಿಮೇಷನ್ ಮೊದಲಾದ ವಿಭಾಗಗಳಲ್ಲಿ ಸ್ಪರ್ಧೆಯೊಡನೆ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳೂ ನಡೆಯಲಿವೆ ಎಂದರು. ಡಾ.ಕೆ.ಎನ್. ಹರಿಪ್ರಸಾದ್, ಪ್ರೊ.ಆರ್. ವಿದ್ಯಾ, ಸೌಮ್ಯ, ಪ್ರೊ.ಎನ್. ಗೀತಾ, ಎನ್. ಹರೀಶ್ ಇದ್ದರು.

## ಲೋಕಸಭಾಗೆ ಕಣಕ್ಕೆ ಮಾ.ಸ.ಪ್ರವೀಣ್

**ಮೈಸೂರು:** ಈ ಬಾರಿಯ ಲೋಕಸಭಾ ಚುನಾವಣೆ ವೇಳೆ ಮೈಸೂರು- ಕೊಡಗು ಲೋಕಸಭಾ ಕ್ಷೇತ್ರದಿಂದ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ವತಿಯಿಂದ ನಗರದ ಚಾಮುಂಡೇಶ್ವರಿ ಕ್ಷೇತ್ರ ನಿವಾಸಿ ಹಾಗೂ ಪಕ್ಷದ ಸ್ಥಳೀಯ ಮುಖಂಡರಾದ ಮಾ.ಸ. ಪ್ರವೀಣ್ ಅವರನ್ನು ಕಣಕ್ಕಿಳಿಸಲಾಗುತ್ತಿದೆ ಎಂದು ರಾಜ್ಯ ಉಪಾಧ್ಯಕ್ಷ ಎಚ್. ಎಸ್. ಲಿಂಗೇಗೌಡ ತಿಳಿಸಿದರು. ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ರಾಜ್ಯದಲ್ಲಿ ಇರುವ ಏಕೈಕ ಪ್ರಾದೇಶಿಕ, ಪ್ರಾಮಾಣಿಕ ರಾಜಕೀಯ ಪಕ್ಷ ತಮ್ಮದಾಗಿದೆ. ಜನಸಾಮಾನ್ಯರ ಕಷ್ಟ ಕಾರ್ಪಣ್ಯದ ಅರಿವು ಇರುವ ಕಾರಣ ಸಾಮಾನ್ಯ ಜನರು ರಾಜಕಾರಣಕ್ಕೆ ಬರಬೇಕು, ಅವರನ್ನು ಮತದಾರರು ಆಯ್ಕೆ ಮಾಡಬೇಕು ಎಂಬುದು ಪಕ್ಷದ ಉದ್ದೇಶವಾಗಿದೆ. ಸಂದರ್ಶನ ಮೂಲಕ ಮಾ.ಸ. ಪ್ರವೀಣ್ ಅವರನ್ನು ಆಯ್ಕೆ ಮಾಡಿದ್ದು, ಮತದಾರರು ಬೆಂಬಲಿಸಬೇಕೆಂದು ಮನವಿ ಮಾಡಿದರು. ಅಭ್ಯರ್ಥಿ ಮಾ.ಸ. ಪ್ರವೀಣ್, ಶಿವಾರಿ ನಾಗರಾಜ್, ರಾಜೇಗೌಡ ಹಾಗೂ ಲಕ್ಷ್ಮಣ್ ಹಾಜರಿದ್ದರು.



# ಚಿಂತೆ ಚಿಂತನಗೊಂಡಾಗ ಬದುಕು ಸಮೃದ್ಧ

**ಶ್ರೀ ರಂಭಾಪುರಿ ಪೀಠ(ಬಾಳೆಹೊನ್ನೂರು):** ಮನುಷ್ಯನನ್ನು ಕಾಡುವ ಚಿಂತೆ ಹಲವಾರು. ಚಿತೆಯಿಂದ ನಿರ್ಜೀವ ವಸ್ತು ನಾಶಗೊಂಡರೆ ಚಿಂತೆಯಿಂದ ಸಜೀವ ವಸ್ತು ನಾಶಗೊಳ್ಳುತ್ತವೆ. ಚಿಂತೆ ಚಿಂತನೆಗೊಂಡಾಗ ಬದುಕು ಸಮೃದ್ಧಗೊಳ್ಳುವುದೆಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.



ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಬುಧವಾರ ಸಂಜೆ ಜರುಗಿದ ಎನ್.ಆರ್.ಪುರ ತಾಲೂಕ ಪ್ರಥಮ ಮಕ್ಕಳ ಸಾಹಿತ್ಯ ಸಮ್ಮೇಳನದ ಸಮಾರೋಪ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಕಲಿ ಕಾಲದಲ್ಲಿ ನ್ಯಾಯ ಧರ್ಮ ನೀತಿಗಳ ಅರಿವು ಇಲ್ಲದಂತಾಗಿ ಬದುಕು ಕವಲು ದಾರಿಯಲ್ಲಿ ಸಾಗುತ್ತಿವೆ. ಸಮಷ್ಠಿ ಪ್ರಜ್ಞೆಯಲ್ಲಿ ಎಲ್ಲರ ಹಿತ ಅಡಗಿದೆ. ಅರಿವಿನ ಕಣ್ಣು ತೆರೆಸಲು ಧರ್ಮ ಮತ್ತು ಗುರು ಅವಶ್ಯಕ. ಮಲಿನಗೊಂಡ ಮನಸ್ಸು ಪರಿಶುದ್ಧಗೊಂಡು ಸತ್ಯ ನಿಷ್ಠೆ ಮತ್ತು ಧರ್ಮಾಸಕ್ತಿ ಬೆಳೆದು ಬರಬೇಕಾಗಿದೆ. ಇಂದಿನ ಎಳೆಯರೇ ಮುಂದಿನ ನಮ್ಮ ನಾಯಕರು. ಅವರನ್ನು ಸನ್ಮಾರ್ಗದಲ್ಲಿ ಕರೆ ತರುವ ಪ್ರಾಮಾಣಿಕ ಪ್ರಯತ್ನ ಮಾಡಬೇಕಾಗಿದೆ. ಸತ್ಯ ಹರಿಶ್ಚಂದ್ರನ ಸತ್ಯ ನಿಷ್ಠೆ ಮತ್ತು ಶ್ರವಣಕುಮಾರನ ಮಾತಾ ಪಿತೃ ಘಟನೆಯಿಂದಾಗಿ ಮಹಾತ್ಮಾ ಗಾಂಧೀಜಿಯವರ ಜೀವನ ಸಂಪೂರ್ಣ ಬದಲಾವಣೆಯಾಗಿದ್ದನ್ನು ಕಾಣುತ್ತೇವೆ. ಬದುಕು ಬದಲಾಗಬೇಕಾದರೆ ಬದುಕುವ ದಾರಿಯೂ ಬದಲಾವಣೆಯಾಗಬೇಕು. ಶ್ರೀ ಜಗದ್ಗುರು ರೇಣುಕಾಚಾರ್ಯರು ಮೌಲ್ಯಾಧಾರಿತ ಉಜ್ವಲ ಭವಿಷ್ಯಕ್ಕೆ ಬೋಧಿಸಿದ ದಶಧರ್ಮ ಸೂತ್ರಗಳು ಎಲ್ಲರ ಬಾಳಿಗೆ ಬೆಳಕು ತೋರಬಲ್ಲವು. ಬಾಳೆಗೊಂದು ಗೊನೆಯಿರುವಂತೆ ಬಾಳಿಗೊಂದು ನಿರ್ದಿಷ್ಟ ಗುರಿಯಿರಬೇಕೆಂದು ಶ್ರೀ ರಂಭಾಪುರಿ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಸಮಾರಂಭವನ್ನು ಉದ್ಘಾಟಿಸಿದ ಸುಳ್ಳದ ಶಿವಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಸಾಹಿತ್ಯ ಸಂಸ್ಕೃತಿ ಸಂವರ್ಧಿಸಲಿ ಎಂದು ಸಾರಿದ ಶ್ರೀ ರಂಭಾಪುರಿ ಜಗದ್ಗುರುಗಳು ಸಾಹಿತ್ಯ ಪ್ರಿಯರು. ಕಳೆದ ವರ್ಷ ಜಿಲ್ಲಾ ಮಹಿಳಾ ಸಾಹಿತ್ಯ ಸಮ್ಮೇಳನಕ್ಕೆ ಅವಕಾಶ ನೀಡಿದ್ದರು. ಈ ವರ್ಷ ತಾಲೂಕಾ ಮಕ್ಕಳ ಸಾಹಿತ್ಯ ಸಮ್ಮೇಳನ ಜರುಗುತ್ತಿರುವುದು ಸಂತೋಷದ ಸಂಗತಿ. ಶ್ರೀ ರಂಭಾಪುರಿ ಪೀಠ ಸರ್ವ ಸಮಾಜದ ಒಳಿತನ್ನು ಬಯಸುತ್ತ ಬಂದಿದೆ ಎಂದರು. ಸಮ್ಮೇಳನದ ಸಹ ಅಧ್ಯಕ್ಷ ಕುಮಾರ ಮನೋಜ ಎಫ್.ಎ. ಕನ್ನಡ ಭಾಷೆ ಬೆಳೆದು ಬಂದ ಬಗೆಯನ್ನು ಮಕ್ಕಳ ಸಾಹಿತ್ಯ ಸಮ್ಮೇಳನದ ಔಚಿತ್ಯವನ್ನು ವಿವರಿಸಿದರು.

ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ತು ಬೆಂಗಳೂರು ಅಧ್ಯಕ್ಷ ಸಿ.ಎನ್.ಅಶೋಕ, ಕಾರ್ಯಾಧ್ಯಕ್ಷ ಸಿ.ಮಹದೇವ, ರಾಜ್ಯ ಸಂಚಾಲಕ ಜಯರಾಮ್, ಚಿಕ್ಕಮಗಳೂರು ಕ.ರಾ.ಮ.ಸಾ.ಪ. ಅಧ್ಯಕ್ಷ ಮಲ್ಲಿಗೆ ಸುದೀರ್ ಮುಖ್ಯ ಅತಿಥಿಗಳಾಗಿದ್ದರು.

# ಬನ್ನಿ ತೇಜಸ್ವಿ ಜೊತೆ ಮಾತನಾಡೋಣ

**ವಿಜಯಪುರ:** ಪೂರ್ಣಚಂದ್ರ ತೇಜಸ್ವಿಯವರ ಬರಹಗಳಲಿದ್ದ ರೋಚಕತೆ ಮತ್ತು ಈ ನೆಲ ದ ಸೊಗಡಿನ ನೈಜತೆಯಿಂದಾಗಿ ಯುವಸಮೂಹ ಬಹಳ ದೊಡ್ಡ ಮಟ್ಟದಲ್ಲಿ ತೇಜಸ್ವಿಯವರ ಕಡೆಗೆ ಪ್ರಭಾವಿತಗೊಂಡರು ಎಂದು ಲೇಖಕ, ಶಿಕ್ಷಣ ತಜ್ಞ ಶ್ರೀನಿವಾಸ ಮೂರ್ತಿ ಎನ್ ಸಂಡ್ರಹಳ್ಳಿ ತಿಳಿಸಿದರು.



ಮಂಗಳವಾರದಂದು ಇವರು ಪಟ್ಟಣ ಸಮೀಪದ ಅಂಕತಟ್ಟಿ ಗೇಟ್ ಬಳಿ ಇರುವ ಎಸ್ ಎನ್ ಫಾರಂನಲ್ಲಿ ತೇಜಸ್ವಿ ಬಳಗ ಮತ್ತು ಅರಿವು ಸಾಂಸ್ಕೃತಿಕ ಕೇಂದ್ರದಿಂದ ಹಮ್ಮಿಕೊಂಡಿದ್ದ ಬನ್ನಿ ತೇಜಸ್ವಿ ಜೊತೆ ಮಾತನಾಡೋಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ತೇಜಸ್ವಿಯವರು ಅನುವಾದಿಸಿರುವ ಪ್ಯಾಪಿಲೋನ್ ಸರಣಿಯ ಕೃತಿಗಳಾಗಬಹುದು, ಕೆನೆತ್ ಅಂಡರ್ಸನ್ ರವರ ಬೇಟೆಯ ಕಥೆಗಳಾಗಬಹುದು ಅಥವಾ ಮಹಾ ಪಲಾಯನ ಕೃತಿ ಆಗಬಹುದು, ಇವು ಕನ್ನಡದ ಮೂಲ ಕೃತಿಗಳೇ ಎಂಬಷ್ಟರ ಮಟ್ಟಿಗೆ ನೈಜವಾಗಿವೆ. ತೇಜಸ್ವಿಯವರು ಕಾಡು ಮತ್ತು ನಾಡು ಎರಡನ್ನೂ ಅನುಭವಿಸಿ ಬರೆದ ಕಾರಣಕ್ಕಾಗಿ ಅವರ ಬರಹಗಳನ್ನು ಓದುವ ಬಹುದೊಡ್ಡ ವರ್ಗ ಸೃಷ್ಟಿಯಾಯಿತು. ಈ ವರ್ಗದಲ್ಲಿ ವಯಸ್ಸಿನ ಭೇದವಿಲ್ಲದೆ ಇರುವುದು ವಿಶೇಷ ಎಂದರು.

ತೋಟಗಾರಿಕೆ ತಜ್ಞ ಸಂತೆ ನಾರಾಯಣಸ್ವಾಮಿ ಮಾತನಾಡಿ, ತೇಜಸ್ವಿ ಅವರ ಪ್ರತಿಯೊಂದು ಕೃತಿಯು ಸಹ ಈ ನಾಡಿನ ಓದುಗರಿಗೆ ರೋಚಕ ಅನುಭವಕ್ಕೆ ಕೊಂಡಯುವಷ್ಟು ಪ್ರಭಾವಶಾಲಿಯಾಗಿದೆ ಎಂದರು. ತೇಜಸ್ವಿ ಅವರು ಯಾವುದೇ ಪ್ರಶಸ್ತಿ ಅಥವಾ ಪ್ರಚಾರಗಳ ಅಮಿಷಕ್ಕೆ ಬಲಿಯಾಗದೆ ಕನ್ನಡ ಸಾಹಿತ್ಯ ಮತ್ತು ಸಾಂಸ್ಕೃತಿಕ ಲೋಕಕ್ಕೆ ಅಪಾರವಾದ ಕೊಡುಗೆ ನೀಡಿದ ಕಥೆಗಾರ, ಕಾದಂಬರಿಕಾರ, ಅಂಕಣಕಾರ ಎಲ್ಲಕ್ಕಿಂತ ಹೆಚ್ಚಾಗಿ ಒಬ್ಬ ಕೃಷಿಕ ಮತ್ತು ವಿಶಿಷ್ಟ ಚಿಂತಕರಾಗಿದ್ದರು ಎಂದು ಅವರು ಬಣ್ಣಿಸಿದರು

ಪ್ರಗತಿಪರ ಚಿಂತಕ ದಾಸನಹಳ್ಳಿ ಪಟೇಲರು ಮಾತನಾಡಿ, ತೇಜಸ್ವಿಯವರು ಶ್ರಮಿಕರ ಬದುಕನ್ನು ತಮ್ಮ ಸಾಹಿತ್ಯದಲ್ಲಿ ಪ್ರಭಾವಶಾಲಿಯಾಗಿ ಕಟ್ಟಿಕೊಟ್ಟರು ಎಂದರು. ಲೋಹಿಯವರ ಚಿಂತನೆಗಳಿಂದ ಪ್ರಭಾವಿತರಾಗಿದ್ದ ಇವರು ಸಮಾಜವಾದಿ ತತ್ವಗಳನ್ನು ಮೈಗೂಡಿಸಿಕೊಂಡಿದ್ದ ಒಬ್ಬ ಅಪ್ಪಟ ಸಮಾಜವಾದಿ ಎಂದು ತಿಳಿಸಿದರು.

ಸಂಪತ್ ಕುಮಾರ್,ನರಸಿಂಹ ರೆಡ್ಡಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಚಂದ್ರಶೇಖರ್ ಹಡಪದ್, ಶಿವಕುಮಾರ್, ರೈತ ಮುನಿರಾಜು ಮತ್ತಿತರರು ಭಾಗವಹಿಸಿದ್ದರು.

# ಸಂಜೆ ಟಿಪ್ಸ್

## PhonePe ನ Indus ಆ್ಯಪ್‌ಸ್ಟೋರ್ ಹೊಸ ಮೈಲಿಗಲ್ಲು




PhonePe ನ Indus ಆ್ಯಪ್‌ಸ್ಟೋರ್ , ಭಾರತದ ಸ್ವದೇಶಿ ಆ್ಯಪ್ ಮಾರ್ಕೆಟ್ ಪ್ಲೇಸ್ ಆಗಿದ್ದು,ಬಿಡುಗಡೆಯಾದ ಒಂದು ತಿಂಗಳೊಳಗೆ 1 ಮಿಲಿಯನ್ ಇನ್ಸ್ಟಾಲ್‌ಗಳನ್ನು ಪಡೆದುಕೊಂಡಿದೆ ಎಂಬುದಾಗಿ ಇಂದು ಪ್ರಕಟಿಸಿದೆ. Indus ಆ್ಯಪ್‌ಸ್ಟೋರ್ ತ್ವರಿತ ಅಳವಡಿಕೆಯು ಭಾರತೀಯ ಡೆವಲಪರ್‌ಗಳ ಅಗತ್ಯಗಳಿಗೆ ಆದ್ಯತೆ ನೀಡುವ ಮತ್ತು ಭಾರತೀಯಪ್ರೇಕ್ಷಕರ ಭಾಷಾ ಮತ್ತು ಸಾಂಸ್ಕೃತಿಕ ಆದ್ಯತೆಗಳನ್ನು ಪೂರೈಸುವ ಪರ್ಯಾಯಗಳಿಗೆ ಮಾರುಕಟ್ಟೆಯ ಸಿದ್ಧತೆಯನ್ನು ಸೂಚಿಸುತ್ತದೆ.

**ವೈವಿಧ್ಯಮಯ ಬೇಡಿಕೆ:** Indus ಆ್ಯಪ್‌ಸ್ಟೋರ್ ಡೌನ್ಲೋಡ್ ಚಾರ್ಟ್‌ಗಳಲ್ಲಿ ಮುಂಚೂಣಿಯಲ್ಲಿರುವ ಫೈನಾನ್ಸ್,ಗೇಮ್‌ಗಳು, ಸಾಮಾಜಿಕ, ಮನರಂಜನೆ, ಪರಿಕರಗಳು, ಸಂವಹನ ಮತ್ತು ಶಾಪಿಂಗ್‌ನೊಂದಿಗೆ ವೈವಿಧ್ಯಮಯ ಶ್ರೇಣಿಯ ಆ್ಯಪ್ ವಿಭಾಗಗಳು ಜನಪ್ರಿಯತೆಯನ್ನು ಗಳಿಸುತ್ತಿವೆ. ಟಯರ್ 2 ಸೆಳೆತ: 45% ಬಳಕೆದಾರರು ಟಯರ್ 2 ನಗರದವರಾಗಿದ್ದು, ಮೆಟ್ರೋ ನಗರಗಳನ್ನು ಮೀರಿ ವ್ಯಾಪಕಜನಪ್ರಿಯತೆಯನ್ನು ತೋರಿಸುತ್ತಿದ್ದಾರೆ.

**ಸ್ಥಳೀಯ ಯಶಸ್ಸು:** Indus ಆ್ಯಪ್‌ಸ್ಟೋರ್ ಹಿಂದಿ, ಮರಾಠಿ, ಬೆಂಗಾಲಿ, ಗುಜರಾತಿ, ತೆಲುಗು ಮತ್ತು ಇತರ ಭಾಷೆಗಳಲ್ಲೂ ಲಭ್ಯವಿದ್ದು, ಗಮನಾರ್ಹ ತೊಡಗಿಸಿಕೊಳ್ಳುವಿಕೆಗೆ ಕಾರಣವಾಗಿದೆ. ಇದು ಸ್ಥಳೀಯ ಭಾಷೆಯ ಆ್ಯಪ್ ಅನುಭವಗಳ ಬೇಡಿಕೆಯನ್ನು ಸಾಬೀತುಪಡಿಸುತ್ತದೆ ಮತ್ತು ಒಳಗೊಳ್ಳುವಿಕೆಯನ್ನು ಉತ್ತೇಜಿಸುತ್ತದೆ. ಈ ಮೈಲಿಗಲ್ಲಿನ ಕುರಿತು ಪ್ರತಿಕ್ರಿಯಿಸಿದ Indus ಆ್ಯಪ್ ಸ್ಟೋರ್‌ನ ಸಹ-ಸಂಸ್ಥಾಪಕ ಮತ್ತು ಸಿಪಿಓ ಆಕಾಶ್ ಡೋಂಗ್ರೆ, ಈಗಮನಾರ್ಹ ಸಾಧನೆಯು ನಮ್ಮ ತಂಡದ ಅಚಲ ಬದ್ಧತೆ ಮತ್ತು ಕಠಿಣ ಪರಿಶ್ರಮವನ್ನು ಪ್ರತಿಬಿಂಬಿಸುತ್ತದೆ. ಡೆವಲಪರ್‌ಗಳು ಮತ್ತುಗ್ರಾಹಕರಿಬ್ಬರಿಗೂ ಉತ್ತಮ ಉತ್ಪನ್ನ ಅನುಭವವನ್ನು ನೀಡುವಲ್ಲಿ ನಾವು ಮೊದಲ ಸ್ಥಾನದಲ್ಲಿದ್ದೇವೆ ಎಂದು ಖಚಿತಪಡಿಸಿಕೊಳ್ಳಲುನಾವು ನಮ್ಮ ಆ್ಯಪ್‌ಸ್ಟೋರ್ ಅನುಭವದಲ್ಲಿ ನಾವೀನ್ಯತೆಯನ್ನು ಮತ್ತು ಸುಧಾರಣೆಯನ್ನು ತರಲು ಮುಂದಾಗುತ್ತೇವೆ. ಇದು ಆರಂಭಮಾತ್ರ ಎಂದು ಹೇಳಿದರು.

## ಮಸಾಲಾ ಪೈನಾಪಲ್ ಡ್ರಿಂಕ್

### ಪಾಕ ಶಾಲೆ



### ಮಾಡುವ ವಿಧಾನ

ಮೊದಲಿಗೆ ಅನನಾಸು ತುಂಡುಗಳನ್ನು ಮಿಕ್ಸರ್ ಜಾರ್ಗೆ ಹಾಕಿ, 2 ಕಪ್ ತಣ್ಣಗಿನ ನೀರು ಸೇರಿಸಿ, ನುಣ್ಣಗೆ ರುಬ್ಬಿಕೊಳ್ಳಿ.

ಈಗ ರುಬ್ಬಿದ ಜ್ಯೂಸ್ ಅನ್ನು ಒಂದು ಬೌಲ್ಗೆ ಹಾಕಿ, ಅದಕ್ಕೆ ಸಕ್ಕರೆ ಪುಡಿ, ಚಾಟ್ ಮಸಾಲಾ, ಕಪ್ಪು ಉಪ್ಪು ಹಾಗೂ ಜೀರಿಗೆ ಪುಡಿ ಹಾಕಿ, ಮಿಶ್ರಣ ಮಾಡಿ.ಅದಕ್ಕೆ ಸಣ್ಣಗೆ ಹೆಚ್ಚಿದ ಅನನಾಸು ತುಂಡುಗಳನ್ನೂ ಸೇರಿಸಿ, ಮಿಶ್ರಣ ಮಾಡಿ. ಈಗ ಮಸಾಲಾ ಪೈನಾಪಲ್ ಡ್ರಿಂಕ್ ತಯಾರಾಗಿದ್ದು, ಲೋಟಗಳಿಗೆ ಹಾಕಿ, ತಕ್ಷಣವೇ ಸವಿಯಿರಿ.

### ಬೇಕಾಗಿರುವ ಪದಾರ್ಥ

ಮಧ್ಯಮ ಗಾತ್ರದಲ್ಲಿ ಕತ್ತರಿಸಿದ ಅನನಾಸು - ಎರಡೂವರೆ ಕಪ್, ಸಣ್ಣಗೆ ಹೆಚ್ಚಿದ ಅನನಾಸು - ಅರ್ಧ ಕಪ್, ಸಕ್ಕರೆ ಪುಡಿ - ಒಂದೂವರೆ ಟೀಸ್ಪೂನ್, ಚಾಟ್ ಮಸಾಲಾ - ಅರ್ಧ ಟೀಸ್ಪೂನ್, ಕಪ್ಪು ಉಪ್ಪು - ಅರ್ಧ ಟೀಸ್ಪೂನ್, ಜೀರಿಗೆ ಪುಡಿ - ಅರ್ಧ ಟೀಸ್ಪೂನ್

## ಕೆಎಲ್ ರಾಹುಲ್ ಗೆ ವಾರ್ನ್ ಮಾಡಿದ ಸುನಿಲ್ ಶೆಟ್ಟಿ



ಮುಂಬೈ: ಟೀಂ ಇಂಡಿಯಾ ಕ್ರಿಕೆಟಿಗ, ಲಕ್ನೋ ಸೂಪರ್ ಜೈಂಟ್ಸ್ ನಾಯಕ ಕೆಎಲ್ ರಾಹುಲ್ ಪತ್ನಿ ಅಥಿಯಾ ಶೆಟ್ಟಿ ಬಾಲಿವುಡ್ ನಟ ಸುನಿಲ್ ಶೆಟ್ಟಿ ಮಗಳು ಎಂದು ಎಲ್ಲರಿಗೂ ಗೊತ್ತು. ಇದೀಗ ಕೆಎಲ್ ರಾಹುಲ್ ಗೆ ಮಾವ ಸುನಿಲ್ ಶೆಟ್ಟಿ ಖಡಕ್ ವಾರ್ನಿಂಗ್ ಕೊಟ್ಟಿದ್ದಾರೆ.

ಕೆಎಲ್ ರಾಹುಲ್ ಅಳಿಯನಾದರೂ ಸುನಿಲ್ ಶೆಟ್ಟಿ ಜೊತೆಗೆ ತಂದೆ-ಮಗನಷ್ಟೇ ಉತ್ತಮ ಬಾಂಧವ್ಯವಿದೆ. ಸುನಿಲ್ ಶೆಟ್ಟಿ ಕೂಡಾ ರಾಹುಲ್ ನನ್ನ ಇನ್ನೊಬ್ಬ ಮಗ ಎಂದೇ ಹೇಳುತ್ತಾರೆ. ಆದರೆ ಇದೀಗ ಸುನಿಲ್ ಶೆಟ್ಟಿ ತಮ್ಮ ವರಸೆ ಬದಲಿಸಿದ್ದು, ಸದ್ಯಕ್ಕೆ ನೀನು ನನ್ನ ಮಗನಲ್ಲ ಎಂದು ಖಡಕ್ ಆಗಿ ವಾರ್ನಿಂಗ್ ಕೊಟ್ಟಿದ್ದಾರೆ.

ಅಷ್ಟಕ್ಕೂ ಈ ರೀತಿ ಎಚ್ಚರಿಕೆ ಕೊಟ್ಟಿದ್ದು ಗಂಭೀರವಾಗಿ ಅಲ್ಲ! ಜಾಹೀರಾತೊಂದಕ್ಕಾಗಿ. ಐಪಿಎಲ್ ನಲ್ಲಿ ಸುನಿಲ್ ಶೆಟ್ಟಿ ಮುಂಬೈ ಇಂಡಿಯನ್ಸ್ ತಂಡವನ್ನು ಬೆಂಬಲಿಸುತ್ತಿದ್ದಾರೆ. ಆದರೆ ಅಳಿಯ ರಾಹುಲ್ ಲಕ್ನೋ ತಂಡದ ನಾಯಕ. ಹೀಗಾಗಿ ಮುಂಬೈ ಆಟಗಾರ ರೋಹಿತ್ ಶರ್ಮಾ ಸೇರಿದಂತೆ ತಮಾಷೆಯ ಜಾಹೀರಾತೊಂದನ್ನು ಹೊರತರಲಾಗಿದೆ.

ಈ ಜಾಹೀರಾತಿನಲ್ಲಿ ರೆಸ್ಟೋರೆಂಟ್ ನಲ್ಲಿ ಸುನಿಲ್ ಶೆಟ್ಟಿ ಮತ್ತು ರೋಹಿತ್ ಜೊತೆಯಾಗಿ ಕುಳಿತಿರುವಾಗ ಲಕ್ನೋ ಜೆರ್ಸಿಯಲ್ಲಿ ಬರುವ ರಾಹುಲ್ 'ಪಪ್ಪಾ' ಎನ್ನುತ್ತಾರೆ. ಆಗ ಸುನಿಲ್ ಈ ಐಪಿಎಲ್ ಮುಗಿಯುವರೆಗೂ ನೀನು ನನ್ನ ಮಗನಲ್ಲ. ನನಗೆ ಶರ್ಮಾಜೀಯೇ ಮಗ' ಎಂದು ರೋಹಿತ್ ರನ್ನು ತೋರಿಸುತ್ತಾರೆ. ಅಗ ರಾಹುಲ್ ಸಪ್ಪೆ ಮುಖ ಹಾಕಿಕೊಂಡು ಜಾಗ ಖಾಲಿ ಮಾಡುತ್ತಾರೆ. ಈ ವಿಡಿಯೋ ಈಗ ನೆಟ್ಟಿಗರಿಗೆ ಭಾರೀ ಇಷ್ಟವಾಗಿದೆ.



## ಪಾಮ್ ಆಯಿಲ್‌ನ ಟೊಕೊಟ್ರಿಯೆನಾಲ ಮತ್ತು ಆಂಟಿ ಆಕ್ಸಿಡೆಂಟ್‌ಗಳು

### ಹೆಲ್ತ್ ಟಿಪ್ಸ್



ಟೊಕೊಟ್ರಿಯೆನಾಲ್ ಗಳು ವಿಟಮಿನ್ ಇಯ ಒಂದು ರೂಪವಾಗಿದ್ದು, ತಮ್ಮ ಶಕ್ತಿಯುತವಾದ ಆಂಟಿ ಆಕ್ಸಿಡೆಂಟ್ ಅಂಶಗಳಿಂದ ಹೆಸರುವಾಸಿಯಾಗಿದೆ. ಆಂಟಿ ಆಕ್ಸಿಡೆಂಟ್ ಗಳು(ಉತ್ಕರ್ಷಣ ನಿರೋಧಕಗಳು) ಆಕ್ಸಿಡೀಕರಣದಿಂದ, ಮಾಲಿನ್ಯ ಮತ್ತು ವಿಕಿರಣದಂತಹ ಅಂಶಗಳಿಂದ ದೇಹದಲ್ಲಿ ಉತ್ಪತ್ತಿಯಾಗುವ ಹಾನಿಕಾರಕ ಅಣುಗಳಿಂದ ಉಂಟಾಗುವ ಜೀವಕೋಶದ ಹಾನಿಯನ್ನು ತಡೆಯುವ ಅಥವಾ ನಿಧಾನಗೊಳಿಸುವ ಸಾಮರ್ಥ್ಯವಿರುವ ವಸ್ತುಗಳಾಗಿವೆ. ಟೊಕೊಟ್ರಿಯೆನಾಲ್‌ಗಳು ಮತ್ತು ಇತರ ಆಂಟಿ ಆಕ್ಸಿಡೆಂಟ್ ಗಳು ಹೃದ್ರೋಗ ಮತ್ತು ಕ್ಯಾನ್ಸರ್‌ನಂತಹ ದೀರ್ಘಕಾಲದ ಕಾಯಿಲೆಗಳ ಅಪಾಯವನ್ನು ಕಡಿಮೆ ಮಾಡುವುದೂ ಸೇರಿದಂತೆ ಹಲವು ಪರಿಣಾಮಕಾರಿ ಆರೋಗ್ಯ ಪ್ರಯೋಜನಗಳನ್ನು ನೀಡುತ್ತವೆ ಎಂದು ನಂಬಲಾಗಿದೆ.ಪಾಮ್ ಆಯಿಲ್ ನಲ್ಲಿ ಕಂಡುಬರುವ ಟೊಕೊಟ್ರಿಯೆನಾಲ್ ಗಳು ವಿವಿಧ ಆರೋಗ್ಯ ಪ್ರಯೋಜನಗಳನ್ನು ನೀಡಬಹುದಾಗಿದೆ ಎಂದು ಸಂಶೋಧನೆಗಳು ತಿಳಿಸಿವೆ. ಹೃದಯವನ್ನು ರಕ್ಷಿಸಲು, ಉರಿಯೂತವನ್ನು ಕಡಿಮೆ ಮಾಡಲು ಮತ್ತು ಕ್ಯಾನ್ಸರ್ ಅನ್ನು ಸಮರ್ಥವಾಗಿ ತಡೆಗಟ್ಟುವಲ್ಲಿ ಅವುಗಳು ಸಂಬಂಧ ಹೊಂದಿವೆ ಎನ್ನಲಾಗಿದೆ. ಆಕ್ಸಿಡೀಕರಣದಿಂದ ಉಂಟಾಗುವ ಹಾನಿಯನ್ನು ನಿಲ್ಲಿಸಲು ಟೊಕೊಟ್ರಿಯೊನಾಲ್ ಗಳು ಕಾರ್ಯನಿರ್ವಹಿಸುತ್ತವೆ. ಮಲೇಷಿಯನ್ ಪಾಮ್ ಆಯಿಲ್, ಅದರ ಬಹುಮುಖತೆ ಮತ್ತು ವೈವಿಧ್ಯಮಯ ಕೈಗಾರಿಕೆಗಳಲ್ಲಿನ ವ್ಯಾಪಕವಾದ ಬಳಕೆಗೆ ಹೆಸರುವಾಸಿಯಾಗಿದೆ. ಜೊತೆಗೆ ಇದು ಟೊಕೊಟ್ರಿಯೆನಾಲ್‌ಗಳು ಮತ್ತು ಟೋಕೋಫೆರಾಲ್ ಗಳ ಮೂಲವಾಗಿದೆ. ಗ್ರಾಹಕರು ತಮ್ಮ ಆರೋಗ್ಯಕ್ಕೆ ಹೆಚ್ಚು ಆದ್ಯತೆ ನೀಡುತ್ತಿರುವ ಈ ಸಂದರ್ಭದಲ್ಲಿ, ತಮ್ಮ ದೈನಂದಿನ ಪೌಷ್ಟಿಕಾಂಶದ ಆಹಾರ ಸೇವನೆಯಲ್ಲಿ ಟೊಕೊಟ್ರಿನಾಲ್‌ಗಳನ್ನು ಸೇರಿಸಲು ಬಯಸುವವರಿಗೆ ಮಲೇಷಿಯನ್ ಪಾಮ್ ಆಯಿಲ್ ಸೂಕ್ತವಾದ ಆಯ್ಕೆಯಾಗಿದೆ.ಪ್ರಸ್ತುತ ಎಸ್‌ಎನ್‌ಡಿಟಿ ಮಹಿಳಾ ವಿಶ್ವವಿದ್ಯಾಲಯದ ಗೃಹ ವಿಜ್ಞಾನ ಮತ್ತು ಆಹಾರ ವಿಜ್ಞಾನ ಮತ್ತು ಪೌಷ್ಟಿಕಾಂಶ ವಿಭಾಗದಲ್ಲಿ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗದಲ್ಲಿ ವಿಸಿಟಿಂಗ್ ಫ್ಯಾಕಲ್ಟಿಯಾಗಿ ಕೆಲಸ ಮಾಡುತ್ತಿರುವ ಅಸೋಸಿಯೇಟ್ ಪ್ರೊಫೆಸರ್ ಡಾ. ಮೀನಾ ಮೆಹ್ತಾ, ಪಾಮ್ ಆಯಿಲ್ ನಲ್ಲಿ ಕಂಡುಬರುವ ಟೊಕೊಟ್ರಿಯೆನಾಲ್ ಗಳು ಮತ್ತು ಆಂಟಿ ಆಕ್ಸಿಡೆಂಟ್ ಗಳ ಗಮನಾರ್ಹ ಆರೋಗ್ಯ ಪ್ರಯೋಜನಗಳನ್ನು ತಿಳಿಸಿದ್ದಾರೆ. ಈ ನೈಸರ್ಗಿಕ ಅದ್ಭುತಗಳು ಆಕ್ಸಿಡೇಟಿವ್ ಒತ್ತಡವನ್ನು ಎದುರಿಸುವ ಮೂಲಕ ಯೋಗಕ್ಷೇಮವನ್ನು ಕಾಪಾಡುವುದು ಮಾತ್ರವಲ್ಲದೆ, ಸುಸ್ಥಿರವಾದ ಪಾಮ್ ಆಯಿಲ್ ನ ಪೌಷ್ಟಿಕಾಂಶದ ಸಾಮರ್ಥ್ಯವನ್ನು ಸೂಚಿಸುತ್ತದೆ. ಜಾಗೃತಿ ಮೂಡಿಸುವ ಮೂಲಕ ಮತ್ತು ಜವಾಬ್ದಾರಿಯುತ ಬಳಕೆಗೆ ಪ್ರೇರೇಪಿಸುವ ಮೂಲಕ, ವೈಯಕ್ತಿಕ ಆರೋಗ್ಯಕ್ಕೆ ಕೊಡುಗೆ ನೀಡುವ ಈ ಆಯ್ಕೆಯನ್ನು ವ್ಯಕ್ತಿಗಳು ಆರಿಸಬಹುದಾಗಿದೆ. ಟೊಕೊಟ್ರಿಯೆನಾಲ್‌ಗಳಲ್ಲಿ ಸಮೃದ್ಧವಾಗಿರುವ ಪಾಮ್ ಆಯಿಲ್ ಅನ್ನು ಆಹಾರ ಕ್ರಮದಲ್ಲಿ ಸೇರಿಸುವುದು ಈ ಆಂಟಿ ಆಕ್ಸಿಡೆಂಟ್ ಗಳ ಪ್ರಯೋಜನಗಳನ್ನು ಪಡೆಯಲು ಉತ್ತಮ ವಿಧಾನವಾಗಿದೆ.

## 2024ರ ಟಾಟಾ ಐಪಿಎಲ್ ಕಾಮೆಂಟರಿಗಾಗಿ ಜಿಯೋ ಸಿನೆಮಾದಲ್ಲಿ ಕ್ರಿಕೆಟ್ ತಾರೆಯರ ಬಳಗ




ಜಿಯೋ ಸಿನೆಮಾ 2024ರ ಟಾಟಾ ಇಂಡಿಯನ್ ಪ್ರೀಮಿಯರ್ ಲೀಗ್ ಗಾಗಿ ತನ್ನ ಕ್ರಿಕೆಟ್ ತಜ್ಞರ ಸಮಿತಿಯಲ್ಲಿರುವ ಸೂಪರ್ ಸ್ಟಾರ್ ಗಳ ಬಹು ದೊಡ್ಡ ಬಳಗವನ್ನು ಇಂದು ಅನಾವರಣಗೊಳಿಸಿದೆ. ಭಾರತದ ನೆಚ್ಚಿನ ಕ್ರೀಡಾ ಉತ್ಸವವನ್ನು ಕನ್ನಡ, ಇಂಗ್ಲಿಷ್, ಹಿಂದಿ, ಮರಾಠಿ, ಗುಜರಾತಿ, ಭೋಜ್ಪುರಿ, ಪಂಜಾಬಿ, ಬಂಗಾಳಿ, ತಮಿಳು, ತೆಲುಗು, ಮಲಯಾಳಂ ಸೇರಿದಂತೆ 12 ಭಾಷೆಗಳಲ್ಲಿ ಜಿಯೋ ಸಿನೆಮಾದಲ್ಲಿ ಅಭಿಮಾನಿಗಳು ಮತ್ತು ವೀಕ್ಷಕರಿಗೆ ಉಚಿತವಾಗಿ ಪ್ರಸಾರ ಮಾಡಲಾಗುವುದು. ವಿಶ್ವದ ಅತ್ಯಂತ ಸ್ಫೋಟಕ ಆರಂಭಿಕ ಆಟಗಾರರಲ್ಲಿ ಒಬ್ಬರಾದ ವೀರೇಂದ್ರ ಸೆಹ್ವಾಗ್ ಅವರು ಜಿಯೋ ಸಿನೆಮಾದಲ್ಲಿ ಹೊಸದಾಗಿ ಪರಿಚಯಿಸಲಾದ ಹರಿಯಾನ್ವಿ ಭಾಷಾ ಪ್ರಸ್ತುತಿಯನ್ನು ಮುನ್ನಡೆಸಲಿದ್ದಾರೆ. ಅಜಯ್ ಜಡೇಜಾ ಗುಜರಾತಿ ಭಾಷಾ ತಜ್ಞರಾಗಿ ಪದಾರ್ಪಣೆ ಮಾಡಲಿದ್ದಾರೆ. ಐಪಿಎಲ್ ಚಾಂಪಿಯನ್ ಶೇನ್ ವ್ಯಾಟ್ಸನ್ ಮತ್ತು ನ್ಯೂಜಿಲೆಂಡ್ ಮಾಜಿ ಕೋಚ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಮಾಜಿ ಕ್ರಿಕೆಟ್ ನಿರ್ದೇಶಕ ಮೈಕ್ ಹೆಸ್ಸನ್ ಅವರು ಸೆಹ್ವಾಗ್ ಮತ್ತು ಜಡೇಜಾ ಜತೆಗೆ ಜಿಯೋ ಸಿನೆಮಾದ ಕಾಮೆಂಟರಿ ತಂಡಕ್ಕೆ ಮತ್ತೊರ್ವ ಹೊಸ ಸೇರ್ಪಡೆ ಆಗಿದ್ದಾರೆ. ಡೆಲ್ಲಿ ಡೇರ್ ಡೆವಿಲ್ಸ್ ಮತ್ತು ಕಿಂಗ್ಸ್ ಇಲೆವೆನ್ ಪಂಜಾಬ್ ಪರ ಆಡಿದ ನಂತರ ಸೆಹ್ವಾಗ್ ಪಂಜಾಬ್ ಫ್ರಾಂಚೈಸಿಯೊಂದಿಗೆ ಮಾರ್ಗದರ್ಶಕನ ಪಾತ್ರವನ್ನು ವಹಿಸಿಕೊಂದಡಿದ್ದರು. ಅಭಿಮಾನಿಗಳು ಈ ಬಾರಿ ಹರಿಯಾನ್ವಿ ಭಾಷೆಯಲ್ಲಿ ಅವರ ಹಾಸ್ಯಮಯ ಮಾತುಗಾರಿಕೆಗೆ ಸಾಕ್ಷಿಯಾಗಲಿದ್ದಾರೆ. 2012ರ ಐಪಿಎಲ್ ಫೈನಲ್ ಪಂದ್ಯಶ್ರೇಷ್ಠ ಮಾನ್ವಿಂದರ್ ಬಿಸ್ಲಾ ಕೂಡ ಸೆಹ್ವಾಗ್ ಅವರೊಂದಿಗೆ ಹರಿಯಾನ್ವಿ ಕಾಮೆಂಟರಿ ಯಲ್ಲಿ ಸಾಥ್ ನೀಡಲಿದ್ದಾರೆ. ರಾಜಸ್ಥಾನ ರಾಯಲ್ಸ್ ಮತ್ತು ಚೆನ್ನೈ ಸೂಪರ್ ಕಿಂಗ್ಸ್ ನೊಂದಿಗೆ ಪ್ರಶಸ್ತಿಗಳನ್ನು ಗೆದ್ದ ನಂತರ, ವ್ಯಾಟ್ಸನ್ ಜಿಯೋ ಸಿನೆಮಾದೊಂದಿಗೆ ಟಾಟಾ ಐಪಿಎಲ್ ನಲ್ಲಿ ತಮ್ಮ ಅದ್ಭುತ ಪ್ರಯಾಣವನ್ನು ಮುಂದುವರಿಸಿದ್ದಾರೆ. ಸನ್ ರೈಸರ್ಸ್ ಹೈದರಾಬಾದ್ ವಿರುದ್ಧದ 2018ರ ಫೈನಲ್ ನಲ್ಲಿ ಸಿಎಸ್ ಕೆ ಪರ 117 ರನ್ ಗಳಿಸಿದ್ದು ಐಪಿಎಲ್ ನ ಅತ್ಯುತ್ತಮ ಇನಿಂಗ್ಸ್ ಗಳಲ್ಲಿ ಒಂದಾಗಿದೆ.

ಟಾಟಾ ಐಪಿಎಲ್ 2023ರ ಆಳವಾದ ಮತ್ತು ವ್ಯಾಪಕ ಪ್ರಸ್ತುತಿಗೆ ನಮ್ಮ ವೀಕ್ಷಕರು, ಜಾಹೀರಾತುದಾರರು ಮತ್ತು ಕ್ರಿಕೆಟ್ ಅಭಿಮಾನಿಗಳಿಂದ ನಾವು ಪಡೆದ ಪ್ರತಿಕ್ರಿಯೆಯು ಹೃದಯಸ್ಪರ್ಶಿಯಾಗಿದೆ ಮತ್ತು ಟಾಟಾ ಐಪಿಎಲ್ 2024 ಗಾಗಿ ನಮ್ಮ ಆವಿಷ್ಕಾರಗಳು ಮತ್ತು ಉಪಕ್ರಮಗಳನ್ನು ನಾವು ದ್ವಿಗುಣಗೊಳಿಸುತ್ತಿದ್ದೇವೆ. ಈ ಋತುವಿನಲ್ಲಿ ನಾವು ಹೀರೋ ಕ್ಯಾಮ್, ವೈರಲ್ ವೀಕೆಂಡ್ಸ್ ಮತ್ತು ಅಪ್ರತಿಮ ವೀರೇಂದ್ರ ಸೆಹ್ವಾಗ್ ಅವರ ಹರಿಯಾನ್ವಿ ಕಾಮೆಂಟರಿಯ ಪರಿಚಯದಂತಹ ವಿಶಿಷ್ಟ ಪ್ರಸ್ತಾಪಗಳ ಮೂಲಕ ದೊಡ್ಡಹೆಸರುಗಳೊಂದಿಗೆ ಅನುಭವವನ್ನು ಹೆಚ್ಚಿಸುತ್ತಿದ್ದೇವೆ, ಪ್ರಮುಖ, ಸಾಂದರ್ಭಿಕ ಮತ್ತು ಕುತೂಹಲಕಾರಿ ಅಭಿಮಾನಿಗಳೊಂದಿಗೆ ಆಳವಾದ ತೊಡಗಿಸಿಕೊಳ್ಳುವಿಕೆಯನ್ನು ಮುಂದುವರಿಸುತ್ತೇವೆ ಎಂದು ವಯಾಕಾಮ್18ನ ಕ್ರೀಡಾ ಮುಖ್ಯಸ್ಥ ಸಿದ್ಧಾರ್ಥ್ ಶರ್ಮಾ ಹೇಳಿದರು. ನಮ್ಯತೆ ಮತ್ತು ಡಿಜಿಟಲ್ ನೀಡುವ ಆಯ್ಕೆಗಳ ಲಾಭವನ್ನು ಪಡೆದುಕೊಂಡು, ಜಿಯೋ ಸಿನೆಮಾ ಈ ವರ್ಷ ಒಟ್ಟು 18 ಫೀಡ್ ಗಳನ್ನು ನೀಡುತ್ತದೆ. ಇದರಲ್ಲಿ ಕಳೆದ ವರ್ಷದ ಜನಪ್ರಿಯ ಇನ್ಸೈಡರ್ಸ್ ಮತ್ತು ಹ್ಯಾಂಗ್‌ಔಟ್ ಫೀಡ್ ಗಳು, ಹೊಸದಾಗಿ ಪರಿಚಯಿಸಲಾದ ಹೀರೋ ಕ್ಯಾಮ್ ಫೀಡ್ ಮತ್ತು ವೈರಲ್ ವೀಕೆಂಡ್ ಎಂಬ ಹೊಸ ಪ್ರಸ್ತುತಿಯೂ ಸೇರಿದೆ.

## ಮೈಕಾಂತಿಗೆ ಬೆಸ್ಟ್ ಈ ಯೋಗ

### ಬ್ಯೂಟಿ ಟಿಪ್ಸ್

ಫಿಟ್ ಆದ ದೇಹ ಮತ್ತು ಸುಂದರ ತ್ವಚೆಯನ್ನು ಹೊಂದುವ ಆಸೆ ಎಲ್ಲರಿಗೂ ಇರುತ್ತದೆ. ಇದಕ್ಕೆ ನಿಮ್ಮ ಜೀವನ ಶೈಲಿಯನ್ನು ಬದಲಾಯಿಸಬೇಕು, ಜೊತೆಗೆ ಈ ಯೋಗಗಳನ್ನು ಪ್ರತಿದಿನ ಅಭ್ಯಾಸ ಮಾಡಬೇಕು. ಈ ಯೋಗಗಳು ನಿಮ್ಮ ಚರ್ಮದ ಆರೋಗ್ಯ ಹೆಚ್ಚಿಸಿ ಉತ್ತಮವಾದ ಮೈಕಾಂತಿಯನ್ನು ನೀಡುತ್ತದೆ.

**ಸರ್ವಾಂಗಾಸನ:** ನಿಮ್ಮ ಬೆನ್ನಿನ ಮೇಲೆ ಮಲಗಿ ನಿಮ್ಮ ದೇಹವನ್ನು ನೆಲದಿಂದ ಮೇಲಕೆತ್ತಿ ನಿಮ್ಮ ದೇಹವನ್ನು ನಿಮ್ಮ ಹೆಗಲ ಮೇಲೆ ಇಡೀ ದೇಹವನ್ನು ನಿಲ್ಲಿಸಿ. ನಿಮ್ಮ ಬೆನ್ನನ್ನು ಬೆಂಬಲಿಸಲು ನಿಮ್ಮ ಕೈಗಳನ್ನು ಬಳಸಿ ಆಳವಾಗಿ ಉಸಿರಾಡಿ 30 ಸೆಕೆಂಡುಗಳ ಕಾಲ ಹಾಗೇ ಇರಿ. ಇದು ರಕ್ತದ ಹರಿವನ್ನು ನಿಯಂತ್ರಿಸುವ ಮೂಲಕ ತ್ವಚೆಯ ಸೌಂದರ್ಯವನ್ನು ಹೆಚ್ಚಿಸುತ್ತದೆ ಮೊಡವೆ, ಕಲೆಗಳು, ಸುಕ್ಕುಗಳನ್ನು ನಿವಾರಿಸುತ್ತದೆ.

**ಹಲಾಸನ:** ನಿಮ್ಮ ಬೆನ್ನಿನ ಮೇಲೆ ಮಲಗಿ ನಿಧಾನವಾಗಿ ನಿಮ್ಮ ಕಾಲುಗಳನ್ನು ನೆಲದಿಂದ ಮೇಲಕ್ಕೆತ್ತಿ ಮತ್ತು ಕಾಲುಗಳು ನೆಲ ಮುಟ್ಟುವಂತೆ ನಿಮ್ಮ ತಲೆಯ ಹಿಂದೆ ಇಳಿಸಿ. ಈ ಭಂಗಿಯಲ್ಲಿ 15 ಸೆಕೆಂಡುಗಳ ಕಾಲ ಇರಿಸಿ. ಇದು ಜೀರ್ಣಾಂಗ ವ್ಯವಸ್ಥೆ ಮತ್ತು ಚಯಾಪಚಯವನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಇದು ನಿಮ್ಮ ಚರ್ಮವನ್ನು ಸುಂದರವಾಗಿಸಿ ಹೊಳೆಯುವಂತೆ ಮಾಡುತ್ತದೆ.



**ಮತ್ಸ್ಯಾಸನ :** ನೆಲದ ಮೇಲೆ ಮಲಗಿ ನಿಮ್ಮ ಕೈಗಳನ್ನು ನಿಮ್ಮ ಸೊಟಂದ ಕೆಳಗೆ ಇರಿಸಿ, ನಿಮ್ಮ ತಲೆ ಮತ್ತು ಸೊಂಟದ ನಡುವೆ ಕಮಾನಿನ ರೀತಿ ಮಾಡಿ ನಿಮ್ಮ ದೇಹವನ್ನು ಮೇಲಕ್ಕೆತ್ತಿ. ಇದನ್ನು 1 ನಿಮಿಷ ಮಾಡಿ. ಇದು ನಿಮ್ಮ ಹಾರ್ಮೋನ್ ಗ್ರಂಥಿಗಳ ಕಾರ್ಯನಿರ್ವಹಣೆಯನ್ನು ಸುಧಾರಿಸುವುದರ ಮೂಲಕ ಚರ್ಮವನ್ನು ಹೊಳೆಯುವಂತೆ ಮಾಡುತ್ತದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಆರ್ಥಿಕವಾಗಿ ಅನುಕೂಲ, ಆರೋಗ್ಯ ಸಮಸ್ಯೆ ಬಾಧಿಸುವುದು, ಮಾನಸಿಕ ನೋವು

**ವೃಷಭ:** ಅಧಿಕ ಖರ್ಚು, ಮಿತ್ರರೊಂದಿಗೆ ಮೋಜು ಮಸ್ತಿ, ನೆರೆಹೊರೆಯವರಿಂದ ಅನುಕೂಲ

**ಮಿಥುನ:** ಆರ್ಥಿಕ ಸಮಸ್ಯೆಯಿಂದ ಮುಕ್ತಿ, ಸ್ವಂತ ವ್ಯವಹಾರದಲ್ಲಿ ಪ್ರಗತಿ, ಮಿತ್ರರಿಂದ ಉದ್ಯೋಗ ಲಾಭ

**ಕಟಕ:** ಅಧಿಕ ಖರ್ಚು, ಉದ್ಯೋಗ ನಷ್ಟ, ನಿದ್ರಾಭಂಗ

**ಸಿಂಹ:** ದೂರ ಪ್ರಯಾಣ, ಪ್ರಯಾಣದಲ್ಲಿ ವಸ್ತುಗಳು ಕಳವು, ತಂದೆ ಮಕ್ಕಳಲ್ಲಿ ಮನಸ್ತಾಪ, ಗೌರವಕ್ಕೆ ಧಕ್ಕೆ

**ಕನ್ಯಾ:** ಅನಿರೀಕ್ಷಿತ ಸ್ನೇಹಿತರ ಭೇಟಿ, ಉದ್ಯೋಗ ಸ್ಥಳದಲ್ಲಿ ಕಿರಿಕಿರಿ, ಸಂಗಾತಿಯಿಂದ ಅನುಕೂಲ

**ತುಲಾ:** ಮಹಿಳೆಯರಿಂದ ನೋವು, ದಾಂಪತ್ಯದಲ್ಲಿ ವೈಮನಸ್ಸು, ನಿದ್ರಾಭಂಗ, ಭವಿಷ್ಯದ ಚಿಂತೆ,

**ವೃಶ್ಚಿಕ:** ಋಣ ರೋಗ ಬಾಧೆಗಳಿಂದ ಮುಕ್ತಿ, ಉದ್ಯೋಗ ಒತ್ತಡ, ಸೌಂದರ್ಯವರ್ಧಕ ವಸ್ತುಗಳ ಖರೀದಿ, ಅಧಿಕ ನಷ್ಟ

**ಧನಸ್ಸು :** ಸಾಲದ ಚಿಂತೆ, ಸಾಲ ಪಡೆಯುವ ಆಲೋಚನೆ, ಉದ್ಯೋಗ ಸ್ಥಳದಲ್ಲಿ ಶತ್ರು ಕಾಟ, ತಂದೆಯಿಂದ ಲಾಭ

**ಮಕರ:** ಪಾಲುದಾರಿಕೆಯಲ್ಲಿ ಮನಸ್ತಾಪ, ಪ್ರಯಾಣದಲ್ಲಿ ಅಡೆತಡೆ, ಸ್ಥಳ ಬದಲಾವಣೆಯಿಂದ ಸಮಸ್ಯೆ

**ಕುಂಭ:** ಪ್ರೀತಿ ಪ್ರೇಮದ ವಿಷಯಗಳಲ್ಲಿ ಸಮಸ್ಯೆ, ದಾಂಪತ್ಯದಲ್ಲಿ ಅಹಂಭಾವ, ಸ್ನೇಹಿತರಿಂದ ನೆರವು

**ಮೀನ:** ಮಕ್ಕಳ ನಡವಳಿಕೆಯಲ್ಲಿ ಸಂಶಯ, ದರ್ಪದ ಮಾತಿನಿಂದ ಶತ್ರು ಅಧಿಕ, ವಾಹನಗಳಿಂದ ತೊಂದರೆ

## ವಿಶ್ವಕವನ ದಿನ




ಮಾರ್ಚ್ 21 ರಂದು ವಿಶ್ವ ಕವನ ದಿನವನ್ನು ಆಚರಿಸಲಾಗುವುದು. ವಿಶ್ವಸಂಸ್ಥೆಯ ಶೈಕ್ಷಣಿಕ, ವೈಜ್ಞಾನಿಕ ಮತ್ತು ಸಾಂಸ್ಕೃತಿಕ ಸಂಸ್ಥೆ (ಯುನೆಸ್ಕೋ) 1999 ರಲ್ಲಿ ಈ ದಿನವನ್ನು ಸ್ಥಾಪಿಸಿತು. ಕವಿತೆಯು ಓದುಗರ ಭಾವನೆ ಮತ್ತು ಕಲ್ಪನೆಯನ್ನು ಹೊರಹೊಮ್ಮಿಸಲು ಲಯ ಮತ್ತು ಚಿತ್ರಣವನ್ನು ಬಳಸುತ್ತದೆ. ದೀರ್ಘ ಮತ್ತು ಚಿಕ್ಕ ಉಚ್ಚಾರಾಂಶಗಳ ಮೀಟರ್ ಎಂದು ಕರೆಯಲ್ಪಡುವದನ್ನು ಬಳಸಿಕೊಂಡು ಕಾವ್ಯವು ಪ್ರಾಸವನ್ನು ಮಾಡಬಹುದು. 'ಮುಕ್ತ ಪದ್ಯ' ಎಂದು ಕರೆಯಲ್ಪಡುವ ಕೆಲವು ಕವನಗಳು ಪ್ರಾಸ ಅಥವಾ ಮೀಟರ್ಗಳನ್ನು ಬಳಸುವುದಿಲ್ಲ. ಕವನಗಳನ್ನು ಚರಣಗಳಾಗಿ ವಿಭಜಿಸಲಾಗಿದೆ, ಅವು ಪ್ಯಾರಾಗಳಂತೆ ಮತ್ತು 12 ಸಾಲುಗಳವರೆಗೆ ಉದ್ದವಾಗಿರಬಹುದು. ಮೊದಲ ತಿಳಿದಿರುವ ಕವಿತೆ 4,000 ವರ್ಷಗಳ ಹಿಂದೆ ಬ್ಯಾಬಿಲೋನ್ನಲ್ಲಿ ಕಾಣಿಸಿಕೊಂಡಿದೆ ಎಂದು ನಾವು ನಂಬುತ್ತೇವೆ. ಇಂದು, ಹೈಕುಗಳು, ಲಿಮೆರಿಕ್ಸ್, ಸಾನೆಟ್ಗಳು ಮತ್ತು ಲಾವಣಿಗಳನ್ನು ಒಳಗೊಂಡಂತೆ ಅಸಂಖ್ಯಾತ ರೀತಿಯ ಕವಿತೆಗಳು ಆನಂದಿಸಲು ಲಭ್ಯವಿದೆ. ಕಾವ್ಯವು ಅಭಿವ್ಯಕ್ತಿಯ ಒಂದು ಸುಂದರ ರೂಪ. ಕಾವ್ಯದ ಅಮೂರ್ತತೆಯಂತಹ ಭಾವನೆಗಳು ಮತ್ತು ಭಾವನೆಗಳ ಮಹಾಪೂರವನ್ನು ಬೇರೆ ಯಾವುದೇ ಸಾಹಿತ್ಯವು ಸೃಷ್ಟಿಸುವುದಿಲ್ಲ. ಕ್ರಿ.ಪೂ. 2000 ರ ಸಮಯದಲ್ಲಿ ಗಿಲ್ಗಮೆಶ್ ಮಹಾಕಾವ್ಯದೊಂದಿಗೆ ಮೊದಲಿನ ಕಾವ್ಯವು ಹೊರಹೊಮ್ಮಿದೆ ಎಂದು ನಂಬಲಾಗಿದೆ, ಆದರೆ ಸಾಕ್ಷರತೆಯ ಹರಡುವಿಕೆಗೆ ಮುಂಚೆಯೇ ಕಾವ್ಯವು ಅಸ್ತಿತ್ವದಲ್ಲಿತ್ತು. ವಿಭಿನ್ನ ರೀತಿಯ ಕಾವ್ಯಗಳು ವಿಭಿನ್ನ ಯುಗಗಳಲ್ಲಿ ಪ್ರವೃತ್ತಿಯನ್ನು ಹೊಂದಿವೆ ಮತ್ತು ರೂಪಾಂತರಗಳಿಗೆ ಒಳಗಾಗಿವೆ ವಿಶ್ವ ಕಾವ್ಯ ದಿನವನ್ನು ಪ್ರತಿ ವರ್ಷ ಮಾರ್ಚ್ 21 ರಂದು ಆಚರಿಸಲಾಗುತ್ತದೆ, ಎಲ್ಲಾ ಸಂಸ್ಕೃತಿಗಳ ಜನರು ಗುರುತಿಸಬಹುದಾದ ಭಾಷಾ ಅಭಿವ್ಯಕ್ತಿಯನ್ನು ಆಚರಿಸಲಾಗುತ್ತದೆ. ಪ್ರತಿ ರಾಷ್ಟ್ರದ ಇತಿಹಾಸದಲ್ಲಿ ಕಾವ್ಯವನ್ನು ಕಾಣಬಹುದು ಮತ್ತು ಹಂಚಿಕೊಂಡ ಮೌಲ್ಯಗಳು ಮತ್ತು ಸಾಮಾನ್ಯ ಮಾನವೀಯತೆಯ ಅಡಿಯಲ್ಲಿ ನಮ್ಮನ್ನು ಒಟ್ಟುಗೂಡಿಸುತ್ತದೆ. ಅತ್ಯಂತ ಮೂಲಭೂತವಾದ ಕವಿತೆಗಳು ಸಂಭಾಷಣೆಯನ್ನು ಪ್ರಚೋದಿಸುವ ಶಕ್ತಿಯನ್ನು ಹೊಂದಿವೆ. ರಾಷ್ಟ್ರೀಯ, ಪ್ರಾದೇಶಿಕ ಮತ್ತು ಅಂತರಾಷ್ಟ್ರೀಯ ಕಾವ್ಯ ಚಳುವಳಿಗಳಿಗೆ ತಾಜಾ ಮನ್ನಣೆ ಮತ್ತು ಪ್ರಚೋದನೆಯನ್ನು ನೀಡಲು ಪ್ಯಾರಿಸ್ನಲ್ಲಿ ನಡೆದ ಅದರ 30 ನೇ ಸಾಮಾನ್ಯ ಸಮ್ಮೇಳನದ ಸಂದರ್ಭದಲ್ಲಿ 1999 ರಲ್ಲಿ ಯುನೆಸ್ಕೋ ಈ ದಿನವನ್ನು ಪ್ರಸ್ತಾಪಿಸಿತು ಮತ್ತು ಅಳವಡಿಸಿಕೊಂಡಿದೆ. ಪ್ರಪಂಚದಾದ್ಯಂತ ಕಾವ್ಯದ ಆಚರಣೆಯನ್ನು ಪ್ರೇರೇಪಿಸಲು, ಅಳಿವಿನಂಚಿನಲ್ಲಿರುವ ಭಾಷೆಗಳನ್ನು ಸಂರಕ್ಷಿಸಲು ಮತ್ತು ಈ ದಿನದ ಮೂಲಕ ಕಾವ್ಯದ ಅಭಿವ್ಯಕ್ತಿಯನ್ನು ಉತ್ತೇಜಿಸಲು ಸಂಸ್ಥೆ ಆಶಿಸಿದೆ. ಹಿಂದಿನ ಮತ್ತು ಪ್ರಸ್ತುತ ಎರಡೂ ಕವಿಗಳನ್ನು ಗೌರವಿಸಲಾಗುತ್ತದೆ ಮತ್ತು ಕವನ ವಾಚನದ ಮೌಖಿಕ ಸಂಪ್ರದಾಯಗಳನ್ನು ಪುನರುಜ್ಜೀವನಗೊಳಿಸಲಾಗುತ್ತದೆ.

ಸಂಜೆ ಮುಗಿಲು
ಗುರುವಾರ
21.3.2024


# ಬಿಜೆಪಿಗೆ ಮರು ಸೇರ್ಪಡೆಯಾದ ತಮಿಳಿಸೈ ಸೌಂದರರಾಜನ್

**ಚೆನ್ನೈ:** ತೆಲಂಗಾಣದ ಮಾಜಿ ರಾಜ್ಯಪಾಲೆ ತಮಿಳಿಸೈ ಸೌಂದರರಾಜನ್ ತಮಿಳುನಾಡು ಬಿಜೆಪಿ ರಾಜ್ಯಾಧ್ಯಕ್ಷ ಕೆ.ಅಣ್ಣಾಮಲೈ ಸಮ್ಮುಖದಲ್ಲಿ ಬಿಜೆಪಿಗೆ ಮರು ಸೇರ್ಪಡೆಯಾಗಿದ್ದಾರೆ. ರಾಜ್ಯಪಾಲ ಹುದ್ದೆಯನ್ನು ಹೊಂದಿದ್ದ ತಮಿಳಿಸೈ ಸೌಂದರರಾಜನ್ ಬಿಜೆಪಿಗೆ ಸೇರ್ಪಡೆಯಾಗುತ್ತಿರುವ ಕುರಿತು ಎಡಪಕ್ಷಗಳು ಹಾಗೂ ಡಿಎಂಕೆ ಪಕ್ಷದ ಟೀಕೆಯನ್ನು ಉಲ್ಲೇಖಿಸಿದ ಅಣ್ಣಾಮಲೈ, ಉನ್ನತ ಮಟ್ಟದ ಹುದ್ದೆಗಳನ್ನು ತೊರೆದು, ಮತ್ತೆ ಸಾಮಾನ್ಯ ವ್ಯಕ್ತಿಗಳಂತೆ ಸಾರ್ವಜನಿಕರಿಗಾಗಿ ಕೆಲಸ ಮಾಡುವುದು ಬಿಜೆಪಿಯಲ್ಲಿ ಮಾತ್ರ ಸಾಧ್ಯ ಎಂದರು. ಬಿಜೆಪಿಯನ್ನು ಹೊರತುಪಡಿಸಿ ಇತರ ರಾಜಕೀಯ ಪಕ್ಷಗಳ ನಾಯಕರು ಉನ್ನತಾಧಿಕಾರಗಳನ್ನು ತೊರೆಯುವುದಿಲ್ಲ. ಅವರಿಗೆ ರಾಜಕೀಯವೆಂದರೆ ಉನ್ನತ ಅಧಿಕಾರಗಳನ್ನು ಪಡೆಯುವ ಸಾಧನ ಮಾತ್ರ ಎಂದು ಅವರು ಹೇಳಿದರು. ಆಕೆ ರಾಜ್ಯಪಾಲೆಯಾಗಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದರು. ಅಂತಹ ಹುದ್ದೆಯನ್ನು ತೊರೆದು ಮತ್ತೆ ರಾಜಕೀಯಕ್ಕೆ ಸೇರ್ಪಡೆಯಾಗುತ್ತಿರುವುದು ಅವರಿಗೆ ಜನರ ಬಗೆಗಿರುವ ಪ್ರೀತಿಯನ್ನು ತೋರಿಸುತ್ತದೆ ಎಂದರು. ಅವರು ಮತ್ತೆ ಬಿಜೆಪಿಯನ್ನು ಸೇರ್ಪಡೆಯಾಗಿರುವುದು, ಅವರಿಗೆ ಪಕ್ಷದ ಬಗೆಗಿರುವ ಬದ್ಧತೆಯನ್ನು ತೋರಿಸುತ್ತಿದೆ. ಸತತ ಮೂರನೆಯ ಬಾರಿಗೆ ಪ್ರಧಾನಿಯಾಗಲಿರುವ ನರೇಂದ್ರ ಮೋದಿಯವರ ಕೈ ಬಲಪಡಿಸುವಲ್ಲಿ ಅವರ ದೃಢ ನಿಶ್ಚಯದ ಕೆಲಸವು ಕೊಡುಗೆ ನೀಡುವಂತಾಗಲಿ ಎಂದು ಅಣ್ಣಾಮಲೈ ಹೇಳಿದರು.



# ಸುಲಭ ಗೆಲುವು ಸಾಧಿಸಿದ ಟ್ರಂಪ್, ಬೈಡನ್

**ನ್ಯೂಯಾರ್ಕ್:** ಕಾನ್ಸಾಸ್ನಲ್ಲಿ ಮಂಗಳವಾರ ನಡೆದ ಅಧ್ಯಕ್ಷೀಯ ಚುನಾವಣೆಯಲ್ಲಿ ಬಿಡೆನ್ ಮತ್ತು ಡೊನಾಲ್ಡ್ ಟ್ರಂಪ್ ತಮ್ಮ ಪಕ್ಷಗಳ ಪ್ರಾಥಮಿಕ ಚುನಾವಣೆಯಲ್ಲಿ ಜಯಗಳಿಸಿದ್ದಾರೆ, ನವೆಂಬರ್ನಲ್ಲಿ ನಡೆಯಲಿರುವ ಅಧ್ಯಕ್ಷೀಯ ಚುನಾವಣೆಯಲ್ಲಿ ಮರು ಚುನಾವಣೆಗೆ ತಮ್ಮ ಗೆಲುವನ್ನು ಮುಂದುವರಿಸುತ್ತಿದ್ದಂತೆ ಹೆಚ್ಚಿನ ಪ್ರತಿನಿಧಿಗಳನ್ನು ಗಳಿಸಿದ್ದಾರೆ. ಡೆಮಾಕ್ರಟಿಕ್ ಪಕ್ಷದ ಬಿಡೆನ್ ಮತ್ತು ರಿಪಬ್ಲಿಕನ್ ಪಕ್ಷದ ಟ್ರಂಪ್ ಕೂಡ ಮಂಗಳವಾರ ಓಹಿಯೋ ಮತ್ತು ಇಲಿನಾಯ್ಸ್ನಲ್ಲಿ ನಡೆದ ಪ್ರಾಥಮಿಕ ಚುನಾವಣೆಯಲ್ಲಿ ಸುಲಭವಾಗಿ ಗೆದ್ದಿದ್ದಾರೆ. ಫ್ಲೋರಿಡಾದ ರಿಪಬ್ಲಿಕನ್ ಪ್ರೈಮರಿ ಚುನಾವಣೆಯಲ್ಲೂ ಟ್ರಂಪ್ ಗೆಲುವು ಸಾಧಿಸಿದ್ದಾರೆ. ಫ್ಲೋರಿಡಾದಲ್ಲಿ ಬಿಡೆನ್ ಗೆಲ್ಲಲು ಯಾವುದೇ ಸ್ಪರ್ಧೆ ಇರಲಿಲ್ಲ, ಏಕೆಂದರೆ ಅಲ್ಲಿನ ಡೆಮೋಕ್ರಾಟ್ಗಳು ತಮ್ಮ ಪ್ರಾಥಮಿಕ ಚುನಾವಣೆಯನ್ನು ರದ್ದುಗೊಳಿಸಿದರು ಮತ್ತು ತಮ್ಮ ಎಲ್ಲಾ 224 ಪ್ರತಿನಿಧಿಗಳನ್ನು ಅವರಿಗೆ ನೀಡಲು ನಿರ್ಧರಿಸಿದರು, ಇದು ಹಾಲಿ ಅಧ್ಯಕ್ಷರಿಗೆ ಆದ್ಯತೆಯನ್ನು ಹೊಂದಿದೆ. ಟ್ರಂಪ್ ಮತ್ತು ಬಿಡೆನ್ ಮಂಗಳವಾರ ಅರಿಜೋನಾದಲ್ಲಿ ಪ್ರಾಥಮಿಕ ಚುನಾವಣೆಗಳನ್ನು ಸುಲಭವಾಗಿ ಗೆಲ್ಲುವ ನಿರೀಕ್ಷೆಯಿದೆ, ಕಳೆದ ವಾರ ತಮ್ಮ ಪಕ್ಷಗಳ ಸಂಭಾವ್ಯ ನಾಮನಿರ್ದೇಶಿತರಾದ ನಂತರ ಹೆಚ್ಚಿನ ಬೆಂಬಲವನ್ನು ಗಳಿಸಿದ್ದಾರೆ. ಅಧ್ಯಕ್ಷ ಸ್ಥಾನದ ಹೊರಗಿನ ಇತರ ಜನಾಂಗಗಳು ರಾಷ್ಟ್ರೀಯ ರಾಜಕೀಯ ಮನಸ್ಥಿತಿಯ ಒಳನೋಟವನ್ನು ನೀಡಬಹುದು. ಓಹಿಯೋದ ರಿಪಬ್ಲಿಕನ್ ಸೆನೆಟ್ ಪ್ರಾಥಮಿಕ ಚುನಾವಣೆಯಲ್ಲಿ, ಟ್ರಂಪ್ ಬೆಂಬಲಿತ ಉದ್ಯಮಿ ಬರ್ನಿ ಮೊರೆನೊ ಇಬ್ಬರು ಪ್ರತಿಸ್ಪರ್ಧಿಗಳಾದ ಓಹಿಯೋ ಸ್ಟೇಟ್ ಸೆಕ್ರೆಟರಿ ಫ್ರಾಂಕ್ ಲಾರೋಸ್ ಮತ್ತು ಮ್ಯಾಟ್ ಡೋಲನ್ ಅವರನ್ನು ಸೋಲಿಸಿದರು.



# ಅಮೆರಿಕದಲ್ಲಿ ಭಾರತೀಯ ಮೂಲದ ವಿದ್ಯಾರ್ಥಿ 2 ವಾರಗಳಿಂದ ನಾಪತ್ತೆ!

**ವಾಷಿಂಗ್ಟನ್:** ಭಾರತೀಯ ಮೂಲದ ವಿದ್ಯಾರ್ಥಿಯೊಬ್ಬ ಕಳೆದ 2 ವಾರಗಳಿಂದ ಅಮೆರಿಕದಲ್ಲಿ ನಾಪತ್ತೆಯಾಗಿದ್ದು, ಆತನ ಕುಟುಂಬಸ್ಥರಿಗೆ ಸುಲಿಗೆ ಬೆದರಿಕೆ ಬಂದಿರುವುದಾಗಿ ವರದಿಯಾಗಿದೆ. ಅಮೆರಿಕದ ಕ್ಲೀವ್ಲ್ಯಾಂಡ್ ವಿಶ್ವವಿದ್ಯಾನಿಲಯದಲ್ಲಿ ಮಾಹಿತಿ ತಂತ್ರಜ್ಞಾನದಲ್ಲಿ (ಐಟಿ) ಸ್ನಾತಕೋತ್ತರ ಪದವಿಯನ್ನು ಪಡೆಯುತ್ತಿರುವ ಅಬ್ದುಲ್ ಮೊಹಮ್ಮದ್ ನಾಪತ್ತೆಯಾಗಿದ್ದಾರೆ. ಅವರು ಕೊನೆಯದಾಗಿ ಮಾರ್ಚ್ 7 ರಂದು ಕಾಣಿಸಿಕೊಂಡಿದ್ದರು. ಬಳಿಕ ಅವರ ತಂದೆ ಮೊಹಮ್ಮದ್ ಸಲೀಮ್ಗೆ ಒಂದು ವಾರದ ಬಳಿಕ ಅಪರಿಚಿತ ಸಂಖ್ಯೆಯಿಂದ ಕರೆ ಬಂದಿದ್ದಾಗಿ ತಿಳಿಸಿದ್ದಾರೆ. ಕರೆ ಮಾಡಿದ ವ್ಯಕ್ತಿ ತಾವು



ಅಬ್ದುಲ್ನನ್ನು ಅಪಹರಿಸಿರುವುದಾಗಿ ಹೇಳಿದ್ದು, ಆತನನ್ನು ಸುರಕ್ಷಿತವಾಗಿ ಮರಳಿಸಲು 1,200 ಡಾಲರ್ಗೆ ಬೇಡಿಕೆ ಇಟ್ಟಿದ್ದಾರೆ. ಒಂದು ವೇಳೆ ಹಣ ನೀಡದೇ ಹೋದರೆ ಅಬ್ದುಲ್ನ ಕಿಡ್ನಿ ಮಾರಾಟ ಮಾಡುವುದಾಗಿ ಬೆದರಿಕೆ ಹಾಕಿದ್ದಾರೆ. ಅಮೆರಿಕದಲ್ಲಿರುವ ಅಬ್ದುಲ್ ಅವರ ಸಂಬಂಧಿಕರು ಮಾರ್ಚ್ 8 ರಂದು ಕ್ಲೀವ್ಲ್ಯಾಂಡ್ ಪೊಲೀಸರಿಗೆ ನಾಪತ್ತೆ ದೂರನ್ನು ನೀಡಿದ್ದಾರೆ. ಅಬ್ದುಲ್ಗಾಗಿ ಲುಕ್ಔಟ್ ನೋಟಿಸ್ ನೀಡಲಾಗಿದೆ. ಕುಟುಂಬವು ಮಾರ್ಚ್ 18 ರಂದು ಚಿಕಾಗೋದಲ್ಲಿರುವ ಭಾರತೀಯ ರಾಯಭಾರ ಕಚೇರಿಗೆ ತೆರಳಿ ಅಬ್ದುಲ್ ಪತ್ತೆಗೆ ನೆರವು ಕೋರಿದ್ದಾರೆ. ಕ್ಲೀವ್ಲ್ಯಾಂಡ್ ಪೊಲೀಸರು ಇದೀಗ ಅಬ್ದುಲ್ ನಾಪತ್ತೆ ಬಗ್ಗೆ ತನಿಖೆ ನಡೆಸುತ್ತಿದ್ದಾರೆ. ಈ ಬಗ್ಗೆ ಮಾಧ್ಯಮಗಳಿಗೆ ತಿಳಿಸಿರುವ ಅಬ್ದುಲ್ ಅವರ ತಾಯಿ ಅಬೇದಾ, ತಾವು ಮಾರ್ಚ್ 7 ರಂದು ಕೊನೆಯ ಬಾರಿಗೆ ತಮ್ಮ ಮಗನ ಜೊತೆ ಮಾತನಾಡಿದ್ದು, ಬಳಿಕ ಯಾವುದೇ ಸಂಪರ್ಕದಲ್ಲಿಲ್ಲ ಎಂದು ಹೇಳಿದ್ದಾರೆ. ತಮ್ಮ ಮಗನನ್ನು ಸುರಕ್ಷಿತವಾಗಿ ಹಿಂದಿರುಗಿಸುವಂತೆ ಕೇಂದ್ರಕ್ಕೆ ಮನವಿ ಮಾಡಿದ್ದಾರೆ.

# ಉಕ್ರೇನ್ ಅಧ್ಯಕ್ಷರ ಜತೆ ಮೋದಿ ಮಾತುಕತೆ

**ದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ರಷ್ಯಾದ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ದೂರವಾಣಿ ಕರೆ ಮಾಡಿ ಮಾತುಕತೆ ನಡೆಸಿದ್ದು, ಇದರ ಬೆನ್ನಲ್ಲೇ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರೊಂದಿಗೆ ಮಾತನಾಡಿದ್ದಾರೆ. ಝೆಲೆನ್ಸ್ಕಿ ಮತ್ತು ಮೋದಿ ವಿವಿಧ ಕ್ಷೇತ್ರಗಳಲ್ಲಿ ಭಾರತ-ಉಕ್ರೇನ್ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಮಾರ್ಗಗಳ ಕುರಿತು ಚರ್ಚಿಸಿದರು. ರಷ್ಯಾ-ಉಕ್ರೇನ್ ರಾಷ್ಟ್ರಗಳ ನಡುವಿನ ಎಲ್ಲಾ ಸಮಸ್ಯೆಗಳ ಆರಂಭಿಕ ಮತ್ತು ಶಾಂತಿಯುತ ಪರಿಹಾರಕ್ಕಾಗಿ ಭಾರತವು ಎಲ್ಲಾ ಪ್ರಯತ್ನಗಳನ್ನು ಬೆಂಬಲಿಸುತ್ತದೆ. ಶಾಂತಿಯುತ ಪರಿಹಾರವನ್ನು ಬೆಂಬಲಿಸಲು ಭಾರತವು ತನ್ನ ವಿಧಾನದಲ್ಲಿ ಎಲ್ಲವನ್ನೂ ಮಾಡುವುದನ್ನು ಮುಂದುವರಿಸುತ್ತದೆ ಎಂದು ಮೋದಿ ಹೇಳಿದ್ದಾರೆ. ಉಕ್ರೇನ್ ಜನರಿಗೆ ಭಾರತದ ನಿರಂತರ ಮಾನವೀಯ ಸಹಾಯವನ್ನು ಅಧ್ಯಕ್ಷ ಝೆಲೆನ್ಸ್ಕಿ ಅವರು ಶ್ಲಾಘಿಸಿದ್ದು, ಉಭಯ ನಾಯಕರು ಸಂಪರ್ಕದಲ್ಲಿರಲು ಒಪ್ಪಿಕೊಂಡರು. ಝೆಲೆನ್ಸ್ಕಿ ಅವರೊಂದಿಗಿನ ಮಾತುಕತೆ ವೇಳೆ ಉಕ್ರೇನ್ ಯುದ್ಧವನ್ನು ಕೊನೆಗೊಳಿಸಲು 'ಸಂವಾದ ಮತ್ತು ರಾಜತಾಂತ್ರಿಕತೆ'ಗೆ ಪ್ರಧಾನಿ ಮೋದಿ ಕರೆ ನೀಡಿದರು. ಭಾರತ-ಉಕ್ರೇನ್ ಪಾಲುದಾರಿಕೆಯನ್ನು ಬಲಪಡಿಸುವ ಕುರಿತು ಅಧ್ಯಕ್ಷ ಝೆಲೆನ್ಸ್ಕಿ ಅವರೊಂದಿಗೆ ಉತ್ತಮ ಸಂವಾದ ನಡೆಸಿದೆ. ಶಾಂತಿಗಾಗಿ ಎಲ್ಲಾ ಪ್ರಯತ್ನಗಳಿಗೆ ಮತ್ತು ನಡೆಯುತ್ತಿರುವ ಸಂಘರ್ಷಕ್ಕೆ ಅಂತ್ಯವನ್ನು ತರಲು ಭಾರತದ ನಿರಂತರ ಬೆಂಬಲವನ್ನು ತಿಳಿಸಿರುವೆ.



# ಕೈ ಸೇರ್ಪಡೆಗೊಂಡ ಸಂಸದ ಡ್ಯಾನಿಶ್ ಅಲಿ

**ದೆಹಲಿ:** ಬಹುಜನ ಸಮಾಜ ಪಕ್ಷದಿಂದ ಅಮಾನತುಗೊಂಡಿರುವ ಲೋಕಸಭೆ ಸಂಸದ ಡ್ಯಾನಿಶ್ ಅಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಂಡಿದ್ದಾರೆ. ಪಕ್ಷ ವಿರೋಧಿ ಚಟುವಟಿಕೆಗಳ ಕಾರಣದಿಂದ ಬಿಎಸ್ಪಿಯಿಂದ ಅಮಾನತುಗೊಂಡಿದ್ದರು. ಮಣಿಪುರದಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರ ಭಾರತ್ ಜೋಡೋ ನ್ಯಾಯ್ ಯಾತ್ರೆಯಲ್ಲಿ ಭಾಗವಹಿಸುವ ಮೂಲಕ ಅಲಿ ಅವರು ಕಾಂಗ್ರೆಸ್ ಸೇರುವ ಕ್ರಮಕ್ಕೆ ಮುಂದಾಗಿದ್ದರು. ವರದಿಗಳ ಪ್ರಕಾರ, ಕಾಂಗ್ರೆಸ್, ಉತ್ತರ ಪ್ರದೇಶದ ಅಮ್ರೋಹಾ ಕ್ಷೇತ್ರಕ್ಕೆ ಅಲಿಯನ್ನು ತನ್ನ ಅಭ್ಯರ್ಥಿಯಾಗಿ ಕಣಕ್ಕಿಳಿಸುವ ಸಾಧ್ಯತೆಯಿದೆ. ಸ್ಥಾನ ಹಂಚಿಕೆಯ ಮಾತುಕತೆಯಲ್ಲಿ ಕಾಂಗ್ರೆಸ್ ಸಮಾಜವಾದಿ ಪಕ್ಷದಿಂದ ಚೌಕಾಶಿ ಮಾಡಿದೆ. ಅಲಿ 2018 ರವರೆಗೆ ದೇವೇಗೌಡರ ಜನತಾ ದಳ(ಎಸ್) ನೊಂದಿಗೆ ಸಂಬಂಧ ಹೊಂದಿದ್ದರು. ಅವರು 2018 ರಲ್ಲಿ ಕರ್ನಾಟಕ ಚುನಾವಣೆಯಲ್ಲಿ ಸಕ್ರಿಯ ಪಾತ್ರವನ್ನು ವಹಿಸಿದ್ದರು. ಆಗ ಬಿಎಸ್ಪಿ ದೇವೇಗೌಡರ ಪಕ್ಷದೊಂದಿಗೆ ಮೈತ್ರಿ ಮಾಡಿಕೊಂಡಿತ್ತು. ಗೌಡರ ಶಿಫಾರಸಿನ ಮೇರೆಗೆ ಅಲಿ ಅವರನ್ನು ಬಹುಜನ ಸಮಾಜ ಪಕ್ಷದಿಂದ ಅಮ್ರೋಹ ಕ್ಷೇತ್ರದಿಂದ ಅಭ್ಯರ್ಥಿಯಾಗಿ ಕಣಕ್ಕಿಳಿಸಲಾಗಿತ್ತು.

# INDIAಗೆದ್ದರೆ ಮೇಕೆದಾಟು ಯೋಜನೆಗೆ ತಡೆ: ಪ್ರಣಾಳಿಕೆಯಲ್ಲಿ ಡಿಎಂಕೆ ಘೋಷಣೆ

**ಚೆನ್ನೈ:** ಲೋಕಸಭಾ ಚುನಾವಣೆಯಲ್ಲಿ INDIA ಒಕ್ಕೂಟ ಗೆದ್ದರೆ ಮೇಕೆದಾಟು ಯೋಜನೆಗೆ ತಡೆ ಒಡ್ಡುವುದಾಗಿ ಡಿಎಂಕೆ ಘೋಷಣೆ ಮಾಡಿದೆ. ಲೋಕಸಭಾ ಚುನಾವಣೆಗೆ ತಮಿಳುನಾಡಿನಲ್ಲಿ ಆಡಳಿತ ನಡೆಸುತ್ತಿರುವ ಸ್ಟಾಲಿನ್ ನೇತೃತ್ವದ ಡಿಎಂಕೆ ಪಕ್ಷ ಪ್ರಣಾಳಿಕೆ ಬಿಡುಗಡೆ ಮಾಡಿದೆ. ಪ್ರಣಾಳಿಕೆಯಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ಕರ್ನಾಟಕ ನಿರ್ಮಿಸಲು ಉದ್ದೇಶಿಸಿರುವ ಮೇಕೆದಾಟು ಅಣೆಕಟ್ಟೆ ಯೋಜನೆ ನಿರ್ಮಾಣಕ್ಕೆ ತಡೆ ಒಡ್ಡುವುದಾಗಿ ಹೇಳಿದೆ. **ಪ್ರಣಾಳಿಕೆಯಲ್ಲಿ ಏನಿದೆ?:** ರಾಜ್ಯಗಳಿಗೆ ಫೆಡರಲ್ ಹಕ್ಕುಗಳನ್ನು ಒದಗಿಸಲು ಭಾರತೀಯ ಸಂವಿಧಾನವನ್ನು ಬದಲಾವಣೆ, ಚೆನ್ನೈನಲ್ಲಿರುವ ಸುಪ್ರೀಂ ಕೋರ್ಟ್ ಪೀಠ ಸ್ಥಾಪನೆ, ಪುದುಚೇರಿಗೆ ರಾಜ್ಯ ಸ್ಥಾನಮಾನ, ರಾಷ್ಟ್ರೀಯ ಶಿಕ್ಷಣ ನೀತಿ ಹಿಂಪಡೆಯಲಾಗುವುದು, ಮಹಿಳೆಯರಿಗೆ 33% ಮೀಸಲಾತಿ ಜಾರಿ, ಸರ್ಕಾರಿ ಶಾಲೆಗಳಿಗೆ ಬೆಳಗಿನ ಉಪಾಹಾರ ಯೋಜನೆ, NEET ನಿಷೇಧ, ಭಾರತದಾದ್ಯಂತ ಮಹಿಳೆಯರಿಗೆ ಪ್ರತಿ ತಿಂಗಳು 1,000 ರೂ. ನೀಡಲಾಗುತ್ತದೆ. ಹೆದ್ದಾರಿಗಳಲ್ಲಿರುವ ಟೋಲ್ ಗೇಟ್ ರದ್ದು, ಪೌರತ್ವ (ತಿದ್ದುಪಡಿ) ಕಾಯ್ದೆಯನ್ನು (ಸಿಎಎ) ತೆಗೆದುಹಾಕಲಾಗುತ್ತದೆ. ರಾಜ್ಯಪಾಲರಿಗೆ ಅಧಿಕಾರ ನೀಡುವ 361ನೇ ವಿಧಿಯನ್ನು ರದ್ದು, ರಾಜ್ಯಪಾಲರನ್ನು ನೇಮಿಸುವ ಅಧಿಕಾರವನ್ನು ಮುಖ್ಯಮಂತ್ರಿಗೆ ನೀಡುವುದು.

# ಪಾಕಿಸ್ತಾನದ ಗ್ವಾದರ್ ಬಂದರಿನಲ್ಲಿ ಸರಣಿ ಸ್ಫೋಟ

**ಪಾಕಿಸ್ತಾನ:** ಪಾಕಿಸ್ತಾನದ ಆಯಕಟ್ಟಿನ ಗ್ವಾದರ್ ಬಂದರಿನಲ್ಲಿ ಹಲವಾರು ಶಸ್ತ್ರಸಜ್ಜಿತ ದಾಳಿಕೋರರು ಸಂಕೀರ್ಣಕ್ಕೆ ಪ್ರವೇಶಿಸಿದ ನಂತರ ಅನೇಕ ಸ್ಫೋಟಗಳು ಸಂಭವಿಸಿವೆ. ಬಂದರಿನಲ್ಲಿ ದಾಳಿಕೋರರು ಮತ್ತು ಭದ್ರತಾ ಸಿಬ್ಬಂದಿ ನಡುವೆ ಭಾರೀ ಗುಂಡಿನ ಚಕಮಕಿ ನಡೆದಿದೆ. ನಿಷೇಧಿತ ಬಲೂಚಿಸ್ತಾನ್ ಲಿಬರೇಶನ್ ಆರ್ಮಿ(ಬಿಎಲ್ಎ)ಯ ಮಜೀದ್ ಬ್ರಿಗೇಡ್ ಪ್ರಕ್ಷುಬ್ಧ ಬಲೂಚಿಸ್ತಾನ್ ಪ್ರದೇಶದಲ್ಲಿ ನಡೆದ ದಾಳಿಯ ಹೊಣೆಯನ್ನು ಹೊತ್ತುಕೊಂಡಿದೆ.ಗ್ವಾದರ್ ಬಂದರು ಮಹತ್ವಾಕಾಂಕ್ಷೆಯ ಚೀನಾ-ಪಾಕಿಸ್ತಾನ ಆರ್ಥಿಕ ಕಾರಿಡಾರ್ ಯೋಜನೆಯ ಪ್ರಮುಖ ಭಾಗವಾಗಿದೆ. 2022 ರಲ್ಲಿ ಇಸ್ಲಾಮಾಬಾದ್ನೊಂದಿಗಿನ ಕದನ ವಿರಾಮ ಒಪ್ಪಂದವನ್ನು ತೆಹ್ರೀಕ್-ಎ-ತಾಲಿಬಾನ್ ಪಾಕಿಸ್ತಾನ ಕೊನೆಗೊಳಿಸಿದ ನಂತರ ಪಾಕಿಸ್ತಾನವು ಖೈಬರ್ ಪಖ್ತುಂಕ್ವಾ ಮತ್ತು ಬಲೂಚಿಸ್ತಾನ್ ಪ್ರದೇಶದಲ್ಲಿ ಭಯೋತ್ಪಾದಕ ಚಟುವಟಿಕೆಗಳಲ್ಲಿ ಭಾರಿ ಹೆಚ್ಚಳ ಆಗಿದೆ. ಪಾಕಿಸ್ತಾನದ ಗ್ವಾದರ್ ಬಂದರಿನಲ್ಲಿ ಸರಣಿ ಬಾಂಬ್ ಸ್ಫೋಟ ಸಂಭವಿಸಿದೆ. ಪಾಕಿಸ್ತಾನದ ಐಎಸ್ಐ, ನಾಯಕರನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಲಾಗಿದೆ. ಬಲೂಚಿಸ್ತಾನ ಲಿಬರೇಷನ್ ಆರ್ಮಿ ದಾಳಿಯ ಹೊಣೆ ಹೊತ್ತುಕೊಂಡಿದೆ ಎಂದು ಹೇಳಲಾಗಿದೆ.



# ಏಪ್ರಿಲ್ 1ರಿಂದ 800 ಔಷಧಗಳ ಬೆಲೆ ಹೆಚ್ಚಳ

**ನವದೆಹಲಿ:** ಔಷಧಗಳ ಬೆಲೆಯನ್ನು ಏಪ್ರಿಲ್ 1ರಿಂದ ಹೆಚ್ಚಳ ಮಾಡಲಾಗುತ್ತದೆ. ಸಗಟು ಬೆಲೆ ಸೂಚ್ಯಂಕ ಅಂಕಿಅಂಶಗಳ ಆಧಾರದ ಮೇಲೆ ನೋವು ನಿವಾರಕಗಳು, ಆಯಂಟಿಬಯಾಟಿಕ್ಸ್ ಮತ್ತು ಸೋಂಕು ನಿವಾರಕಗಳು ಸೇರಿದಂತೆ ಸುಮಾರು 800 ಅಗತ್ಯ ಔಷಧಗಳ ಬೆಲೆಗಳು ಏರಿಕೆ ಕಾಣಲಿವೆ ಎಂದು ಮೂಲಗಳು ತಿಳಿಸಿವೆ.

**ಯಾವುದರ ಬೆಲೆ ವೃದ್ಧಿ?:** ಅಗತ್ಯ ಔಷಧಗಳ ಪಟ್ಟಿಯಲ್ಲಿ ಪ್ಯಾರಸಿಟಮಾಲ್ನಂತಹ ಮಾತ್ರೆಗಳು, ಬ್ಯಾಕ್ಟೀರಿಯಾದ ಸೋಂಕುಗಳಿಗೆ ಚಿಕಿತ್ಸೆ ನೀಡಲು ಬಳಸುವ ಅಜಿಥ್ರೊಮೈಸಿನ್ನಂತಹ ಆಯಂಟಿಬಯಾಟಿಕ್ಸ್, ರಕ್ತಹೀನತೆ ವಿರೋಧಿ ಔಷಧಗಳು, ಜೀವಸತ್ವಗಳು ಮತ್ತು ಖನಿಜಗಳು ಸೇರಿವೆ. ಜತೆಗೆ ಮಧ್ಯಮದಿಂದ ತೀವ್ರ ಅನಾರೋಗ್ಯಕ್ಕೆ ಒಳಗಾಗುವ ಕೋವಿಡ್ -19 ರೋಗಿಗಳ ಚಿಕಿತ್ಸೆಗೆ ಬಳಸುವ ಕೆಲವು ಔಷಧಗಳು ಮತ್ತು ಸ್ಟೀರಾಯ್ಡ್ಗಳು ಸಹ ಪಟ್ಟಿಯಲ್ಲಿವೆ. ಅಗತ್ಯ ಔಷಧಿಗಳ ರಾಷ್ಟ್ರೀಯ ಪಟ್ಟಿಯ ಅಡಿಯಲ್ಲಿ ಬರುವ ಔಷಧಗಳ ಬೆಲೆಯಲ್ಲಿ .0055% ಹೆಚ್ಚಳಕ್ಕೆ ಸರ್ಕಾರ ಅನುಮತಿ ನೀಡಲು ಸಜ್ಜಾಗಿದ್ದು, ಕಳೆದ ವರ್ಷ ಮತ್ತು 2022ರಲ್ಲಿ ಈ ಔಷಧಗಳ ಬೆಲೆಗಳಲ್ಲಿ 12% ಮತ್ತು 10%ದಷ್ಟು ಭಾರಿ ಹೆಚ್ಚಳದ ನಂತರ ಮತ್ತೊಮ್ಮೆ ದರ ಹೆಚ್ಚಿಸಲಾಗುತ್ತಿದೆ. ನಿಗದಿತ ಔಷಧಗಳ ಬೆಲೆಗಳ ಬದಲಾವಣೆಯನ್ನು ವರ್ಷಕ್ಕೊಮ್ಮೆ ಅನುಮತಿಸಲಾಗುತ್ತದೆ ಎಂದು ಅಧಿಕೃತ ಮೂಲಗಳು ಮಾಹಿತಿ ನೀಡಿವೆ.



# ಸೂಟ್ಕೇಸ್‌ನಲ್ಲಿ 5 ವರ್ಷದ ಮಗನ ಶವ ಸಾಗಾಟ

**ಅಮೆರಿಕಾ:** ಐದು ವರ್ಷದ ಮಗುವನ್ನು ಕೊಲೆ ಮಾಡಿ ಬಳಿಕ ಮಗುವಿನ ದೇಹವನ್ನು ಸೂಟ್ ಕೇಸ್ ನಲ್ಲಿ ತುಂಬಿಸಿ ಸಾಗಿಸಿದ್ದ ಮಹಿಳೆಯನ್ನು ಪೊಲೀಸರು ಬಂಧಿಸಿದ್ದಾರೆ. ಅಮೆರಿಕಾದ ಲಾಸ್ ಏಂಜಲೀಸ್ ನಲ್ಲಿ ಮಹಿಳೆಯನ್ನು ವಶಕ್ಕೆ ಪಡೆಯಲಾಗಿದೆ. ಘಟನೆ ನಡೆದು ಎರಡು ವರ್ಷಗಳಾಗಿದ್ದು ಆದರೆ ತಾಯಿಯನ್ನು ಈಗ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಇಂಡಿಯಾನದ ಡೆಜಾನೆ ಲೂಡಿ ಆಂಡರ್ಸನ್(38) ಎಂಬಾಕೆಯ ಐದು ವರ್ಷದ ಪುತ್ರ ಕೈರೋ ಅಮ್ಮರ್ ಜೋರ್ಡಾನ್ ಎಂಬಾತ ಎರಡು ವರ್ಷದ ಹಿಂದೆ ಮೃತಪಟ್ಟಿದ್ದ. ಆತನಿಗೆ ಹೊಟ್ಟೆ ನೋವಿಗೆ ಸಂಬಂಧಿಸಿ ನೀಡಿದ್ದ ಎಲೆಕ್ಟ್ರೋಲೈಟ್ ಅನ್ನು ನೀಡಲಾಗಿತ್ತು. ಇದು ಅಡ್ಡಪರಿಣಾಮ ಬೀರಿ ಕೈರೋ ಮೃತಪಟ್ಟಿದ್ದ. ಇದು ಬಹಿರಂಗವಾದರೆ ತೊಂದರೆಯಾಗುತ್ತದೆ ಎನ್ನುವ ಕಾರಣ ನೀಡಿ ಆಕೆ ವಿಶೇಷವಾದ ಸೂಟ್ಕೇಸ್ನಲ್ಲಿ ದೇಹವನ್ನು ತುಂಬಿ ವಾಷಿಂಗ್ಟನ್ ಗ್ರಾಮೀಣ ಪ್ರದೇಶದಲ್ಲಿ ಎಸೆದಿದ್ದಳು. ವ್ಯಕ್ತಿಯೊಬ್ಬ ಸಮೀಪದಲ್ಲಿಯೇ ಅಣಬೆ ಹುಡುಕಲು ಬಂದಾಗ ಸೂಟ್ಕೇಸ್ ಕಂಡು ಬಂದಿತ್ತು. ಇದರಲ್ಲಿ ಮಗುವಿನ ಶವ ಪತ್ತೆಯಾಗಿತ್ತು. ಆನಂತರ ದೇಹವನ್ನು ವಶಕ್ಕೆ ಪಡೆದಿದ್ದ ಪೊಲೀಸರು ಮಗುವಿನ ಪೋಷಕರ ಪತ್ತೆ ಹಾಗೂ ಸಾವಿಗೆ ನಿಖರ ಕಾರಣ ಪತ್ತೆಗೆ ಮುಂದಾಗಿದ್ದರು. ಎಲೆಕ್ಟ್ರೋಲೈಟ್ ಬಳಕೆಯಲ್ಲಿ ವ್ಯತ್ಯಾಸವಾಗಿ ವಾಂತಿ ಹಾಗೂ ಬೇಧಿಯಿಂದ ಬಾಲಕ ಮೃತಪಟ್ಟಿದ್ದಾನೆ ಎನ್ನುವುದು ತಿಳಿದಿತ್ತು. ಆನಂತರ ಮಗುವಿನ ತಾಯಿಯನ್ನು ಪತ್ತೆ ಮಾಡಿದ್ದರು.



# ಐರ್ಲೆಂಡ್ ಪ್ರಧಾನಿ 'ಲಿಯೋ ವರದ್ಕರ್' ರಾಜೀನಾಮೆ

**ಐರಿಶ್:** ಐರಿಶ್ ಪ್ರಧಾನಿ ಲಿಯೋ ವರದ್ಕರ್ ಬುಧವಾರ ತಮ್ಮ ಫೈನ್ ಗೇಲ್ ಪಕ್ಷವು ಹೊಸ ನಾಯಕನನ್ನು ಘೋಷಿಸಿದ ಕೂಡಲೇ ಅಧಿಕಾರದಿಂದ ಕೆಳಗಿಳಿಯುವುದಾಗಿ ಘೋಷಿಸಿದ್ದಾರೆ. ನಾನು ಜೂನ್ 2017ರಲ್ಲಿ ಪಕ್ಷದ ನಾಯಕ ಮತ್ತು ಟಾವೊಯಿಸೆಚ್ (ಪ್ರಧಾನಿ) ಆದಾಗ, ನಾಯಕತ್ವದ ಒಂದು ಭಾಗವು ಬ್ಯಾಟನ್ ಅನ್ನು ಬೇರೊಬ್ಬರಿಗೆ ವರ್ಗಾಯಿಸುವ ಸಮಯ ಬಂದಿದೆ ಎಂದು ತಿಳಿದಿದೆ ಮತ್ತು ನಂತರ ಅದನ್ನು ಮಾಡಲು ಧೈರ್ಯವನ್ನು ಹೊಂದಿದ್ದೇನೆ ಎಂದು ನನಗೆ ತಿಳಿದಿತ್ತು. ಆ ಸಮಯ ಈಗ ಬಂದಿದೆ ಎಂದು ವರದ್ಕರ್ ಡಬ್ಲಿನ್ನ ಸರ್ಕಾರಿ ಕಚೇರಿಗಳ ಹೊರಗೆ ಸುದ್ದಿಗಾರರಿಗೆ ತಿಳಿಸಿದರು. ಆದ್ದರಿಂದ ನಾನು ಇಂದಿನಿಂದ ಜಾರಿಗೆ ಬರುವಂತೆ ಫೈನ್ ಗೇಲ್ ಅಧ್ಯಕ್ಷ ಮತ್ತು ನಾಯಕ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿದ್ದೇನೆ ಮತ್ತು ನನ್ನ ಉತ್ತರಾಧಿಕಾರಿ ಆ ಹುದ್ದೆಯನ್ನು ತೆಗೆದುಕೊಳ್ಳಲು ಸಾಧ್ಯವಾದ ಕೂಡಲೇ ಟಾವೊಯಿಸೆಚ್ ಸ್ಥಾನಕ್ಕೆ ರಾಜೀನಾಮೆ ನೀಡುತ್ತೇನೆ ಎಂದರು.



# ಪಾಕಿಸಾನ: ನಾಮಪತ್ರ ಸಲ್ಲಿಸಿದ ಅಧ್ಯಕ್ಷ ಝುರ್ದಾರಿ ಪುತ್ರಿ ಅಸೀಫಾ



**ಇಸ್ಲಾಮಾಬಾದ್:** ಪಾಕಿಸ್ತಾನದ ಅಧ್ಯಕ್ಷ ಆಸಿಫ್ ಆಲಿ ಝರ್ದಾರಿ ಅವರ ಕಿರಿಯ ಪುತ್ರಿ ಅಸೀಫಾ ಭುಟ್ಟೋ ಚುನಾವಣಾ ರಾಜಕೀಯ ಪ್ರವೇಶಿಸಲು ಸಿದ್ಧತೆ ನಡೆಸಿದ್ದು ರಾಷ್ಟ್ರೀಯ ಅಸೆಂಬ್ಲಿಯ ಒಂದು ಸ್ಥಾನಕ್ಕೆ ನಡೆಯಲಿರುವ ಉಪಚುನಾವಣೆಯಲ್ಲಿ ಸ್ಪರ್ಧಿಸಲು ನಾಮಪತ್ರ ಸಲ್ಲಿಸಿದ್ದಾರೆ. ಫೆಬ್ರವರಿ 8 ರಂದು ನಡೆದಿದ್ದ ಉಪಚುನಾವಣೆಯಲ್ಲಿ ಆಸಿಫ್ ಆಲಿ ಝರ್ದಾರಿ ಸಿಂಧ್ ಪ್ರಾಂತದ ಶಹೀದ್ ಬೆಂಝಿರಾಬಾದ್ ಜಿಲ್ಲೆಯ ಎನ್ಎ-207 ಕ್ಷೇತ್ರದಿಂದ ಗೆಲುವು ಸಾಧಿಸಿದ್ದರು. ಆದರೆ ಅಧ್ಯಕ್ಷರಾಗಿ ನೇಮಕಗೊಂಡ ಹಿನ್ನಲೆಯಲ್ಲಿ ಈ ಸ್ಥಾನ ತೆರವಾಗಿದ್ದು ಎಪ್ರಿಲ್ 21ರಂದು ಉಪಚುನಾವಣೆ ನಡೆಯಲಿದೆ. ಇದೀಗ ಈ ಕ್ಷೇತ್ರಕ್ಕೆ ನಾಮಪತ್ರ ಸಲ್ಲಿಸಿರುವ ಅಸೀಫಾ ಭುಟ್ಟೋ ಗೆಲುವಿನ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಅಧ್ಯಕ್ಷರಾಗಿ ನೇಮಕಗೊಂಡ ಬಳಿಕ ಆಸಿಫ್ ಆಲಿ ತಮ್ಮ ಪುತ್ರಿಯನ್ನು ಪ್ರಥಮ ಮಹಿಳೆಯೆಂದು ಹೆಸರಿಸಿದ್ದರು. 2007ರಲ್ಲಿ ಆತ್ಮಹತ್ಯಾ ಬಾಂಬ್ ದಾಳಿಯಲ್ಲಿ ಹತರಾಗಿದ್ದ ಮಾಜಿ ಪ್ರಧಾನಿ ಬೇನಝೀರ್ ಭುಟ್ಟೋ ಅವರ ಮೂವರು ಮಕ್ಕಳಲ್ಲಿ ಅಸೀಫಾ ಕಿರಿಯವರು. ಭಕ್ತಾವರ್ ಮತ್ತು ಬಿಲಾವಲ್ ಭುಟ್ಟೋ ಅವರ ತಂಗಿಯಾಗಿರುವ ಅಸೀಫಾ ತಮ್ಮ ತಾಯಿಯ ಉತ್ತರಾಧಿಕಾರಿಯೆಂದು ಬಿಂಬಿಸಲ್ಪಟ್ಟಿದ್ದಾರೆ.

# ಹೌದಿಗಳಿಂದ ಮನೆ ಸ್ಫೋಟ, 9 ಮಂದಿ ಮೃತ್ಯು

**ಸನಾ:** ಯೆಮನ್ ರಾಜಧಾನಿ ಸನಾದ ಆಗ್ನೇಯದಲ್ಲಿರುವ ಪಟ್ಟಣದಲ್ಲಿ ಇರಾನ್ ಬೆಂಬಲಿತ ಹೌದಿಗಳು ಮನೆಯೊಂದನ್ನು ಸ್ಫೋಟಿಸಿದ್ದರಿಂದ 7 ಮಕ್ಕಳ ಸಹಿತ ಒಂದೇ ಕುಟುಂಬದ 9 ಮಂದಿ ಮೃತಪಟ್ಟಿರುವುದಾಗಿ ಅಧಿಕಾರಿಗಳು ಹೇಳಿದ್ದಾರೆ. ಮನೆಯ ಮಾಲಿಕ ಇಬ್ರಾಹಿಂ ಅಲ್-ಝುಲೇಯ್ ರೂಪಿಸಿದ್ದ ಹೊಂಚುದಾಳಿಯಲ್ಲಿ ಇಬ್ಬರು ಹೌದಿ ಹೋರಾಟಗಾರರು ಹತರಾಗಿದ್ದರು ಎಂದು ಆರೋಪಿಸಿ ಮನೆಯನ್ನು ಸ್ಫೋಟಿಸಲಾಗಿದೆ. ಸ್ಫೋಟದಿಂದ ಕುಸಿದು ಬಿದ್ದ ಮನೆಯ ಅವಶೇಷಗಳಡಿ ಇನ್ನೂ ಕೆಲವರು ಸಿಲುಕಿರುವ ಸಾಧ್ಯತೆಯಿದೆ. ಅಕ್ಕಪಕ್ಕದ ಹಲವು ಮನೆಗಳಿಗೂ ಹಾನಿಯಾಗಿದೆ ಎಂದು ಸ್ಥಳೀಯರು ಹೇಳಿದ್ದಾರೆ. ಮನೆಯನ್ನು ಸ್ಫೋಟಿಸಿರುವುದು ಭದ್ರತಾ ಪಡೆಯ ಬೇಜವಾಬ್ದಾರಿ ನಡೆಯಾಗಿದ್ದು ಈ ಬಗ್ಗೆ ತನಿಖೆ ನಡೆಸಲು ಸಮಿತಿಯೊಂದನ್ನು ರಚಿಸಲಾಗಿದೆ ಎಂದು ಹೌದಿ ನೇತೃತ್ವದ ಆಂತರಿಕ ಸಚಿವಾಲಯ ಹೇಳಿದೆ. 2014ರ ಅಂತರ್ಯುದ್ಧದ ಬಳಿಕ ಯೆಮನ್ ರಾಜಧಾನಿ ಸನಾ ಸೇರಿದಂತೆ ಬಹುತೇಕ ಪ್ರದೇಶಗಳು ಹೌದಿಗಳ ನಿಯಂತ್ರಣದಲ್ಲಿವೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ತಾಯಿ, ಮಗನ ಕಥೆ ಹೇಳಿ 'ಮಿಸ್ ಗೈಡ್' ಮಾಡಿದ ಮಂಜುಕವಿ



ನಾಗರಾಜ್ ಹಾಗೂ ಸುಬ್ಬು ನಿರ್ಮಿಸಿರುವ ಮಿಸ್ ಗೈಡ್ ಚಿತ್ರಕ್ಕೆ ಮಂಜುಕವಿ ಕಥೆ, ಚಿತ್ರಕಥೆ, ಸಾಹಿತ್ಯ ಹಾಗೂ ಸಂಭಾಷಣೆ ಬರೆದು, ಸಂಗೀತವನ್ನು ನೀಡಿರುವ 'ಮಿಸ್ ಗೈಡ್' ಚಿತ್ರದ ಟೀಸರ್ ಇತ್ತೀಚಿಗೆ ಬಿಡುಗಡೆಯಾಯಿತು. ಖ್ಯಾತ ಸಾಹಿತಿ ವಿ.ನಾಗೇಂದ್ರ ಪ್ರಸಾದ್ ಟೀಸರ್ ಬಿಡುಗಡೆ ಮಾಡಿ ಚಿತ್ರ ಯಶಸ್ವಿಯಾಗಲೆಂದು ಹಾರೈಸಿದರು. ಗಗನ್ ರಾಜ್ ಕೂಡ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ನಂತರ ಚಿತ್ರತಂಡದವರು 'ಮಿಸ್ ಗೈಡ್' ಬಗ್ಗೆ ಮಾಹಿತಿ ನೀಡಿದರು.

ಇದು ನಾನು ನಿರ್ದೇಶಿಸಿರುವ ಎರಡನೇ ಚಿತ್ರ. ನನ್ನ ಕಥೆ ಮೆಚ್ಚಿ ನಾಗರಾಜ್ ಹಾಗೂ ಸುಬ್ಬು ಚಿತ್ರಕ್ಕೆ ಬಂಡವಾಳ ಹೂಡಿದ್ದಾರೆ. ಹಾವು ? ಮುಂಗುಸಿಯ ಕಥೆಯನ್ನು ಆದರ್ಶವಾಗಿಟ್ಟುಕೊಂಡು ಈ ಕಥೆ ಹೆಣೆಯಲಾಗಿದೆ. ಮುಂಗುಸಿಯೊಂದು ಮಗುವನ್ನು ಕಾಪಾಡಲು ಹಾವಿನೊಂದಿಗೆ ಸೆಣೆಸಾಡುತ್ತದೆ. ಆದರೆ ಮುಂಗುಸಿಯ ಬಾಯಲ್ಲಿ ರಕ್ತ ನೋಡಿದ ಮಗುವಿನ ತಾಯಿ ಮುಂಗುಸಿ ತನ್ನ ಮಗುವಿಗೆ ಏನೋ ಮಾಡಿದೆ ಅಂದುಕೊಳ್ಳುತ್ತಾಳೆ. ಈ ಕಥೆಯೇ ನಮ್ಮ ಚಿತ್ರಕ್ಕೆ ಸ್ಪೂರ್ತಿ. ಇನ್ನು ಚಿತ್ರೀಕರಣ ಹಾಗೂ ಪೋಸ್ಟ್ ಪ್ರೊಡಕ್ಷನ್ ಎಲ್ಲಾ ಮುಕ್ತಾಯವಾಗಿದ್ದು, ಚಿತ್ರ ತೆರೆಗೆ ಬರುವ ಹಂತದಲ್ಲಿದೆ. ಚಿತ್ರತಂಡದ ಸಹಕಾರದಿಂದ ಮಿಸ್ ಗೈಡ್ ಅಂದುಕೊಂಡ ಹಾಗೆ ಬಂದಿದೆ. ಚಿತ್ರದಲ್ಲಿ ನಾಲ್ಕು ಹಾಡುಗಳಿದೆ. ನಾನೇ ಗೀತರಚನೆ ಮಾಡಿ ಸಂಗೀತ ನೀಡಿದ್ದೀನಿ. ತಾಯಿ ? ಮಗನ ಸೆಂಟಿಮೆಂಟ್ ಹಾಡನ್ನು ಜನಪ್ರಿಯ ಗಾಯಕ ಗುರುಕಿರಣ್ ಹಾಡಿದ್ದಾರೆ. ನಮ್ಮ ಚಿತ್ರಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು ನಿರ್ದೇಶಕ ಮಂಜು ಕವಿ. ಚಿತ್ರದ ಕಥೆ ಇಷ್ಟವಾಗಿ ನಿರ್ಮಾಣಕ್ಕೆ ಮುಂದಾಗಿರುವುದಾಗಿ ನಿರ್ಮಾಪಕರಾದ ನಾಗರಾಜ್ ಹಾಗೂ ಸುಬ್ಬು ಹೇಳಿದರು. ಚಿತ್ರದ ಪ್ರಮುಖ ಪಾತ್ರದಲ್ಲಿ ನಟನೆ ಕೂಡ ಮಾಡಿರುವುದಾಗಿ ಸುಬ್ಬು ತಿಳಿಸಿದರು. ಚಿತ್ರದ ಕಥೆ ಹಾಗೂ ನನ್ನ ಪಾತ್ರ ಎರಡು ಚೆನ್ನಾಗಿದೆ ಎಂದರು ನಾಯಕ ನಿತೀಶ್ ವಿನಯ್ ರಾಜ್. ಮತ್ತು ಸುಬ್ಬು,ಫರೀನ್ ಹಾಗೂ ರಕ್ಷ ಈ ಚಿತ್ರದ ನಾಯಕಿಯರು. ನಟರಾದ ಜಗದೀಶ್ ಕೊಪ್ಪ, ಪ್ರಾಣೇಶ್, ಹಿನ್ನೆಲೆ ಸಂಗೀತ ನೀಡಿರುವ ವಿನು ಮನಸು ಹಾಗೂ ಸಾಹಸ ನಿರ್ದೇಶಕ ಮಾಸ್ ಮಾದ ಮುಂತಾದವರು ಚಿತ್ರದ ಕುರಿತು ಮಾತನಾಡಿದರು. ಸಹ ನಿರ್ದೇಶಕರಾಗಿ ಎಸ್ ಜೆ ಸಂಜಯ್, ಸಂಗೀತ ಶೆಟ್ಟಿ ಕಾರ್ಯ ನಿರ್ವಹಿಸಿದ್ದಾರೆ. ಸಾಕಷ್ಟು ರಂಗಭೂಮಿ ಕಲಾವಿದರೆ ಈ ಚಿತ್ರದಲ್ಲಿ ನಟಿಸಿರುವುದು ವಿಶೇಷ.

# ಕುತೂಹಲ ಮೂಡಿಸುವ ಝೈದ್ ಖಾನ್ ನಟನೆಯ ಹೊಸ ಚಿತ್ರದ ಪೋಸ್ಟರ್




ಬನಾರಸ್ ಚಿತ್ರದ ಮೂಲಕ ಕನ್ನಡಿಗರ ಮನ ಗೆದ್ದಿರುವ ಝೈದ್ ಖಾನ್ ಹಾಗೂ ಈ ವರ್ಷದ ಮೊದಲ ಹಿಟ್ 'ಉಪಾಧ್ಯಕ್ಷ' ಚಿತ್ರದ ನಿರ್ದೇಶಕ ಅನಿಲ್ ಕುಮಾರ್ ಕಾಂಬಿನೇಶನ್ ನಲ್ಲಿ ನೂತನ ಚಿತ್ರ ಆರಂಭವಾಗುತ್ತಿರುವುದು ಇತ್ತೀಚಿಗೆ ತಿಳಿಸಲಾಗಿತ್ತು. ಈ ಕುರಿತಂತೆ ಪೋಸ್ಟರ್ ಚಿತ್ರತಂಡದಿಂದ ಬಿಡುಗಡೆಯಾಗಿದೆ. ಈ ಹೊಸಚಿತ್ರ, ಪೋಸ್ಟರ್ ನಲ್ಲೇ ಕುತೂಹಲ ಮೂಡಿಸಿದೆ. ಸದ್ಯದಲ್ಲೇ ಫಸ್ಟ್ ಲುಕ್ ರಿಲೀಸ್ ಮಾಡುವುದಾಗಿ ಪೋಸ್ಟರ್ ಮೂಲಕ ತಿಳಿಸಲಾಗಿದೆ.



ಪೋಸ್ಟರ್ ಬಗ್ಗೆ ಸಾಕಷ್ಟು ಮೆಚ್ಚುಗೆ ವ್ಯಕ್ತವಾಗುತ್ತಿದ್ದು, ಇನ್ನು ಈ ನೂತನ ಚಿತ್ರದ ಫಸ್ಟ್ ಲುಕ್ ಹೇಗಿರಬಹುದೆಂಬ? ಕುತೂಹಲ ಅಭಿಮಾನಿ ವಲಯದಲ್ಲಿದೆ. ಫಸ್ಟ್ ಲುಕ್ ನಲ್ಲೇ ಚಿತ್ರದ ಶೀರ್ಷಿಕೆ ಸಹ ಅನಾವರಣವಾಗಲಿದೆ.

ಝೈದ್ ಖಾನ್ ನಾಯಕರಾಗಿ ನಟಿಸುತ್ತಿರುವ ಎರಡನೇ ಚಿತ್ರವಿದು. ಆಶ್ರಿತ್ ಸಿನಿಮಾಸ್ ಲಾಂಛನದಲ್ಲಿ ಈ ಸಿನಿಮಾ ನಿರ್ಮಾಣವಾಗಲಿದ್ದು, ರಚನೆ ಹಾಗೂ ನಿರ್ದೇಶನ ಅನಿಲ್ ಕುಮಾರ್ ಅವರದು. ಜೆ.ಎಸ್ ವಾಲಿ ಛಾಯಾಗ್ರಹಣ, ಅರ್ಜುನ್ ಜನ್ಯ ಸಂಗೀತ ನಿರ್ದೇಶನ, ಕೆ.ಎಂ.ಪ್ರಕಾಶ್ ಸಂಕಲನ ಹಾಗೂ ರವಿವರ್ಮ ಅವರ ಸಾಹಸ ನಿರ್ದೇಶನ ಈ ಚಿತ್ರಕ್ಕಿದೆ.



# ರಾಮ್‌ಚರಣ್, ಶಿವಣ್ಣ ನಟನೆಯ ಚಿತ್ರಕ್ಕೆ ಅದ್ದೂರಿ ಚಾಲನೆ

ಟಾಲಿವುಡ್ ನಟ ರಾಮ್‌ಚರಣ್, ಶಿವರಾಜ್ ಕುಮಾರ್, ಜಾನ್ವಿ ಕಪೂರ್ ನಟನೆಯ ಹೊಸ ಸಿನಿಮಾಗೆ ಅದ್ದೂರಿಯಾಗಿ ಚಾಲನೆ ನೀಡಲಾಗಿದೆ. ಮುಹೂರ್ತ ಕಾರ್ಯಕ್ರಮಕ್ಕೆ ರಾಮ್ ಚರಣ್, ಜಾನ್ವಿ, ಮೆಗಾಸ್ಟಾರ್ ಚಿರಂಜೀವಿ ಸೇರಿದಂತೆ ಅನೇಕರು ಭಾಗಿಯಾಗಿದ್ದಾರೆ.

ಬಾಲಿವುಡ್ ಬ್ಯೂಟಿ ಜಾನ್ವಿ ಕಪೂರ್ ಇದೀಗ ತೆಲುಗಿನತ್ತ ಮುಖ ಮಾಡಿದ್ದಾರೆ. ಜ್ಯೂ.ಎನ್ ಟಿಆರ್ ಜೊತೆ ಡ್ಯುಯೆಟ್ ಹಾಡಿದ ಮೇಲೆ ರಾಮ್‌ಚರಣ್ ಜೊತೆ ರೊಮ್ಯಾನ್ಸ್ ಮಾಡೋದಕ್ಕೆ ರೆಡಿಯಾಗಿದ್ದಾರೆ. ಚರಣ್ ನಟನೆಯ 16ನೇ ಚಿತ್ರಕ್ಕೆ ಇದೀಗ ಅದ್ದೂರಿಯಾಗಿ ಮುಹೂರ್ತ ಸಮಾರಂಭ ನಡೆದಿದೆ.



ಈ ಕಾರ್ಯಕ್ರಮಕ್ಕೆ ರಾಮ್‌ಚರಣ್ -ಉಪಾಸನಾ, ಬುಚ್ಚಿಬಾಬು ಜೊತೆ ಡೈರೆಕ್ಟರ್ ಶಂಕರ್, ಎ.ಆರ್ ರೆಹಮಾನ್, ಪುಷ್ಪ ಡೈರೆಕ್ಟರ್ ಸುಕುಮಾರ್, ಮೆಗಾಸ್ಟಾರ್ ಚಿರಂಜೀವಿ, ಬಾಲಿವುಡ್ ನಿರ್ಮಾಪಕ ಬೋನಿ ಕಪೂರ್ ಸೇರಿದಂತೆ ಅನೇಕರು ಭಾಗಿಯಾಗಿದ್ದಾರೆ.

ಮೊದಲ ಬಾರಿಗೆ ರಾಮ್- ಜಾನ್ವಿ ಕಪೂರ್ ಜೋಡಿಯಾಗಿ ನಟಿಸುತ್ತಿರೋದ್ರಿಂದ ಚಿತ್ರದ ಮೇಲೆ ನಿರೀಕ್ಷೆ ದುಪ್ಪಟ್ಟಾಗಿದೆ. ಹ್ಯಾಟ್ರಿಕ್ ಹೀರೋ ಶಿವರಾಜ್‌ಕುಮಾರ್ ಕೂಡ ಚಿತ್ರದಲ್ಲಿ ಬಹುಮುಖ್ಯ ಪಾತ್ರದಲ್ಲಿ ನಟಿಸುತ್ತಿದ್ದಾರೆ.

ಸುಕುಮಾರ್ ಶಿಷ್ಯ ಬುಚ್ಚಿಬಾಬು ಈ ಹಿಂದೆ 'ಉಪ್ಪೇನಾ' ಚಿತ್ರಕ್ಕೆ ನಿರ್ದೇಶನ ಮಾಡಿದ್ದರು. ಈ ಬಾರಿ ಡಿಫರೆಂಟ್ ಆಗಿರುವ ಕಥೆಯನ್ನೇ ಮಾಡಿದ್ದಾರೆ. ಚರಣ್‌ಗೂ ಈ ಕಥೆ ಇಷ್ಟವಾಗಿ ಸಿನಿಮಾ ಮಾಡಲು ಗ್ರೀನ್ ಸಿಗ್ನಲ್ ನೀಡಿದ್ದಾರೆ. ರಿಲೀಸ್ ಆದ್ಮೇಲೆ ಸಿನಿಮಾ ಅದೆಷ್ಟರ ಮಟ್ಟಿಗೆ ಪ್ರೇಕ್ಷಕರಿಗೆ ಮೋಡಿ ಮಾಡುತ್ತೆ ಎಂದು ಕಾದುನೋಡಬೇಕಿದೆ.

## ಐಪಿಎಲ್‌ನಲ್ಲಿ ಮಹತ್ವದ ಬದಲಾವಣೆ

# 2 ಹೊಸ ನಿಯಮ ಜಾರಿ

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-17 ರಲ್ಲಿ ಎರಡು ಹೊಸ ನಿಯಮಗಳು ಜಾರಿಗೆ ಬರಲಿದೆ. ಈ ನಿಯಮಗಳಿಂದ ಅಂಪೈರ್‌ಗಳು ಮತ್ತು ಬೌಲರ್ ಗಳು ಮತ್ತಷ್ಟು ನಿರಾಳರಾಗಲಿರುವುದು ವಿಶೇಷ.

ಎಸ್‌ಆರ್‌ಎಸ್ ನಿಯಮ: ಈ ಬಾರಿಯ ಐಪಿಎಲ್‌ನಲ್ಲಿ ಡಿಸಿಷನ್ ರಿವ್ಯೂ ಸಿಸ್ಟಂ ತೀರ್ಪಿನಲ್ಲಿನ ಲೋಪದೋಷಗಳನ್ನು ಸರಿಪಡಿಸಲು ಸ್ಮಾರ್ಟ್ ರಿಪ್ಲೇ ಸಿಸ್ಟಂ ಪರಿಚಯಿಸಲಾಗುತ್ತಿದೆ. ಎಸ್‌ಆರ್ ಎಸ್ ನಿಯಮದ ಜಾರಿಯಿಂದ ಈ ಬಾರಿಯ ಐಪಿಎಲ್‌ನಲ್ಲಿ ಮೂರನೇ ಅಂಪೈರ್ ತೀರ್ಪು ಮತ್ತಷ್ಟು ನಿಖರವಾಗಿರಲಿದೆ. ಏಕೆಂದರೆ ಇದಕ್ಕಾಗಿ ಮೈದಾನದಲ್ಲಿ ಒಟ್ಟು 8 ಹಾಕ್-ಐ ಕ್ಯಾಮೆರಾಗಳನ್ನು ಇಡಲಿದ್ದು, ಈ ಮೂಲಕ ಮೈದಾನದಲ್ಲಿನ ಪ್ರತಿ ಸನ್ನಿವೇಶವನ್ನು ಚಿತ್ರೀಕರಿಸಲಾಗುತ್ತದೆ. ಅಲ್ಲದೆ ಹಾಕ್-ಐ ಆಪರೇಟ್‌ಗಳ ನೆರವಿನಿಂದ ಸ್ಪಷ್ಟ ಚಿತ್ರಣದೊಂದಿಗೆ ಮೂರನೇ ಅಂಪೈರ್ ತಕ್ಷಣವೇ ತೀರ್ಪು ಪ್ರಕಟಿಸಲಿದ್ದಾರೆ.




ಸ್ಮಾರ್ಟ್ ರಿಪ್ಲೇ ಸಿಸ್ಟಂ ಅನುಕೂಲವೇನು?: ಸ್ಮಾರ್ಟ್ ರಿಪ್ಲೇ ಸಿಸ್ಟಂ ಬಳಕೆಯಿಂದ ಮೂರನೇ ಅಂಪೈರ್ ಹಲವು ಆಂಗಲ್‌ನಿಂದ ವಿಡಿಯೋವನ್ನು ಪರಿಶೀಲಿಸಬಹುದು. ಅಂದರೆ ಇಲ್ಲಿ ಹಾಕ್-ಐ ಆಪರೇಟರ್‌ಗಳು ಸ್ಪ್ಲಿಟ್-ಸ್ಕ್ರೀನ್‌ಗಳನ್ನು ಬಳಸಲಿದ್ದಾರೆ. ಇದರಿಂದ ತಕ್ಷಣವೇ ತೀರ್ಪು ನೀಡಲು ಆಯಾ ಸನ್ನಿವೇಶದ ಸ್ಕ್ರೀನ್‌ನ ನೆರವು ಪಡೆಯಬಹುದು.

ಉದಾಹರಣೆಗೆ, ಬೌಂಡರಿ ಲೈನ್‌ನಲ್ಲಿ ಫೀಲ್ಡರ್ ಕ್ಯಾಚ್ ಹಿಡಿದಿದ್ದಾರೆ ಎಂದಿಟ್ಟುಕೊಳ್ಳಿ. ಈ ವೇಳೆ ಫೀಲ್ಡರ್‌ನ ಕಾಲು ಬೌಂಡರಿ ಲೈನ್‌ಗೆ ತಾಗಿದೆಯಾ ಇಲ್ಲವಾ ಎಂದು ತಿಳಿದುಕೊಳ್ಳಲು, ತಕ್ಷಣವೇ ಕಾಲಿನ ಭಾಗದ ವಿಡಿಯೋವನ್ನು ಸ್ಪ್ಲಿಟ್ ಸ್ಕ್ರೀನ್‌ನಲ್ಲಿ ಪರಿಶೀಲಿಸಬಹುದು. ಅಲ್ಲದೆ ಪಾದದ ಯಾವ ಭಾಗ ಬೌಂಡರಿ ಲೈನ್‌ಗೆ ತಾಗಿದೆ ಎಂಬುದರ ತುಣುಕಿನ ಭಾಗದೊಂದಿಗೆ ಸ್ಪಷ್ಟ ತೀರ್ಪು ನೀಡಲು ಸಾಧ್ಯವಾಗಲಿದೆ.

ಮತ್ತೊಂದು ಬೌನ್ಸರ್ ನಿಯಮ: ಈ ಬಾರಿಯ ಐಪಿಎಲ್‌ನಲ್ಲಿ ಒಂದೇ ಓವರ್‌ನಲ್ಲಿ 2 ಬೌನ್ಸರ್ ಗಳನ್ನು ಎಸೆಯುವ ಅವಕಾಶ ಇರಲಿದೆ. ಈ ಹಿಂದೆ ಒಂದು ಓವರ್‌ನಲ್ಲಿ ಕೇವಲ 1 ಬೌನ್ಸರ್ ಮಾತ್ರ ಎಸೆಯಬಹುದಿತ್ತು. ಇದೀಗ ಐಪಿಎಲ್‌ಗಾಗಿ ಈ ನಿಯಮವನ್ನು ಬದಲಿಸಲಾಗಿದ್ದು, ಈ ಮೂಲಕ ಒಂದು ಓವರ್‌ನಲ್ಲಿ ಎರಡು ಬೌನ್ಸರ್‌ಗಳನ್ನು ಬೌಲ್ ಮಾಡಲು ಅವಕಾಶ ನೀಡಲಾಗುತ್ತದೆ.

ಎರಡು ಬೌನ್ಸರ್ ನಿಯಮದ ಜಾರಿಯಿಂದ ಬೌಲರ್‌ಗಳು ಹೆಚ್ಚಿನ ಅನುಕೂಲ ಪಡೆಯಲಿದ್ದಾರೆ. ಈ ಹಿಂದೆ ಒಂದು ಓವರ್‌ನಲ್ಲಿ ಒಂದೇ ಬೌನ್ಸರ್ ಎಸೆಯಲು ಮಾತ್ರ ಅವಕಾಶವಿತ್ತು. 2ನೇ ಬೌನ್ಸರ್ ಅನ್ನು ಅಂಪೈರ್ ನೋ ಬಾಲ್ ಎಂದು ಪರಿಗಣಿಸುತ್ತಿದ್ದರು. ಇದೀಗ ಒಂದು ಓವರ್‌ನಲ್ಲಿ 2 ಬೌನ್ಸರ್‌ಗಳು ಇರುವುದರಿಂದ ಬ್ಯಾಟ್ಸ್‌ಮನ್‌ನ ಚಿಂತೆ ಹೆಚ್ಚಾಗಲಿದೆ.

ಏಕೆಂದರೆ ಈ ಹಿಂದೆ ಒಂದು ಬೌನ್ಸರ್ ಮುಗಿದ ಬಳಿಕ ಮತ್ತೆ ಬೌನ್ಸರ್ ಎಸೆಯುವುದಿಲ್ಲ ಎಂಬುದು ಬ್ಯಾಟರ್‌ಗಳಿಗೆ ಗೊತ್ತಿರುತ್ತಿತ್ತು. ಆದರೆ ಈ ಬಾರಿ 6 ಎಸೆತಗಳಲ್ಲಿ 2 ಬೌನ್ಸರ್ ಇರುವುದರಿಂದ ಬೌಲರ್‌ಗಳು ಪರಿಸ್ಥಿತಿಗೆ ತಕ್ಕಂತೆ ಬೌನ್ಸರ್ ಪ್ರಯೋಗಿಸಲಿದ್ದಾರೆ. ಹೀಗಾಗಿ ಅಂತಿಮ ಓವರ್‌ಗಳ ವೇಳೆ ಪಂದ್ಯವು ರೋಚಕತೆ ಪಡೆಯಲಿರುವುದನ್ನು ನಿರೀಕ್ಷಿಸಬಹುದು.

## ಕಾಂಗ್ರೆಸ್‌ನಿಂದ ಸೀರೆ ಹಂಚಿಕೆ ಆರೋಪ

# ಇಕ್ಬಾಲ್ ಹುಸೇನ್ ವಿರುದ್ಧ ನಿಖಿಲ್ ಕಿಡಿ

**ರಾಮನಗರ:** ಕಾಂಗ್ರೆಸ್ ಶಾಸಕರಿಂದ ಮತದಾರರಿಗೆ ಸೀರೆ ಹಂಚಿರುವ ಆರೋಪಕ್ಕೆ ಸಂಬಂಧಿಸಿದಂತೆ ಜೆಡಿಎಸ್ ಯುವನಾಯಕ ನಿಖಿಲ್ ಕುಮಾರಸ್ವಾಮಿ ಕಿಡಿಕಾರಿದ್ದಾರೆ.

ಈ ಸಂಬಂಧ ರಾಮನಗರದಲ್ಲಿ ಬಿಜೆಪಿ-ಜೆಡಿಎಸ್ ಜಂಟಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ನಿಖಿಲ್, 3,700 ಡ್ರೆಸ್ ಮೆಟೀರಿಯಲ್, ಸೀರೆಗಳ ಅಕ್ರಮ ಸಂಗ್ರಹ ಮಾಡಲಾಗಿದೆ. 14 ಲಕ್ಷ ಮೌಲ್ಯದ ವಸ್ತಗಳನ್ನ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ಇದು ಶಾಸಕ ಇಕ್ಬಾಲ್ ಹುಸೇನ್‌ಗೆ ಸಂಬಂಧಿಸಿದ ವಸ್ತುಗಳು ಎಂದು ದಾಖಲೆ ಸಮೇತ ನಿಖಿಲ್ ಫೋಟೋ ಬಿಡುಗಡೆ ಮಾಡಿದ್ದಾರೆ.

ಕಳೆದ 15-20ದಿನದಿಂದ ಕುಕ್ಕರ್, ಸೀರೆ ಹಂಚಲಾಗ್ತಿದೆ ಅಂತ ಆರೋಪಿಸಿರುವ ನಿಖಿಲ್, ಈ ಬಗ್ಗೆ ನಿನ್ನೆ ಮಾಜಿ ಸಿಎಂ ಹೆಚ್‌ಡಿ ಕುಮಾರಸ್ವಾಮಿ ಅವರೂ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ್ದಾರೆ. ಆದರೂ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಯಾವುದೇ ಕ್ರಮ ಕೈಗೊಂಡಿಲ್ಲ. ಈ ಕುರಿತು ಚುನಾವಣಾ ಆಯೋಗ ಪಾರದರ್ಶಕವಾಗಿ ಕೆಲಸ ಮಾಡ್ತಿದ್ಯಾ ಎಂದು ಜಿಲ್ಲಾಡಳಿತವನ್ನು ನಿಖಿಲ್ ಪ್ರಶ್ನೆ ಮಾಡಿದ್ದಾರೆ. ಕಾರ್ಯಕರ್ತರಿಗೆ ನಿಖಿಲ್ ಭರವಸೆ: ರಾಜ್ಯ ಚುನಾವಣಾ ಆಯೋಗದವರೇ ನೀವು ಪಾರದರ್ಶಕವಾಗಿ ಚುನಾವಣೆ ಮಾಡಿ.



ಪ್ರಜಾಪ್ರಭುತ್ವಕ್ಕೆ ಧಕ್ಕೆ ತರುವ ಕೆಲಸ ಆಗ್ತಿದೆ. ಅಲ್ಲದೇ ಈ ಕುರಿತು ಇಂದು ನಾನು ಚುನಾವಣಾ ಆಯೋಗಕ್ಕೆ ದೂರು ನೀಡ್ತಿದ್ದೇನೆ. ರಾಜ್ಯದ ಜನತೆಗೆ ಪಾರದರ್ಶಕ ಚುನಾವಣೆ ನಡೆಯುತ್ತಾ ಎಂಬ ಸಂಶಯ ಬರುತ್ತಿದೆ. ಅಕ್ರಮವಾಗಿ ಹಣ ಲೂಟಿ ಮಾಡಿ ಚುನಾವಣೆ ಮಾಡುತ್ತಿದ್ದಾರೆ. ಬಿಜೆಪಿ-ಜೆಡಿಎಸ್ ಕಾರ್ಯಕರ್ತರ ಜೊತೆ ನಾನು ಸದಾ ಇರುತ್ತೇನೆ. ನಿಮ್ಮ ಹೋರಾಟಕ್ಕೆ ಯಾವ ಸಮಯದಲ್ಲೂ ನಾನು ಜೊತೆ ನಿಲ್ಲುವುದಾಗಿ ನಿಖಿಲ್ ಭರವಸೆ ನೀಡಿದರು.

ಬಡವರ ಪಾಲಿನ ದೇವರು ಮಂಜುನಾಥ್: ಡಾ.ಮಂಜುನಾಥ್ ವೈದ್ಯಕೀಯ ಸೇವೆಯಲ್ಲಿ ಹೆಸರು ಮಾಡಿದ್ದಾರೆ. ಸಾಕಷ್ಟು ಬಡವರ ಪಾಲಿನ ದೇವರಾಗಿದ್ದಾರೆ. ಅಂತವರನ್ನ ಕಾಂಗ್ರೆಸ್ ಶಾಸಕರು ಟೀಕಿಸ್ತಿದ್ದಾರೆ. ಮಿಸ್ಟರ್ ಮಾಗಡಿ ಶಾಸಕರು ಡಾ.ಮಂಜುನಾಥ್ ಗೆ ರಾಜಕೀಯ ತೆವಲು ಅಂದಿದ್ದಾರೆ. ತೆವಲು ಎನ್ನುವ ಪದದ ಅರ್ಥ ಗೊತ್ತಾ ನಿಮಗೆ..? ರಾಮನಗರ ಶಾಸಕರ ಪದ ಬಳಕೆಯನ್ನೂ ನೋಡಿದ್ದೇನೆ. ನಿಮ್ಮ ಎಲ್ಲಾ ವಿಚಾರಗಳೂ ನನಗೆ ಗೊತ್ತು. ನೀವು ಎಲ್ಲೆಲ್ಲಿ ಹಣ ಇಟ್ಟಿದ್ದೀರಿ ಎಂಬುದು ಗೊತ್ತು. ನಾನು ಕೂಡಾ ಇದೇ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧೆ ಮಾಡಿ ಸೋತಿದ್ದೇನೆ. ನನ್ನ ಸೋಲಿಸಲು ನೀವು ಏನೇನು ಮಾಡಿದ್ರಿ, ಎಲ್ಲಾ ಗೊತ್ತು. ಗಿಫ್ಟ್ ಕಾರ್ಡ್ ಕೊಟ್ಟು ಮತದಾರರನ್ನ ಯಾಮಾರಿಸಿದ್ದೀರಿ. ಮುಗ್ಧ ಜನರಿಗೆ ಆಮಿಷ ತೋರಿಸಿ ಎಲೆಕ್ಷನ್ ಮಾಡಿದ್ದೀರಿ. ಈಗ ಸಂಕ್ರಾಂತಿ ಗಿಫ್ಟ್ ಅಂತ ಮಾರ್ಚ್ ತಿಂಗಳಲ್ಲಿ ಕುಕ್ಕರ್ ಹಂಚುತ್ತಿದ್ದೀರಿ. ಕೂಡಲೇ ಚುನಾವಣಾ ಆಯೋಗ ಈ ಬಗ್ಗೆ ಕ್ರಮ ವಹಿಸಬೇಕು ಎಂದು ಆಗ್ರಹಿಸಿದರು.

**ರಾಮನಗರಕ್ಕೆ ಕಾಲಿಡಲ್ಲ:** ಕಾಂಗ್ರೆಸ್ ನಾಯಕರ ದಬ್ಬಾಳಿಕೆ ಹೆಚ್ಚಾಗ್ತಿದೆ. ನಮ್ಮ ಕಾರ್ಯಕರ್ತರು ಕಣ್ಣೀರು ಹಾಕ್ತಿದ್ದಾರೆ. ಜೆಡಿಎಸ್ ಕಾರ್ಯಕರ್ತರು ಕಾಂಗ್ರೆಸ್ ಸೇರಲಿಲ್ಲ ಅಂದ್ರೆ, ಕೇಸ್ ಹಾಕ್ತೀವಿ ಅಂತ ಹೆದರಿಸ್ತಿದ್ದೀರಿ. ನಿಮ್ಮ ದೌರ್ಜನ್ಯ, ದಬ್ಬಾಳಿಕೆ ಜಾಸ್ತಿ ದಿನ ನಡೆಯಲ್ಲ. ನಮ್ಮ ಅಧಿಕಾರವಧಿಯಲ್ಲಿ ನಾವು ದುರುಪಯೋಗ ಮಾಡಿಕೊಂಡಿಲ್ಲ. ಒಬ್ಬ ಅಧಿಕಾರಿ, ಪೊಲೀಸರಿಗೆ ಫೋನ್ ಮಾಡಿ ಒತ್ತಡ ಹಾಕಿಲ್ಲ. ಹಾಗೇನಾದ್ರೂ ನಾನು ಅಧಿಕಾರ ದುರುಪಯೋಗ ಪಡಿಸಿಕೊಂಡಿದ್ರೆ ಇನ್ಮುಂದೆ ರಾಮನಗರಕ್ಕೆ ಕಾಲಿಡಲ್ಲ ಎಂದು ನಿಖಿಲ್ ಕಿಡಿಕಾರಿದರು.

# ಐಪಿಎಲ್ ಸ್ಥಳಾಂತರ ಇಲ್ಲ, ಸ್ಟೇಡಿಯಂಗೆ ಸಂಸ್ಕರಿಸಿದ ನೀರು

**ಬೆಂಗಳೂರು:** ಬೆಂಗಳೂರಿನಲ್ಲಿ ನೀರಿನ ಬಿಕ್ಕಟ್ಟು ತೀವ್ರಗೊಂಡಿರುವ ಕಾರಣ ನಗರದ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ನಡೆಯಲಿರುವ ಐಪಿಎಲ್ ಪಂದ್ಯಗಳನ್ನು ಸ್ಥಳಾಂತರ ಮಾಡಬೇಕೆಂದು ಇತ್ತೀಚೆಗೆ ಕೆಲವು ಸಂಘಟನೆಗಳು ಒತ್ತಾಯಿಸಿದ್ದವು. ಆದರೆ ಈ ವಿಚಾರವಾಗಿ ಅಂತಿಮ ನಿರ್ಧಾರಕ್ಕೆ ಬಂದಿರುವ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಪಂದ್ಯಾವಳಿಯ ಅಗತ್ಯಕ್ಕೆ ಸಂಸ್ಕರಿಸಿದ ನೀರನ್ನು ಒದಗಿಸುವುದಾಗಿ ಹೇಳಿದೆ. ಈ ಮೂಲಕ ನೀರಿನ ಸಮಸ್ಯೆಯಿಂದಾಗಿ ಐಪಿಎಲ್ ಪಂದ್ಯಗಳು ಬೆಂಗಳೂರಿನಿಂದ ಸ್ಥಳಾಂತರಿಸಬಹುದು ಎಂಬ ಊಹಾಪೋಹಗಳಿಗೆ ತೆರೆ ಎಳೆದಿದೆ. ಪಂದ್ಯದ ವೇಳೆ ಕ್ರೀಡಾಂಗಣಕ್ಕೆ 75,000 ಲೀಟರ್ ಸಂಸ್ಕರಿಸಿದ ನೀರನ್ನು ಪೂರೈಸುವ ಭರವಸೆಯನ್ನು ಬಿಡಬ್ಲ್ಯುಎಸ್‌ಎಸ್‌ಬಿ ನೀಡಿದೆ.



ಬಿಡಬ್ಲ್ಯುಎಸ್‌ಎಸ್‌ಬಿ ಹೇಳಿಕೆಯ ಪ್ರಕಾರ, ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ (ಕೆಎಸ್‌ಸಿಎ) ಅಧಿಕಾರಿಗಳು ಬುಧವಾರ ಮಂಡಳಿ ಅಧ್ಯಕ್ಷ ಡಾ ರಾಮಪ್ರಸಾತ್ ಮನೋಹರ್ ವಿ ಅವರನ್ನು ಭೇಟಿ ಮಾಡಿ ಪಂದ್ಯದ ಎಲ್ಲಾ ದಿನಗಳಲ್ಲಿ ಸಂಸ್ಕರಿಸಿದ ನೀರನ್ನು ಪೂರೈಸುವಂತೆ ಮನವಿ ಮಾಡಿದ್ದಾರೆ.

ಕ್ರೀಡಾಂಗಣವು ಕಾವೇರಿ ನೀರು ಅಥವಾ ಬೋರ್‌ವೆಲ್ ನೀರನ್ನು ಬಳಸುತ್ತಿಲ್ಲ. ಹೀಗಾಗಿ ನೀರಿನ ದುರುಪಯೋಗವಾಗದಂತೆ ನೋಡಿಕೊಳ್ಳುವ ಮೂಲಕ ಅವರು ಪಂದ್ಯಗಳನ್ನು ಮುಂದುವರಿಸಲು ಅವಕಾಶ ನೀಡಬಹುದು ಎಂದು ಮನೋಹರ್ ಹೇಳಿದ್ದಾರೆ. ಕೆಎಸ್‌ಸಿಎ ಅಧಿಕಾರಿಗಳು ಸಂಸ್ಕರಿಸಿದ ನೀರನ್ನು ಕೇಳಿದ್ದಾರೆ. ಸಂಸ್ಕರಿಸಿದ ನೀರಿನ ಬಳಕೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ನಾವು ಅವರ ಮನವಿಯನ್ನು ಒಪ್ಪಿಕೊಂಡಿದ್ದೇವೆ. ಕಬ್ಬನ್ ಪಾರ್ಕ್‌ನಲ್ಲಿರುವ ಕೊಳಚೆ ನೀರು ಸಂಸ್ಕರಣಾ ಘಟಕದಿಂದ ಐಪಿಎಲ್ ಪಂದ್ಯಾವಳಿಗಳಿಗೆ ನೀರು ಸರಬರಾಜು ಮಾಡಲಾಗುವುದು ಎಂದು ಮನೋಹರ್ ತಿಳಿಸಿದ್ದಾರೆ.

ಸುಮಾರು 32,000 ಪ್ರೇಕ್ಷಕರ ಸಾಮರ್ಥ್ಯ ಹೊಂದಿರುವ ಚಿನ್ನಸ್ವಾಮಿ ಕ್ರೀಡಾಂಗಣವು ಮಾರ್ಚ್ 25 ರಂದು ನಗರದಲ್ಲಿ ಮೊದಲ ಐಪಿಎಲ್ ಪಂದ್ಯವನ್ನು ಆಯೋಜಿಸಲು ಸಿದ್ಧವಾಗಿದೆ. ಈ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಪಂಜಾಬ್ ಕಿಂಗ್ಸ್ ಅನ್ನು ಎದುರಿಸಲಿದೆ. ನಂತರದ ಪಂದ್ಯಗಳು ಮಾರ್ಚ್ 29 ಮತ್ತು ಏಪ್ರಿಲ್ 2 ರಂದು ನಡೆಯಲಿವೆ.

ನೀರಿನ ಬಿಕ್ಕಟ್ಟು ಇರುವ ಕಾರಣ ಐಪಿಎಲ್ ಪಂದ್ಯಗಳನ್ನು ಬೆಂಗಳೂರಿನಿಂದ ಸ್ಥಳಾಂತರಿಸಬೇಕು ಎಂಬ ಆಗ್ರ ಇತ್ತೀಚಿಗೆ ವ್ಯಕ್ತವಾಗಿತ್ತು. ಆದರೆ ಇದಕ್ಕೆ ಕನ್ನಡ ಪರ ಹೋರಾಟಗಾರ ವಾಟಾಳ್ ನಾಗರಾಜ್ ವಿರೋಧ ವ್ಯಕ್ತಪಡಿಸಿದ್ದರು. ನೀರಿಲ್ಲ ಎಂಬ ಕಾರಣಕ್ಕೆ ಪಂದ್ಯಗಳನ್ನು ಸ್ಥಳಾಂತರ ಗೊಳಿಸುವುದು ನಮಗೆ ಅವಮಾನಕರ. ಒಂದು ವೇಳೆ ಪಂದ್ಯಗಳನ್ನು ಸ್ಥಳಾಂತರ ಗೊಳಿಸಿದ್ದೇ ಆದಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದ್ದರು.

## ಭೀಕರ ಬರದಲ್ಲೂ ಹಾಲು ಉತ್ಪಾದನೆಯಲ್ಲಿ ನಂ.1

# ಹೊಸ ಮೈಲಿಗಲ್ಲು ಸಾಧಿಸಿದ ಕೆಎಂಎಫ್

**ಬೆಂಗಳೂರು:** ರಾಜ್ಯದಲ್ಲಿ ಭೀಕರ ಬರದ ನಡುವೆಯೂ ಹಾಲು ಉತ್ಪಾದನೆ ಹಾಗೂ ಮಾರಾಟದಲ್ಲಿ ಕೆಎಂಎಫ್ ಹೊಸ ಮೈಲುಗಲ್ಲು ಸಾಧಿಸಿದೆ. ಬೇಸಿಗೆಯಲ್ಲೂ ಹಾಲು ಉತ್ಪಾದನೆಯಲ್ಲಿ ಕೆಎಂಎಫ್‌ಗೆ ನಂಬರ್ ಒನ್ ಸ್ಥಾನ ಸಿಕ್ಕಿದೆ. ರಾಜ್ಯದಲ್ಲಿ ಹಾಲು ಉತ್ಪಾದನೆಯಲ್ಲಿ ಶೇಕಡಾ 12 ರಷ್ಟು ಹೆಚ್ಚಳವಾಗಿದೆ. ಹಾಲು ಉತ್ಪಾದನೆ ಮಾತ್ರವಲ್ಲದೆ ಮಾರಾಟದಲ್ಲೂ 41.79 ಲಕ್ಷ ಲೀಟರ್ ಹಾಲು ಮಾರಾಟವಾಗಿದೆ. 2023 ಮಾರ್ಚ್ ನಲ್ಲಿ ನಿತ್ಯ 72,07 ಲಕ್ಷ ಲೀಟರ್ ಹಾಗೂ ಉತ್ಪಾದನೆ ಆಗುತ್ತಿತ್ತು, ಆದರೆ 2024 ಮಾರ್ಚ್ 15 ತಾರೀಖು ರಂದು ರಾಜ್ಯದಲ್ಲಿ 80.80 ಲಕ್ಷ ಲೀಟರ್ ಉತ್ಪಾದನೆಯಾಗದೆ.

ಬೆಂಗಳೂರಿನಲ್ಲಿ ನಿತ್ಯ 13.69 ಲಕ್ಷ ಲೀಟರ್ ಹಾಲು, ಹಾಸನದಲ್ಲಿ ನಿತ್ಯ 11.93 ಲಕ್ಷ ಲೀಟರ್, ಮಂಡ್ಯ 9.18 ಲಕ್ಷ ಲೀಟರ್, ಕೋಲಾರದಲ್ಲಿ ನಿತ್ಯ 9.77 ಲಕ್ಷ ಲೀಟರ್, ತುಮಕೂರಿನಲ್ಲಿ 7.71 ಲಕ್ಷ ಲೀಟರ್, ಮೈಸೂರಿನಲ್ಲಿ 7.71 ಲಕ್ಷ ಲೀಟರ್ ಹಾಲು ಉತ್ಪಾದನೆಯಾಗುತ್ತಿದೆ.



ರಾಜ್ಯದಲ್ಲಿ ಬೇಸಿಗೆ ಪರಿಣಾಮ ಹಸಿರು ಮೇವು ಹಾಗೂ ನೀರಿಗೆ ಹಲವು ಭಾಗಗಳಲ್ಲಿ ಹಾಹಾಕಾರ ಶುರುವಾಗಿದ್ದು, ಇದರ ನಡುವೆ ಹಾಲು ಉತ್ಪಾದನೆಯಲ್ಲಿ ಭಾರೀ ಪ್ರಮಾಣದಲ್ಲಿ ಹೆಚ್ಚಳವಾಗಿದೆ. ಪರಿಣಾಮ ರಾಜ್ಯದಲ್ಲಿ ಹರಿಯಿತು ಕೆಎಂಎಫ್ ಹಾಲಿನ ಹೊಳೆ ಹರಿದಿದೆ. ಸಾಮಾನ್ಯವಾಗಿ ಬೇಸಿಗೆ ಸಮಯದಲ್ಲಿ ಹಾಲಿನ ಉತ್ಪಾದನೆ ಕಡಿಮೆಯಾಗುತ್ತದೆ. ಆದರೆ ಈ ಬಾರಿ ಕೆಎಂಎಫ್ ಹಾಲಿನ ಉತ್ಪಾದನೆ ಕುಸಿಯದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿತ್ತು. ಇದರ ಪರಿಣಾಮವಾಗಿ ತೀವ್ರ ಬರಗಾಲ ನಡುವೆಯೂ ಹಾಲಿನ ಉತ್ಪಾದನೆ ದಾಖಲೆ ಪ್ರಮಾಣದಲ್ಲಿ ಹೆಚ್ಚಳವಾಗಿದೆ ಎನ್ನಲಾಗಿದೆ. ಬೇಸಿಗೆಯಲ್ಲಿ ಈ ಬಾರಿ ಪ್ರತಿ ದಿನ ಒಂದು ಕೋಟಿ ಲೀಟರ್ ಹಾಲು ಉತ್ಪಾದನೆ ಗುರಿಯನ್ನು ಕೆಎಂಎಫ್ ಇಟ್ಟುಕೊಂಡಿತ್ತು ಎಂಬ ಮಾಹಿತಿ ಲಭ್ಯವಾಗಿದೆ.

ಕೆಎಂಎಫ್ ಎಮ್ಮೆ ಹಾಲು ಮಾರಾಟಕ್ಕೆ ಬ್ರೇಕ್

ಕಳೆದ ಮೂರು ತಿಂಗಳ ಹಿಂದಷ್ಟೇ ಕರ್ನಾಟಕ ಹಾಲು ಒಕ್ಕೂಟ ರಾಜ್ಯಾದ್ಯಂತ ಎಮ್ಮೆ ಹಾಲು ಮಾರಾಟಕ್ಕೆ ಚಾಲನೆ ನೀಡಿತ್ತು. ಆದರೆ ಇದಾದ ಮೂರೇ ತಿಂಗಳಿಗೆ ಎಮ್ಮೆ ಹಾಲು ಮಾರಾಟಕ್ಕೆ ಬ್ರೇಕ್ ಹಾಕಲು ಕೆಎಂಎಫ್ ಚಿಂತನೆ ನಡೆಸಿದೆಯಂತೆ. ಹೌದು, ಕಳೆದ ವರ್ಷ ಡಿಸೆಂಬರ್ ತಿಂಗಳಿಂದ ಎಮ್ಮೆ ಹಾಲು ಮಾರುಕಟ್ಟೆಗೆ ಕೆಎಂಎಫ್ ಬಿಡುಗಡೆ ಮಾಡಿತ್ತು, ಆದರೆ ಸದ್ಯ ಎಮ್ಮೆ ಹಾಲು ಮಾರಾಟ ಮತ್ತೆ ಸ್ಥಗಿತ ಮಾಡಲು ಕೆಎಂಎಫ್ ಗಂಭೀರ ಚಿಂತನೆ ನಡೆಸಿದೆಯಂತೆ.

ಎಮ್ಮೆ ಹಾಲಿಗೆ ಗ್ರಾಹಕರಿಂದ ಬೇಡಿಕೆ ಕುಸಿತ ಆಗಿರುವುದು ಕೆಎಂಎಫ್ ಚಿಂತನೆಗೆ ಕಾರಣ ಎನ್ನಲಾಗಿದೆ. ರಾಜ್ಯದಲ್ಲಿ ನಿತ್ಯ 2000 ಲೀಟರ್ ಮಾತ್ರ ಎಮ್ಮೆ ಹಾಲು ಮಾರಾಟ ಆಗುತ್ತಿದೆ. ಬೆಂಗಳೂರು, ಗೋವಾ, ಮಹಾರಾಷ್ಟ್ರ ಭಾಗಕ್ಕೆ ಎಮ್ಮೆ ಹಾಲು ಪೂರೈಕೆಯಾಗುತ್ತಿತ್ತು. ಕೆಎಂಎಫ್ ಪ್ರತಿ ಲೀಟರ್ ಗೆ 60 ರೂಪಾಯಿಯಂತೆ ಮಾರಾಟ ಮಾಡುತ್ತಿತ್ತು. ಆದರೆ ಇನ್ಮೇಲೆ ಎಮ್ಮೆ ಹಾಲು ಮಾರಾಟ ಮಾಡದಿರಲು ಕೆಎಂಎಫ್ ನಿರ್ಧಾರ ಮಾಡಿದೆ. ಈ ಬಗ್ಗೆ ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕ ಜಗದೀಶ್ ಮಾಹಿತಿ ನೀಡಿದ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com